C/o ಹನುಮಂತ ರಾಯ S/o ತುಕಾರಾಮ್ ಅಳಗಿನವರು, ಕೇಡಗನ ಗ್ರಾಮ, ಶಾಂತಪುರ ಸರ್ಕಲ್, ಔರಾದ್ ತಾ: ಬೀದರ್ ಜಿಲ್ಲೆ.

ವಿರುದ್ಧ

ಪ್ರತಿವಾದಿಗಳು:

1) ಮೆ: ಸೂಪರ್ ಶ್ರಮಿ ಟ್ರಾನ್ಸ್‌ಪೋರ್ಟ್, ಟ್ರಕ್ ಮಾಲೀಕರು, ನಂ.ಸಿಜಿ–04ಬಿ–4760, ಗಾಜಿನಗರ ಬಿರ್‌ಗಾಗ್ ರಾಯಪುರ ಗ್ರಾಮ, ಚತ್ತಿಸ್‌ಗಡ ರಾಜ್ಯ.
2) ದಿ ಮ್ಯಾನೇಜರ್
ನ್ಯೂ ಇಂಡಿಯಾ ಅಶ್ಯೂರೆನ್ಸ್ ಕಂ.ಲಿ., ವಿಂಗ್– III ನಗರ ಪ್ರಸಾದ ಬಿಲ್ಡಿಂಗ್, ಬಿಗ್‌ವಾಕ್ ಚೌಕ್, ಭರಮಾತಿ.

ಪ್ರಕಟಣೆ

ಶ್ರೀಮತಿ ಗಂಗಮ್ಮ, ಸೌಂದರ್ಯ, ಐಶ್ವರ್ಯ, ತಭೀತಾ ಮತ್ತು ಇಮ್ಮಾಬಾಯಿ ಇವರುಗಳಾದ ನಾವು ಮೃತ ರಾಜು ಇವರ ಹೆಂಡತಿ, ಮಕ್ಕಳು ಮತ್ತು ತಾಯಿ ಎಂದೂ ಇವರ ಸಾವಿಗಾಗಿ ನಷ್ಟ ಪರಿಹಾರ ಕೋರಿ ಈ ನ್ಯಾಯಾಲಯದಲ್ಲಿ ಅರ್ಜಿ ಸಲ್ಲಿಸಿರುತ್ತಾರೆ. ಮೃತ ರಾಜು ರವರು ಕ್ಲೀನರ್ ಆಗಿ ಕೆಲಸ ನಿರ್ವಹಿಸುತ್ತಿದ್ದಾಗ ಸಂಭವಿಸಿದ ಅಪಘಾತದಲ್ಲಿ ಮರಣ ಹೊಂದಿದರೆಂದು, ಸದರಿ ಅರ್ಜಿದಾರರು ತಿಳಿಸಿರುತ್ತಾರೆ. ಈ ಸಂಬಂಧವಾಗಿ ಈ ಪ್ರಕಟಣೆಯ ಮೂಲಕ ಸಾರ್ವಜನಿಕರಿಗೆ ಮತ್ತು ಸಂಬಂಧಪಟ್ಟವರಿಗೆ ತಿಳಿಸುವುದೇನೆಂದರೆ ಈ ಬಗ್ಗೆ ಏನಾದರೂ ಆಕ್ಷೇಪಣೆಗಳಾಗಲೀ ಅಥವಾ ಬೇರೆ ಯಾರಾದರೂ ಮೃತರ ಶಾಸನಬದ್ಧ ವಾರಸುದಾರರು ಎಂದು ಪರಿಗಣಿಸಬೇಕೆಂದು ಪ್ರಾರ್ಥಿಸುವುದಾದರೆ ಅಂತವರು ಪ್ರಕಟಣೆಯು ಈ ನ್ಯಾಯಾಲಯದಲ್ಲಿ ನಾಮಫಲಕದಲ್ಲಿ ಪ್ರಕಟಿಸಿದ 30 ದಿನಗಳೊಳಗಾಗಿ ಅಂತಹ ಆಕ್ಷೇಪಣೆಗಳಾಗಲೀ ಅಥವಾ ಅರ್ಜಿಯನ್ನಾಗಲೀ ಈ ನ್ಯಾಯಾಲಯದಲ್ಲಿ ಸಲ್ಲಿಸತಕ್ಕದ್ದು, ಅವಧಿ ಮೀರಿ ಬಂದ ಅರ್ಜಿಗಳನ್ನು ಮಾನ್ಯ ಮಾಡಲಾಗುವುದಿಲ್ಲ.

ಎಸ್.ಸಿ.ರಾಮಚಂದ್ರ
ಕಾರ್ಮಿಕ ಅಧಿಕಾರಿ ಮತ್ತು
ಆಯುಕ್ತರು, ಕಾರ್ಮಿಕ ನಷ್ಟ ಪರಿಹಾರ
ದಾವಣಗೆರೆ ಜಿಲ್ಲೆ, ದಾವಣಗೆರೆ.

ಪಿ.ಆರ್215

ಕಾರ್ಮಿಕ ಅಧಿಕಾರಿ ಹಾಗೂ ಕಾರ್ಮಿಕ ನಷ್ಟ ಪರಿಹಾರ ಆಯುಕ್ತರವರ ನ್ಯಾಯಾಲಯ, ದಾವಣಗೆರೆ ಜಿಲ್ಲೆ, ದಾವಣಗೆರೆ

ಪ್ರನಂ.ಕಾಅದಾ:ಕಾನಪ:ಸಿಆರ್–26/11, ದಿನಾಂಕ:25.01.2011

ಅರ್ಜಿದಾರರು:

1) ಶ್ರೀ ಗುಬ್ಬೇರು ಶಿವಾನಂದಪ್ಪ ಬಿನ್ ಲೇಟ್ ಹನುಮಂತಪ್ಪ
2) ಶ್ರೀಮತಿ ವರಲಕ್ಷ್ಮಿ ಕೋಂ ಗುಬ್ಬೇರು ಶಿವಾನಂದಪ್ಪ,
ಬೆಳ್ಳಗಟ್ಟ ಗ್ರಾಮ, ಕೂಡ್ಲಗಿ ತಾಲ್ಲೂಕು, ಬಳ್ಳಾರಿ ಜಿಲ್ಲೆ.
ಪ್ರಸ್ತುತ: ದೇವರ ತಿಮ್ಮಾಲಾಪುರ ಗ್ರಾಮ, ಹರಪನಹಳ್ಳಿ ತಾಲ್ಲೂಕು.

ಪ್ರತಿವಾದಿಗಳು:

1) ದೊಡ್ಡಬಸವನಗೌಡ ಬಿನ್ ಮಲ್ಲನಗೌಡ
ಕ್ಯಾಂಟರ್ ಮಾಲೀಕರು ನಂ.ಕೆಎ–34ಎ–3845
ಮನೆ ನಂ.144, ಹನುಮಂತರಾಯ ಗುಡಿ ಓಣಿ, ಕಕ್ಕಬೇವಿನಹಳ್ಳಿ
ಗ್ರಾಮ, ಬಳ್ಳಾರಿ (ಜಿ) (ತಾ)
2) ದಿ ಡಿವಿಜನಲ್ ಮ್ಯಾನೇಜರ್
ಚೋಳಮಂಡಲಂ ಎಂ.ಎಸ್ ಜನರಲ್ ಇನ್ಸೂರೆನ್ಸ್ ಕಂ.ಲಿ.
ಡಿವಿಜನಲ್ ಆಫೀಸ್, ದಾವಣಗೆರೆ.

ಪ್ರಕಟಣೆ

ಶ್ರೀ ಗುಬ್ಬೇರ, ಶಿವಾನಂದಪ್ಪ ಮತ್ತು ವರಲಕ್ಷ್ಮಿ ಇವರುಗಳಾದ ನಾವು ಮೃತ ರಘು @ ರಾಘವೇಂದ್ರ ಇವರ ತಾಯಿ ಮತ್ತು ತಂದೆ ಎಂದೂ ಇವರ ಸಾವಿಗಾಗಿ ನಷ್ಟ ಪರಿಹಾರ ಕೋರಿ ಈ ನ್ಯಾಯಾಲಯದಲ್ಲಿ ಅರ್ಜಿ ಸಲ್ಲಿಸಿರುತ್ತಾರೆ. ಮೃತ ರಘು @ ರಾಘವೇಂದ್ರ ರವರು ಚಾಲಕ ಆಗಿ ಕೆಲಸ ನಿರ್ವಹಿಸುತ್ತಿದ್ದಾಗ ಸಂಭವಿಸಿದ ಅಪಘಾತದಲ್ಲಿ ಮರಣ ಹೊಂದಿದರೆಂದು, ಸದರಿ ಅರ್ಜಿದಾರರು ತಿಳಿಸಿರುತ್ತಾರೆ. ಈ ಸಂಬಂಧವಾಗಿ ಈ ಪ್ರಕಟಣೆಯ ಮೂಲಕ ಸಾರ್ವಜನಿಕರಿಗೆ ಮತ್ತು ಸಂಬಂಧಪಟ್ಟವರಿಗೆ ತಿಳಿಸುವುದೇನೆಂದರೆ ಈ ಬಗ್ಗೆ ಏನಾದರೂ ಆಕ್ಷೇಪಣೆಗಳಾಗಲೀ ಅಥವಾ ಬೇರೆ ಯಾರಾದರೂ ಮೃತರ ಶಾಸನಬದ್ಧ ವಾರಸುದಾರರು ಎಂದು ಪರಿಗಣಿಸಬೇಕೆಂದು ಪ್ರಾರ್ಥಿಸುವುದಾದರೆ ಅಂತವರು ಪ್ರಕಟಣೆಯು ಈ ನ್ಯಾಯಾಲಯದಲ್ಲಿ ನಾಮಫಲಕದಲ್ಲಿ ಪ್ರಕಟಿಸಿದ 30 ದಿನಗಳೊಳಗಾಗಿ ಅಂತಹ ಆಕ್ಷೇಪಣೆಗಳಾಗಲೀ ಅಥವಾ ಅರ್ಜಿಯನ್ನಾಗಲೀ ಈ ನ್ಯಾಯಾಲಯದಲ್ಲಿ ಸಲ್ಲಿಸತಕ್ಕದ್ದು, ಅವಧಿ ಮೀರಿ ಬಂದ ಅರ್ಜಿಗಳನ್ನು ಮಾನ್ಯ ಮಾಡಲಾಗುವುದಿಲ್ಲ.

ಎಸ್.ಸಿ.ರಾಮಚಂದ್ರ
ಕಾರ್ಮಿಕ ಅಧಿಕಾರಿ ಮತ್ತು
ಆಯುಕ್ತರು, ಕಾರ್ಮಿಕ ನಷ್ಟ ಪರಿಹಾರ
ದಾವಣಗೆರೆ ಜಿಲ್ಲೆ, ದಾವಣಗೆರೆ.

ಪಿ.ಆರ್216

ಕಾರ್ಮಿಕ ನಷ್ಟ ಪರಿಹಾರ ಆಯುಕ್ತರ ನ್ಯಾಯಾಲಯ, ಮಂಡ್ಯ ಉಪವಿಭಾಗ–2, ಮಂಡ್ಯ, ಇವರ ನ್ಯಾಯಾಲಯ

ಸಂಖ್ಯೆ: ಡಬ್ಲ್ಯೂಸಿಎ:ಎಫ್‌ಸಿ/ಸಿಆರ್–1/2011, ದಿನಾಂಕ:05.02.2011

ಅರ್ಜಿದಾರರು:

1) ಮಾರಯ್ಯ S/o ಕಾಳೀರಯ್ಯ, ವಯಸ್ಸು 50 ವರ್ಷ,
2) ಶ್ರೀಮತಿ ಜಯಮ್ಮ W/o ಮಾರಯ್ಯ, ವಯಸ್ಸು 47 ವರ್ಷ,
ಅತಗೂರು ಗ್ರಾಮ, ಹೋಬಳಿ: ಮದ್ದೂರು ತಾಲ್ಲೂಕು.
ಹಾಲಿವಾಸ: ಲೀಲಾವತಿ ಬಡಾವಣೆ, 4ನೇ ಕ್ರಾಸ್, ಮದ್ದೂರ್ ಟೌನ್.

ಪ್ರತಿವಾದಿಗಳು:

1) ಸಿದ್ದಗಂಗಯ್ಯ S/o ಸಿದ್ದಪ್ಪ
ಮಾತೃಶ್ರೀ ನಿಲಯ,
ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ಹಿಂಭಾಗ, ಲಕ್ಷ್ಮೀಪುರ ಗ್ರಾಮ,
ದಾಶನಪುರ ಹೋಬಳಿ, ಬೆಂಗಳೂರು ಉತ್ತರ ತಾಲ್ಲೂಕು.

ಪ್ರಕಟಣೆ

ಈ ಮೇಲೆ ವಿಳಾಸಿಸಿರುವ ಅರ್ಜಿದಾರರು ದಿನಾಂಕ:05.01.2011 ರಂದು ಈ ನ್ಯಾಯಾಲಯಕ್ಕೆ ಅರ್ಜಿಯೊಂದನ್ನು ಸಲ್ಲಿಸಿ, 1 ಮತ್ತು 2ನೇ ಅರ್ಜಿದಾರರ ಮಗನಾದ ಶ್ರೀ ವೀರೇಶ ಇವರು ಮೇಲೆ ವಿಳಾಸಿಸಿರುವ ಪ್ರತಿವಾದಿ ಬಳಿ ಕೆಲಸ ನಿರ್ವಹಿಸುತ್ತಿದ್ದಾಗ ಉದ್ಯೋಗ ಸಮಯದಲ್ಲಿ ಅಪಘಾತ ಸಂಭವಿಸಿ, ಮರಣ ಹೊಂದಿರುತ್ತಾರೆಂದು ತಿಳಿಸಿ, ಮೇಲೆ ವಿಳಾಸಿಸಿರುವ ಪ್ರತಿವಾದಿಗಳ ವಿರುದ್ಧ ಕ್ರಮ ತೆಗೆದುಕೊಂಡು ತಮಗೆ ಕಾಯ್ದೆಯನ್ವಯ ಪರಿಹಾರ ಹಾಗೂ ಇತರ ಉಪಶಮನಗಳನ್ನು ಕೊಡಿಸಿಕೊಡಬೇಕೆಂದು ಈ ನ್ಯಾಯಾಲಯವನ್ನು ಪ್ರಾರ್ಥಿಸಿರುತ್ತಾರೆ.

ಆದ್ದರಿಂದ ಸಾರ್ವಜನಿಕರಿಗೆ ಮತ್ತು ಸಂಬಂಧಪಟ್ಟವರಿಗೆ ಈ ಪ್ರಕಟಣೆ ಮೂಲಕ ತಿಳಿಸುವುದೇನೆಂದರೆ ಈ ಬಗ್ಗೆ ತಮ್ಮ ಆಕ್ಷೇಪಣೆಗಳೇನಾದರೂ ಇದ್ದರೆ ಹಾಗೂ ಅರ್ಜಿದಾರರಲ್ಲದೆ ತಾವೇನಾದರೂ ಮೃತರ ನಿಜವಾದ "ಅವಲಂಬಿತರು" ಎಂದು ಕೇಳಿಕೊಳ್ಳುವುದಾದರೆ ಅಂಥಹವರು ಈ ಪ್ರಕಟಣೆ ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟವಾದ 30 ದಿವಸಗಳೊಳಗಾಗಿ ತಮ್ಮ ಆಕ್ಷೇಪಣೆ ಅಥವಾ ಅರ್ಜಿಗಳನ್ನು ಈ ನ್ಯಾಯಾಲಯಕ್ಕೆ ಸಲ್ಲಿಸಬೇಕು. ನಿಗದಿಪಡಿಸಿದ ಅವಧಿಯಲ್ಲಿ ಯಾರಿಂದಲೂ ಆಕ್ಷೇಪಣೆಗಳಾಗಲೀ ಅಥವಾ ಅರ್ಜಿಗಳಾಗಲೀ ಬಾರದೇ ಇದ್ದಲ್ಲಿ ಮೇಲ್ಕಂಡ ಅರ್ಜಿದಾರರ ಕ್ಲೈಮ್ ಅರ್ಜಿಯ ಬಗ್ಗೆ ಮುಂದಿನ ಕ್ರಮ ಜರುಗಿಸಲಾಗುವುದು. ತದ ನಂತರ ಬಂದ ಆಕ್ಷೇಪಣೆ ಅಥವಾ ಅರ್ಜಿಗಳನ್ನು ಸ್ವೀಕರಿಸುವುದಿಲ್ಲ.

ಕಾರ್ಮಿಕ ಅಧಿಕಾರಿ ಹಾಗೂ
ಕಾರ್ಮಿಕ ಪರಿಹಾರ ಆಯುಕ್ತರು,
ಮಂಡ್ಯ ಉಪವಿಭಾಗ–2, ಮಂಡ್ಯ.

ಪಿ.ಆರ್238

COMMERCE AND INDUSTRIES DEPARTMENT

NOTIFICATION

NO.CI 23 SGF 2011, Bangalore, Dated: 10.06.2011

Whereas it is necessary to make an order with a view to enabling K.P.R. Sugar Mills Private Limited, Almel, Sindagi Taluk, Bijapur District, to purchase the quantity of Sugar Cane required having regard to the crushing capacity of the factory, the availability of Sugarcane in the area where sugarcane is grown and the need for production of Sugar.

Now, therefore, in exercise of the powers conferred by clause 6,7,8 and 9 of the Sugarcane (Control) order 1966 read with CSR 1127, dated 16th July 1966 of the Government of India in the Ministry of Food, Agriculture, Community Development and Co-Operation (Department of Food) the Government of Karnataka hereby makes the following orders namely:-

I. TITLE, COMMENCEMENT AND DURATION OF OPERATION:

i) This Order may be called the Karnataka Sugarcane (Regulation of Distribution) K.P.R. Sugar Mills Private Limited, Almel, Sindagi Taluk, Bijapur District, Order 2011.

ii) It shall come into force at once and shall remain in force till withdrawn or repealed subject to amendments as the State Government may make from time to time.

2. DEFINITIONS: - In this order: -

a. Factory means the premises of the factory at Almel Village, owned by K.P.R. Sugars Private Limited at Almel Village, Sindagi Taluk, Bijapur District, including the precincts of such factory.
b. 'Form' means a form appended to this order.
c. Words and expressions used in this order but not defined shall have the meaning assigned to them in clause 2 of the Sugarcane (Control) order 1966.

3. Determination of the quantity of Sugarcane required by the factory and reservation of the area for supply of sugarcane.

i) The crushing capacity of K.P.R. Sugar Mills Private Limited, being 2500 TCD. The quantity of Sugarcane required by the factory during a year is about 4.00 Lakh M.Ts to 5.00 Lakh M.Ts.

ii) The factory shall secure the sugarcane determined under sub clause (2) from the areas specified in schedule-I to this order which shall be the area reserved temporarily in the interest of farmers for supplying sugarcane to the factory concerned, till the new factories, likely to come up in that area are established.

4. FIXATION OF QUANTITY OF SUGARCANE TO BE SUPPLIED BY THE GROWER: -

Every grower of sugarcane in the area reserved temporarily as specified in Schedule-I shall supply to the factory ninety five percent of the sugarcane grown by each such grower Co-operative Society operating in the reserved area, through such society.

5. AGREEMENT TO SUPPLY OR PURCHASE THE DETERMINED QUANTITY OF SUGARCANE.

Every grower of sugarcane or a sugarcane grower Co-operative Society, supplying sugarcane to the factory and the factory shall enter in to agreement to supply or purchase as the case may be, the quantity of sugarcane determined under clause-4.

6. PROHIBITION OF EXPORT OF SUGARCANE FROM AREA RESERVED TEMPORARILY.

No. Sugarcane shall be exported from the area reserved temporarily except under and in accordance with the conditions of a permit issued by the Deputy Commissioner in Form-I of Schedule-II.

7. ISSUE OF PERMITS:

i. Application for the grant of a permit under clause-6 shall be made in form 2 of Schedule-II and shall be accompanied by a fee of Rs.5/- and an amount of Rs.100/- as security Deposit.
ii. If any condition of the permit is contravened, the Deputy Commissioner may after giving an opportunity to the person Concerned to show cause why the amount deposited by way of security or any part there of may not be forfeited, pass order forfeiting the whole or part of the amount deposited as security.

BY ORDER AND IN THE NAME OF THE GOVERNOR OF KARNATAKA

SHIVASHANKAR NAIK.L

DESK OFFICER (SUGAR)

COMMERCE & INDUSTRIES DEPARTMENT.

SCHEDULE –I

Following 38 villages were allocated temporarily to K.P.R. Sugar Mills Private Limited, Almel, Sindagi Taluk, Bijapur District, for supply of Sugarcane.

The details of villages are as follows:

Sindagi Taluk – Bijapur Dist.	
1. Belkotagi	20. Ramanahalli
2. Babaleshwara	21. Guddalli
3. Hikkanagunthi	22. Viboothihalli
4. Kallalli	23. Bhalaganooru
5. Alamelu	24. Suraginahalli
6. Kadani	25. Devaranadaragi
7. Thavarked	26. Kumasagi
8. Madnalli	27. Alahalli
9. Tarapura	28. Gundagi
10. Devanagav	29. Kannolli
11. Kadalwada	30. Bandnala
12. Shamblewada	31. Boodihal
13. Byadagihal	32. Basthihal
14. Kurubattalli	33. Gunahar
15. Koralli	34. Sompura
16. Madari	35. Jatnala
17. Hoovinalli	36. Panchawada
18. Uchithanavadagi	37. Haranal
19. Nagarahalli	38. Otihal

SHIVASHANKAR NAIK.L

CI 23 SGF 2011

DESK OFFICER (SUGAR)

COMMERCE & INDUSTRIES DEPARTMENT.

SCHEDULE –II - FORM -I

(SEE CLAUSE 6)

The Karnataka Sugarcane (Regulation of Distribution), K.P.R. Sugar Mills Private Limited, Almel, Sindagi Taluk, Bijapur District Order 2011.

Permit No. **Date:**

1. Full name of the permit holder :
2. Father's Name :
3. Residential Address in full :
4. Quantity of Sugarcane for which permit is granted for export :
5. Area and village from which Sugarcane is permitted to be Exported. :
6. A. Place to which it is to be exported

   B. The purpose for which export is permitted.

i. For Sale

ii. For crushing sugar cane juice for Manufacture of Gur/Sakkare Gul/ Jaggery Rabi or Khandasari.

7. Their permit is valid up to :

8. The permit is granted subject to the following terms and conditions. :

a) Permit is not transferable.

b) The permit shall be produced on demand by an officer authorized by the Deputy Commissioner.

c) On expiry of the validity of the permission within 48 hours of the expiry of the validity date the permit shall be surrendered to the permit issuing authority.

Place **SIGNATURE OF THE PERMIT**

Date **ISSUING AUTHORITY.**

SCHEDULE –II - FORM -II

(SEE CLAUSE 7)

The Karnataka Sugarcane (Regulation of Distribution), K.P.R. Sugar Mills Private Limited, Almel, Sindagi Taluk, Bijapur District Order 2011. Application for the grant of permit for exporting sugarcane from a reserved area.

1. Full Name of the Applicant :
2. Father's Name :
3. Residential Address in full :
4. Quantity of Sugarcane for which permit is requested for export :
5. Area and the village from which Sugarcane is intended to be exported :
6. The purpose for which the export is intended

i) For Sale :

ii) For Crushing Sugarcane Juice or manufacture of Gur/Sakkare Gul/Jaggery/Rabi/or Khandasari for sale or self consumption :

I declare that, I am fully aware of the provisions of the Karnataka Sugarcane (Regulation of Distribution), K.P.R. Sugar Mills Private Limited, Almel, Sindagi Taluk, Bijapur District, Order 2011 and the particulars furnished in the application are true to the best of my knowledge and belief and the permit to be issued will be properly used for the purpose for which it is issued. I have actually read-got read and understood the conditions of the permit given in Form No.I of the Schedule appended to the Karnataka Sugarcane (Regulation of Distribution), K.P.R. Sugar Mills Private Limited, Almel, Sindagi Taluk, Bijapur District, Order 2011, and I agree to abide by them.

Place:

Date: **SIGNATURE OF THE APPLICANT.**

PR-643

ಅಧಿಕಾರಿಯುತ ಅಧಿಕಾರಿಗಳು ಹಾಗೂ ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್, ಚಿಕ್ಕಮಗಳೂರು ಜಿಲ್ಲೆ, ಚಿಕ್ಕಮಗಳೂರು ಇವರ ನ್ಯಾಯಾಲಯದಲ್ಲಿ

ಡಿ.ಟಿ.ಸಿ.ಆರ್.ನಂ.254/2010–11, ದಿನಾಂಕ:19.01.2011

ಅಬಕಾರಿ ಉಪ ನಿರೀಕ್ಷಕರು–1, ಕಡೂರು ವಲಯ ಇವರ ಪ್ರ.ಮಾ.ವ. ನಂ.8/2010–11, ದಿನಾಂಕ:07.12.2010

ಉಪಸ್ಥಿತರು: ಆರ್. ವೆಂಕಟೇಶ ಪದಕಿ,

ಅಧಿಕಾರಿಯುತ ಅಧಿಕಾರಿ ಹಾಗೂ ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್, ಚಿಕ್ಕಮಗಳೂರು ಜಿಲ್ಲೆ, ಚಿಕ್ಕಮಗಳೂರು.

ಫಿರ್ಯಾದುದಾರರು:	**ಆಪಾದಿತರು:**
ಅಬಕಾರಿ ಉಪ ನಿರೀಕ್ಷಕರು–1	ಎ1. ರಂಗಪ್ಪ ಬಿನ್ ಮೂಡ್ಲಪ್ಪ
ಕಡೂರು ವಲಯ.	ಎ2. ವಾಹನದ ಮಾಲೀಕರು

ಪ್ರಕರಣದ ಮುಖ್ಯಾಂಶಗಳು

ದಿನಾಂಕ:07.12.2010 ರಂದು ರಾತ್ರಿ 7.00 ಗಂಟೆ ಸಮಯದಲ್ಲಿ ಬಂಧ ಖಚಿತ ವರ್ತಮಾನದ ಮೇರೆಗೆ ಅಬಕಾರಿ ಉಪ ನಿರೀಕ್ಷಕರು–1, ಕಡೂರು ವಲಯ ಇವರು ಸಿಬ್ಬಂದಿಗಳು ಹಾಗೂ ಪಂಚರುಗಳೊಂದಿಗೆ ಕಡೂರು ತಾಲ್ಲೂಕು ಕೆರೆಸಂತೆಯಿಂದ ನಂಜಪ್ಪಹಳ್ಳಿಗೆ ಹೋಗುವ ರಸ್ತೆಯಲ್ಲಿ ಬರುವ ದೊಡ್ಡಹಟ್ಟಿ ತಾಂಡ್ಯದ ರಸ್ತೆಯ ತಿರುವಿನಲ್ಲಿ ಗಸ್ತು ಕಾರ್ಯ ನಿರ್ವಹಿಸುತ್ತಿದ್ದಾಗ ಬರುತ್ತಿದ್ದ ಒಂದು ಟಿ.ವಿ.ಎಸ್. ಎಕ್ಸ್‌ಎಲ್ ದ್ವಿಚಕ್ರ ವಾಹನವನ್ನು ತಡೆದು ನಿಲ್ಲಿಸಿದಾಗ ವಾಹನವನ್ನು ಪರಿಶೀಲಿಸಿದಾಗ ಕೆಎ–06–ಎಲ್–3258 ನಂಬರಾಗಿದ್ದು, ಟಿ.ವಿ.ಎಸ್. ಎಕ್ಸ್.ಎಲ್. ದ್ವಿಚಕ್ರ ವಾಹನದಲ್ಲಿ ಅಕ್ರಮವಾಗಿ 180 ಮಿಲಿಯ 48 ಮದ್ಯ ತುಂಬಿದ ಸೀಸೆಗಳಲ್ಲಿ 8.640 ಲೀಟರ್ ರಾಜ ವಿಸ್ಕಿ ಮದ್ಯ ದಾಸ್ತಾನು ಹೊಂದಿ ಆಸಾಮಿಯು ಸಾಗಾಣಿಕೆ ಮಾಡುತ್ತಿದ್ದರು. ಈ ಬಗ್ಗೆ ಯಾವುದೇ ರಹದಾರಿ ವಗ್ಯೆರೆ ಇತ್ಯಾದಿ ದಾಖಲೆಗಳನ್ನು ಹಾಜರುಪಡಿಸಲು ವಿಚಾರಿಸಿದಾಗ ಯಾವುದೇ ರಹದಾರಿ ಇತ್ಯಾದಿ ದಾಖಲೆಗಳನ್ನು ಹಾಜರುಪಡಿಸದೇ ಇರುವ ಕಾರಣ ಅಕ್ರಮವಾದುದೆಂದು ದೃಢಪಡಿಸಿಕೊಂಡು ಪಂಚರ ಸಮಕ್ಷಮ ಸ್ಥಳದಲ್ಲಿ ಅನುಸರಿಸಬೇಕಾದ ಕ್ರಮಗಳನ್ನು ಜರುಗಿಸಿ ಮದ್ಯ ದಾಸ್ತಾನು ಹಾಗೂ ಟಿ.ವಿ.ಎಸ್. ಎಕ್ಸೆಲ್ ದ್ವಿಚಕ್ರ ವಾಹನದೊಂದಿಗೆ ಅಮಾನತ್ತುಪಡಿಸಿಕೊಂಡು ಕಛೇರಿಗೆ ಬಂದು ಪ್ರ.ಮಾ.ವ. ನಂ.8/2010–11 ರಲ್ಲಿ ಮೊಕದ್ದಮೆ ದಾಖಲಿಸಿ ಪ್ರಥಮ ವರ್ತಮಾನ ವರದಿಯನ್ನು ಘನ ನ್ಯಾಯಾಲಯಕ್ಕೆ ಹಾಗೂ ಮೇಲಾಧಿಕಾರಿಗಳಿಗೂ ಸಲ್ಲಿಸಿ ತನಿಖೆ ಮುಂದುವರೆಸಿರುತ್ತಾರೆ.

ವಶಪಡಿಸಿಕೊಂಡ ವಾಹನ ಹಾಗೂ ಮದ್ಯಕ್ಕೆ ಸಂಬಂಧಿಸಿದಂತೆ ಈ ಪ್ರಾಧಿಕಾರವು ಮುಟ್ಟುಗೋಲಿನ ನಡವಳಿಗಳನ್ನು ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 43(ಎ) ಅಡಿಯಲ್ಲಿ ಪ್ರಾರಂಭಿಸಿ ವಾಹನದ ಮಾಲೀಕತ್ವದ ಹಾಗೂ ಮೌಲ್ಯದ ವಿವರಗಳನ್ನು ನೀಡುವಂತೆ ಕೋರಿ ಕ್ರಮವಾಗಿ ಪ್ರಾದೇಶಿಕ ಸಾರಿಗೆ ಅಧಿಕಾರಿಗಳು, ತುಮಕೂರು ಮತ್ತು ಚಿಕ್ಕಮಗಳೂರು ಜಿಲ್ಲೆ ಇವರಿಗೆ ಪತ್ರ ಬರೆದು ಆರೋಪಿಗೆ ಕಲಂ 43(ಬಿ) ಅಡಿಯಲ್ಲಿ ನೋಟಿಸ್ ನೀಡಲಾಗಿತ್ತು.

ಪ್ರಾದೇಶಿಕ ಸಾರಿಗೆ ಅಧಿಕಾರಿಗಳು, ತುಮಕೂರು ಮತ್ತು ಚಿಕ್ಕಮಗಳೂರು ಇವರಿಂದ ಇದುವರೆವಿಗೂ ವಾಹನದ ಮಾಲೀಕತ್ವದ ಮತ್ತು ಮೌಲ್ಯದ ವಿವರಗಳು ಬಂದಿರುವುದಿಲ್ಲ. ಪ್ರಕರಣದಲ್ಲಿನ ಆರೋಪಿಗೆ ಜಪ್ತುಪಡಿಸಿದ ಮದ್ಯ ಹಾಗೂ ವಾಹನವನ್ನು ಸರ್ಕಾರಕ್ಕೆ ಏಕೆ ಮುಟ್ಟುಗೋಲು ಹಾಕಿಕೊಳ್ಳಬಾರದು ಎಂದು ಕಾರಣ ಕೇಳಿ ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 43(ಬಿ) ಅಡಿಯಲ್ಲಿ ನೊಂದಾಯಿತ ಅಂಚೆ ಮೂಲಕ ನೋಟೀಸ್ ಜಾರಿ ಮಾಡಲು ಕ್ರಮ ಕೈಗೊಂಡಿದ್ದು, ನೋಟಿಸ್ ದಿನಾಂಕ:13.01.2011 ರಂದು ಜಾರಿಯಾದ ಬಗ್ಗೆ ಸ್ವೀಕೃತಿ ಈ ಪ್ರಾಧಿಕಾರಕ್ಕೆ ಮರಳಿ ಬಂದಿರುತ್ತದೆ.

ಮೊಕದ್ದಮೆಯ ನಡವಳಿಗೆ ಸಂಬಂಧಿಸಿದಂತೆ ಸಹಾಯಕ ಅಭಿಯೋಗ ನಿರ್ದೇಶಕರು ಪ್ರಕರಣ ದಾಖಲಾಗಿ ಸುಮಾರು 1 ತಿಂಗಳು ಅವಧಿ ಕಳೆದಿದ್ದು, ಮೊಕದ್ದಮೆಯ ಕೃತ್ಯವು ವಾಹನದ ಮಾಲೀಕರ ಗಮನಕ್ಕೆ ಬಂದು ನಡೆದ ಕೃತ್ಯವಾಗಿರುವುದರಿಂದ ವಾಹನವು ಜಪ್ತಾದಾಗಿನಿಂದ ಈವರೆವಿಗೂ ಪ್ರಾಧಿಕಾರದ ಮುಂದೆ ಅಧಿಕೃತ ದಾಖಲಾತಿ ಪತ್ರಗಳೊಂದಿಗೆ ತಾವಾಗಲೀ ಅಥವಾ ತಮ್ಮ ನ್ಯಾಯವಾದಿಗಳ ಮುಖಾಂತರವಾಗಲೀ ಹಾಜರಾಗದೇ ಇರುವುದರಿಂದ ಅಲ್ಲದೆ ಇವರು ಮೊಕದ್ದಮೆಯ ಕೃತ್ಯದಲ್ಲಿ ಶಾಮೀಲಾಗಿರುವುದು ಸ್ಪಷ್ಟವಾಗಿರುವುದರಿಂದ ವಾಹನವನ್ನು ಕರ್ನಾಟಕ ಅಬಕಾರಿ ಕಾಯ್ದೆ, 1965ರ ಕಲಂ 43(ಸಿ) ಅಡಿಯಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಅಭಿಪ್ರಾಯ ಪಟ್ಟಿರುತ್ತಾರೆ. ಲಭ್ಯವಿದ್ದ ದಾಖಲೆಗಳು ಹಾಗೂ ಆಧಾರಗಳನ್ನು ಗಮನಿಸಿದಾಗ ಸಹಾಯಕ ಅಭಿಯೋಗ ನಿರ್ದೇಶಕರ ವಾದವನ್ನು ಪುರಸ್ಕರಿಸಲು ಯೋಗ್ಯವೆಂದು ಪ್ರಾಧಿಕಾರಕ್ಕೆ ಮನವರಿಕೆಯಾಗುತ್ತದೆ. ಕಾರಣ, ವಾಹನದ ಮಾಲೀಕರು ಪ್ರಾಸಿಕ್ಯೂಷನ್ ಮಾಡಿರುವ ಆರೋಪಗಳನ್ನು ಅಲ್ಲಗಳೆಯಲು ಸಂಪೂರ್ಣ ನಿರ್ಲಕ್ಷರಾಗಿರುವುದರಿಂದ ಅಲ್ಲದೆ ಕಲಂ 43ರ ಅಡಿಯಲ್ಲಿ, ಪ್ರಕರಣವನ್ನು ಪತ್ತೆಹಚ್ಚಿದ ಒಂದು ತಿಂಗಳೊಳಗಾಗಿ ಆರೋಪಿ ಇಲ್ಲದ ಅಥವಾ ಆರೋಪಿ ಪತ್ತೆಯಾಗದೇ ಇದ್ದಲ್ಲಿ ಮತ್ತು ವಶಪಡಿಸಿಕೊಂಡ ಸ್ವತ್ತುಗಳು ಕರ್ನಾಟಕ ಅಬಕಾರಿ ಕಾಯ್ದೆ, 1965ರ ಕಲಂ 43ರ ಅಡಿಯಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಬಾಧ್ಯವಾಗಿದ್ದಲ್ಲಿ, ಯಾರೊಬ್ಬರು ಸದರಿ ಸ್ವತ್ತುಗಳು ಕಾನೂನು ಬದ್ಧವಾಗಿವೆ ಎಂಬ ಸಾಕ್ಷ್ಯಾಧಾರಗಳನ್ನು ಹಾಜರುಪಡಿಸದೇ ಇದ್ದಲ್ಲಿ ಅಂತಹವುಗಳನ್ನು ಕಲಂ 43(ಸಿ) ಅಡಿಯಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳ ಬಹುದಾಗಿದ್ದು, ಮೊಕದ್ದಮೆಯ ಶೀಘ್ರ ವಿಲೇವಾರಿ ದೃಷ್ಟಿ, ಸರ್ಕಾರದ ರಾಜಸ್ವದ ದೃಷ್ಟಿಯನ್ನು ಗಮನದಲ್ಲಿಟ್ಟುಕೊಂಡು ಈ ಮೊಕದ್ದಮೆಯನ್ನು ಕರ್ನಾಟಕ ಅಬಕಾರಿ ಕಾಯ್ದೆ, 1965ರ ಕಲಂ 43(ಸಿ) ಅಡಿಯಲ್ಲಿ ನಡವಳಿಗಳನ್ನು ಜರುಗಿಸಿ ಇತ್ಯರ್ಥಗೊಳಿಸುವುದು ಸಮಂಜಸವೆಂದು ಮನವರಿಕೆಯಾದ ಕಾರಣ ಕೆಳಕಂಡ ಆದೇಶ.

ಆದೇಶ

ಆರ್. ವೆಂಕಟೇಶ ಪದಕಿ, ಅಧಿಕಾರಯುತ ಅಧಿಕಾರಿ ಹಾಗೂ ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್, ಚಿಕ್ಕಮಗಳೂರು ಜಿಲ್ಲೆ, ಚಿಕ್ಕಮಗಳೂರು ಆದ ನಾನು ಅಬಕಾರಿ ಉಪ ನಿರೀಕ್ಷಕರು, ನಂ.1, ಕಡೂರು ವಲಯ ಇವರ ಪ್ರ.ಮಾ.ವ. ನಂ.8/2010–11, ದಿನಾಂಕ:07.12.2010ರಲ್ಲಿ ವಶಪಡಿಸಿಕೊಂಡ ವಾಹನ ಸಂಖ್ಯೆ: ಕೆಎ–06–ಎಲ್–3258 ರ (ಟಿ.ವಿ.ಎಸ್. ಎಕ್ಸೆಲ್) ಹಾಗೂ ರಾಸಾಯನಿಕ ಪರೀಕ್ಷೆಗೆ ಮಾದರಿ ತೆಗೆದು ಉಳಿದ 3.960 ಲೀಟರ್ ಮದ್ಯವನ್ನು ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 43(ಎ) ಅಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಕಲಂ 43(ಬಿ) ಅಡಿಯಲ್ಲಿ ಅನುಸರಿಸಬೇಕಾದ ಕ್ರಮಗಳನ್ನು ಜರುಗಿಸಿ ಕಲಂ 43(ಸಿ) ಅಡಿಯಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ಆದೇಶಿಸಿರುತ್ತೇನೆ.

ಈ ಆದೇಶವನ್ನು ಇಂದು ಅಂದರೆ 19ನೇ ಜನವರಿ 2011 ರಂದು ಬೆರಳಚ್ಚುಗಾರರಿಗೆ ಉಕ್ತಲೇಖನ ಕೊಟ್ಟು ಗಣಕಯಂತ್ರದಲ್ಲಿ ಬೆರಳಚ್ಚಿಸಿದ ನಂತರ ತಪ್ಪುಗಳನ್ನು ತಿದ್ದಿ ಮುಕ್ತ ನ್ಯಾಯಾಲಯದಲ್ಲಿ ಘೋಷಿಸಲಾಯಿತು.

ಈ ಆದೇಶವು ಇಂದಿನಿಂದ 30 ದಿನಗಳ ನಂತರ ಜಾರಿಯಲ್ಲಿ ಬರುತ್ತದೆ.

ಅಧಿಕಾರಯುತ ಅಧಿಕಾರಿ ಹಾಗೂ
ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್,
ಚಿಕ್ಕಮಗಳೂರು ಜಿಲ್ಲೆ, ಚಿಕ್ಕಮಗಳೂರು

ಪಿ.ಆರ್.173

ಅಧಿಕಾರಿಯುತ ಅಧಿಕಾರಿಗಳು ಹಾಗೂ ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್, ಚಿಕ್ಕಮಗಳೂರು ಜಿಲ್ಲೆ, ಚಿಕ್ಕಮಗಳೂರು ಇವರ ನ್ಯಾಯಾಲಯದಲ್ಲಿ

ಡಿ.ಟಿ.ಸಿ.ಆರ್.ನಂ.422/2010–11, ದಿನಾಂಕ:25.05.2011

ಉಪಸ್ಥಿತರು: ಆರ್. ವೆಂಕಟೇಶ ಪದಕಿ,
ಅಧಿಕಾರಿಯುತ ಅಧಿಕಾರಿ ಹಾಗೂ ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್, ಚಿಕ್ಕಮಗಳೂರು ಜಿಲ್ಲೆ, ಚಿಕ್ಕಮಗಳೂರು.

ಫಿರ್ಯಾದುದಾರರು:	**ಆಪಾದಿತರು:**
ಆರಕ್ಷಕ ಉಪ ನಿರೀಕ್ಷಕರು,	ಎ1. ಹೆಚ್.ಜಿ. ಗೋವಿಂದಗೌಡ ಬಿನ್ ಹೆಚ್.ಟಿ. ಗಿರೀಗೌಡ
ಲಕ್ಕವಳ್ಳಿ ಪೋಲೀಸ್ ಠಾಣೆ.	ಎ2. ಗಂಗಾನಾಯ್ಕ್ ಬಿನ್ ಸಕ್ರೆನಾಯ್ಕ

ಪ್ರಕರಣದ ಮುಖ್ಯಾಂಶಗಳು

ದಿನಾಂಕ:18/19.02.2002ರಂದು ಪೊಲೀಸ್ ಉಪ; ನಿರೀಕ್ಷಕರು, ಲಕ್ಕವಳ್ಳಿ ಪೊಲೀಸ್ ಠಾಣೆ ಇವರು ತಮ್ಮ ಸಿಬ್ಬಂದಿಗಳೊಂದಿಗೆ ತರೀಕೆರೆ ತಾಲ್ಲೂಕು, ಲಕ್ಕವಳ್ಳಿ ಹೋಬಳಿ, ಬಾವಿಕೆರೆ ಬಸ್ ನಿಲ್ದಾಣದ ಬಳಿ ಕಾಯುತ್ತಿದ್ದಾಗ ಒಂದು ಎಂ.80 ಬೈಕ್‌ನಲ್ಲಿ 2 ಜನ ಆಸಾಮಿಗಳು ಬರುತ್ತಿರುವುದನ್ನು ತಡೆದು ನಿಲ್ಲಿಸಿ ಪರಿಶೀಲಿಸಲಾಗಿ, ವಾಹನ ಸಂಖ್ಯೆ: ಕೆಎ–14:ಹೆಚ್–9806 ಎಂ.80 ಬೈಕ್‌ನ ಹಿಂಭಾಗದ ಸೈಡ್‌ಬ್ಯಾಕ್‌ನಲ್ಲಿ ಗೋಣಿಚೀಲದಲ್ಲಿ ಮದ್ಯವಿದ್ದು, ಸ್ಥಳಕ್ಕೆ ಪಂಚರನ್ನು ಬರಮಾಡಿಕೊಂಡು ಅವರ ಸಮಕ್ಷಮದಲ್ಲಿ ಮದ್ಯದ ಬಾಟಲಿಗಳನ್ನು ಅಜಮಾಯಿಸಲಾಗಿ ಒಂದು ಗೋಣಿಚೀಲದಲ್ಲಿ ಸುಮಾರು 180 ಮಿಲಿಯ 72 ನಂ.1 ಹೈವೆ ಫೈನ್ ವಿಸ್ಕಿ ಮದ್ಯದ ಬಾಟಲಿಗಳಿದ್ದು ಸಾಗಾಣಿಕೆಗೆ ಸಂಬಂಧಿಸಿದಂತೆ ವಿಚಾರಿಸಿದಾಗ ಯಾವುದೇ ರಹದಾರಿ ಮತ್ತು ವಗೈರೆಗಳನ್ನು ಹಾಜರುಪಡಿಸದೇ ಇರುವುದರಿಂದ ಅಕ್ರಮ ಮದ್ಯವೆಂದು ದೃಢಪಡಿಸಿಕೊಂಡು, ಆರೋಪಿಯ ಹೆಸರು ವಿಳಾಸ ಕೇಳಲಾಗಿ ಹೆಚ್.ಜಿ. ಗೋವಿಂದಗೌಡ ಬಿನ್ ಹೆಚ್.ಟಿ. ಗಿರೀಗೌಡ, ದೊಡ್ಡಪ್ಪನಹಳ್ಳಿ, ಇನ್ನೊಬ್ಬ ಗಂಗಾನಾಯ್ಕ್ ಬಿನ್ ಸಕ್ರೆನಾಯ್ಕ್, ದೊಡ್ಡಪ್ಪನಹಳ್ಳಿ ಎಂದು ತಿಳಿಸಿದ್ದು, ನಂತರ ಮತ್ತು ಸದರಿ ಸ್ವತ್ತುಗಳನ್ನು ಸರ್ಕಾರದ ವಶಕ್ಕೆ ಅಮಾನತ್ತುಪಡಿಸಿಕೊಂಡು ಈ ಬಗ್ಗೆ ಸ್ಥಳದಲ್ಲಿ ಅನುಸರಿಸಬೇಕಾದ ಕ್ರಮಗಳನ್ನು ಜರುಗಿಸಿ ಠಾಣೆ ಕ್ರೈಂ ನಂ.27/2002 ರಲ್ಲಿ ಮೊಕದ್ದಮೆ ದಾಖಲು ಮಾಡಿ ಪ್ರಥಮ ಮಾಹಿತಿ ವರದಿಯನ್ನು ನ್ಯಾಯಾಲಯಕ್ಕೆ ಹಾಗೂ ಮೇಲಾಧಿಕಾರಿಗಳಿಗೆ ಸಲ್ಲಿಸಿ, ಪ್ರಕರಣವನ್ನು ಮುಂದಿನ ತನಿಖೆಗಾಗಿ ಅಬಕಾರಿ ಉಪ ನಿರೀಕ್ಷಕರು, ತರೀಕೆರೆ ಉಪ ವಲಯ ಇವರಿಗೆ ಸ್ವತ್ತುಗಳೊಂದಿಗೆ ಹಸ್ತಾಂತರಿಸಿದ ಮೇರೆಗೆ ಪ್ರ.ಮಾ.ವ. 100/2001–02, ದಿನಾಂಕ:25.06.2002 ರಂದು ಪ್ರಕರಣ ದಾಖಲಿಸಿ ತನಿಖೆಯನ್ನು ಮುಂದುವರೆಸಿರುತ್ತಾರೆ.

ವಶಪಡಿಸಿಕೊಂಡ ಮದ್ಯವನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ವಿಲೇವಾರಿ ಮಾಡಲಾಗಿದ್ದು, ಅಲ್ಲದೇ ಪ್ರಕರಣದ ತನಿಖೆಯನ್ನು ಪೂರ್ಣಗೊಳಿಸಿ ಅಂತಿಮ ಆರೋಪಣಾ ಪಟ್ಟಿಯನ್ನು ತರೀಕೆರೆ ಘನ ನ್ಯಾಯಾಲಯಕ್ಕೆ ಸಲ್ಲಿಸಿದ್ದು, ಪ್ರಕರಣವು ನ್ಯಾಯಾಲಯದಿಂದ ಖುಲಾಸೆಯಾಗಿದ್ದು, ಜಫ್ತಾಗಿರುವ ವಾಹನವು 9 ವರ್ಷಗಳ ಅವಧಿ ಕಳೆದಿದ್ದು ಹಕ್ಕು ಸಾಧಿಸಲು ಯಾರು ಮುಂದೆ ಬಂದಿರುವುದಿಲ್ಲ. ಆದ್ದರಿಂದ ವಾಹನವನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ವಿಲೇವಾರಿ ಮಾಡಲು ಅಬಕಾರಿ ನಿರೀಕ್ಷಕರು, ತರೀಕೆರೆ ಇವರು ದಿನಾಂಕ:02.05.2011 ರಂದು ವರದಿ ಮಾಡಿರುತ್ತಾರೆ.

ವಾಹನಕ್ಕೆ ಸಂಬಂಧಿಸಿದಂತೆ ಈ ಪ್ರಾಧಿಕಾರವು ಮುಟ್ಟುಗೋಲಿನ ನಡವಳಿಗಳನ್ನು ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 43(ಎ) ಅಡಿಯಲ್ಲಿ ಪ್ರಾರಂಭಿಸಿ ವಾಹನದ ಮಾಲೀಕತ್ವದ ಹಾಗೂ ಮೌಲ್ಯದ ವಿವರಗಳನ್ನು ನೀಡುವಂತೆ ಕೋರಿ ಪ್ರಾದೇಶಿಕ ಸಾರಿಗೆ ಅಧಿಕಾರಿಗಳು, ಶಿವಮೊಗ್ಗ ಮತ್ತು ಚಿಕ್ಕಮಗಳೂರು ಇವರಿಗೆ ಪತ್ರ ಬರೆದು ಪ್ರಕರಣದ ಮುಟ್ಟುಗೋಲಿನ ನಡವಳಿಗಳನ್ನು ಮುಂದುವರೆಸಲಾಯಿತು.

ವಾಹನದ ಮಾಲೀಕರು ಕೃತ್ಯ ಜರುಗಿದ ಸುಮಾರು 9 ವರ್ಷ ಕಳೆದಿದ್ದು, ಇದುವರೆವಿಗೂ ವಾಹನದ ಕಾನೂನು ಬದ್ಧ ವಾರಸುದಾರರು ಯಾರು ತಾವಾಗಲೀ ಅಥವಾ ಅವರ ಪರ ವಕೀಲರ ಮೂಲಕವಾಗಲಿ ತಾವು ಕೃತ್ಯದಲ್ಲಿ ಭಾಗಿಯಾಗಿಲ್ಲ ಮತ್ತು ಈ ಕೃತ್ಯಕ್ಕೆ ವಾಹನವನ್ನು ಬಳಸಲಾಗಿಲ್ಲವೆಂಬ ಬಗ್ಗೆ ಪ್ರಾಧಿಕಾರದ ಮುಂದೆ ಹಾಜರಾಗಿ ನಿರೂಪಿಸದೇ ಇರುವ ಅಂಶಗಳು, ಸಾಕ್ಷ್ಯಗಳು ಹಾಗೂ ಪ್ರಾಧಿಕಾರದ ಮುಂದೆ ಇರುವ ದಾಖಲೆಗಳನ್ನು ಸಹಾಯಕ ಅಭಿಯೋಗ ನಿರ್ದೇಶಕರು, ಮಂಡಿಸಿ ವಾಹನವನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಯೋಗ್ಯವೆಂದು ಅಭಿಪ್ರಾಯಪಟ್ಟಿರುತ್ತಾರೆ.

ಮೊಕದ್ದಮೆ ದಾಖಲಾಗಿ ಸುಮಾರು 9 ವರ್ಷ ಕಳೆದಿದ್ದು ಈ ಅವಧಿಯಲ್ಲಿ ವಾಹನದ ಕಾನೂನು ಬದ್ಧ ವಾರಸುದಾರರು ಯಾರು ವಾಹನವನ್ನು ಈ ಕೃತ್ಯಕ್ಕೆ ಬಳಸಿಲ್ಲ ಮತ್ತು ತಾವು ಕೃತ್ಯದಲ್ಲಿ ಭಾಗಿಯಾಗಿಲ್ಲ ಎಂಬುದನ್ನು ಸಾಕ್ಷ್ಯಧಾರಗಳ ಮುಖಾಂತರ ಪ್ರಾಧಿಕಾರದ ಮುಂದೆ ಇದುವರೆವಿಗೂ ತಾವಾಗಲೀ ಅಥವಾ ತಮ್ಮ ಪರ ವಕೀಲರ ಮೂಲಕವಾಗಲಿ ಅಧಿಕೃತ ದಾಖಲಾತಿಗಳೊಂದಿಗೆ ಹಾಜರಾಗಿ ಸಾಬೀತುಪಡಿಸದೇ ಇರುವುದರಿಂದ, ವಾಹನದ ವಾರಸುದಾರರು ಕೃತ್ಯದಲ್ಲಿ ಶಾಮೀಲಾಗಿರುವುದರಿಂದಲೇ ವಾಹನದ ಬಗ್ಗೆ ಯಾವುದೇ ಆಸಕ್ತಿ ತೋರಿಸದೆ ಇರುವ ಅಂಶವು ಸಹಾಯಕ ಅಭಿಯೋಗ ನಿರ್ದೇಶಕರವರ ವಾದದಿಂದ ಮೇಲ್ನೋಟಕ್ಕೆ ಸಾಬೀತಾಗುವುದರಿಂದ ಜಫ್ತಾಗಿರುವ ವಾಹನವು ಇಲಾಖಾ ವಶದಲ್ಲಿಯೇ ಇದ್ದು, ತಟಸ್ಥ ಸ್ಥಿತಿಯಲ್ಲಿ ಹಾಗೆಯೇ ಬಿಟ್ಟಲ್ಲಿ ಪ್ರಕೃತಿಯ ವೈಪರೀತ್ಯಗಳಿಗನುಗುಣವಾಗಿ ಹಾಳಾಗಿ ಸರ್ಕಾರದ ರಾಜಸ್ವಕ್ಕೆ ಧಕ್ಕೆ ಉಂಟಾಗುವ ಸಂಭವವಿರುವುದರಿಂದ ಹಾಗೂ ಮೊಕದ್ದಮೆಯ ಶೀಘ್ರ ವಿಲೇವಾರಿ ದೃಷ್ಟಿಯಿಂದ ವಶಪಡಿಸಿಕೊಂಡ ವಾಹನವನ್ನು ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 43(ಸಿ) ಅಡಿಯಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳುವುದು ಯೋಗ್ಯವೆಂದು ಪ್ರಾಧಿಕಾರಕ್ಕೆ ಮನವರಿಕೆಯಾಗಿರುವುದರಿಂದ ಈ ಕೆಳಕಂಡ ಆದೇಶ.

ಆದೇಶ

ಆರ್. ವೆಂಕಟೇಶ ಪದಕಿ, ಅಧಿಕಾರಯುತ ಅಧಿಕಾರಿ ಹಾಗೂ ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್, ಚಿಕ್ಕಮಗಳೂರು ಜಿಲ್ಲೆ, ಚಿಕ್ಕಮಗಳೂರು ಆದ ನಾನು ಆರಕ್ಷಕ ಉಪ ನಿರೀಕ್ಷಕರು, ಲಕ್ಕವಳ್ಳಿ ಪೊಲೀಸ್ ಠಾಣೆ, ಇವರ ಕ್ರೈಂ. ನಂ.27/2002, ದಿನಾಂಕ:19.02.2002ರಲ್ಲಿ ವಶಪಡಿಸಿಕೊಂಡ ವಾಹನ ಸಂಖ್ಯೆ: ಕೆಎ–14–ಹೆಚ್–9806 ರ (ಬಜಾಜ್ ಎಂ.80 ಬೈಕ್) ಅನ್ನು ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 43(ಎ) ಅಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಕಲಂ 43(ಸಿ) ಅಡಿಯಲ್ಲಿ ಮುಟ್ಟುಗೋಲು ಹಾಕಿಕೊಂಡು ಆದೇಶಿಸಿರುತ್ತೇನೆ.

ಈ ಆದೇಶವನ್ನು ಇಂದು ಅಂದರೆ 25ನೇ ಮೇ 2011 ರಂದು ಬೆರಳಚ್ಚುಗಾರರಿಗೆ ಉಕ್ತಲೇಖನ ಕೊಟ್ಟು ಗಣಕಯಂತ್ರದಲ್ಲಿ ಬೆರಳಚ್ಚಿಸಿದ ನಂತರ ತಪ್ಪುಗಳನ್ನು ತಿದ್ದಿ ಮುಕ್ತ ನ್ಯಾಯಾಲಯದಲ್ಲಿ ಘೋಷಿಸಲಾಯಿತು.

ಅಧಿಕಾರಯುತ ಅಧಿಕಾರಿ ಹಾಗೂ
ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಸ್,
ಚಿಕ್ಕಮಗಳೂರು ಜಿಲ್ಲೆ, ಚಿಕ್ಕಮಗಳೂರು

ಪಿ.ಆರ್.582

ಸಹಕಾರ ಇಲಾಖೆ

ಸಹಕಾರ ಸಂಘಗಳ ಉಪನಿಬಂಧಕರು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ಇವರ ಕಛೇರಿ

ನಂ.ಡಿಆರ್‌ಡಿ:ಎಲ್‌ಕ್ಯೂಡಿ:ಸಿಆರ್:04:2010–11, ದಿನಾಂಕ:31.03.2011

ವಿಷಯ: ಸಮಾಪನೆಯಲ್ಲಿರುವ ಸಣ್ಣ ನೀರಾವರಿ ನೀರು ಬಳಕೆದಾರರ ಸಹಕಾರ ಸಂಘ ನಿ. ಬಲ್ಲಾಳಸಮುದ್ರ ಹೊಸದುರ್ಗ ತಾಲ್ಲೂಕು ಇದರ ನೋಂದಣಿ ರದ್ಧತಿ ಮಾಡುವ ಬಗ್ಗೆ.

ಉಲ್ಲೇಖ: 1) ಈ ಕಛೇರಿ ಆದೇಶ ಸಂಖ್ಯೆ: ಡಿಆರ್‌ಡಿ: ಎಲ್‌ಕ್ಯೂಡಿ: ಸಿಆರ್:04:10–11, ದಿನಾಂಕ:30.12.2010.

2) ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಚಿತ್ರದುರ್ಗ ಇವರ ಪತ್ರದ ನಂ. ಸನಿ:30: ಸಮಾಪನೆ: ಸಿಆರ್ /2010–11, ದಿನಾಂಕ:31.03.2010.

ಪ್ರಸ್ತಾವನೆ:

ಪ್ರಸ್ತುತ ವಿಷಯ ಮತ್ತು ಉಲ್ಲೇಖಕ್ಕೆ ಸಂಬಂಧಿಸಿದಂತೆ ಸಣ್ಣ ನೀರಾವರಿ ನೀರು ಬಳಕೆದಾರರ ಸಹಕಾರ ಸಂಘ ನಿ., ಬಲ್ಲಾಳಸಮುದ್ರ, ಹೊಸದುರ್ಗ ತಾಲ್ಲೂಕು ಇದರ ನೋಂದಣಿ ಸಂಖ್ಯೆ: ಸನಿ:30/ಆರ್.ಜಿ.ಎನ್./30458/ 2001–02 ದಿನಾಂಕ:16.11.2000ರಂದು ನೋಂದಣಿಯಾಗಿದ್ದು, ಸಂಘವು 2004–05 ರಿಂದ ಯಾವುದೇ ಕಾರ್ಯಚಟುವಟಿಕೆಗಳನ್ನು ನಿರ್ವಹಿಸದೆ ಸ್ಥಗಿತಗೊಂಡಿದ್ದು ಉಲ್ಲೇಖ (1)ರ ಆದೇಶದಲ್ಲಿ ಸಂಘವನ್ನು ಸಮಾಪನೆಗೊಳಿಸಿ ಸಹಕಾರ ಅಭಿವೃದ್ಧಿ ಅಧಿಕಾರಿ ಹೊಸದುರ್ಗ ತಾಲ್ಲೂಕು ಇವರನ್ನು ಸಂಘದ ಸಮಾಪನಾಧಿಕಾರಿಯನ್ನಾಗಿ ನೇಮಕ ಮಾಡಿದ್ದು ಸಮಾಪನಾಧಿಕಾರಿಗಳು ಸಂಘದ ಸದಸ್ಯರುಗಳಿಗೆ ಸಂಘದ ಪುನಃಶ್ಚೇತನದ ಬಗ್ಗೆ ಒಲವು ಇಲ್ಲದಿರುವುದನ್ನು ಮನಗಂಡು ದಿನಾಂಕ:31.03.2011 ರಂದು ನಡೆಸಿದ ಸಮಾಪನಾಧಿಕಾರಿಯವರ ನಡವಳಿ ರೀತ್ಯಾ ಬರತಕ್ಕ ಆಸ್ತಿಗಳನ್ನು ನಷ್ಟಕ್ಕೆ ವರ್ಗಾಯಿಸಿ ತೀರಿಸತಕ್ಕ ಜವಾಬ್ದಾರಿಗಳನ್ನು ಹೊಂದಾಣಿಕೆ ಮಾಡಿ ಆಸ್ತಿ–ಜವಾಬ್ದಾರಿ ತಃಖ್ತೆಯನ್ನು ದಿನಾಂಕ:31.03.2011ರ ಅಂತ್ಯಕ್ಕೆ ಜಮಾ ಖರ್ಚು ಮಾಡಿ ಶೂನ್ಯಗೊಳಿಸಿರುತ್ತಾರೆ. ಈ ಹಿನ್ನೆಲೆಯಲ್ಲಿ ಸಂಘವನ್ನು ಯಥಾ ಸ್ಥಿತಿಯಲ್ಲಿ ಮುಂದುವರಿಸಿದಲ್ಲಿ ಸಂಘದ ಸದಸ್ಯರುಗಾಗಲೀ ಅಥವಾ ಸಾರ್ವಜನಿಕರಿಗಾಗಲೀ ಯಾವುದೇ ಪ್ರಯೋಜನ ಇಲ್ಲವೆಂದು ಪರಿಗಣಿಸಿ ಸಂಘದ ನೋಂದಣಿಯನ್ನು ರದ್ದುಗೊಳಿಸಲು ಸಮಾಪನಾಧಿಕಾರಿಗಳು ಸಲ್ಲಿಸಿರುವ ಪ್ರಸ್ತಾವೆಯನ್ನು ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಚಿತ್ರದುರ್ಗ ಉಪವಿಭಾಗ, ಚಿತ್ರದುರ್ಗ ಇವರು ಉಲ್ಲೇಖ (2)ರ ಪತ್ರದಲ್ಲಿ ಶಿಫಾರಸ್ಸು ಮಾಡಿರುವುದನ್ನು ಪರಿಶೀಲಿಸಿದೆ, ಸಮಾಪನಾಧಿಕಾರಿಗಳು ದಿನಾಂಕ:31.03.2011 ರಂದು ನಡೆಸಿರುವ ಸಮಾಪನಾ ನಡವಳಿ ಸ್ವಯಂ ವೇದ್ಯವಾಗಿರುವುದರಿಂದ ಸಮಾಪನಾಧಿಕಾರಿಗಳ ವರದಿಯ ಮೇರೆಗೆ ಸಂಘವನ್ನು ಮುಂದುವರಿಸುವುದು ಸೂಕ್ತವಲ್ಲವೆಂದು ಸಂಘದ ನೋಂದಣಿಯನ್ನು ರದ್ದುಗೊಳಿಸುವುದು ಸೂಕ್ತವೆಂದು ಮನಗಂಡು ಈ ಕೆಳಕಂಡಂತೆ ಆದೇಶವನ್ನು ಹೊರಡಿಸಲಾಗಿದೆ.

ಆದೇಶ

ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 75 ರನ್ವಯ ಹಾಗೂ ಸರ್ಕಾರದ ಅಧಿಸೂಚನೆ ಸಂಖ್ಯೆ:ಸಿಓ:201: ಸಿಎಲ್‌ಎಂ:2008, ಬೆಂಗಳೂರು ದಿನಾಂಕ:27.05.2010 ಪ್ರಕಾರ ದತ್ತವಾದ ಅಧಿಕಾರದನ್ವಯ ಇಲ್ಯಾಸ್ ಉಲ್ಲಾ ಷರೀಫ್ ಸಹಕಾರ ಸಂಘಗಳ ಉಪನಿಬಂಧಕರು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ಆದ ನಾನು ಸಣ್ಣ ನೀರಾವರಿ ನೀರು ಬಳಕೆದಾರರ ಸಹಕಾರ ಸಂಘ ನಿ. ಬಲ್ಲಾಳಸಮುದ್ರ, ಹೊಸದುರ್ಗ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ, ಈ ಸಂಘದ ನೋಂದಣಿ ಸಂಖ್ಯೆ: ಸನಿ:30/ಆರ್.ಜಿ.ಎನ್./30458/ 2001–02, ದಿನಾಂಕ:16.11.2000ನ್ನು ಈ ಕೂಡಲೇ ಜಾರಿಗೆ ಬರುವಂತೆ ರದ್ದುಪಡಿಸಿರುತ್ತೇನೆ. ಈ ದಿನದಿಂದ ಸದರಿ ಸಂಘವು ಅಸ್ತಿತ್ವವನ್ನು ಕಳೆದುಕೊಂಡಿರುತ್ತದೆ.

ಈ ಆದೇಶವನ್ನು ನನ್ನ ಸ್ವ ಸಹಿ ಮತ್ತು ಕಛೇರಿಯ ಮೊಹರಿನೊಂದಿಗೆ ಈ ದಿನ ದಿನಾಂಕ:31.03.2011 ರಂದು ಈ ಆದೇಶವನ್ನು ನೀಡಲಾಗಿದೆ.

ಸಹಕಾರ ಸಂಘಗಳ ಉಪ ನಿಬಂಧಕರು,
ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ.

ಸಹಕಾರ ಇಲಾಖೆ

ಸಹಕಾರ ಸಂಘಗಳ ಉಪನಿಬಂಧಕರು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ಇವರ ಕಛೇರಿ

ನಂ.ಡಿಆರ್‌ಡಿ:ಎಲ್‌ಕ್ಯೂಡಿ:ಸಿಆರ್:10:2010–11, ದಿನಾಂಕ:31.03.2011

ವಿಷಯ: ಸಮಾಪನೆಯಲ್ಲಿರುವ ಸಣ್ಣ ನೀರಾವರಿ ನೀರು ಬಳಕೆದಾರರ ಸಹಕಾರ ಸಂಘ ನಿ. ಭರಮಸಾಗರ, ಚಿತ್ರದುರ್ಗ ತಾಲ್ಲೂಕು ಇದರ ನೋಂದಣಿ ರದ್ಧತಿ ಮಾಡುವ ಬಗ್ಗೆ.

ಉಲ್ಲೇಖ: 1) ಈ ಕಛೇರಿ ಆದೇಶ ಸಂಖ್ಯೆ: ಡಿಆರ್‌ಡಿ: ಎಲ್‌ಕ್ಯೂಡಿ: ಸಿಆರ್:02:09–10, ದಿನಾಂಕ:12.03.2010.

2) ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಚಿತ್ರದುರ್ಗ ಇವರ ಪತ್ರದ ನಂ. ಸನಿ:30: ಸಮಾಪನೆ: ಸಿಆರ್ /2010–11, ದಿನಾಂಕ:31.03.2010.

ಪ್ರಸ್ತಾವನೆ:

ಪ್ರಸ್ತುತ ವಿಷಯ ಮತ್ತು ಉಲ್ಲೇಖಕ್ಕೆ ಸಂಬಂಧಿಸಿದಂತೆ ಸಣ್ಣ ನೀರಾವರಿ ನೀರು ಬಳಕೆದಾರರ ಸಹಕಾರ ಸಂಘ ನಿ., ಭರಮಸಾಗರ, ಚಿತ್ರದುರ್ಗ ತಾಲ್ಲೂಕು ಇದರ ನೋಂದಣಿ ಸಂಖ್ಯೆ: ಸನಿ:30/ಆರ್.ಜಿ.ಎನ್./30/459/2000–01 ದಿನಾಂಕ:16.11.2000ರಂದು ನೋಂದಣಿಯಾಗಿದ್ದು, ನೋಂದಣಿಯಾದಾಗಿನಿಂದ ಈತಹಲ್‌ವರೆಗೂ ಕಾರ್ಯಚಟುವಟಿಕೆಗಳನ್ನು ನಿರ್ವಹಿಸದೆ ಸ್ಥಗಿತಗೊಂಡಿದ್ದು ಉಲ್ಲೇಖ (1)ರ ಆದೇಶದಲ್ಲಿ ಸಂಘವನ್ನು ಸಮಾಪನೆಗೊಳಿಸಿ, ಶ್ರೀ ಕೆ. ನಂಜಯ್ಯ, ಸಹಕಾರ ಸಂಘಗಳ ಹಿರಿಯ ನಿರೀಕ್ಷಕರು, ಸಹಕಾರ ಸಂಘಗಳ ಉಪ ನಿಬಂಧಕರ ಕಛೇರಿ, ಚಿತ್ರದುರ್ಗ ಇವರನ್ನು ಸಂಘದ ಸಮಾಪನಾಧಿಕಾರಿಯನ್ನಾಗಿ ನೇಮಕ ಮಾಡಿದ್ದು ಸಮಾಪನಾಧಿಕಾರಿಗಳು ಸಂಘದ ಸದಸ್ಯರುಗಳಿಗೆ ಸಂಘದ ಪುನಃಶ್ಚೇತನದ ಬಗ್ಗೆ ಒಲವು ಇಲ್ಲದಿರುವುದನ್ನು ಮನಗಂಡು ದಿನಾಂಕ:31.03.2011 ರಂದು ನಡೆಸಿದ ಸಮಾಪನಾಧಿಕಾರಿಯವರ ನಡವಳಿ ರೀತ್ಯಾ ಬರತಕ್ಕ ಆಸ್ತಿಗಳನ್ನು ನಷ್ಟಕ್ಕೆ ವರ್ಗಾಯಿಸಿ ತೀರಿಸತಕ್ಕ ಜವಾಬ್ದಾರಿಗಳನ್ನು ಹೊಂದಾಣಿಕೆ ಮಾಡಿ ಆಸ್ತಿ–ಜವಾಬ್ದಾರಿ ತಃಖ್ತೆಯನ್ನು ದಿನಾಂಕ:31.03.2011ರ ಅಂತ್ಯಕ್ಕೆ ಜಮಾ ಖರ್ಚು ಮಾಡಿ ಶೂನ್ಯಗೊಳಿಸಿರುತ್ತಾರೆ. ಈ ಹಿನ್ನೆಲೆಯಲ್ಲಿ ಸಂಘವನ್ನು ಯಥಾ ಸ್ಥಿತಿಯಲ್ಲಿ ಮುಂದುವರಿಸಿದಲ್ಲಿ ಸಂಘದ ಸದಸ್ಯರುಗಾಗಲೀ ಅಥವಾ ಸಾರ್ವಜನಿಕರಿಗಾಗಲೀ ಯಾವುದೇ ಪ್ರಯೋಜನ ಇಲ್ಲವೆಂದು ಪರಿಗಣಿಸಿ ಸಂಘದ ನೋಂದಣಿಯನ್ನು ರದ್ದುಗೊಳಿಸಲು ಸಮಾಪನಾಧಿಕಾರಿಗಳು ಸಲ್ಲಿಸಿರುವ ಪ್ರಸ್ತಾವೆಯನ್ನು ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಚಿತ್ರದುರ್ಗ ಉಪವಿಭಾಗ, ಚಿತ್ರದುರ್ಗ ಇವರು ಉಲ್ಲೇಖ (2)ರ ಪತ್ರದಲ್ಲಿ ಶಿಫಾರಸ್ಸು ಮಾಡಿರುವುದನ್ನು ಪರಿಶೀಲಿಸಿದೆ, ಸಮಾಪನಾಧಿಕಾರಿಗಳು ದಿನಾಂಕ:31.03.2011 ರಂದು ನಡೆಸಿರುವ ಸಮಾಪನಾ ನಡವಳಿ ಸ್ವಯಂ ವೇದ್ಯವಾಗಿರುವುದರಿಂದ ಸಮಾಪನಾಧಿಕಾರಿಗಳ ವರದಿಯ ಮೇರೆಗೆ ಸಂಘವನ್ನು ಮುಂದುವರಿಸುವುದು ಸೂಕ್ತವಲ್ಲವೆಂದು ಸಂಘದ ನೋಂದಣಿಯನ್ನು ರದ್ದುಗೊಳಿಸುವುದು ಸೂಕ್ತವೆಂದು ಮನಗಂಡು ಈ ಕೆಳಕಂಡಂತೆ ಆದೇಶವನ್ನು ಹೊರಡಿಸಲಾಗಿದೆ.

ಆದೇಶ

ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 75 ರನ್ವಯ ಹಾಗೂ ಸರ್ಕಾರದ ಅಧಿಸೂಚನೆ ಸಂಖ್ಯೆ:ಸಿಓ:201: ಸಿಎಲ್‌ಎಂ:2008, ಬೆಂಗಳೂರು ದಿನಾಂಕ:27.05.2010 ಪ್ರಕಾರ ದತ್ತವಾದ ಅಧಿಕಾರದನ್ವಯ ಇಲ್ಯಾಸ್ ಉಲ್ಲಾ ಷರೀಫ್ ಸಹಕಾರ ಸಂಘಗಳ ಉಪನಿಬಂಧಕರು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ಆದ ನಾನು ಸಣ್ಣ ನೀರಾವರಿ ನೀರು ಬಳಕೆದಾರರ ಸಹಕಾರ ಸಂಘ ನಿ. ಭರಮಸಾಗರ, ಚಿತ್ರದುರ್ಗ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ, ಈ ಸಂಘದ ನೋಂದಣಿ ಸಂಖ್ಯೆ: ಸನಿ:30/ಆರ್.ಜಿ.ಎನ್./30/459/2000–01, ದಿನಾಂಕ:16.11.2000ನ್ನು ಈ ಕೂಡಲೇ ಜಾರಿಗೆ ಬರುವಂತೆ ರದ್ದುಪಡಿಸಿರುತ್ತೇನೆ. ಈ ದಿನದಿಂದ ಸದರಿ ಸಂಘವು ಅಸ್ತಿತ್ವವನ್ನು ಕಳೆದುಕೊಂಡಿರುತ್ತದೆ.

ಈ ಆದೇಶವನ್ನು ನನ್ನ ಸ್ವ ಸಹಿ ಮತ್ತು ಕಛೇರಿಯ ಮೊಹರಿನೊಂದಿಗೆ ಈ ದಿನ ದಿನಾಂಕ:31.03.2011 ರಂದು ಈ ಆದೇಶವನ್ನು ನೀಡಲಾಗಿದೆ.

ಸಹಕಾರ ಸಂಘಗಳ ಉಪ ನಿಬಂಧಕರು,
ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ.

ಸಹಕಾರ ಇಲಾಖೆ

ಸಹಕಾರ ಸಂಘಗಳ ಉಪನಿಬಂಧಕರು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ಇವರ ಕಛೇರಿ

ನಂ.ಡಿಆರ್‌ಡಿ:ಎಲ್‌ಕ್ಯೂಡಿ:ಸಿಆರ್:09:2009–10, ದಿನಾಂಕ:31.03.2011

ವಿಷಯ: ಸಮಾಪನೆಯಲ್ಲಿರುವ ಸಣ್ಣ ನೀರಾವರಿ ನೀರು ಬಳಕೆದಾರರ ಸಹಕಾರ ಸಂಘ ನಿ. ಕಾರೇಹಳ್ಳಿ, ಹೊಸದುರ್ಗ ತಾಲ್ಲೂಕು, ಇದರ ನೋಂದಣಿ ರದ್ಧತಿ ಮಾಡುವ ಬಗ್ಗೆ.

ಉಲ್ಲೇಖ: 1) ಈ ಕಛೇರಿ ಆದೇಶ ಸಂಖ್ಯೆ: ಡಿಆರ್‌ಡಿ: ಎಲ್‌ಕ್ಯೂಡಿ: ಸಿಆರ್:09:09–10, ದಿನಾಂಕ:30.09.2010.

2) ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಚಿತ್ರದುರ್ಗ ಇವರ ಪತ್ರದ ನಂ. ಸನಿ:30: ಸಮಾಪನೆ: ಸಿಆರ್ /2010–11, ದಿನಾಂಕ:31.03.2010.

ಪ್ರಸ್ತಾವನೆ:

ಪ್ರಸ್ತುತ ವಿಷಯ ಮತ್ತು ಉಲ್ಲೇಖಕ್ಕೆ ಸಂಬಂಧಿಸಿದಂತೆ ಸಣ್ಣ ನೀರಾವರಿ ನೀರು ಬಳಕೆದಾರರ ಸಹಕಾರ ಸಂಘ ನಿ., ಕಾರೇಹಳ್ಳಿ, ಹೊಸದುರ್ಗ ತಾಲ್ಲೂಕು, ಇದರ ನೋಂದಣಿ ಸಂಖ್ಯೆ: ಸನಿ:30/ಆರ್.ಜಿ.ಎನ್./30481/2001–02, ದಿನಾಂಕ:12.04.2001ರಂದು ನೋಂದಣಿಯಾಗಿದ್ದು, ಸಂಘವು 2004–05 ರಿಂದ ಯಾವುದೇ ಕಾರ್ಯಚಟುವಟಿಕೆಗಳನ್ನು ನಿರ್ವಹಿಸದೆ ಸ್ಥಗಿತಗೊಂಡಿದ್ದು ಉಲ್ಲೇಖ (1)ರ ಆದೇಶದಲ್ಲಿ ಸಂಘವನ್ನು ಸಮಾಪನೆಗೊಳಿಸಿ, ಸಹಕಾರ ಅಭಿವೃದ್ಧಿ ಅಧಿಕಾರಿ, ಹೊಸದುರ್ಗ ತಾಲ್ಲೂಕು, ಇವರನ್ನು ಸಂಘದ ಸಮಾಪನಾಧಿಕಾರಿಯನ್ನಾಗಿ ನೇಮಕ ಮಾಡಿದ್ದು ಸಮಾಪನಾಧಿಕಾರಿಗಳು ಸಂಘದ ಸದಸ್ಯರುಗಳಿಗೆ ಸಂಘದ ಪುನಃಶ್ಚೇತನದ ಬಗ್ಗೆ ಒಲವು ಇಲ್ಲದಿರುವುದನ್ನು ಮನಗಂಡು ದಿನಾಂಕ:31.03.2011 ರಂದು ನಡೆಸಿದ ಸಮಾಪನಾಧಿಕಾರಿಯವರ ನಡವಳಿ ರೀತ್ಯಾ ಬರತಕ್ಕ ಆಸ್ತಿಗಳನ್ನು ನಷ್ಟಕ್ಕೆ ವರ್ಗಾಯಿಸಿ ತೀರಿಸತಕ್ಕ ಜವಾಬ್ದಾರಿಗಳನ್ನು ಹೊಂದಾಣಿಕೆ ಮಾಡಿ ಆಸ್ತಿ–ಜವಾಬ್ದಾರಿ ತಃಖ್ತೆಯನ್ನು ದಿನಾಂಕ:31.03.2011ರ ಅಂತ್ಯಕ್ಕೆ ಜಮಾ ಖರ್ಚು ಮಾಡಿ ಶೂನ್ಯಗೊಳಿಸಿರುತ್ತಾರೆ. ಈ ಹಿನ್ನೆಲೆಯಲ್ಲಿ ಸಂಘವನ್ನು ಯಥಾ ಸ್ಥಿತಿಯಲ್ಲಿ ಮುಂದುವರಿಸಿದಲ್ಲಿ ಸಂಘದ ಸದಸ್ಯರುಗಾಗಲೀ ಅಥವಾ ಸಾರ್ವಜನಿಕರಿಗಾಗಲೀ ಯಾವುದೇ ಪ್ರಯೋಜನ ಇಲ್ಲವೆಂದು ಪರಿಗಣಿಸಿ ಸಂಘದ ನೋಂದಣಿಯನ್ನು ರದ್ದುಗೊಳಿಸಲು ಸಮಾಪನಾಧಿಕಾರಿಗಳು ಸಲ್ಲಿಸಿರುವ ಪ್ರಸ್ತಾವೆಯನ್ನು ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಚಿತ್ರದುರ್ಗ ಉಪವಿಭಾಗ, ಚಿತ್ರದುರ್ಗ ಇವರು ಉಲ್ಲೇಖ (2)ರ ಪತ್ರದಲ್ಲಿ ಶಿಫಾರಸ್ಸು ಮಾಡಿರುವುದನ್ನು ಪರಿಶೀಲಿಸಿದೆ, ಸಮಾಪನಾಧಿಕಾರಿಗಳು ದಿನಾಂಕ:31.03.2011 ರಂದು ನಡೆಸಿರುವ ಸಮಾಪನಾ ನಡವಳಿ ಸ್ವಯಂ ವೇದ್ಯವಾಗಿರುವುದರಿಂದ ಸಮಾಪನಾಧಿಕಾರಿಗಳ ವರದಿಯ ಮೇರೆಗೆ ಸಂಘವನ್ನು ಮುಂದುವರಿಸುವುದು ಸೂಕ್ತವಲ್ಲವೆಂದು ಸಂಘದ ನೋಂದಣಿಯನ್ನು ರದ್ದುಗೊಳಿಸುವುದು ಸೂಕ್ತವೆಂದು ಮನಗಂಡು ಈ ಕೆಳಕಂಡಂತೆ ಆದೇಶವನ್ನು ಹೊರಡಿಸಲಾಗಿದೆ.

ಆದೇಶ

ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 75 ರನ್ವಯ ಹಾಗೂ ಸರ್ಕಾರದ ಅಧಿಸೂಚನೆ ಸಂಖ್ಯೆ:ಸಿಓ:201: ಸಿಎಲ್‌ಎಂ:2008, ಬೆಂಗಳೂರು ದಿನಾಂಕ:27.05.2010 ಪ್ರಕಾರ ದತ್ತವಾದ ಅಧಿಕಾರದನ್ವಯ ಇಲ್ಯಾಸ್ ಉಲ್ಲಾ ಷರೀಫ್ ಸಹಕಾರ ಸಂಘಗಳ ಉಪನಿಬಂಧಕರು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ಆದ ನಾನು ಸಣ್ಣ ನೀರಾವರಿ ನೀರು ಬಳಕೆದಾರರ ಸಹಕಾರ ಸಂಘ ನಿ. ಕಾರೇಹಳ್ಳಿ, ಹೊಸದುರ್ಗ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ, ಈ ಸಂಘದ ನೋಂದಣಿ ಸಂಖ್ಯೆ: ಸನಿ:30/ಆರ್.ಜಿ.ಎನ್./30481/2001–02, ದಿನಾಂಕ:12.04.2001ನ್ನು ಈ ಕೂಡಲೇ ಜಾರಿಗೆ ಬರುವಂತೆ ರದ್ದುಪಡಿಸಿರುತ್ತೇನೆ. ಈ ದಿನದಿಂದ ಸದರಿ ಸಂಘವು ಅಸ್ತಿತ್ವವನ್ನು ಕಳೆದುಕೊಂಡಿರುತ್ತದೆ.

ಈ ಆದೇಶವನ್ನು ನನ್ನ ಸ್ವ ಸಹಿ ಮತ್ತು ಕಛೇರಿಯ ಮೊಹರಿನೊಂದಿಗೆ ಈ ದಿನ ದಿನಾಂಕ:31.03.2011 ರಂದು ಈ ಆದೇಶವನ್ನು ನೀಡಲಾಗಿದೆ.

ಸಹಕಾರ ಸಂಘಗಳ ಉಪ ನಿಬಂಧಕರು,
ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ.

ಪಿ.ಆರ್.501

ಸಹಕಾರ ಇಲಾಖೆ

ಸಹಕಾರ ಸಂಘಗಳ ಉಪನಿಬಂಧಕರು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ಇವರ ಕಛೇರಿ

ನಂ.ಡಿಆರ್‌ಡಿ:ಎಲ್‌ಕ್ಯೂಡಿ:ಸಿಆರ್:13:2010–11, ದಿನಾಂಕ:31.01.2011

ವಿಷಯ: ಸ್ಥಗಿತಗೊಂಡಿರುವ ಚಂದ್ರವಳ್ಳಿ ಮಹಿಳಾ ಪತ್ತಿನ ಸಹಕಾರ ಸಂಘ ನಿ., ಹೊಳಲ್ಕೆರೆ ರಸ್ತೆ, ಚಿತ್ರದುರ್ಗ ಇದನ್ನು 1959ನೇ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ ಕಲಂ 72 ಮತ್ತು 73 ರನ್ವಯ ಸಮಾಪನೆ ಬಗ್ಗೆ.

ಉಲ್ಲೇಖ: 1) ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಚಿತ್ರದುರ್ಗ ಇವರ ಪತ್ರದ ಸಂಖ್ಯೆ: ಸನಿ:30: ಸಮಾಪನೆ: ಸಿಆರ್:11/10–11 ದಿನಾಂಕ:02.11.2010.

2) ಈ ಕಛೇರಿಯ ಕಾರಣ ಕೇಳಿ ನೋಟೀಸು ಸಮ ಸಂಖ್ಯೆ ದಿನಾಂಕ:04.11.2010.

ಪ್ರಸ್ತಾವನೆ:

ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಚಿತ್ರದುರ್ಗ ಉಪ ವಿಭಾಗ, ಚಿತ್ರದುರ್ಗ ಇವರು ಉಲ್ಲೇಖ (1)ರಲ್ಲಿ ಕಾಣಿಸಿದ ಪ್ರಸ್ತಾವನೆ ಪ್ರಕಾರ ಚಂದ್ರವಳ್ಳಿ ಮಹಿಳಾ ಪತ್ತಿನ ಸಹಕಾರ ಸಂಘ ನಿ., ಹೊಳಲ್ಕೆರೆ ರಸ್ತೆ, ಚಿತ್ರದುರ್ಗ ಸಂಘದ ನೋಂದಣಿ ಸಂಖ್ಯೆ: ಸನಿ:30:70/ಆರ್‌ಜಿಎನ್/19114/1997–98, ದಿನಾಂಕ:03.04.1997 ಈ ಸಂಘದ ಕಾರ್ಯ ಚಟುವಟಿಕೆಗಳು ಅನೇಕ ವರ್ಷಗಳಿಂದ ಸ್ಥಗಿತಗೊಂಡಿರುತ್ತದೆ. ಸಂಘದ ಆಡಳಿತ ಸಮಿತಿಯವರು ಸಂಘದ ಅಭಿವೃದ್ಧಿ ಬಗ್ಗೆ ಗಮನಹರಿಸುವಲ್ಲಿ ವಿಫಲರಾಗಿರುತ್ತಾರೆ ಮತ್ತು ಸಂಘವನ್ನು ಪುನಃಶ್ಚೇತನಗೊಳಿಸುವಲ್ಲಿ ಆಸಕ್ತಿ ಇರುವುದಿಲ್ಲವೆಂದು ಪ್ರಸ್ತಾವನೆ ಸಲ್ಲಿಸಿ ಸಂಘವನ್ನು ಸಮಾಪನೆಗೊಳಿಸಲು ಕೋರಿರುತ್ತಾರೆ. ಈ ಬಗ್ಗೆ ಉಲ್ಲೇಖ (2) ರ ನೋಟೀಸನ್ನು ಈ ಕಛೇರಿಯಿಂದ ನೀಡಿದ್ದು, ಸಂಘದ ಆಡಳಿತ ಮಂಡಳಿಯವರಿಗೆ ನೋಟೀಸು ಜಾರಿ ಮಾಡಿ ಸ್ವೀಕೃತಿ ಈ ಕಛೇರಿ ತಲುಪಿದ್ದು ಆದಾಗ್ಯೂ ಅವರು ಯಾವುದೇ ಸಮಜಾಯಿಷಿ ಅಥವಾ ಪ್ರತಿಕ್ರಿಯೆಯನ್ನು ನೀಡದೇ ನಿರುತ್ಸಾಹ ತೋರಿಸಿರುತ್ತಾರೆ. ಈ ಸಂಘದಿಂದ ಸಂಘದ ಸದಸ್ಯರಿಗೆ ಯಾವ ರೀತಿಯ ಪ್ರಯೋಜನವೂ ದೊರೆಯುತ್ತಿಲ್ಲ, ಇದರಿಂದ ಸಂಘವು ಪುನಃಶ್ಚೇತನಗೊಳಿಸುವ ಹಂತವನ್ನು ಮೀರಿರುತ್ತದೆ. ಸಂಘವನ್ನು ಇದೇ ರೀತಿ ಮುಂದುವರಿಸಲು

ಬಿಟ್ಟಲ್ಲಿ ಸಂಘವು ಇನ್ನಷ್ಟು ಅಧೋಗತಿಗೆ ಹೋಗುವ ಸಂಭವವಿರುವುದರಿಂದ ಸಮಾಪನೆಗೊಳಿಸುವುದೇ ಸೂಕ್ತವೆಂದು ಅಭಿಪ್ರಾಯಪಟ್ಟು ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

ಆದೇಶ

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಹಾಗೂ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 72(2) ರನ್ವಯ ಸರ್ಕಾರದ ಅಧಿಸೂಚನೆ ನಂ.ಸಿಓ:201: ಸಿಎಲ್‌ಎಂ:2008/ಬೆಂಗಳೂರು ದಿನಾಂಕ:27.05.2010 ಪ್ರಕಾರ ದತ್ತವಾದ ಅಧಿಕಾರದನ್ವಯ ಇಲ್ಯಾಸ್ ಉಲ್ಲಾ ಷರೀಫ್ ಸಹಕಾರ ಸಂಘಗಳ ಉಪನಿಬಂಧಕರು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ಆದ ನಾನು ದತ್ತವಾದ ಅಧಿಕಾರವನ್ನು ಚಲಾಯಿಸುತ್ತಾ, ಸ್ಥಗಿತಗೊಂಡಿರುವ ಚಂದ್ರವಳ್ಳಿ ಮಹಿಳಾ ಪತ್ತಿನ ಸಹಕಾರ ಸಂಘ ನಿ., ಹೊಳಲ್ಕೆರೆ ರಸ್ತೆ, ಚಿತ್ರದುರ್ಗ ಇದನ್ನು ಸಮಾಪನೆಗೊಳಿಸಿ, ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 73(1) ಅನ್ವಯ ಶ್ರೀ ಎಂ.ಕೆ. ನಾಗರಾಜ, ಸಹಕಾರ ಸಂಘಗಳ ನಿರೀಕ್ಷಕರು, ಸಹಕಾರ ಸಂಘಗಳ ಸಹಾಯಕ ನಿಬಂಧಕರ ಕಛೇರಿ, ಚಿತ್ರದುರ್ಗ ಉಪವಿಭಾಗ, ಚಿತ್ರದುರ್ಗ ಇವರನ್ನು ಸಂಘದ ಸಮಾಪನಾಧಿಕಾರಿಯನ್ನಾಗಿ ಅಧಿಕ ಪ್ರಭಾರದಲ್ಲಿ ನೇಮಿಸಿರುತ್ತೇನೆ. ಸಮಾಪನಾಧಿಕಾರಿಯು ಸಂಘದ ವಿಶಿಷ್ಟ ಪ್ರಭಾರವನ್ನು ಮತ್ತು ಸಂಘದ ಆಸ್ತಿಗಳನ್ನು ಸಂಘದ ಕಾರ್ಯದರ್ಶಿ ಅಥವಾ ಸಂಘದ ಪ್ರಭಾರ ಹೊಂದಿದ ಯಾವುದೇ ವ್ಯಕ್ತಿಯಿಂದ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 73 (1) ಮತ್ತು 74ರ ನಿಯಮದ ಪ್ರಕಾರ ಪಡೆದುಕೊಳ್ಳತಕ್ಕದ್ದು.

ನನ್ನ ಸ್ವ ಸಹಿ ಮತ್ತು ಕಛೇರಿಯ ಮೊಹರಿನೊಂದಿಗೆ ಈ ದಿನಾಂಕ:31.01.2011 ರಂದು ಈ ಆದೇಶವನ್ನು ಹೊರಡಿಸಿರುತ್ತೇನೆ.

ಸಹಕಾರ ಸಂಘಗಳ ಉಪ ನಿಬಂಧಕರು,
ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ.

ಸಹಕಾರ ಇಲಾಖೆ

ಸಹಕಾರ ಸಂಘಗಳ ಉಪನಿಬಂಧಕರು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ಇವರ ಕಛೇರಿ

ನಂ.ಡಿಆರ್‌ಡಿ:ಎಲ್‌ಕ್ಯೂಡಿ:ಸಿಆರ್:28:2010–11, ದಿನಾಂಕ:31.01.2011

ವಿಷಯ: ಸ್ಥಗಿತಗೊಂಡಿರುವ ಜೆ.ಎಂ.ಐ.ಟಿ. ನೌಕರರ ಸಹಕಾರ ಸಂಘ ನಿ. ಚಿತ್ರದುರ್ಗ ಇದನ್ನು 1959ನೇ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ ಕಲಂ 72 ಮತ್ತು 73 ರನ್ವಯ ಸಮಾಪನೆ ಬಗ್ಗೆ.

ಉಲ್ಲೇಖ: 1) ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಚಿತ್ರದುರ್ಗ ಇವರ ಪತ್ರದ ಸಂಖ್ಯೆ: ಸನಿ:30: ಸಮಾಪನೆ: ಸಿಆರ್:20/10–11 ದಿನಾಂಕ:10.11.2010.

2) ಈ ಕಛೇರಿಯ ಕಾರಣ ಕೇಳಿ ನೋಟೀಸು ಸಮ ಸಂಖ್ಯೆ ದಿನಾಂಕ:12.11.2010.

ಪ್ರಸ್ತಾವನೆ:

ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಚಿತ್ರದುರ್ಗ ಉಪ ವಿಭಾಗ, ಚಿತ್ರದುರ್ಗ ಇವರು ಉಲ್ಲೇಖ (1)ರಲ್ಲಿ ಕಾಣಿಸಿದ ಪ್ರಸ್ತಾವನೆ ಪ್ರಕಾರ ಜೆ.ಎಂ.ಐ.ಟಿ. ನೌಕರರ ಸಹಕಾರ ಸಂಘ ನಿ. ಚಿತ್ರದುರ್ಗ ಸಂಘದ ನೋಂದಣಿ ಸಂಖ್ಯೆ: ಎಆರ್‌ಸಿ 8744/82–83, ದಿನಾಂಕ:22.10.1982 ಈ ಸಂಘದ ಕಾರ್ಯ ಚಟುವಟಿಕೆಗಳು ಅನೇಕ ವರ್ಷಗಳಿಂದ ಸ್ಥಗಿತಗೊಂಡಿರುತ್ತದೆ. ಸಂಘದ ಆಡಳಿತ ಸಮಿತಿಯವರು ಸಂಘದ ಅಭಿವೃದ್ಧಿ ಬಗ್ಗೆ ಗಮನಹರಿಸುವಲ್ಲಿ ವಿಫಲರಾಗಿರುತ್ತಾರೆ ಮತ್ತು ಸಂಘವನ್ನು ಪುನಃಶ್ಚೇತನಗೊಳಿಸುವಲ್ಲಿ ಆಸಕ್ತಿ ಇರುವುದಿಲ್ಲವೆಂದು ಪ್ರಸ್ತಾವನೆ ಸಲ್ಲಿಸಿ ಸಂಘವನ್ನು ಸಮಾಪನೆಗೊಳಿಸಲು ಕೋರಿರುತ್ತಾರೆ. ಈ ಬಗ್ಗೆ ಉಲ್ಲೇಖ (2) ರ ನೋಟೀಸನ್ನು ಈ ಕಛೇರಿಯಿಂದ ನೀಡಿದ್ದು, ಸಂಘದ ಆಡಳಿತ ಮಂಡಳಿಯವರಿಗೆ ನೋಟೀಸು ಜಾರಿ ಮಾಡಿ ಸ್ವೀಕೃತಿ ಈ ಕಛೇರಿ ತಲುಪಿದ್ದು ಆದಾಗ್ಯೂ ಅವರು ಯಾವುದೇ ಸಮಜಾಯಿಷಿ ಅಥವಾ ಪ್ರತಿಕ್ರಿಯೆಯನ್ನು ನೀಡದೇ ನಿರುತ್ಸಾಹ ತೋರಿಸಿರುತ್ತಾರೆ. ಈ ಸಂಘದಿಂದ ಸಂಘದ ಸದಸ್ಯರಿಗೆ ಯಾವ ರೀತಿಯ ಪ್ರಯೋಜನವೂ ದೊರೆಯುತ್ತಿಲ್ಲ, ಇದರಿಂದ ಸಂಘವು ಪುನಃಶ್ಚೇತನಗೊಳಿಸುವ ಹಂತವನ್ನು ಮೀರಿರುತ್ತದೆ. ಸಂಘವನ್ನು ಇದೇ ರೀತಿ ಮುಂದುವರಿಸಲು ಬಿಟ್ಟಲ್ಲಿ ಸಂಘವು ಇನ್ನಷ್ಟು ಅಧೋಗತಿಗೆ ಹೋಗುವ ಸಂಭವವಿರುವುದರಿಂದ ಸಮಾಪನೆಗೊಳಿಸುವುದೇ ಸೂಕ್ತವೆಂದು ಅಭಿಪ್ರಾಯಪಟ್ಟು ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

ಆದೇಶ

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಹಾಗೂ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 72(2) ರನ್ವಯ ಸರ್ಕಾರದ ಅಧಿಸೂಚನೆ ನಂ.ಸಿಓ:201: ಸಿಎಲ್‌ಎಂ:2008/ಬೆಂಗಳೂರು ದಿನಾಂಕ:27.05.2010 ಪ್ರಕಾರ ದತ್ತವಾದ ಅಧಿಕಾರದನ್ವಯ ಇಲ್ಯಾಸ್ ಉಲ್ಲಾ ಷರೀಫ್ ಸಹಕಾರ ಸಂಘಗಳ ಉಪನಿಬಂಧಕರು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ಆದ ನಾನು ದತ್ತವಾದ ಅಧಿಕಾರವನ್ನು ಚಲಾಯಿಸುತ್ತಾ, ಸ್ಥಗಿತಗೊಂಡಿರುವ ಜೆ.ಎಂ.ಐ.ಟಿ. ನೌಕರರ ಸಹಕಾರ ಸಂಘ ನಿ. ಚಿತ್ರದುರ್ಗ ಇದನ್ನು ಸಮಾಪನೆಗೊಳಿಸಿ, ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 73(1) ಅನ್ವಯ ಶ್ರೀ ಎಸ್.ಇ. ಮಂಜುನಾಥ್, ಸಹಕಾರ ಸಂಘಗಳ ಹಿರಿಯ ನಿರೀಕ್ಷಕರು, ಸಹಕಾರ ಸಂಘಗಳ ಉಪ ನಿಬಂಧಕರ ಕಛೇರಿ, ಚಿತ್ರದುರ್ಗ ಇವರನ್ನು ಸಂಘದ ಸಮಾಪನಾಧಿಕಾರಿಯನ್ನಾಗಿ ಅಧಿಕ ಪ್ರಭಾರದಲ್ಲಿ ನೇಮಿಸಿರುತ್ತೇನೆ. ಸಮಾಪನಾಧಿಕಾರಿಯು ಸಂಘದ ವಿಶಿಷ್ಟ ಪ್ರಭಾರವನ್ನು ಮತ್ತು ಸಂಘದ ಆಸ್ತಿಗಳನ್ನು ಸಂಘದ ಕಾರ್ಯದರ್ಶಿ ಅಥವಾ ಸಂಘದ ಪ್ರಭಾರ ಹೊಂದಿದ ಯಾವುದೇ ವ್ಯಕ್ತಿಯಿಂದ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 73 (1) ಮತ್ತು 74ರ ನಿಯಮದ ಪ್ರಕಾರ ಪಡೆದುಕೊಳ್ಳತಕ್ಕದ್ದು.

ನನ್ನ ಸ್ವ ಸಹಿ ಮತ್ತು ಕಛೇರಿಯ ಮೊಹರಿನೊಂದಿಗೆ ಈ ದಿನಾಂಕ:31.01.2011 ರಂದು ಈ ಆದೇಶವನ್ನು ಹೊರಡಿಸಿರುತ್ತೇನೆ.

ಸಹಕಾರ ಸಂಘಗಳ ಉಪ ನಿಬಂಧಕರು,
ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ.

ಸಹಕಾರ ಇಲಾಖೆ

ಸಹಕಾರ ಸಂಘಗಳ ಉಪನಿಬಂಧಕರು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ಇವರ ಕಛೇರಿ

ನಂ.ಡಿಆರ್‌ಡಿ:ಎಲ್‌ಕ್ಯೂಡಿ:ಸಿಆರ್:10:2009-10, ದಿನಾಂಕ:31.03.2011

ವಿಷಯ: ಸಮಾಪನೆಯಲ್ಲಿರುವ ನೀರು ಬಳಕೆದಾರರ ಸಹಕಾರ ಸಂಘ ನಿ. ಶ್ರೀರಾಂಪುರ, ಹೊಸದುರ್ಗ ತಾಲ್ಲೂಕು, ಇದರ ನೋಂದಣಿ ರದ್ಧತಿ ಮಾಡುವ ಬಗ್ಗೆ.

ಉಲ್ಲೇಖ: 1) ಈ ಕಛೇರಿ ಆದೇಶ ಸಂಖ್ಯೆ: ಡಿಆರ್‌ಡಿ: ಎಲ್‌ಕ್ಯೂಡಿ: ಸಿಆರ್:09:09-10, ದಿನಾಂಕ:30.09.2010.

2) ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಚಿತ್ರದುರ್ಗ ಇವರ ಪತ್ರದ ನಂ. ಸನಿ:30: ಸಮಾಪನೆ: ಸಿಆರ್ /2010-11, ದಿನಾಂಕ:31.03.2010.

ಪ್ರಸ್ತಾವನೆ:

ಪ್ರಸ್ತುತ ವಿಷಯ ಮತ್ತು ಉಲ್ಲೇಖಕ್ಕೆ ಸಂಬಂಧಿಸಿದಂತೆ ನೀರು ಬಳಕೆದಾರರ ಸಹಕಾರ ಸಂಘ ನಿ. ಶ್ರೀರಾಂಪುರ, ಹೊಸದುರ್ಗ ತಾಲ್ಲೂಕು, ಇದರ ನೋಂದಣಿ ಸಂಖ್ಯೆ: ಸನಿ:30//49/ಆರ್.ಜಿ.ಎನ್./30451/2001-02, ದಿನಾಂಕ:16.11.2000ರಂದು ನೋಂದಣಿಯಾಗಿದ್ದು, ಸಂಘವು 2004-05 ರಿಂದ ಯಾವುದೇ ಕಾರ್ಯಚಟುವಟಿಕೆಗಳನ್ನು ನಿರ್ವಹಿಸದೆ ಸ್ಥಗಿತಗೊಂಡಿದ್ದು ಉಲ್ಲೇಖ (1)ರ ಆದೇಶದಲ್ಲಿ ಸಂಘವನ್ನು ಸಮಾಪನೆಗೊಳಿಸಿ, ಸಹಕಾರ ಅಭಿವೃದ್ಧಿ ಅಧಿಕಾರಿ, ಹೊಸದುರ್ಗ ತಾಲ್ಲೂಕು, ಇವರನ್ನು ಸಂಘದ ಸಮಾಪನಾಧಿಕಾರಿಯನ್ನಾಗಿ ನೇಮಕ ಮಾಡಿದ್ದು ಸಮಾಪನಾಧಿಕಾರಿಗಳು ಸಂಘದ ಸದಸ್ಯರುಗಳಿಗೆ ಸಂಘದ ಪುನಃಶ್ಚೇತನದ ಬಗ್ಗೆ ಒಲವು ಇಲ್ಲದಿರುವುದನ್ನು ಮನಗಂಡು ದಿನಾಂಕ:31.03.2011 ರಂದು ನಡೆಸಿದ ಸಮಾಪನಾಧಿಕಾರಿಯವರ ನಡವಳಿ ರೀತ್ಯಾ ಬರತಕ್ಕ ಆಸ್ತಿಗಳನ್ನು ನಷ್ಟಕ್ಕೆ ವರ್ಗಾಯಿಸಿ ತೀರಿಸತಕ್ಕ ಜವಾಬ್ದಾರಿಗಳನ್ನು ಹೊಂದಾಣಿಕೆ ಮಾಡಿ ಆಸ್ತಿ-ಜವಾಬ್ದಾರಿ ತಃಖ್ತೆಯನ್ನು ದಿನಾಂಕ:31.03.2011ರ ಅಂತ್ಯಕ್ಕೆ ಜಮಾ ಖರ್ಚು ಮಾಡಿ ಶೂನ್ಯಗೊಳಿಸಿರುತ್ತಾರೆ. ಈ ಹಿನ್ನೆಲೆಯಲ್ಲಿ ಸಂಘವನ್ನು ಯಥಾ ಸ್ಥಿತಿಯಲ್ಲಿ ಮುಂದುವರಿಸಿದಲ್ಲಿ ಸಂಘದ ಸದಸ್ಯರುಗಾಗಲೀ ಅಥವಾ ಸಾರ್ವಜನಿಕರಿಗಾಗಲೀ ಯಾವುದೇ ಪ್ರಯೋಜನ ಇಲ್ಲವೆಂದು ಪರಿಗಣಿಸಿ ಸಂಘದ ನೋಂದಣಿಯನ್ನು ರದ್ದುಗೊಳಿಸಲು ಸಮಾಪನಾಧಿಕಾರಿಗಳು ಸಲ್ಲಿಸಿರುವ ಪ್ರಸ್ತಾವೆಯನ್ನು ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಚಿತ್ರದುರ್ಗ ಉಪವಿಭಾಗ, ಚಿತ್ರದುರ್ಗ ಇವರು ಉಲ್ಲೇಖ (2)ರ ಪತ್ರದಲ್ಲಿ ಶಿಫಾರಸ್ಸು ಮಾಡಿರುವುದನ್ನು ಪರಿಶೀಲಿಸಿದೆ, ಸಮಾಪನಾಧಿಕಾರಿಗಳು ದಿನಾಂಕ:31.03.2011 ರಂದು ನಡೆಸಿರುವ ಸಮಾಪನಾ ನಡವಳಿ ಸ್ವಯಂ ವೇದ್ಯವಾಗಿರುವುದರಿಂದ ಸಮಾಪನಾಧಿಕಾರಿಗಳ ವರದಿಯ ಮೇರೆಗೆ ಸಂಘವನ್ನು ಮುಂದುವರಿಸುವುದು ಸೂಕ್ತವಲ್ಲವೆಂದು ಸಂಘದ ನೋಂದಣಿಯನ್ನು ರದ್ದುಗೊಳಿಸುವುದು ಸೂಕ್ತವೆಂದು ಮನಗಂಡು ಈ ಕೆಳಕಂಡಂತೆ ಆದೇಶವನ್ನು ಹೊರಡಿಸಲಾಗಿದೆ.

ಆದೇಶ

ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 75 ರನ್ವಯ ಹಾಗೂ ಸರ್ಕಾರದ ಅಧಿಸೂಚನೆ ಸಂಖ್ಯೆ: ನಂ.ಸಿಓ:201: ಸಿಎಲ್ಎಂ:2008, ಬೆಂಗಳೂರು ದಿನಾಂಕ:27.05.2010 ಪ್ರಕಾರ ದತ್ತವಾದ ಅಧಿಕಾರದನ್ವಯ ಇಲ್ಯಾಸ್ ಉಲ್ಲಾ ಷರೀಫ್ ಸಹಕಾರ ಸಂಘಗಳ ಉಪನಿಬಂಧಕರು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ಆದ ನಾನು ನೀರು ಬಳಕೆದಾರರ ಸಹಕಾರ ಸಂಘ ನಿ. ಶ್ರೀರಾಂಪುರ, ಹೊಸದುರ್ಗ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ, ಈ ಸಂಘದ ನೋಂದಣಿ ಸಂಖ್ಯೆ: ಸನಿ:30//49/ಆರ್.ಜಿ.ಎನ್./30451/2001-02, ದಿನಾಂಕ:16.11.2000ನ್ನು ಈ ಕೂಡಲೇ ಜಾರಿಗೆ ಬರುವಂತೆ ರದ್ದುಪಡಿಸಿರುತ್ತೇನೆ. ಈ ದಿನದಿಂದ ಸದರಿ ಸಂಘವು ಅಸ್ತಿತ್ವವನ್ನು ಕಳೆದುಕೊಂಡಿರುತ್ತದೆ.

ಈ ಆದೇಶವನ್ನು ನನ್ನ ಸ್ವ ಸಹಿ ಮತ್ತು ಕಛೇರಿಯ ಮೊಹರಿನೊಂದಿಗೆ ಈ ದಿನಾಂಕ:31.03.2011 ರಂದು ಈ ಆದೇಶವನ್ನು ನೀಡಲಾಗಿದೆ.

ಸಹಕಾರ ಸಂಘಗಳ ಉಪ ನಿಬಂಧಕರು,

ಪಿ.ಆರ್.502 ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ.

ಸಹಕಾರ ಇಲಾಖೆ

ಸಹಕಾರ ಸಂಘಗಳ ಉಪನಿಬಂಧಕರು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ಇವರ ಕಛೇರಿ

ನಂ.ಡಿಆರ್‌ಡಿ:ಎಲ್‌ಕ್ಯೂಡಿ:ಸಿಆರ್:46:2010-11, ದಿನಾಂಕ:31.01.2011

ವಿಷಯ: ಸ್ಥಗಿತಗೊಂಡಿರುವ ಕರ್ನಾಟಕ ಅಲ್ಪ ಸಂಖ್ಯಾತರ ಕೋಳಿ ಸಾಕಾಣಿಕೆದಾರರ ಸಹಕಾರ ಸಂಘ ನಿ. ಚಿತ್ರದುರ್ಗ ಇದನ್ನು 1959ನೇ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ ಕಲಂ 72 ಮತ್ತು 73 ರನ್ವಯ ಸಮಾಪನೆ ಬಗ್ಗೆ.

ಉಲ್ಲೇಖ: 1) ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಚಿತ್ರದುರ್ಗ ಇವರ ಪತ್ರದ ಸಂಖ್ಯೆ: ಸನಿ:30: ಸಮಾಪನೆ: ಸಿಆರ್:42/10-11 ದಿನಾಂಕ:20.11.2010.

2) ಈ ಕಛೇರಿಯ ಕಾರಣ ಕೇಳಿ ನೋಟೀಸು ಸಮ ಸಂಖ್ಯೆ ದಿನಾಂಕ:01.12.2010.

ಪ್ರಸ್ತಾವನೆ:

ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಚಿತ್ರದುರ್ಗ ಉಪ ವಿಭಾಗ, ಚಿತ್ರದುರ್ಗ ಇವರು ಉಲ್ಲೇಖ (1)ರಲ್ಲಿ ಕಾಣಿಸಿದ ಪ್ರಸ್ತಾವನೆ ಪ್ರಕಾರ ಕರ್ನಾಟಕ ಅಲ್ಪ ಸಂಖ್ಯಾತರ ಕೋಳಿ ಸಾಕಾಣಿಕೆದಾರರ ಸಹಕಾರ ಸಂಘ ನಿ. ಚಿತ್ರದುರ್ಗ ಸಂಘದ ನೋಂದಣಿ ಸಂಖ್ಯೆ: ಸನಿ:30/21/ಆರ್‌ಜಿಎನ್/26834/1999-2000, ದಿನಾಂಕ:28.03.2000 ಈ ಸಂಘದ ಕಾರ್ಯ ಚಟುವಟಿಕೆಗಳು ಅನೇಕ ವರ್ಷಗಳಿಂದ ಸ್ಥಗಿತಗೊಂಡಿರುತ್ತದೆ. ಸಂಘದ ಆಡಳಿತ ಸಮಿತಿಯವರು ಸಂಘದ ಅಭಿವೃದ್ಧಿ ಬಗ್ಗೆ ಗಮನಹರಿಸುವಲ್ಲಿ ವಿಫಲರಾಗಿರುತ್ತಾರೆ ಮತ್ತು ಸಂಘವನ್ನು

ಪುನಃಶ್ಚೇತನಗೊಳಿಸುವಲ್ಲಿ ಆಸಕ್ತಿ ಇರುವುದಿಲ್ಲವೆಂದು ಪ್ರಸ್ತಾವನೆ ಸಲ್ಲಿಸಿ ಸಂಘವನ್ನು ಸಮಾಪನೆಗೊಳಿಸಲು ಕೋರಿರುತ್ತಾರೆ. ಈ ಬಗ್ಗೆ ಉಲ್ಲೇಖ (2) ರ ನೋಟೀಸನ್ನು ಈ ಕಛೇರಿಯಿಂದ ನೀಡಿದ್ದು, ಸಂಘದ ಆಡಳಿತ ಮಂಡಳಿಯವರಿಗೆ ನೋಟೀಸು ಜಾರಿ ಮಾಡಿ ಸ್ವೀಕೃತಿ ಈ ಕಛೇರಿ ತಲುಪಿದ್ದು ಆದಾಗ್ಯೂ ಅವರು ಯಾವುದೇ ಸಮಜಾಯಿಷಿ ಅಥವಾ ಪ್ರತಿಕ್ರಿಯೆಯನ್ನು ನೀಡದೇ ನಿರುತ್ಸಾಹ ತೋರಿಸಿರುತ್ತಾರೆ. ಈ ಸಂಘದಿಂದ ಸಂಘದ ಸದಸ್ಯರಿಗೆ ಯಾವ ರೀತಿಯ ಪ್ರಯೋಜನವೂ ದೊರೆಯುತ್ತಿಲ್ಲ, ಇದರಿಂದ ಸಂಘವು ಪುನಃಶ್ಚೇತನಗೊಳಿಸುವ ಹಂತವನ್ನು ಮೀರಿರುತ್ತದೆ. ಸಂಘವನ್ನು ಇದೇ ರೀತಿ ಮುಂದುವರಿಸಲು ಬಿಟ್ಟಲ್ಲಿ ಸಂಘವು ಇನ್ನಷ್ಟು ಅಧೋಗತಿಗೆ ಹೋಗುವ ಸಂಭವವಿರುವುದರಿಂದ ಸಮಾಪನೆಗೊಳಿಸುವುದೇ ಸೂಕ್ತವೆಂದು ಅಭಿಪ್ರಾಯಪಟ್ಟು ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

ಆದೇಶ

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಹಾಗೂ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 72(2) ರನ್ವಯ ಸರ್ಕಾರದ ಅಧಿಸೂಚನೆ ನಂ.ಸಿಓ:201: ಸಿಎಲ್‌ಎಂ:2008/ಬೆಂಗಳೂರು ದಿನಾಂಕ:27.05.2010 ಪ್ರಕಾರ ದತ್ತವಾದ ಅಧಿಕಾರದನ್ವಯ ಇಲ್ಯಾಸ್ ಉಲ್ಲಾ ಷರೀಫ್ ಸಹಕಾರ ಸಂಘಗಳ ಉಪನಿಬಂಧಕರು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ಆದ ನಾನು ದತ್ತವಾದ ಅಧಿಕಾರವನ್ನು ಚಲಾಯಿಸುತ್ತಾ, ಸ್ಥಗಿತಗೊಂಡಿರುವ ಕರ್ನಾಟಕ ಅಲ್ಪ ಸಂಖ್ಯಾತರ ಕೋಳಿ ಸಾಕಾಣಿಕೆದಾರರ ಸಹಕಾರ ಸಂಘ ನಿ. ಚಿತ್ರದುರ್ಗ, ಇದನ್ನು ಸಮಾಪನೆಗೊಳಿಸಿ, ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 73(1) ಅನ್ವಯ ಸಹಕಾರ ಸಂಘಗಳ ನಿರೀಕ್ಷಕರು, ಚಿತ್ರದುರ್ಗ ತಾಲ್ಲೂಕು ಇವರನ್ನು ಸಂಘದ ಸಮಾಪನಾಧಿಕಾರಿಯನ್ನಾಗಿ ಅಧಿಕ ಪ್ರಭಾರದಲ್ಲಿ ನೇಮಿಸಿರುತ್ತೇನೆ. ಸಮಾಪನಾಧಿಕಾರಿಯು ಸಂಘದ ವಿಶಿಷ್ಟ ಪ್ರಭಾರವನ್ನು ಮತ್ತು ಸಂಘದ ಆಸ್ತಿಗಳನ್ನು ಸಂಘದ ಕಾರ್ಯದರ್ಶಿ ಅಥವಾ ಸಂಘದ ಪ್ರಭಾರ ಹೊಂದಿದ ಯಾವುದೇ ವ್ಯಕ್ತಿಯಿಂದ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 73 (1) ಮತ್ತು 74ರ ನಿಯಮದ ಪ್ರಕಾರ ಪಡೆದುಕೊಳ್ಳತಕ್ಕದ್ದು.

ನನ್ನ ಸ್ವ ಸಹಿ ಮತ್ತು ಕಛೇರಿಯ ಮೊಹರಿನೊಂದಿಗೆ ಈ ದಿನಾಂಕ:31.01.2011 ರಂದು ಈ ಆದೇಶವನ್ನು ಹೊರಡಿಸಿರುತ್ತೇನೆ.

ಸಹಕಾರ ಸಂಘಗಳ ಉಪ ನಿಬಂಧಕರು,
ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ.

ಸಹಕಾರ ಇಲಾಖೆ

ಸಹಕಾರ ಸಂಘಗಳ ಉಪನಿಬಂಧಕರು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ಇವರ ಕಛೇರಿ

ನಂ.ಡಿಆರ್‌ಡಿ:ಎಲ್‌ಕ್ಯೂಡಿ:ಸಿಆರ್:21:2010-11, ದಿನಾಂಕ:31.01.2011

ವಿಷಯ: ಸ್ಥಗಿತಗೊಂಡಿರುವ ಚಿತ್ರದುರ್ಗ ತಾಲ್ಲೂಕು ಕ್ಷೌರಿಕ ಕಸುಬುದಾರರ ಸಹಕಾರ ಸಂಘ ನಿ. ಚಿತ್ರದುರ್ಗ ಇದನ್ನು 1959ನೇ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ ಕಲಂ 72 ಮತ್ತು 73 ರನ್ವಯ ಸಮಾಪನೆ ಬಗ್ಗೆ.

ಉಲ್ಲೇಖ: 1) ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಚಿತ್ರದುರ್ಗ ಇವರ ಪತ್ರದ ಸಂಖ್ಯೆ: ಸನಿ:30: ಸಮಾಪನೆ: ಸಿಆರ್:18/10-11 ದಿನಾಂಕ:09.11.2010.

2) ಈ ಕಛೇರಿಯ ಕಾರಣ ಕೇಳಿ ನೋಟೀಸು ಸಮ ಸಂಖ್ಯೆ ದಿನಾಂಕ:12.11.2010.

ಪ್ರಸ್ತಾವನೆ:

ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಚಿತ್ರದುರ್ಗ ಉಪ ವಿಭಾಗ, ಚಿತ್ರದುರ್ಗ ಇವರು ಉಲ್ಲೇಖ (1)ರಲ್ಲಿ ಕಾಣಿಸಿದ ಪ್ರಸ್ತಾವನೆ ಪ್ರಕಾರ ಚಿತ್ರದುರ್ಗ ತಾಲ್ಲೂಕು ಕ್ಷೌರಿಕ ಕಸುಬುದಾರರ ಸಹಕಾರ ಸಂಘ ನಿ. ಚಿತ್ರದುರ್ಗ ಸಂಘದ ನೋಂದಣಿ ಸಂಖ್ಯೆ: ಎಆರ್/30/ಜಿಆರ್‌ಎಸ್‌ಆರ್/ನೋಂದಣಿ/15919/88-89, ದಿನಾಂಕ:06.08.1988 ಈ ಸಂಘದ ಕಾರ್ಯ ಚಟುವಟಿಕೆಗಳು ಅನೇಕ ವರ್ಷಗಳಿಂದ ಸ್ಥಗಿತಗೊಂಡಿರುತ್ತದೆ. ಸಂಘದ ಆಡಳಿತ ಸಮಿತಿಯವರು ಸಂಘದ ಅಭಿವೃದ್ಧಿ ಬಗ್ಗೆ ಗಮನಹರಿಸುವಲ್ಲಿ ವಿಫಲರಾಗಿರುತ್ತಾರೆ ಮತ್ತು ಸಂಘವನ್ನು ಪುನಃಶ್ಚೇತನಗೊಳಿಸುವಲ್ಲಿ ಆಸಕ್ತಿ ಇರುವುದಿಲ್ಲವೆಂದು ಪ್ರಸ್ತಾವನೆ ಸಲ್ಲಿಸಿ ಸಂಘವನ್ನು ಸಮಾಪನೆಗೊಳಿಸಲು ಕೋರಿರುತ್ತಾರೆ. ಈ ಬಗ್ಗೆ ಉಲ್ಲೇಖ (2) ರ ನೋಟೀಸನ್ನು ಈ ಕಛೇರಿಯಿಂದ ನೀಡಿದ್ದು, ಸಂಘದ ಆಡಳಿತ ಮಂಡಳಿಯವರಿಗೆ ನೋಟೀಸು ಜಾರಿ ಮಾಡಿ ಸ್ವೀಕೃತಿ ಈ ಕಛೇರಿ ತಲುಪಿದ್ದು ಆದಾಗ್ಯೂ ಅವರು ಯಾವುದೇ ಸಮಜಾಯಿಷಿ ಅಥವಾ ಪ್ರತಿಕ್ರಿಯೆಯನ್ನು ನೀಡದೇ ನಿರುತ್ಸಾಹ ತೋರಿಸಿರುತ್ತಾರೆ. ಈ ಸಂಘದಿಂದ ಸಂಘದ ಸದಸ್ಯರಿಗೆ ಯಾವ ರೀತಿಯ ಪ್ರಯೋಜನವೂ ದೊರೆಯುತ್ತಿಲ್ಲ, ಇದರಿಂದ ಸಂಘವು ಪುನಃಶ್ಚೇತನಗೊಳಿಸುವ ಹಂತವನ್ನು ಮೀರಿರುತ್ತದೆ. ಸಂಘವನ್ನು ಇದೇ ರೀತಿ ಮುಂದುವರಿಸಲು ಬಿಟ್ಟಲ್ಲಿ ಸಂಘವು ಇನ್ನಷ್ಟು ಅಧೋಗತಿಗೆ ಹೋಗುವ ಸಂಭವವಿರುವುದರಿಂದ ಸಮಾಪನೆಗೊಳಿಸುವುದೇ ಸೂಕ್ತವೆಂದು ಅಭಿಪ್ರಾಯಪಟ್ಟು ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

ಆದೇಶ

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಹಾಗೂ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 72(2) ರನ್ವಯ ಸರ್ಕಾರದ ಅಧಿಸೂಚನೆ ನಂ.ಸಿಓ:201: ಸಿಎಲ್‌ಎಂ:2008/ಬೆಂಗಳೂರು ದಿನಾಂಕ:27.05.2010 ಪ್ರಕಾರ ದತ್ತವಾದ ಅಧಿಕಾರದನ್ವಯ ಇಲ್ಯಾಸ್ ಉಲ್ಲಾ ಷರೀಫ್ ಸಹಕಾರ ಸಂಘಗಳ ಉಪನಿಬಂಧಕರು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ಆದ ನಾನು ದತ್ತವಾದ ಅಧಿಕಾರವನ್ನು ಚಲಾಯಿಸುತ್ತಾ, ಸ್ಥಗಿತಗೊಂಡಿರುವ ಚಿತ್ರದುರ್ಗ ತಾಲ್ಲೂಕು ಕ್ಷೌರಿಕ ಕಸುಬುದಾರರ ಸಹಕಾರ ಸಂಘ ನಿ. ಚಿತ್ರದುರ್ಗ ಇದನ್ನು ಸಮಾಪನೆಗೊಳಿಸಿ, ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ

1959 ಕಲಂ 73(1) ಅನ್ವಯ ಶ್ರೀ ಕೆ.ಎನ್. ಮನೋಹರ್, ಸಹಕಾರ ಸಂಘಗಳ ನಿರೀಕ್ಷಕರು, ಸಹಕಾರ ಸಂಘಗಳ ಸಹಾಯಕ ನಿಬಂಧಕರ ಕಛೇರಿ, ಚಿತ್ರದುರ್ಗ ಉಪವಿಭಾಗ, ಚಿತ್ರದುರ್ಗ ಇವರನ್ನು ಸಂಘದ ಸಮಾಪನಾಧಿಕಾರಿಯನ್ನಾಗಿ ಅಧಿಕ ಪ್ರಭಾರದಲ್ಲಿ ನೇಮಿಸಿರುತ್ತೇನೆ. ಸಮಾಪನಾಧಿಕಾರಿಯು ಸಂಘದ ವಿಶಿಷ್ಟ ಪ್ರಭಾರವನ್ನು ಮತ್ತು ಸಂಘದ ಆಸ್ತಿಗಳನ್ನು ಸಂಘದ ಕಾರ್ಯದರ್ಶಿ ಅಥವಾ ಸಂಘದ ಪ್ರಭಾರ ಹೊಂದಿದ ಯಾವುದೇ ವ್ಯಕ್ತಿಯಿಂದ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 73 (1) ಮತ್ತು 74ರ ನಿಯಮದ ಪ್ರಕಾರ ಪಡೆದುಕೊಳ್ಳತಕ್ಕದ್ದು.

ನನ್ನ ಸ್ವ ಸಹಿ ಮತ್ತು ಕಛೇರಿಯ ಮೊಹರಿನೊಂದಿಗೆ ಈ ದಿನಾಂಕ:31.01.2011 ರಂದು ಈ ಆದೇಶವನ್ನು ಹೊರಡಿಸಿರುತ್ತೇನೆ.

ಸಹಕಾರ ಸಂಘಗಳ ಉಪ ನಿಬಂಧಕರು,
ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ.

ಸಹಕಾರ ಇಲಾಖೆ

ಸಹಕಾರ ಸಂಘಗಳ ಉಪನಿಬಂಧಕರು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ಇವರ ಕಛೇರಿ

ನಂ.ಡಿಆರ್‌ಡಿ:ಎಲ್‌ಕ್ಯೂಡಿ:ಸಿಆರ್: /2010-11, ದಿನಾಂಕ:31.03.2011

ವಿಷಯ: ಸ್ಥಗಿತಗೊಂಡಿರುವ ಶ್ರೀ ಲಕ್ಷ್ಮಿನರಸಿಂಹಸ್ವಾಮಿ ಕುರಿ ಸಾಗಾಣಿಕೆ ಹಾಗೂ ಉಣ್ಣೆ ಉತ್ಪನ್ನಗಳ ಸಂಸ್ಕರಣ ಮಾರಾಟ ಸಹಕಾರ ಸಂಘ ನಿ. ದಾಸರ್ಲಹಳ್ಳಿ, ಚಳ್ಳಕೆರೆ ತಾಲ್ಲೂಕು, ಇದನ್ನು 1959ನೇ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ ಕಲಂ 72 ಮತ್ತು 73 ರನ್ವಯ ಸಮಾಪನೆ ಬಗ್ಗೆ.

ಉಲ್ಲೇಖ: 1) ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಚಿತ್ರದುರ್ಗ ಇವರ ಪತ್ರದ ಸಂಖ್ಯೆ: ಸನಿ:30: ಸಮಾಪನೆ: ಸಿಆರ್:78/10-11 ದಿನಾಂಕ:04.02.2011.

2) ಈ ಕಛೇರಿಯ ಕಾರಣ ಕೇಳಿ ನೋಟೀಸು ಸಮ ಸಂಖ್ಯೆ ದಿನಾಂಕ:22.02.2011.

ಪ್ರಸ್ತಾವನೆ:

ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಚಿತ್ರದುರ್ಗ ಉಪ ವಿಭಾಗ, ಚಿತ್ರದುರ್ಗ ಇವರು ಉಲ್ಲೇಖ (1)ರಲ್ಲಿ ಕಾಣಿಸಿದ ಪ್ರಸ್ತಾವನೆ ಪ್ರಕಾರ ಶ್ರೀ ಲಕ್ಷ್ಮಿನರಸಿಂಹಸ್ವಾಮಿ ಕುರಿ ಸಾಗಾಣಿಕೆ ಹಾಗೂ ಉಣ್ಣೆ ಉತ್ಪನ್ನಗಳ ಸಂಸ್ಕರಣ ಮಾರಾಟ ಸಹಕಾರ ಸಂಘ ನಿ. ದಾಸರ್ಲಹಳ್ಳಿ, ಚಳ್ಳಕೆರೆ ತಾಲ್ಲೂಕು, ಸಂಘದ ನೋಂದಣಿ ಸಂಖ್ಯೆ: ಎಆರ್/30/99/ಆರ್‌ಜಿಎನ್/30508/02-03, ದಿನಾಂಕ:19.03.2003 ಈ ಸಂಘದ ಕಾರ್ಯ ಚಟುವಟಿಕೆಗಳು ಅನೇಕ ವರ್ಷಗಳಿಂದ ಸ್ಥಗಿತಗೊಂಡಿರುತ್ತದೆ. ಸಂಘದ ಆಡಳಿತ ಸಮಿತಿಯವರು ಸಂಘದ ಅಭಿವೃದ್ಧಿ ಬಗ್ಗೆ ಗಮನಹರಿಸುವಲ್ಲಿ ವಿಫಲರಾಗಿರುತ್ತಾರೆ ಮತ್ತು ಸಂಘವನ್ನು ಪುನಃಶ್ಚೇತನಗೊಳಿಸುವಲ್ಲಿ ಆಸಕ್ತಿ ಇರುವುದಿಲ್ಲವೆಂದು ಪ್ರಸ್ತಾವನೆ ಸಲ್ಲಿಸಿ ಸಂಘವನ್ನು ಸಮಾಪನೆಗೊಳಿಸಲು ಕೋರಿರುತ್ತಾರೆ. ಈ ಬಗ್ಗೆ ಉಲ್ಲೇಖ (2) ರ ನೋಟೀಸನ್ನು ಈ ಕಛೇರಿಯಿಂದ ನೀಡಿದ್ದು, ಸಂಘದ ಆಡಳಿತ ಮಂಡಳಿಯವರಿಗೆ ನೋಟೀಸು ಜಾರಿ ಮಾಡಿ ಸ್ವೀಕೃತಿ ಈ ಕಛೇರಿ ತಲುಪಿದ್ದು ಆದಾಗ್ಯೂ ಅವರು ಯಾವುದೇ ಸಮಜಾಯಿಷಿ ಅಥವಾ ಪ್ರತಿಕ್ರಿಯೆಯನ್ನು ನೀಡದೇ ನಿರುತ್ಸಾಹ ತೋರಿಸಿರುತ್ತಾರೆ. ಈ ಸಂಘದಿಂದ ಸಂಘದ ಸದಸ್ಯರಿಗೆ ಯಾವ ರೀತಿಯ ಪ್ರಯೋಜನವೂ ದೊರೆಯುತ್ತಿಲ್ಲ, ಇದರಿಂದ ಸಂಘವು ಪುನಃಶ್ಚೇತನಗೊಳಿಸುವ ಹಂತವನ್ನು ಮೀರಿರುತ್ತದೆ. ಸಂಘವನ್ನು ಇದೇ ರೀತಿ ಮುಂದುವರಿಸಲು ಬಿಟ್ಟಲ್ಲಿ ಸಂಘವು ಇನ್ನಷ್ಟು ಅಧೋಗತಿಗೆ ಹೋಗುವ ಸಂಭವವಿರುವುದರಿಂದ ಸಮಾಪನೆಗೊಳಿಸುವುದೇ ಸೂಕ್ತವೆಂದು ಅಭಿಪ್ರಾಯಪಟ್ಟು ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

ಆದೇಶ

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಹಾಗೂ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 72(2) ರನ್ವಯ ಸರ್ಕಾರದ ಅಧಿಸೂಚನೆ ನಂ.ಸಿಓ:201: ಸಿಎಲ್‌ಎಂ:2008/ಬೆಂಗಳೂರು ದಿನಾಂಕ:27.05.2010 ಪ್ರಕಾರ ದತ್ತವಾದ ಅಧಿಕಾರದನ್ವಯ ಇಲ್ಯಾಸ್ ಉಲ್ಲಾ ಷರೀಫ್ ಸಹಕಾರ ಸಂಘಗಳ ಉಪನಿಬಂಧಕರು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ಆದ ನಾನು ದತ್ತವಾದ ಅಧಿಕಾರವನ್ನು ಚಲಾಯಿಸುತ್ತಾ, ಸ್ಥಗಿತಗೊಂಡಿರುವ ಶ್ರೀ ಲಕ್ಷ್ಮಿನರಸಿಂಹಸ್ವಾಮಿ ಕುರಿ ಸಾಗಾಣಿಕೆ ಹಾಗೂ ಉಣ್ಣೆ ಉತ್ಪನ್ನಗಳ ಸಂಸ್ಕರಣ ಮಾರಾಟ ಸಹಕಾರ ಸಂಘ ನಿ. ದಾಸರ್ಲಹಳ್ಳಿ, ಚಳ್ಳಕೆರೆ ತಾಲ್ಲೂಕು, ಇದನ್ನು ಸಮಾಪನೆಗೊಳಿಸಿ, ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 73(1) ಅನ್ವಯ ಸಹಕಾರ ಅಭಿವೃದ್ಧಿ, ಚಳ್ಳಕೆರೆ ತಾಲ್ಲೂಕು, ಇವರನ್ನು ಸಂಘದ ಸಮಾಪನಾಧಿಕಾರಿಯನ್ನಾಗಿ ಅಧಿಕ ಪ್ರಭಾರದಲ್ಲಿ ನೇಮಿಸಿರುತ್ತೇನೆ. ಸಮಾಪನಾಧಿಕಾರಿಯು ಸಂಘದ ವಿಶಿಷ್ಟ ಪ್ರಭಾರವನ್ನು ಮತ್ತು ಸಂಘದ ಆಸ್ತಿಗಳನ್ನು ಸಂಘದ ಕಾರ್ಯದರ್ಶಿ ಅಥವಾ ಸಂಘದ ಪ್ರಭಾರ ಹೊಂದಿದ ಯಾವುದೇ ವ್ಯಕ್ತಿಯಿಂದ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 73 (1) ಮತ್ತು 74ರ ನಿಯಮದ ಪ್ರಕಾರ ಪಡೆದುಕೊಳ್ಳತಕ್ಕದ್ದು.

ನನ್ನ ಸ್ವ ಸಹಿ ಮತ್ತು ಕಛೇರಿಯ ಮೊಹರಿನೊಂದಿಗೆ ಈ ದಿನಾಂಕ:31.03.2011 ರಂದು ಈ ಆದೇಶವನ್ನು ಹೊರಡಿಸಿರುತ್ತೇನೆ.

ಸಹಕಾರ ಸಂಘಗಳ ಉಪ ನಿಬಂಧಕರು,
ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ.

ಪಿ.ಆರ್.509

ಸಹಕಾರ ಇಲಾಖೆ

ಸಹಕಾರ ಸಂಘಗಳ ಉಪನಿಬಂಧಕರು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ಇವರ ಕಛೇರಿ

ನಂ.ಡಿಆರ್‌ಡಿ:ಎಲ್‌ಕ್ಯೂಡಿ:ಸಿಆರ್:80/2010–11, ದಿನಾಂಕ:21.03.2011

ವಿಷಯ: ಸ್ಥಗಿತಗೊಂಡಿರುವ ಶ್ರೀ ಲಕ್ಷ್ಮಿನರಸಿಂಹಸ್ವಾಮಿ ಸಣ್ಣ ನೀರಾವರಿ ನೀರು ಬಳಕೆದಾರರ ಸಹಕಾರ ಸಂಘ ನಿ. ಹೊರಕೆರೆದೇವಪುರ, ಹೊಳಲ್ಕೆರೆ ತಾಲ್ಲೂಕು, ಇದನ್ನು 1959ನೇ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ ಕಲಂ 72 ಮತ್ತು 73 ರನ್ವಯ ಸಮಾಪನೆ ಬಗ್ಗೆ.

ಉಲ್ಲೇಖ: 1) ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಚಿತ್ರದುರ್ಗ ಇವರ ಪತ್ರದ ಸಂಖ್ಯೆ: ಸನಿ:30: ಸಮಾಪನೆ: ಸಿಆರ್:76/10–11 ದಿನಾಂಕ:12.01.2011.

2) ಈ ಕಛೇರಿಯ ಕಾರಣ ಕೇಳಿ ನೋಟೀಸು ಸಮ ಸಂಖ್ಯೆ ದಿನಾಂಕ:21.01.2011.

ಪ್ರಸ್ತಾವನೆ:

ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಚಿತ್ರದುರ್ಗ ಉಪ ವಿಭಾಗ, ಚಿತ್ರದುರ್ಗ ಇವರು ಉಲ್ಲೇಖ (1)ರಲ್ಲಿ ಕಾಣಿಸಿದ ಪ್ರಸ್ತಾವನೆ ಪ್ರಕಾರ ಶ್ರೀ ಲಕ್ಷ್ಮಿನರಸಿಂಹಸ್ವಾಮಿ ಸಣ್ಣ ನೀರಾವರಿ ನೀರು ಬಳಕೆದಾರರ ಸಹಕಾರ ಸಂಘ ನಿ. ಹೊರಕೆರೆದೇವಪುರ, ಹೊಳಲ್ಕೆರೆ ತಾಲ್ಲೂಕು, ಸಂಘದ ನೋಂದಣಿ ಸಂಖ್ಯೆ: ಸನಿ:30/47/ಆರ್‌ಜಿಎನ್/30456/2000–01, ದಿನಾಂಕ:16.11.2000 ಈ ಸಂಘದ ಕಾರ್ಯ ಚಟುವಟಿಕೆಗಳು ಅನೇಕ ವರ್ಷಗಳಿಂದ ಸ್ಥಗಿತಗೊಂಡಿರುತ್ತದೆ. ಸಂಘದ ಆಡಳಿತ ಸಮಿತಿಯವರು ಸಂಘದ ಅಭಿವೃದ್ಧಿ ಬಗ್ಗೆ ಗಮನಹರಿಸುವಲ್ಲಿ ವಿಫಲರಾಗಿರುತ್ತಾರೆ ಮತ್ತು ಸಂಘವನ್ನು ಪುನಃಶ್ಚೇತನಗೊಳಿಸುವಲ್ಲಿ ಆಸಕ್ತಿ ಇರುವುದಿಲ್ಲವೆಂದು ಪ್ರಸ್ತಾವನೆ ಸಲ್ಲಿಸಿ ಸಂಘವನ್ನು ಸಮಾಪನೆಗೊಳಿಸಲು ಕೋರಿರುತ್ತಾರೆ. ಈ ಬಗ್ಗೆ ಉಲ್ಲೇಖ (2) ರ ನೋಟೀಸನ್ನು ಈ ಕಛೇರಿಯಿಂದ ನೀಡಿದ್ದು, ಸಂಘದ ಆಡಳಿತ ಮಂಡಳಿಯವರಿಗೆ ನೋಟೀಸು ಜಾರಿ ಮಾಡಿ ಸ್ವೀಕೃತಿ ಈ ಕಛೇರಿ ತಲುಪಿದ್ದು ಆದಾಗ್ಯೂ ಅವರು ಯಾವುದೇ ಸಮಜಾಯಿಷಿ ಅಥವಾ ಪ್ರತಿಕ್ರಿಯೆಯನ್ನು ನೀಡದೇ ನಿರುತ್ಸಾಹ ತೋರಿಸಿರುತ್ತಾರೆ. ಈ ಸಂಘದಿಂದ ಸಂಘದ ಸದಸ್ಯರಿಗೆ ಯಾವ ರೀತಿಯ ಪ್ರಯೋಜನವೂ ದೊರೆಯುತ್ತಿಲ್ಲ, ಇದರಿಂದ ಸಂಘವು ಪುನಃಶ್ಚೇತನಗೊಳಿಸುವ ಹಂತವನ್ನು ಮೀರಿರುತ್ತದೆ. ಸಂಘವನ್ನು ಇದೇ ರೀತಿ ಮುಂದುವರಿಸಲು ಬಿಟ್ಟಲ್ಲಿ ಸಂಘವು ಇನ್ನಷ್ಟು ಅಧೋಗತಿಗೆ ಹೋಗುವ ಸಂಭವವಿರುವುದರಿಂದ ಸಮಾಪನೆಗೊಳಿಸುವುದೇ ಸೂಕ್ತವೆಂದು ಅಭಿಪ್ರಾಯಪಟ್ಟು ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

ಆದೇಶ

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಹಾಗೂ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 72(2) ರನ್ವಯ ಸರ್ಕಾರದ ಅಧಿಸೂಚನೆ ನಂ.ಸಿಓ:201: ಸಿಎಲ್‌ಎಂ:2008/ಬೆಂಗಳೂರು ದಿನಾಂಕ:27.05.2010 ಪ್ರಕಾರ ದತ್ತವಾದ ಅಧಿಕಾರದನ್ವಯ ಇಲ್ಯಾಸ್ ಉಲ್ಲಾ ಷರೀಫ್ ಸಹಕಾರ ಸಂಘಗಳ ಉಪನಿಬಂಧಕರು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ಆದ ನಾನು ದತ್ತವಾದ ಅಧಿಕಾರವನ್ನು ಚಲಾಯಿಸುತ್ತಾ, ಸ್ಥಗಿತಗೊಂಡಿರುವ ಶ್ರೀ ಲಕ್ಷ್ಮಿನರಸಿಂಹಸ್ವಾಮಿ ಸಣ್ಣ ನೀರಾವರಿ ನೀರು ಬಳಕೆದಾರರ ಸಹಕಾರ ಸಂಘ ನಿ. ಹೊರಕೆರೆದೇವಪುರ, ಹೊಳಲ್ಕೆರೆ ತಾಲ್ಲೂಕು, ಇದನ್ನು ಸಮಾಪನೆಗೊಳಿಸಿ, ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 73(1) ಅನ್ವಯ ಸಹಕಾರ ಅಭಿವೃದ್ಧಿ ಅಧಿಕಾರಿ (ಪ್ರಭಾರ) ಹೊಳಲ್ಕೆರೆ ತಾಲ್ಲೂಕು, ಇವರನ್ನು ಸಂಘದ ಸಮಾಪನಾಧಿಕಾರಿಯನ್ನಾಗಿ ಅಧಿಕ ಪ್ರಭಾರದಲ್ಲಿ ನೇಮಿಸಿರುತ್ತೇನೆ. ಸಮಾಪನಾಧಿಕಾರಿಯು ಸಂಘದ ವಿಶಿಷ್ಟ ಪ್ರಭಾರವನ್ನು ಮತ್ತು ಸಂಘದ ಆಸ್ತಿಗಳನ್ನು ಸಂಘದ ಕಾರ್ಯದರ್ಶಿ ಅಥವಾ ಸಂಘದ ಪ್ರಭಾರ ಹೊಂದಿದ ಯಾವುದೇ ವ್ಯಕ್ತಿಯಿಂದ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 73 (1) ಮತ್ತು 74ರ ನಿಯಮದ ಪ್ರಕಾರ ಪಡೆದುಕೊಳ್ಳತಕ್ಕದ್ದು.

ನನ್ನ ಸ್ವ ಸಹಿ ಮತ್ತು ಕಛೇರಿಯ ಮೊಹರಿನೊಂದಿಗೆ ಈ ದಿನಾಂಕ:21.03.2011 ರಂದು ಈ ಆದೇಶವನ್ನು ಹೊರಡಿಸಿರುತ್ತೇನೆ.

ಸಹಕಾರ ಸಂಘಗಳ ಉಪ ನಿಬಂಧಕರು,

ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ.

ಸಹಕಾರ ಇಲಾಖೆ

ಸಹಕಾರ ಸಂಘಗಳ ಉಪನಿಬಂಧಕರು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ಇವರ ಕಛೇರಿ

ನಂ.ಡಿಆರ್‌ಡಿ:ಎಲ್‌ಕ್ಯೂಡಿ:ಸಿಆರ್:69/2009–10, ದಿನಾಂಕ:31.03.2011

ವಿಷಯ: ಸ್ಥಗಿತಗೊಂಡಿರುವ ಸಣ್ಣ ನೀರಾವರಿ ನೀರು ಬಳಕೆದಾರರ ಸಹಕಾರ ಸಂಘ ನಿ. ಬಗ್ಗನಡು, ಹಿರಿಯೂರು ತಾಲ್ಲೂಕು, ಇದನ್ನು 1959ನೇ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ ಕಲಂ 72 ಮತ್ತು 73 ರನ್ವಯ ಸಮಾಪನೆ ಬಗ್ಗೆ.

ಉಲ್ಲೇಖ: 1) ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಚಿತ್ರದುರ್ಗ ಇವರ ಪತ್ರದ ಸಂಖ್ಯೆ: ಸನಿ:30: ಸಮಾಪನೆ: ಸಿಆರ್:22/10–11 ದಿನಾಂಕ:11.11.2009.

2) ಈ ಕಛೇರಿಯ ಕಾರಣ ಕೇಳಿ ನೋಟೀಸು ಸಮ ಸಂಖ್ಯೆ ದಿನಾಂಕ:25.10.2010.

ಪ್ರಸ್ತಾವನೆ:

ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಚಿತ್ರದುರ್ಗ ಉಪ ವಿಭಾಗ, ಚಿತ್ರದುರ್ಗ ಇವರು ಉಲ್ಲೇಖ (1)ರಲ್ಲಿ ಕಾಣಿಸಿದ ಪ್ರಸ್ತಾವನೆ ಪ್ರಕಾರ ಸಣ್ಣ ನೀರಾವರಿ ನೀರು ಬಳಕೆದಾರರ ಸಹಕಾರ ಸಂಘ ನಿ. ಬಗ್ಗನಡು, ಹಿರಿಯೂರು ತಾಲ್ಲೂಕು, ಸಂಘದ ನೋಂದಣಿ ಸಂಖ್ಯೆ: ಸನಿ:30/51/ಆರ್‌ಜಿಎನ್/30460/2000–01, ದಿನಾಂಕ:06.12.2001 ಈ ಸಂಘದ ಕಾರ್ಯ ಚಟುವಟಿಕೆಗಳು ಅನೇಕ ವರ್ಷಗಳಿಂದ ಸ್ಥಗಿತಗೊಂಡಿರುತ್ತದೆ. ಸಂಘದ ಆಡಳಿತ ಸಮಿತಿಯವರು ಸಂಘದ ಅಭಿವೃದ್ಧಿ ಬಗ್ಗೆ ಗಮನಹರಿಸುವಲ್ಲಿ ವಿಫಲರಾಗಿರುತ್ತಾರೆ ಮತ್ತು ಸಂಘವನ್ನು ಪುನಃಶ್ಚೇತನಗೊಳಿಸುವಲ್ಲಿ ಆಸಕ್ತಿ ಇರುವುದಿಲ್ಲವೆಂದು ಪ್ರಸ್ತಾವನೆ ಸಲ್ಲಿಸಿ ಸಂಘವನ್ನು ಸಮಾಪನೆಗೊಳಿಸಲು ಕೋರಿರುತ್ತಾರೆ. ಈ ಬಗ್ಗೆ ಉಲ್ಲೇಖ (2) ರ ನೋಟೀಸನ್ನು ಈ ಕಛೇರಿಯಿಂದ ನೀಡಿದ್ದು, ಸಂಘದ ಆಡಳಿತ ಮಂಡಳಿಯವರಿಗೆ ನೋಟೀಸು ಜಾರಿ ಮಾಡಿ ಸ್ವೀಕೃತಿ ಈ ಕಛೇರಿ ತಲುಪಿದ್ದು ಆದಾಗ್ಯೂ ಅವರು ಯಾವುದೇ ಸಮಜಾಯಿಷಿ ಅಥವಾ ಪ್ರತಿಕ್ರಿಯೆಯನ್ನು ನೀಡದೇ ನಿರುತ್ಸಾಹ ತೋರಿಸಿರುತ್ತಾರೆ. ಈ ಸಂಘದಿಂದ ಸಂಘದ ಸದಸ್ಯರಿಗೆ ಯಾವ ರೀತಿಯ ಪ್ರಯೋಜನವೂ ದೊರೆಯುತ್ತಿಲ್ಲ, ಇದರಿಂದ ಸಂಘವು ಪುನಃಶ್ಚೇತನಗೊಳಿಸುವ ಹಂತವನ್ನು ಮೀರಿರುತ್ತದೆ. ಸಂಘವನ್ನು ಇದೇ ರೀತಿ ಮುಂದುವರಿಸಲು ಬಿಟ್ಟಲ್ಲಿ ಸಂಘವು ಇನ್ನಷ್ಟು ಅಧೋಗತಿಗೆ ಹೋಗುವ ಸಂಭವವಿರುವುದರಿಂದ ಸಮಾಪನೆಗೊಳಿಸುವುದೇ ಸೂಕ್ತವೆಂದು ಅಭಿಪ್ರಾಯಪಟ್ಟು ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

ಆದೇಶ

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಹಾಗೂ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 72(2) ರನ್ವಯ ಸರ್ಕಾರದ ಅಧಿಸೂಚನೆ ನಂ.ಸಿಓ:201: ಸಿಎಲ್‌ಎಂ:2008/ಬೆಂಗಳೂರು ದಿನಾಂಕ:27.05.2010 ಪ್ರಕಾರ ದತ್ತವಾದ ಅಧಿಕಾರದನ್ವಯ ಇಲ್ಯಾಸ್ ಉಲ್ಲಾ ಷರೀಫ್ ಸಹಕಾರ ಸಂಘಗಳ ಉಪನಿಬಂಧಕರು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ಆದ ನಾನು ದತ್ತವಾದ ಅಧಿಕಾರವನ್ನು ಚಲಾಯಿಸುತ್ತಾ, ಸ್ಥಗಿತಗೊಂಡಿರುವ ಸಣ್ಣ ನೀರಾವರಿ ನೀರು ಬಳಕೆದಾರರ ಸಹಕಾರ ಸಂಘ ನಿ. ಬಗ್ಗನಡು, ಹಿರಿಯೂರು ತಾಲ್ಲೂಕು, ಇದನ್ನು ಸಮಾಪನೆಗೊಳಿಸಿ, ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 73(1) ಅನ್ವಯ ಸಹಕಾರ ಅಭಿವೃದ್ಧಿ ಅಧಿಕಾರಿ, ಹಿರಿಯೂರು ತಾಲ್ಲೂಕು, ಇವರನ್ನು ಸಂಘದ ಸಮಾಪನಾಧಿಕಾರಿಯನ್ನಾಗಿ ಅಧಿಕ ಪ್ರಭಾರದಲ್ಲಿ ನೇಮಿಸಿರುತ್ತೇನೆ. ಸಮಾಪನಾಧಿಕಾರಿಯು ಸಂಘದ ವಿಶಿಷ್ಟ ಪ್ರಭಾರವನ್ನು ಮತ್ತು ಸಂಘದ ಆಸ್ತಿಗಳನ್ನು ಸಂಘದ ಕಾರ್ಯದರ್ಶಿ ಅಥವಾ ಸಂಘದ ಪ್ರಭಾರ ಹೊಂದಿದ ಯಾವುದೇ ವ್ಯಕ್ತಿಯಿಂದ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 73 (1) ಮತ್ತು 74ರ ನಿಯಮದ ಪ್ರಕಾರ ಪಡೆದುಕೊಳ್ಳತಕ್ಕದ್ದು.

ನನ್ನ ಸ್ವ ಸಹಿ ಮತ್ತು ಕಛೇರಿಯ ಮೊಹರಿನೊಂದಿಗೆ ಈ ದಿನಾಂಕ:31.03.2011 ರಂದು ಈ ಆದೇಶವನ್ನು ಹೊರಡಿಸಿರುತ್ತೇನೆ.

ಸಹಕಾರ ಸಂಘಗಳ ಉಪ ನಿಬಂಧಕರು,
ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ.

ಸಹಕಾರ ಇಲಾಖೆ

ಸಹಕಾರ ಸಂಘಗಳ ಉಪನಿಬಂಧಕರು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ಇವರ ಕಛೇರಿ

ನಂ.ಡಿಆರ್‌ಡಿ:ಎಲ್‌ಕ್ಯೂಡಿ:ಸಿಆರ್:23/2010–11, ದಿನಾಂಕ:21.03.2011

ವಿಷಯ: ಸ್ಥಗಿತಗೊಂಡಿರುವ ಶ್ರೀರಂಗನಾಥಸ್ವಾಮಿ ಕುರಿ ಉಣ್ಣೆ ಉತ್ಪಾದಕರ ಹಾಗೂ ಮಾರಾಟಗಾರರ ಸಹಕಾರ ಸಂಘ ನಿ., ಸಿದ್ದೇಶ್ವರನದುರ್ಗ, ಚಳ್ಳಕೆರೆ ತಾಲ್ಲೂಕು, ಇದನ್ನು 1959ನೇ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ ಕಲಂ 72 ಮತ್ತು 73 ರನ್ವಯ ಸಮಾಪನೆ ಬಗ್ಗೆ.

ಉಲ್ಲೇಖ: 1) ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಚಿತ್ರದುರ್ಗ ಇವರ ಪತ್ರದ ಸಂಖ್ಯೆ: ಸನಿ:30: ಸಮಾಪನೆ: ಸಿಆರ್:22/10–11 ದಿನಾಂಕ:10.11.2010.

2) ಈ ಕಛೇರಿಯ ಕಾರಣ ಕೇಳಿ ನೋಟೀಸು ಸಮ ಸಂಖ್ಯೆ ದಿನಾಂಕ:12.11.2010.

ಪ್ರಸ್ತಾವನೆ:

ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಚಿತ್ರದುರ್ಗ ಉಪ ವಿಭಾಗ, ಚಿತ್ರದುರ್ಗ ಇವರು ಉಲ್ಲೇಖ (1)ರಲ್ಲಿ ಕಾಣಿಸಿದ ಪ್ರಸ್ತಾವನೆ ಪ್ರಕಾರ ಶ್ರೀರಂಗನಾಥಸ್ವಾಮಿ ಕುರಿ ಉಣ್ಣೆ ಉತ್ಪಾದಕರ ಹಾಗೂ ಮಾರಾಟಗಾರರ ಸಹಕಾರ ಸಂಘ ನಿ., ಸಿದ್ದೇಶ್ವರನದುರ್ಗ, ಚಳ್ಳಕೆರೆ ತಾಲ್ಲೂಕು, ಸಂಘದ ನೋಂದಣಿ ಸಂಖ್ಯೆ: ಸನಿ:30/ಆರ್‌ಜಿಎನ್/34975/2004–05, ದಿನಾಂಕ:27.12.2004 ಈ ಸಂಘದ ಕಾರ್ಯ ಚಟುವಟಿಕೆಗಳು ಅನೇಕ ವರ್ಷಗಳಿಂದ ಸ್ಥಗಿತಗೊಂಡಿರುತ್ತದೆ. ಸಂಘದ ಆಡಳಿತ ಸಮಿತಿಯವರು ಸಂಘದ ಅಭಿವೃದ್ಧಿ ಬಗ್ಗೆ ಗಮನಹರಿಸುವಲ್ಲಿ ವಿಫಲರಾಗಿರುತ್ತಾರೆ ಮತ್ತು ಸಂಘವನ್ನು ಪುನಃಶ್ಚೇತನಗೊಳಿಸುವಲ್ಲಿ ಆಸಕ್ತಿ ಇರುವುದಿಲ್ಲವೆಂದು ಪ್ರಸ್ತಾವನೆ ಸಲ್ಲಿಸಿ ಸಂಘವನ್ನು ಸಮಾಪನೆಗೊಳಿಸಲು ಕೋರಿರುತ್ತಾರೆ. ಈ ಬಗ್ಗೆ ಉಲ್ಲೇಖ (2) ರ ನೋಟೀಸನ್ನು ಈ ಕಛೇರಿಯಿಂದ ನೀಡಿದ್ದು, ಸಂಘದ ಆಡಳಿತ ಮಂಡಳಿಯವರಿಗೆ ನೋಟೀಸು ಜಾರಿ ಮಾಡಿ ಸ್ವೀಕೃತಿ ಈ ಕಛೇರಿ ತಲುಪಿದ್ದು ಆದಾಗ್ಯೂ ಅವರು ಯಾವುದೇ ಸಮಜಾಯಿಷಿ ಅಥವಾ ಪ್ರತಿಕ್ರಿಯೆಯನ್ನು ನೀಡದೇ ನಿರುತ್ಸಾಹ ತೋರಿಸಿರುತ್ತಾರೆ. ಈ ಸಂಘದಿಂದ ಸಂಘದ ಸದಸ್ಯರಿಗೆ ಯಾವ ರೀತಿಯ ಪ್ರಯೋಜನವೂ ದೊರೆಯುತ್ತಿಲ್ಲ, ಇದರಿಂದ ಸಂಘವು ಪುನಃಶ್ಚೇತನಗೊಳಿಸುವ ಹಂತವನ್ನು ಮೀರಿರುತ್ತದೆ. ಸಂಘವನ್ನು ಇದೇ ರೀತಿ ಮುಂದುವರಿಸಲು ಬಿಟ್ಟಲ್ಲಿ ಸಂಘವು ಇನ್ನಷ್ಟು ಅಧೋಗತಿಗೆ ಹೋಗುವ ಸಂಭವವಿರುವುದರಿಂದ ಸಮಾಪನೆಗೊಳಿಸುವುದೇ ಸೂಕ್ತವೆಂದು ಅಭಿಪ್ರಾಯಪಟ್ಟು ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

ಆದೇಶ

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಹಾಗೂ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 72(2) ರನ್ವಯ ಸರ್ಕಾರದ ಅಧಿಸೂಚನೆ ಸಂಖ್ಯೆ: ನಂ.ಸಿಓ:201: ಸಿಎಲ್‌ಎಂ:2008/ಬೆಂಗಳೂರು ದಿನಾಂಕ:27.05.2010 ಪ್ರಕಾರ ದತ್ತವಾದ ಅಧಿಕಾರದನ್ವಯ ಇಲ್ಯಾಸ್ ಉಲ್ಲಾ ಷರೀಫ್ ಸಹಕಾರ ಸಂಘಗಳ ಉಪನಿಬಂಧಕರು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ಆದ ನಾನು ದತ್ತವಾದ ಅಧಿಕಾರವನ್ನು ಚಲಾಯಿಸುತ್ತಾ, ಸ್ಥಗಿತಗೊಂಡಿರುವ ಶ್ರೀರಂಗನಾಥಸ್ವಾಮಿ ಕುರಿ ಉಣ್ಣೆ ಉತ್ಪಾದಕರ ಹಾಗೂ ಮಾರಾಟಗಾರರ ಸಹಕಾರ ಸಂಘ ನಿ., ಸಿದ್ದೇಶ್ವರನದುರ್ಗ, ಚಳ್ಳಕೆರೆ ತಾಲ್ಲೂಕು, ಇದನ್ನು ಸಮಾಪನೆಗೊಳಿಸಿ, ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 73(1) ಅನ್ವಯ ಸಹಕಾರ ಅಭಿವೃದ್ಧಿ ಅಧಿಕಾರಿ, ಚಳ್ಳಕೆರೆ ತಾಲ್ಲೂಕು, ಇವರನ್ನು ಸಂಘದ ಸಮಾಪನಾಧಿಕಾರಿಯನ್ನಾಗಿ ಅಧಿಕ ಪ್ರಭಾರದಲ್ಲಿ ನೇಮಿಸಿರುತ್ತೇನೆ. ಸಮಾಪನಾಧಿಕಾರಿಯು ಸಂಘದ ವಿಶಿಷ್ಟ ಪ್ರಭಾರವನ್ನು ಮತ್ತು ಸಂಘದ ಆಸ್ತಿಗಳನ್ನು ಸಂಘದ ಕಾರ್ಯದರ್ಶಿ ಅಥವಾ ಸಂಘದ ಪ್ರಭಾರ ಹೊಂದಿದ ಯಾವುದೇ ವ್ಯಕ್ತಿಯಿಂದ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 73 (1) ಮತ್ತು 74ರ ನಿಯಮದ ಪ್ರಕಾರ ಪಡೆದುಕೊಳ್ಳತಕ್ಕದ್ದು.

ನನ್ನ ಸ್ವ ಸಹಿ ಮತ್ತು ಕಛೇರಿಯ ಮೊಹರಿನೊಂದಿಗೆ ಈ ದಿನಾಂಕ:21.03.2011 ರಂದು ಈ ಆದೇಶವನ್ನು ಹೊರಡಿಸಿರುತ್ತೇನೆ.

ಸಹಕಾರ ಸಂಘಗಳ ಉಪ ನಿಬಂಧಕರು,
ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ.

ಪಿ.ಆರ್.510

ಸಹಕಾರ ಸಂಘಗಳ ಸಹಾಯಕ ನಿಬಂಧಕರು , ಹಾಗೂ ನಿ.441 ರನ್ವಯ ವಸೂಲಾಧಿಕಾರಿ ,
ರಡ್ಡಿ ಸಹಕಾರ ಬ್ಯಾಂಕ ನಿಯಮಿತ, ಬ್ಯಾಂಕ ರೋಡ , ಧಾರವಾಡ ಇವರ ನಡವಳಿಕೆಗಳು
ಅ.ಬ. ಪ್ರಕರಣ ಸಂಖ್ಯೆ :639 , 640 /08-09, ದಿನಾಂಕ :06-04-2011

ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ರ ಕಲಂ 101–ಬಿ ಮತ್ತು ಕರ್ನಾಟಕ ಸಹಕಾರ ಸಂಘಗಳ ನಿಯಮಗಳು 1960 ರ ನಿಯಮ 38 ಎ (5) ರ ಮೇರೆಗೆ ನೀಡಲಾದ , ಮಾರಾಟ ಮಾಡಲಾಗದ ಆಸ್ತಿಯ ವರ್ಗಾವಣೆ ಪ್ರಮಾಣ ಪತ್ರ

ಡಿಕ್ರಿ ಹೋಲ್ಡರ್

1) ರಡ್ಡಿ ಸಹಕಾರ ಬ್ಯಾಂಕ ನಿಯಮಿತ,
ಬ್ಯಾಂಕ ರೋಡ , ಧಾರವಾಡ
ವತಿಯಿಂದ ಪ್ರಧಾನ ವ್ಯವಸ್ಥಾಪಕರು

ತೀರ್ಪು ಬಾಕಿದಾರರು

ಡೈರೆಕ್ಟರ್ – ಪೆಂಟಾ ಕ್ರಿಯೇಷನ್ಸ ಲಿ.,

1) ಶ್ರೀ ನಾಗೇಂದ್ರ ಬಾಳಪ್ಪ ಧರ್ಮೋಜಿ
427–ಕೆ ಮಾರಿಹಾಳ, ಜಿ:ಬೆಳಗಾಂವ–591 167

2) ಡಾ. ಸಂಜೀವ ರಾಮಲಿಂಗ ದಳವಾಯಿ
ಚಾಟೆಬಿಲ್ಡಿಂಗ್,ಮಾರಿಹಾಳ,ಜಿ:ಬೆಳಗಾಂವ–591 167

3) ಶ್ರೀ ಕಾಂತರಾಜ ತವನೆ,
ನಂ. 16, 1ನೇಯ ಮಹಡಿ , 16ನೇಯ ಮೇನ್ ,
3ನೇಯ ಕ್ರಾಸ್, ಕೆ.ಎಸ್.ಆರ್.ಟಿ.ಸಿ. ಲೇಔಟ ,
ರಾಗಿಗುಡ್ಡಹಿಂದುಗಡೆ , 2ನೇಯ ಹಂತ , ಜೆ.ಪಿ.ನಗರ,
ಬೆಂಗಳೂರು-560 078

4) ಶ್ರೀಮತಿ ಎಂ. ಸುವರ್ಣಾ
ಕೇ/ಅಫ್. ಶ್ರೀ ಎಲ್. ಮುರಳಿ
ಮನೆ ನಂ.14, 2ನೇಯ ಕ್ರಾಸ್, 2ನೇಯ ಮಹಡಿ ,
ಈರಣಪಾಳ್ಯಾ, ಹೆಲ್ತ ಲೇಔಟ,
ಬೆಂಗಳೂರು–560 091

5) ಶ್ರೀ ಗಿರೀಶ ರಾಮನಗೌಡ ಪಾಟೀಲ
ತಂದೆ ಶ್ರೀ ಆರ್. ಎಸ್. ಪಾಟೀಲ , 707/1 ,
5ನೇಯ ಕ್ರಾಸ್, ಶ್ರೀನಗರ , ಎಂ.ಎಂ. ಎಕ್ಸಟೆನ್ಷನ್,
ಬೆಳಗಾಂವ

6) ಶ್ರೀ ರಾಮನಗೌಡ ಎಸ್. ಪಾಟೀಲ
701/1, ಶ್ರೀನಗರ, ಬೆಳಗಾಂವ

7) ಶ್ರೀ ಎಲ್. ಮುರಳಿ
ಮನೆ ನಂ.14, 2ನೇಯ ಕ್ರಾಸ್, 2ನೇಯ ಮಹಡಿ ,
ಈರಣಪಾಳ್ಯಾ , ಹೆಲ್ತ ಲೇಔಟ ,
ಬೆಂಗಳೂರು – 560 091

8) ಶ್ರೀ ಕಿರಣ ತವನೆ ,
ಕೇ/ಆಫ್. ಶ್ರೀ ಕಾಂತರಾಜ ತವನೆ ,
ನಂ. 16, 1ನೇಯ ಮಹಡಿ , 16ನೇಯ ಮೇನ್ ,
3ನೇಯ ಕ್ರಾಸ್, ಕೆ.ಎಸ್.ಆರ್.ಟಿ.ಸಿ. ಲೇಔಟ ,
ರಾಗಿಗುಡ್ಡಹಿಂದುಗಡೆ , 2ನೇಯ ಹಂತ , ಜೆ.ಪಿ.ನಗರ,
ಬೆಂಗಳೂರು – 560 078

9) ಶ್ರೀ ರಾಮಲಿಂಗ ಪಿ. ದಳವಾಯಿ
ಚಾಟೆ ಬಿಲ್ಡಿಂಗ್,ಮಾರಿಹಾಳ,ಜಿ:ಬೆಳಗಾಂವ–591 167

ಪ್ರಧಾನ ವ್ಯವಸ್ಥಾಪಕರು , ರಡ್ಡಿ ಸಹಕಾರ ಬ್ಯಾಂಕ ನಿಯಮಿತ, ಧಾರವಾಡ ಇವರು ಮೇಲ್ಕಂಡ ತೀರ್ಪು ಬಾಕಿದಾರರ ವಿರುದ್ದ ಸಹಕಾರ ಸಂಘಗಳ ಸಂಯುಕ್ತ ನಿಬಂಧಕರು , ನಿ.441 ದಾವಾ ಪಂಚಾಯತಿ, ಕರ್ನಾಟಕ ರಾಜ್ಯ, ಸಹಕಾರ ಪಟ್ಟಣ ಬ್ಯಾಂಕುಗಳ ಮಹಾಮಂಡಳ ನಿ., ಪ್ರಾಂತೀಯ ಕಚೇರಿ , ಹುಬ್ಬಳ್ಳಿ ಇವರ ನ್ಯಾಯಾಲಯದಲ್ಲಿ ಕ.ಸ.ಸ. ಕಾಯ್ದೆ 1959 ಕಲಂ 70 ರನ್ವಯ ಪಂಚಾಯತ ದಾವೆಯನ್ನು ಹೂಡಿ , ದಾವಾ ಸಂಖ್ಯೆ ಜೆಆರ್‌ಡಿ/ಯುಬಿಎಫ್/ 5127, 5128/2008–09 ರಲ್ಲಿ ದಿನಾಂಕ:02–03–2009 ರಂದು ತೀರ್ಪು ಪಡೆದು , ಸಾಲ ವಸೂಲಾತಿಗಾಗಿ ಈ ಕಚೇರಿಯಲ್ಲಿ ಅಮಲ್ಜಾರಿ ಪ್ರಕರಣಗಳನ್ನು ದಾಖಲಿಸಿರುತ್ತಾರೆ.

ತೀರ್ಪು ಬಾಕಿದಾರರಿಂದ ಡಿಕ್ರಿದಾರ ಬ್ಯಾಂಕಿಗೆ ಬರಬೇಕಾದ ಬಾಕಿ ರೂ.62,39,583/– ತದನಂತರದ ಅವಧಿಗೆ ಬಡ್ಡಿ + ಸುಸ್ತಿ ಬಡ್ಡಿ ಹಾಗೂ ಇತರೆ ಖರ್ಚುಗಳ ವಸೂಲಾತಿಗಾಗಿ, 3ನೇಯ ಹಾಗೂ 8ನೇಯ ತೀರ್ಪು ಸಾಲಗಾರರಿಗೆ ಸೇರಿದ ಈ ಕೆಳಗೆ ನಮೂದಿಸಿರುವ ಸ್ಥಿರಾಸ್ತಿಗಳನ್ನು ದಿನಾಂಕ:21–05–2009, 17–09–2009, 06–07–2010, 25–08–2010 ರಂದು ಬಹಿರಂಗ ಹರಾಜು ಮೂಲಕ ಮಾರಾಟ ಮಾಡಲು ನಿಗದಿಪಡಿಸಲಾಗಿತ್ತು. ಈ ಆಸ್ತಿಗಳನ್ನು ಬಹಿರಂಗ ಹರಾಜಿನಲ್ಲಿ ಖರೀದಿಸುವವರು ಇಲ್ಲದ ಪ್ರಯುಕ್ತ ಡಿಕ್ರಿದಾರ ಬ್ಯಾಂಕಿನ ಹೆಸರಿಗೆ ವರ್ಗಾವಣೆ ಮಾಡಬಹುದೆಂದು ಮಾರಾಟಾಧಿಕಾರಿಯವರು ದಿನಾಂಕ:31–08–2010 ರಂದು ಪತ್ರದ ಮೂಲಕ ಪ್ರಸ್ತಾವನೆ ಸಲ್ಲಿಸಿದ್ದು, ತದನಂತರ ಡಿಕ್ರಿದಾರ ಬ್ಯಾಂಕಿನ ಪ್ರಧಾನ ವ್ಯವಸ್ಥಾಪಕರು ದಿನಾಂಕ :11–10–2010 ರ ಪತ್ರದ ಮೂಲಕ 3ನೇಯ ಹಾಗೂ 8ನೇಯ ತೀರ್ಪು ಸಾಲಗಾರರ ಆಸ್ತಿಯನ್ನು ಡಿಕ್ರಿದಾರ ಬ್ಯಾಂಕಿಗೆ ವರ್ಗಾವಣೆ ಮಾಡಿಕೊಡಬೇಕೆಂದು ವಿನಂತಿಸಿಕೊಂಡಿರುತ್ತಾರೆ. ಇದರೊಂದಿಗೆ ಬ್ಯಾಂಕಿನ ಆಡಳಿತ ಮಂಡಳಿ ಸಭೆ ದಿನಾಂಕ:05–09–2010 ರ ನಡವಳಿಕೆಗಳ ಪ್ರತಿಯನ್ನು ಸಲ್ಲಿಸಿದ್ದಾರೆ.

ಬ್ಯಾಂಕಿನ ಮಾರಾಟಾಧಿಕಾರಿಯವರು ಹಾಗೂ ಡಿಕ್ರಿದಾರ ಬ್ಯಾಂಕಿನ ಪ್ರಧಾನ ವ್ಯವಸ್ಥಾಪಕರು ಸಲ್ಲಿಸಿದ ಅರ್ಜಿಗಳನ್ನು ಪುರಸ್ಕರಿಸಿ 3ನೇಯ ಹಾಗೂ 8ನೇಯ ತೀರ್ಪು ಸಾಲಗಾರರಿಗೆ ಈ ಕಚೇರಿಯ ಸಮ ಕ್ರಮಾಂಕದ ದಿನಾಂಕ:18–10–2010 ರ ನೋಟೀಸು ನೀಡಿ, ಡಿಕ್ರಿದಾರ ಬ್ಯಾಂಕಿಗೆ ಪಾವತಿಸಲು ಬಾಕಿ ಇರುವ ಸಾಲದ ಮೊತ್ತವನ್ನು ಸದರ ನೋಟೀಸು ಮುಟ್ಟಿದ 1 ತಿಂಗಳೊಳಗಾಗಿ ಸಂದಾಯ ಮಾಡತಕ್ಕದೆಂದು ಅಥವಾ ಸಾಲದ ಬಾಕಿ ಹಣವನ್ನು ವಸೂಲಾಧಿಕಾರಿಯವರ ಕಚೇರಿಯಲ್ಲಿ ಠೇವಣಿ ಮಾಡತಕ್ಕದೆಂದು ತಿಳಿಸಲಾಗಿದ್ದು , ತಪ್ಪಿದಲ್ಲಿ ಡಿಕ್ರಿ ಮತ್ತು ಆಮಲ್ಜಾರಿ ಹುಕುಂ ಹೊಂದಿರುವ ರಡ್ಡಿ ಸಹಕಾರ ಬ್ಯಾಂಕ ನಿಯಮಿತ, ಧಾರವಾಢ ಇವರಿಗೆ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ರ ಕಲಂ 101– ಬಿ ರನ್ವಯ ಮಾರಾಟ ಮಾಡಲಾಗದ ಆಸ್ತಿಗಳನ್ನು ಬ್ಯಾಂಕಿಗೆ ವರ್ಗಾವಣೆ ಮಾಡಲಾಗುವದೆಂದು ನೋಟೀಸನ್ನು ನೊಂದಣೆ ಅಂಚೆ ಮೂಲಕ ಕಳಿಸಲಾಗಿತ್ತು. ಈ ನೋಟೀಸುಗಳು “Not claimed” , ಎಂಬ ಅಂಚೆ ಶರಾದೊಂದಿಗೆ ಮರಳಿ ಬಂದಿರುವುದರಿಂದ ಸದರ ನೋಟೀಸುಗಳು ಅವರಿಗೆ ಜಾರಿಯಾಗಿವೆ ಎಂದು ನಿರ್ಣಯಿಸಿದೆ. ಇದರಿಂದಾಗಿ ತೀರ್ಪು ಸಾಲಗಾರರು ಡಿಕ್ರಿದಾರ ಬ್ಯಾಂಕಿನ ಸಾಲ ಮರುಪಾವತಿ ಮಾಡಲು ವಿಫಲರಾಗಿರುತ್ತಾರೆ.

ನೋಟೀಸಿನ ಪ್ರಕಾರ ಸಾಲದ ಬಾಕಿ ಪೂರ್ಣ ಮೊತ್ತವನ್ನು ಡಿಕ್ರಿದಾರ ಬ್ಯಾಂಕಿಗೆ ಸಂದಾಯ ಮಾಡಲು ಅಥವಾ ವಸೂಲಾಧಿಕಾರಿಯವರ ಕಚೇರಿಯಲ್ಲಿ ಠೇವಣಿ ಮಾಡಲು ವಿಫಲರಾದ ಪ್ರಯುಕ್ತ , ಡಿಕ್ರಿದಾರ ಬ್ಯಾಂಕಿಗೆ ಆದಾರವಾಗಿರುವ ಶೆಡ್ಯೂಲ್ ನಲ್ಲಿ ಕಾಣಿಸಿರುವ , ತೀರ್ಪುಬಾಕಿದಾರರ ಸ್ಥಿರಾಸ್ತಿಗಳನ್ನು ಡಿಕ್ರಿ ಹೋಲ್ಡರ್ ರಡ್ಡಿ ಸಹಕಾರ ಬ್ಯಾಂಕ ನಿಯಮಿತ, ಧಾರವಾಡ ಇವರ ಹೆಸರಿಗೆ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ರ ಕಲಂ 101–ಬಿ ಮತ್ತು ಕರ್ನಾಟಕ ಸಹಕಾರ ಸಂಘಗಳ ನಿಯಮಗಳು 1960 ರ ನಿಯಮ 38 ಎ (5) ರಪ್ರಕಾರ ವರ್ಗಾವಣೆ ಮಾಡಲು ಈ ಮೂಲಕ ಆದೇಶಿಸಲಾಗಿದೆ. ಹಾಗೂ ನಿಯಮ 38 ಎ(5) ರ ಅಡಿಯಲ್ಲಿ ನಮೂನೆ 8 ರಲ್ಲಿ ಕಲಂ 101 ಬಿ ಪ್ರಕರಣದ ಮೇರೆಗೆ ಸ್ಥಿರಾಸ್ತಿಗಳನ್ನು ಖರೀದಿಸಲು ಖರೀದಿದಾರರು ಇಲ್ಲದೇ ಇರುವುದರಿಂದ ಮಾರಾಟ ಮಾಡಲಾಗದ ಆಸ್ತಿಯ ವರ್ಗಾವಣೆ ಪ್ರಮಾಣ ಪತ್ರವನ್ನು ನೀಡಲಾಗಿದೆ.

– : ನಮೂನೆ 8 : –

ಕಲಂ 101 ಬಿ ಮೇರೆಗೆ ಸ್ವತ್ತು ವರ್ಗಾವಣೆ ಪ್ರಮಾಣ ಪತ್ರ

ಅ.ಬ. ಪ್ರಕರಣ ಸಂಖ್ಯೆ :639 , 640 /08–09, ದಿನಾಂಕ : 06–04–2011

ಸುರೇಶ ಗಂಗಾಧರರಾವ ಜೋಶಿ, ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಹಾಗೂ ನಿ.441 ರನ್ವಯ ವಸೂಲಾಧಿಕಾರಿ, ರಡ್ಡಿ ಸಹಕಾರ ಬ್ಯಾಂಕ ನಿಯಮಿತ, ಧಾರವಾಡ ಆದ ನಾನು ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ರ ಕಲಂ 101–ಬಿ ಮತ್ತು ಕರ್ನಾಟಕ ಸಹಕಾರ ಸಂಘಗಳ ನಿಯಮಗಳು 1960 ರ ನಿಯಮ 38 ಎ (5) ರನ್ವಯ ದತ್ತವಾಗಿರುವ ಅಧಿಕಾರವನ್ನು ಚಲಾಯಿಸಿ, ವ್ಯಾಜ್ಯ ಸಂಖ್ಯೆ ಜೆಆರ್‌ಡಿ /ಯುಬಿಎಫ್/ 5127, 5128/2008–09 ರಲ್ಲಿ ದಿನಾಂಕ:02–03–2009 ರಂದು ತೀರ್ಪು ಪಡೆದು ಅನಂತರ ಅಮಲ್ಜಾರಿ ಪ್ರಕರಣ ಸಂಖ್ಯೆ639 , 640 /08–09 , ದಿನಾಂಕ: 17–03–2009 ರ ಅಡಿಯಲ್ಲಿ ತೀರ್ಪು ಬಾಕಿದಾರರಾದ ಶ್ರೀ ಕಾಂತರಾಜ ತವನೆ ಹಾಗೂ ಶ್ರೀ ಕಿರಣ ತವನೆ ಇವರಿಗೆ ಸೇರಿದ ಹಾಗೂ ಡಿಕ್ರಿದಾರ

ಬ್ಯಾಂಕಿಗೆ ಆಧಾರವಾಗಿರುವ ಈ ಕೆಳಗೆ ವಿವರಿಸಿದ ಶೆಡ್ಯೂಲ ಸ್ಥಿರಾಸ್ತಿಗಳನ್ನು ಬಹಿರಂಗ ಹರಾಜಿನಲ್ಲಿ ಖರೀದಿಸುವವರು ಇಲ್ಲದೇ ಮಾರಾಟವಾಗದೇ ಇರುವ ಕಾರಣ , ರಡ್ಡಿ ಸಹಕಾರ ಬ್ಯಾಂಕ ನಿಯಮಿತ, ಧಾರವಾಡ ಈ ಬ್ಯಾಂಕಿಗೆ ಈ ಕೆಳಗೆ ನಮೂದಿಸಿದ ಶರತ್ತುಗಳು ಮತ್ತು ನಿಯಮಗಳಿಗೆ ಒಳಪಟ್ಟು ವರ್ಗಾವಣೆ ಮಾಡಲಾಗಿದೆ.

ವರ್ಗಾವಣೆ ಮಾಡಲಾಗಿರುವ ಸ್ಥಿರ ಸ್ವತ್ತುಗಳ ವಿವರ

ಜಿಲ್ಲೆ	ತಾಲೂಕ	ಹೋಬಳಿ/ ಗ್ರಾಮ	ರಿ.ಸರ್ವೆ ನಂಬರ	ಕ್ಷೇತ್ರ ಎ –ಗುಂ.	ಆಕಾರ	ಸ್ಥಿರಾಸ್ತಿಯ ಮಾಲಿಕರ ಹೆಸರು
ಚಿತ್ರದುರ್ಗ	ಹೊಳಲ್ಕೆರೆ	ರಾಮಗಿರಿ/ದೊಗ್ಗನಾಳು	95/2	02– 01	6–41	1) ಟಿ. ಕಾಂತರಾಜ ಬಿನ್ ಟಿ. ಬೈರಪ್ಪ
ಚಿತ್ರದುರ್ಗ	ಹೊಳಲ್ಕೆರೆ	ರಾಮಗಿರಿ/ದುಮ್ಮಿ	2/5	02– 26	0–52	1) ಟಿ. ಕಾಂತರಾಜ ಬಿನ್ ಟಿ. ಬೈರಪ್ಪ 2) ಟಿ ಕಿರಣ ಬಿನ್ ಟಿ. ಬೈರಪ್ಪ

: ಆಸ್ತಿ ವರ್ಗಾವಣೆಯ ಶರತ್ತುಗಳು :

1) ತೀರ್ಪು ಬಾಕಿದಾರರು ಡಿಕ್ರಿದಾರ ಬ್ಯಾಂಕಿಗೆ ಸಂದಾಯ ಮಾಡಬೇಕಾದ ಸಾಲದ ಬಾಕಿ ಆಸಲು , ಬಡ್ಡಿ , ಸುಸ್ತಿ ಬಡ್ಡಿ ಮತ್ತು ಇತರೆ ಖರ್ಚುಗಳನ್ನು ಪೂರ್ಣವಾಗಿ ಬ್ಯಾಂಕಿಗೆ ಪಾವತಿಸಿದಲ್ಲಿ , ಬ್ಯಾಂಕು ತನಗೆ ಈ ಮೂಲಕವಾಗಿ ವರ್ಗಾವಣೆ ಮಾಡಲಾದ ಮೇಲ್ಕಂಡ ಸ್ಥಿರಾಸ್ತಿಗಳನ್ನು ತೀರ್ಪು ಬಾಕಿದಾರನಿಗೆ ಬಿಟ್ಟು ಕೊಡತಕ್ಕದ್ದು.

2) ಉಪನೊಂದಣಾಧಿಕಾರಿ , ಹೊಳಲ್ಕೆರೆ ಇವರು ದಿನಾಂಕ : 02–05–2009 ರಂದು ನೀಡಿದ ಮೌಲ್ಯಮಾಪನ ವಿವರಗಳ ಆಧಾರದ ಮೇಲೆ ದುಮ್ಮಿ ಗ್ರಾಮದ 2ಎ–29ಗುಂ. ಇದರ ಮೌಲ್ಯ ಮಾಪನವನ್ನು ಪ್ರತಿ ಎಕರೆಗೆ ರೂ.1,56,000/– ದಂತೆ ರೂ.4,25,100/–, ದೊಗ್ಗನಾಳು ಗ್ರಾಮದ 2ಎ–01ಗುಂ. ಇದರ ಮೌಲ್ಯ ಮಾಪನವನ್ನು ಪ್ರತಿ ಎಕರೆಗೆ ರೂ.42,000/– ದಂತೆ ರೂ.85,050/– , ಒಟ್ಟು ರೂ.5,10,150/– ಮೊತ್ತಕ್ಕೆ ನಿಗದಿ ಪಡಿಸಲಾಗಿದೆ. ತೀರ್ಪು ಬಾಕಿದಾರನಿಂದ ಬ್ಯಾಂಕಿಗೆ ದಿನಾಂಕ :18–10–2010 ರಂದು ಡಿಕ್ರಿದಾರ ಬ್ಯಾಂಕಿಗೆ ಬರಬೇಕಾದ ಸಾಲದ ಬಾಕಿ ರೂ.62,39,583/– ರ ಪೈಕಿ ಮೇಲ್ಕಂಡ ಸ್ಥಿರಾಸ್ತಿಗಳ ಮೌಲ್ಯವನ್ನು ರೂ.5,10,150/– ಗಳಿಗೆ ಈ ಸ್ವತ್ತುಗಳನ್ನು ಬ್ಯಾಂಕಿಗೆ ವರ್ಗಾಯಿಸಲಾಗಿದೆ. ಹಾಗೂ ತೀರ್ಪು ಬಾಕಿದಾರರಿಂದ ಬರಬೇಕಾದ ಭಾಗಶ: ಮೊತ್ತಕ್ಕೆ ಈ ಸ್ವತ್ತುಗಳನ್ನು ಡಿಕ್ರಿದಾರ ಬ್ಯಾಂಕಿಗೆ ವರ್ಗಾಯಿಸಲಾಗಿದೆ.

3) ವರ್ಗಾಯಿಸಲಾದ ಆಸ್ತಿ ನಿರ್ವಹಣೆ ಮತ್ತು ಮರು ಮಾರಾಟದ ಸಂಬಂಧ , ಬ್ಯಾಂಕು ಸಹಕಾರ ಸಂಘಗಳ ನಿಯಮ 38 ಎ ರ ಅಡಿಯಲ್ಲಿನ ವಿಧಿವಿಧಾನಗಳನ್ನು ಪಾಲಿಸತಕ್ಕದ್ದು .

4) ಮ್ಯಾನೇಜರ್, ಮಲ್ಲಾಡಿಹಳ್ಳಿ, ವ್ಯವಸಾಯ ಸೇವಾ ಸಹಕಾರ ಬ್ಯಾಂಕ ನಿಯಮಿತ, ದೊಗ್ಗನಾಳು ಇವರು ದಿನಾಂಕ:21–05–2009 ರಂದು ಮೇಲ್ಕಂಡ ಸ್ಥಿರಾಸ್ತಿಗಳ ಮೇಲೆ ಯಾವುದೇ ಸಾಲ ಇರುವುದಿಲ್ಲ ಎಂದು ಪ್ರಮಾಣ ಪತ್ರ ನೀಡಿರುತ್ತಾರೆ.

5) ವರ್ಗಾವಣೆಯಾದ ಆಸ್ತಿಗಳನ್ನು ಬ್ಯಾಂಕು ಮಾರಾಟ ಮಾಡುವ ಪೂರ್ವದಲ್ಲಿ ಈ ಕಚೇರಿಯ ಅನುಮತಿ ಪಡೆಯತಕ್ಕದ್ದು.

6) ತೀರ್ಪು ಬಾಕಿದಾರರು ಸ್ಥಿರಾಸ್ತಿಗಳ ಕಬ್ಜಾವನ್ನು ಕೂಡಲೇ ಜಾರಿಗೆ ಬರುವಂತೆ ಡಿಕ್ರಿದಾರ ಬ್ಯಾಂಕಿಗೆ ವಹಿಸಿ ಕೊಡತಕ್ಕದ್ದು.

7) ಈ ಆದೇಶವನ್ನು ಮತ್ತು ಪ್ರಮಾಣ ಪತ್ರವನ್ನು ನನ್ನ ಸಹಿ ಹಾಗೂ ಈ ಕಚೇರಿಯ ಮುದ್ರೆಯೊಂದಿಗೆ ದಿನಾಂಕ : 06–04–2011 ರಂದು ಹೊರಡಿಸಲಾಗಿದೆ.

ಸ್ಥಳ : ಧಾರವಾಡ

ದಿನಾಂಕ:06–04–2011

ಪಿ.ಆರ್.445

ಎಸ್.ಜಿ. ಜೋಶಿ

ಸಹಕಾರ ಸಂಘಗಳ ಸಹಾಯಕ ನಿಬಂಧಕರು

ಹಾಗೂ ನಿ.441 ರನ್ವಯ ವಸೂಲಾಧಿಕಾರಿ.

ಅಧೀಕೃತ ಅಧಿಕಾರಿಗಳು ಹಾಗೂ ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಜ್ ಬಿಜಾಪೂರ ಜಿಲ್ಲೆ, ಬಿಜಾಪೂರ ರವರ ನ್ಯಾಯಾಲಯದಲ್ಲಿ

ಉಪಸ್ಥಿತರು: – ಎಸ್.ಎಂ.ಯಮಕನಮರಡ್ರಿ

ಪ್ರಾಧೀಕೃತ ಅಧಿಕಾರಿಗಳು ಹಾಗೂ ಅಬಕಾರಿ ಉಪ ಆಯುಕ್ತರು, ಬಿಜಾಪೂರ ಜಿಲ್ಲೆ, ಬಿಜಾಪೂರ.

ದಿನಾಂಕ : 02 ನೇ ಏಪ್ರಿಲ್–2011

ಜಿಲ್ಲಾ ಅಪರಾಧ ಸಂಖ್ಯೆ:80/2009–10.

ಅಬಕಾರಿ ಗುನ್ನೆ ನಂ: 04/2009–10. ದಿ: 25–09–2009

ಪಿರ್ಯಾಧಿದಾರರು :

ಕರ್ನಾಟಕ ಸರ್ಕಾರ ಇವರ ಪರವಾಗಿ

ಅಬಕಾರಿ ಉಪ ನಿರೀಕ್ಷಕರು ಸಿಂದಗಿ ವಲಯ

(ಸಹಾಯಕ ಅಭಿಯೋಜಕ ನಿರ್ದೇಶಕರು ವಿಜಾಪೂರ)

ವಿರುದ್ಧ :–

ಆರೋಪಿತರು :

ಶಿವಪುತ್ರಪ್ಪ ದುಂಡಪ್ಪ ವಾಲಿಕಾರ
(ಇವರ ಪರ ವಕೀಲರಾದ ಶ್ರೀ.ಎಸ್.ಜಿ.ಯಳವಂತಗಿ)

(1) ಅಪರಾಧ ಘಟಿಸಿದ ದಿನಾಂಕ :–	25–09–2009
(2) ವರದಿ ಮಾಡಿದ ದಿನಾಂಕ :–	25–09–2009
(3) ಆರೋಪಿತನನ್ನು ಔಪಚಾರಿಕ ದಸ್ತಗಿರಿ ಮಾಡಿದ ದಿನಾಂಕ:–	21–10–2009.
(4) ಮಾನ್ಯ ಸತ್ರ ನ್ಯಾಯಾಲಯ ನಿರೀಕ್ಷಣಾ ಜಾಮೀನು ದಿನಾಂಕ:–	21–10–2009.
(5) ಫಿರ್ಯಾಧಿದಾರರ ಹೆಸರು	ಸುಭಾಷಸಿಂಗ ಅಬಕಾರಿ ಉಪ ನಿರೀಕ್ಷಕರು ಸಿಂದಗಿ ವಲಯ
(6) ಪ್ರಕರಣದ ವಿಚಾರಣೆ ದಿನಾಂಕ :–	29–06–2010.
(7) ಪ್ರಕರಣದ ವಿಚಾರಣೆ ಮುಕ್ತಾಯ ದಿನಾಂಕ :–	19–11–2010.

(8) ಅಬಕಾರಿ ಕಾಯ್ದೆ 32, 38(ಎ) ಅಡಿಯಲ್ಲಿ ಅಪರಾಧ.

ಪ್ರಕರಣದ ಸಂಕ್ಷಿಪ್ತ ಸಾರಾಂಶ ಏನೆಂದರೆ, :–

1) ಅಬಕಾರಿ ಉಪ ನಿರೀಕ್ಷಕರು ಸಿಂದಗಿ ವಲಯ ಸಿಂದಗಿ ಇವರು ಆರೋಪಿತನು ದ್ವಿಚಕ್ರ ವಾಹನ ನಂ:ಕೆಎ–32–ಎಸ್–5283 ರ ಮೇಲೆ ಅಕ್ರಮವಾಗಿ ಎರಡು ಕೈಚೀಲಗಳಲ್ಲಿ 180 ಎಂಎಲ್‌ದ ಎ–1 ವಿಷ್ಕಿಯ ಲೇಬಲ್ ಅಂಟಿಸಿದ ಮದ್ಯ ತುಂಬಿದ 24 ಬಾಟಲಿಗಳು, ಓರಿಜಿನಲ್ ವಿಷ್ಕಿಯ ಲೇಬಲ್ ಅಂಟಿಸಿದ 24 ಮದ್ಯ ತುಂಬಿದ ಬಾಟಲಿಗಳು ಒಟ್ಟು 48 ಬಾಟಲಿಗಳನ್ನು ಸ್ವಾಧೀನ ಹೊಂದಿ, ಅದಕ್ಕೆ ಯಾವುದೇ ಪರವಾನಿಗೆ ಇಲ್ಲದೇ ಸಾಗಾಣಿಕೆ ಮಾಡಲು ಪ್ರಯತ್ನಿಸಿದ ಮೇರೆಗೆ ಎರಡು ಕೈಚೀಲಗಳಲ್ಲಿ ಇರುವ ಎ–1 ವಿಷ್ಕಿಯ ಲೇಬಲ್ ಅಂಟಿಸಿದ ಮದ್ಯ ತುಂಬಿದ 24 ಬಾಟಲಿಗಳು, ಓರಿಜಿನಲ್ ವಿಷ್ಕಿಯ ಲೇಬಲ್ ಅಂಟಿಸಿದ 24 ಮದ್ಯ ತುಂಬಿದ ಬಾಟಲಿಗಳನ್ನು ಮತ್ತು ದ್ವಿಚಕ್ರ ವಾಹನ ನಂ:ಕೆಎ–32–ಎಸ್–5283ನ್ನು ಜಪ್ತು ಮಾಡಿಕೊಂಡು, ಕರ್ನಾಟಕ ಅಬಕಾರಿ ಕಾಯ್ದೆ 1965 ರ ಕಲಂ 32, 38(ಎ) ರೀತ್ಯಾ ಅಪರಾಧ ಮಾಡಿರುವುದಾಗಿ ಅಭಿಯೋಜಕ ಪ್ರಕರಣವನ್ನು ದಾಖಲಿಸಿಕೊಂಡಿರುತ್ತಾರೆ.

2) ಅಬಕಾರಿ ಉಪ ನಿರೀಕ್ಷಕರು ಸಿಂದಗಿ ವಲಯ ಇವರು ಸದರಿ ಪ್ರಕರಣದಲ್ಲಿ ಜಪ್ತಾದ ವಸ್ತುಗಳನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ವಿಲೇವಾರಿ ಮಾಡುವದಕ್ಕಾಗಿ ಅಭಿಯೋಜಕ ದಾಖಲೆಗಳನ್ನು ಒದಗಿಸಿ, ಈ ನ್ಯಾಯಾಲಯಕ್ಕೆ ವರದಿ ಸಲ್ಲಿಸಿರುತ್ತಾರೆ. ಸದರಿ ವರದಿಯನ್ನು ಪರಿಶೀಲಿಸಲಾಗಿ, ರಾಸಾಯನಿಕ ತಜ್ಞರ ವರದಿಯ ಪ್ರತಿ ಹಾಗೂ ಉಳಿದ ದಾಖಲಾತಿಗಳನ್ನು ಸಲ್ಲಿಸಿದ್ದು, ಶ್ಯಾಂಪಲ್‌ದಲ್ಲಿ ಮದ್ಯಸಾರದ ಅಂಶ ಕಂಡು ಬಂದಿರುತ್ತೆಂದು ರಸಾಯನಿಕ ತಜ್ಞರ ವರದಿ ಸಂ:ಸಿಸಿಎಲ್–6090/2009 ದಿನಾಂಕ : 30–11–2009 ರಲ್ಲಿ ಅಭಿಪ್ರಾಯಪಟ್ಟಿರುತ್ತಾರೆ. ಮತ್ತು ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ಗುಲಬರ್ಗಾ ಇವರ ವರದಿಯಲ್ಲಿ ಜಪ್ತಾದ ದ್ವಿಚಕ್ರ ವಾಹನ ನಂ:ಕೆಎ–32–ಎಸ್–5283ವು ಶಿವಪುತ್ರ ದುಂಡಪ್ಪ ವಾಲಿಕಾರ ಸಾ}ಹಾವಳಗಿ, ತಾ}ಅಫಜಲ್‌ಪೂರ ಜಿ}ಗುಲಬರ್ಗಾ ಇವರು ನೋಂದಾಯಿತ ವಾಹನ ಮಾಲಿಕರು ಇರುವುದಾಗಿ ತಿಳಿಸಿರುತ್ತಾರೆ.

3) ಜಪ್ತಾದ ವಾಹನದಲ್ಲಿ ಅಕ್ರಮವಾಗಿ ಮದ್ಯ ಸಾಗಾಣಿಕೆ ಮಾಡಿರುವುದಿಲ್ಲಾವೆಂದು ನಿರೂಪಿಸಲು ಸದರಿ ವಾಹನದ ನೋಂದಾಯಿತ ಮಾಲಿಕರಾದ ಶಿವಪುತ್ರ ದುಂಡಪ್ಪ ವಾಲಿಕಾರ ಸಾ}ಹಾವಳಗಿ, ತಾ}ಅಫಜಲ್‌ಪೂರ ಜಿ}ಗುಲಬರ್ಗಾ ಇವರಿಗೆ ದಿನಾಂಕ : 09–12–2009 ರಂದು ಈ ಪ್ರಾಧೀಕಾರದಿಂದ ವಾಹನ ಮಾಲಿಕರಿಗೆ ಕರ್ನಾಟಕ ರಾಜ್ಯ ಅಬಕಾರಿ ಕಾಯ್ದೆ 1965 ರ ಕಲಂ 43 (ಬಿ) ಕೆಳಗಡೆ ಕಾರಣ ಕೇಳುವ ನೋಟಿಸನ್ನು ಹೊರಡಿಸಲಾಗಿರುತ್ತದೆ. ಸದರಿ ಕಾರಣ ಕೇಳುವ ನೋಟಿಸನ್ನು ದಿನಾಂಕ : 14–12–2009 ರಂದು ಪಡೆದುಕೊಂಡಿರುತ್ತಾರೆ. ಈ ನೋಟಿಸು ತಲುಪಿದರು ವಾಹನ ಮಾಲೀಕರಾಗಲೀ ಅಥವಾ ಅವರು ಅಧಿಕಾರ ನೀಡಿದ ಯಾವುದೇ ವ್ಯಕ್ತಿಯಾಗಲೀ ಈ ನ್ಯಾಯಾಲಯಕ್ಕೆ ಹಾಜರಾಗಿ ಯಾವುದೇ ತರಹದ ವಿವರಣೆಯಾಗಲೀ ಅಥವಾ ಸಾಕ್ಷಿಗಳಾಗಲೀ ಸಲ್ಲಿಸಿರುವುದಿಲ್ಲಾ. ಇದರಿಂದ ವಾಹನ ಮಾಲೀಕರ ಈ ಪ್ರಾಧೀಕಾರದಿಂದ ವಿಚಾರಣೆ ನಡೆಸುವುದು ಇಚ್ಛಿವಿಲ್ಲವೆಂದು ಪರಿಗಣಿಸಿ, ಈ ಕೃತ್ಯವು ವಾಹನ ಮಾಲಿಕರ ತಿಳುವಳಿಕೆಯಿಂದಲೇ ನಡೆದಿರುವುದಕ್ಕೆ ಪುಷ್ಠಿ ನೀಡುತ್ತದೆ. ದ್ವಿಚಕ್ರ ವಾಹನ ನಂ:ಕೆಎ–32–ಎಸ್–5283ನ್ನು ದಿನಾಂಕ : 25–09–2009 ರಂದು ಜಪ್ತಾಗಿದ್ದು, 04 ತಿಂಗಳು ಕಳೆದರೂ ಈ ಪ್ರಾಧಿಕಾರ ಮುಂದೆ ವಾಹನ ಮಾಲಿಕರಾಗಲಿ ಅಥವಾ ಅವರು ಅಧಿಕಾರ ನೀಡಿದ ಯಾವದೇ ವ್ಯಕ್ತಿಯಾಗಲಿ ಜಪ್ತಾದ ವಾಹನವು ತನ್ನದೆಂದು ಯಾರು ಮುಂದೆ ಬಂದು ಮಾಲಿಕತ್ವ ಹಕ್ಕನ್ನು ಸ್ಥಾಪಿಸಿರುವುದಿಲ್ಲಾ. ತನಿಖಾಧಿಕಾರಿಗಳ ಕೋರಿಕೆಯಂತೆ ಸದರಿ ಜಪ್ತಾದ ವಾಹನವನ್ನು ಕಛೇರಿಯಲ್ಲಿ ನಿಲ್ಲಿಸಲಾಗಿದ್ದು, ಹವಾಮಾನದ ವೈಪರೀತ್ಯದಿಂದ ತನ್ನ ಮೌಲ್ಯ ಕಳೆದುಕೊಳ್ಳವ ಸಾಧ್ಯತೆ ಇರುವದರಿಂದ ಹಾಗೂ ಸರ್ಕಾರದ ಆದಾಯದ ಹಿತದೃಷ್ಟಿಯಿಂದ ಈ ಪ್ರಾಧೀಕಾರವು ದಿನಾಂಕ : 31–12–2009 ರಂದು ಪ್ರಕರಣದಲ್ಲಿ ಜಪ್ತಾದ ವಾಹನ ನಂ:ಕೆಎ–32–ಎಸ್–5283ನ್ನು ಮತ್ತು ಮದ್ಯ ತುಂಬಿದ ಬಾಟಲಿಗಳನ್ನು ಕರ್ನಾಟಕ ಅಬಕಾರಿ ಕಾಯ್ದೆ 43 (ಸಿ) ಕೆಳಗಡೆ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ಆದೇಶ ನೀಡಲಾಗಿರುತ್ತದೆ.

4) ಮಾನ್ಯ ಜಿಲ್ಲಾ ಸತ್ರ ನ್ಯಾಯಾಲಯ ಸದರಿ ಪ್ರಕರಣವನ್ನು ವಿಚಾರಣೆ ಕೈಗೆತ್ತಿಕೊಂಡು, ಈ ಪ್ರಾಧೀಕಾರದಿಂದ ದಿನಾಂಕ : 09–12–2010 ರಂದು ನೀಡಿದ ಕಾರಣ ಕೇಳುವ ನೋಟಿಸು ಮತ್ತು ದಿನಾಂಕ : 31–12–2010 ರಂದು ಹೊರಡಿಸಿ ಮುಟ್ಟುಗೋಲು ಆದೇಶವನ್ನು ಮೊಟಕುಗೊಳಿಸಿ, ಮೇಲ್ಮನವಿದಾರರಿಗೆ ಸೂಕ್ತ ಅವಕಾಶವನ್ನು ನಿಡಿ, ಪ್ರಕರಣವನ್ನು ಮರು ಪರಿಶೀಲನೆ ನಡೆಸಿ, ನಿಯಮಗಳನುಸಾರ ವಿಲೇವಾರಿ ಆದೇಶ ನೀಡಲು ಸೂಚಿಸಿ, ಮೇಲ್ಮನವಿಧಾರರು ದಿನಾಂಕ : 15–03–2003 ರೊಳಗಾಗಿ ಪ್ರಾಧೀಕಾರದ ಮುಂದೆ ಹಾಜರಾಗುವಂತೆ ಆದೇಶ ಹೊರಡಿಸಿರುತ್ತದೆ.

5) ಮೇಲ್ಮನವಿದಾರರಾದ ಈ ಪ್ರಾಧಿಕಾರಕ್ಕೆ ಹಾಜರಾಗಿ ನ್ಯಾಯಾಲಯದ ಆದೇಶ ಪ್ರತಿಯನ್ನು ಸಲ್ಲಿಸಿ, ವಾಹನವನ್ನು ತಾತ್ಕಾಲಿಕವಾಗಿ ಬಿಡುಗಡೆ ಮಾಡಲು ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಅದರಂತೆ ಈ ಪ್ರಾಧೀಕಾರವು ಮಾನ್ಯ ಸತ್ರ ನ್ಯಾಯಾಲಯದ ಆದೇಶದಂತೆ ಸದರಿ ಪ್ರಕರಣವನ್ನು ಮರು ವಿಚಾರಣೆಗೆ ನಿಗಧಿ ಪಡಿಸಲಾಯಿತು.

6) ಅಭಿಯೋಜಕರು ತಮ್ಮ ಕೇಸನ್ನು ರುಜುವಾತು ಪಡಿಸಲು ಪ್ರಾಸಾ–1 ಮತ್ತು 2 ಸಾಕ್ಷಿಗಳನ್ನು ವಿಚಾರಣೆ ಮಾಡಿದ್ದು, ನಿಶಾನೆ–ಪಿ–1 ರಿಂದಾ 5, ನಿಶಾನೆ–1(ಎ), ನಿಶಾನೆ–1(ಬಿ),ನಿಶಾನೆ–2(ಎ), ನಿಶಾನೆ–3(ಎ), ಎಂ ಓ–1 ಮತ್ತು 2 ಸಾಂಕೇತಿಕವಾಗಿ ಗುರುತಿಸಲಾಗಿದೆ.

7) ಅಭಿಯೋಜಕ ಕೇಸಿನ ಸಾಕ್ಷಿಗಳ ವಿಚಾರಣೆ ಮುಗಿದ ನಂತರ ಎದುರುದಾರರ ಪಾಟೀ ಸವಾಲುಗಳನ್ನು ದಾಖಲಿಸಲಾಗಿದೆ. ತದನಂತರ ಉಭಯ ವಕೀಲರ ವಾದ–ವಿವಾದ ಕೇಳಲಾಯಿತು.

8) ಅಭಿಯೋಜಕರು ಹಾಜರುಪಡಿಸಿರುವ ಸಾಕ್ಷಿಗಳ ಹೇಳಿಕೆಗಳು ನಿಶಾನೆಯಾಗಿ ಗುರುತಿಕೊಂಡಿರುವ ದಾಖಲಾತಿಗಳು ಮತ್ತು ಉಭಯ ವಕೀಲರು ಮಂಡಿಸಿದ ವಾದ–ವಿವಾದದ ಮೇರೆಗೆ ಈ ನ್ಯಾಯಾಲಯದ ನಿರ್ಧರಿಸಬೇಕಾಗಿರುವ ಅಂಶಗಳು ಈ ಕೆಳಗಿನಂತಿರುತ್ತವೆ.

–:ಮೊದಲನೆಯ ವಿವಾದಾಂಶ: ಸಕಾರಾತ್ಮಕ (ಹೌದು)

ದಿನಾಂಕ:25–09–2009 ರಂದು ಸದರಿ ವಾಹನದಲ್ಲಿ ಅಕ್ರಮವಾಗಿ ಮದ್ಯ ತುಂಬಿದ ಬಾಟಲಿಗಳು ಸಾಗಾಣಿಕೆ ಮಾಡಲಾಗಿದೆಯೇ? ಇದು ಕರ್ನಾಟಕ ಅಬಕಾರಿ ಕಾಯ್ದೆ 1965 ರ ಕಲಂ 32, 38(ಎ) ರೀತ್ಯಾ ಅಪರಾಧವಾಗಿದೆಯೇ? ಅಥವಾ ಇಲ್ಲಾ?

–:ಎರಡನೆಯ ವಿವಾದಾಂಶ: ನಕಾರಾತ್ಮಕ (ಇಲ್ಲ)

ಸದರಿ ವಾಹನದಲ್ಲಿ ಅಕ್ರಮ ಮದ್ಯ ತುಂಬಿದ ಬಾಟಲಿಗಳು ಸಾಗಾಣಿಕೆ ಮಾಡಲಾಗಿರುವ ಬಗ್ಗೆ ತನ್ನ ತಿಳುವಳಿಕೆಗೆ ಬಾರದೇ ಅಥವಾ ತಾನು ಶಾಮೀಲಾಗದೇ ನಡೆದಿದೆ ಎಂಬುದರ ಬಗ್ಗೆ ಅರ್ಜಿದಾರನಾಗಲೀ ಅಥವಾ ವಾಹನ ಚಾಲಕರಾಗಲೀ ತೃಪ್ತಿಕರವಾಗಿ ನಿರೂಪಿಸಿರುತ್ತಾರೆಯೇ? ಅಥವಾ ಇಲ್ಲಾ?

–:ಮೂರನೆಯ ವಿವಾದಾಂಶ:ಮುಟ್ಟುಗೋಲು ಹಾಕಿಕೊಳ್ಳಲು ಯೋಗ್ಯವಾಗಿದೆ. (ಹೌದು)

ವಾಹನವು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲಿಕ್ಕೆ ಯೋಗ್ಯವಾಗಿದಿಯೇ? ಅಥವಾ ಇಲ್ಲಾ?

–: ಕಾರಣಗಳು :–

–:ಮೊದಲನೆಯ ವಿವಾದಾಂಶಕ್ಕೆ :–

ಅಭಿಯೋಜಕ ಸಾಕ್ಷಿ ನುಡಿದ ಪಿರ್ಯಾಧಿದಾರರು ನೀಡಿರುವ ಹೇಳಿಕೆಯನ್ನು ಗಮನಿಸಿದಾಗ ಮಹಜರದಲ್ಲಿ ಇರುವ ಅಂಶಗಳನ್ನು ಪ್ರಬಲವಾಗಿ ಸಮರ್ಥಿಸುತ್ತಾರೆ. ಮಾಲು ಜಪ್ತು ಹಾಗೂ ಪಂಚರ ಸಾಕ್ಷಿದಾರರು ಸಾಕ್ಷಿಯು ಕೂಡಾ ಪಿರ್ಯಾಧಿಯ ಸಾಕ್ಷಿಗೆ ಪೂರಕವಾಗಿದೆ. ಸದರಿ ಗುನ್ಹೆ ಘಟಿಸಿದ ಸ್ಥಳದಲ್ಲಿ ಜನರನ್ನು ಸದರಿ ಪ್ರಕರಣದಲ್ಲಿ ಪಂಚರಾಗಲು ಅಧಿಕಾರಿ ಹಾಗೂ ಸಿಬ್ಬಂಧಿ ಕೇಳಿದ್ದು, ಯಾರು ಮುಂದೆ ಬಾರದೇ ಇದ್ದರಿಂದ ಸರ್ಕಾರಿ ನೌಕರರು ಪಂಚರಾಗಿದ್ದು ಇರುತ್ತದೆ ಎಂಬ ಅಂಶವನ್ನು ಸಾಕ್ಷಿಗಳ ಹೇಳಿಕೆಗಳಿಂದ ಒಪ್ಪಬಹುದಾಗಿದೆ. ಅವರು ಸಾಕ್ಷಿ ಹೇಳುತ್ತಾರೆ ಎಂಬ ಆರೋಪಿತರ ಪರ ವಕೀಲರು ಲಿಖಿತ ವಾದವನ್ನು ತಳ್ಳಿ ಹಾಕಬಹುದಾಗಿದೆ. ಪ್ರಕರಣದಲ್ಲಿ ಆರೋಪಿಸಿರುವ ಅಂಶವಾದ ಸದರಿ ವಾಹನದಲ್ಲಿ ಸಾಗಾಣಿಕೆಗೋಸ್ಕರ ಸಂಗ್ರಹಿಸಲ್ಪಟ್ಟ ಮದ್ಯ ತುಂಬಿದ ಬಾಟಲಿಗಳು ಎಂಬುದು ರಸಾಯನಿಕ ವಿಶ್ಲೇಷಣೆಯ ವರದಿಯಿಂದ ದೃಢಪಟ್ಟಿರುತ್ತದೆ. ಸದರಿ ಮದ್ಯ ತುಂಬಿದ ಬಾಟಲಿಗಳು ಸಾಗಾಣಿಕೆಗೆ ಸಂಬಂಧಪಟ್ಟ ದಾಖಲಾತಿಗಳು ವಾಹನದಲ್ಲಿ ಇಲ್ಲದಿರುವ ಅಂಶವನ್ನು ಗಮನಿಸಿದಾಗ ಸದರಿ ವಾಹನದಲ್ಲಿ ಅಕ್ರಮವಾಗಿಯೇ ಮದ್ಯ ತುಂಬಿದ ಬಾಟಲಿಗಳು ಸಾಗಾಣಿಕೆಯಾಗಿರುವುದು ಸ್ಪಷ್ಟವಾಗಿ ಸಾಬೀತವಾಗಿದೆ. ಸದರಿ ವಾಹನದಲ್ಲಿ ಮದ್ಯ ತುಂಬಿದ ಬಾಟಲಿಗಳು ಸಾಗಿಸಿದ ಬಗ್ಗೆ ಎದುರುದಾರರಿಂದ ಯಾವುದೇ ರೀತಿಯ ಅಭ್ಯಂತರ ವ್ಯಕ್ತವಾಗಿರುವುದಿಲ್ಲಾ.

ಈ ಪ್ರಾಧೀಕಾರವು ಜಪ್ತಾದ ವಾಹನದಿಂದ ಅಬಕಾರಿ ಕಾಯ್ದೆ ಉಲ್ಲಂನೆಯಾಗಿದೆಯೇ ಎಂಬುದರ ಬಗ್ಗೆ ಮಾತ್ರ ವಿಚಾರಣೆ ನಡೆಸುತ್ತದೆ. ಪ್ರಕರಣದಲ್ಲಿಯ ಆರೋಪಿತರನು ಅಬಕಾರಿ ಕಾಯ್ದೆ ಉಲ್ಲಂಘನೆ ಮಾಡಿದ ಬಗ್ಗೆ ವಿಚಾರಣೆ ಆಗುವುದಿಲ್ಲಾ. ಆದ್ದರಿಂದ ಪಿಡಬ್ಲ್ಯು–1 ನ್ಯಾಯಾಲಯದಲ್ಲಿ ನೀಡಿದ ಸಾಕ್ಷಿಯನ್ನು ಆರೋಪಿತರ ಪರ ವಕೀಲರು ಹೇಳಿದಂತೆ ಇಲ್ಲಿ ಪರಿಗಣಿಸಲು ಸಾಧ್ಯವಿಲ್ಲಾ.

–:ಎರಡನೆಯ ವಿವಾದಾಂಶಕ್ಕೆ :–

ಮೊದಲನೆಯ ವಿವಾದಾಂಶದಿಂದ ಪಡೆದ ಉತ್ತರದಲ್ಲಿ ಸದರಿ ವಾಹನದಲ್ಲಿ ಅಕ್ರಮವಾಗಿ ಮದ್ಯ ತುಂಬಿದ ಬಾಟಲಿಗಳು ಸಾಗಾಣಿಕೆ ಮಾಡುತ್ತಿರುವದು ಸ್ಪಷ್ಟವಾಗಿ ಸಾಬೀತಾಗಿದ್ದು, ಶೋಧನಾಧಿಕಾರಿಗಳ ಆರೋಪಿ ಪರ ವಕೀಲರು ತಮ್ಮ ಲಿಖಿತವಾದ ಕಂಡಿಕೆ 4 ರಲ್ಲಿ ವಿವರಿಸಿದಂತೆ ವಿಧಿವಿಧಾನಗಳನ್ನು ಅನುಸರಿಸದೇ ಇರುವದನ್ನು ಒಪ್ಪಬಹುದಾದರೂ ಅವರು ಕಾಯ್ದೆ ಅನುಗುಣವಾಗಿ ಮಾಡಿದ ಕಾರ್ಯವನ್ನು ತಳ್ಳಿ ಹಾಕಲು ಯಾವುದೇ ಬಲವಾದ ಸಾಕ್ಷಾಧರಗಳು ಇಲ್ಲಾ. ಪ್ರಕರಣವು ವಾಹನದ ಮಾಲೀಕನ ತಿಳುವಳಿಕೆಯಿಂದ ಹಾಗೂ ಇತನ ಶಾಮೀಲಿನಿಂದಲೇ ಸದರಿ ವಾಹನದಲ್ಲಿ ಅಕ್ರಮ ಮದ್ಯ ತುಂಬಿದ ಬಾಟಲಿಗಳು ಸಾಗಾಣಿಕೆಗಾಗಿ ಇಟ್ಟಿರುವದು ಸ್ಪಷ್ಟವಾಗಿ ರುಜುವಾತ ಆಗಿದ್ದು, ವಾಹನ ಮಾಲೀಕನು ಗುನ್ಹೆ ಘಟಿಸಿದ ಸಮಯದಲ್ಲಿ ಪರಾರಿಯಾಗಿ ನಂತರ ನ್ಯಾಯಾಲಯದಿಂದ ನಿರಾಕ್ಷೇಪಣಾ ಜಾಮೀನು ಪಡೆದು ಕೊಂಡು ಅಬಕಾರಿ ಉಪ ನಿರೀಕ್ಷಕರ ಮುಂದೆ ಹಾಜರಾಗಿರುತ್ತಾನೆ. ಈ ಪ್ರಕರಣದಲ್ಲಿ ಗುನ್ಹೆ ಘಟಿಸಿದ ಸ್ಥಳದಿಂದ ಆರೋಪಿತ (ವಾಹನ ಮಾಲಿಕನು) ಓಡಿ ಹೋಗಿದ್ದರಿಂದ ಹಾಗೂ ಸದರಿಯವರು ಮಾನ್ಯ ನ್ಯಾಯಾಲಯದಿಂದ ಜಾಮೀನ ಪಡೆದಿರುವುದ್ದರಿಂದ ಆತನು ನೋಡುವ ಅಥವಾ ಗುರುತು ಹಿಡಿಯುವ ಭ್ರಮೆಯ ಬರುವುದಿಲ್ಲಾ. ಆದ್ದರಿಂದ ಆರೋಪಿತನು ಲಿಖಿತ ವಾದ ಕಂಡಿಕೆ 5 ರಲ್ಲಿ ಮಂಡಿಸಿದ ಅಂಶವನ್ನು ತಳ್ಳಿ ಹಾಕಲಾಗಿದೆ. ಕಾರಣ ಈ ಅಪರಾಧ ಬಗ್ಗೆ ವಾಹನದ ಮಾಲೀಕನಿಗೂ ಸಹ

ತಿಳುವಳಿಕೆ ಇದ್ದಿತೆಂಬುದು ತಿಳಿದು ಬರುತ್ತದೆ. ಅಲ್ಲದೇ ವಾಹನ ಮಾಲೀಕನ ತಿಳುವಳಿಕೆಯಿಂದಲೇ ವಾಹನದಲ್ಲಿ ಅಕ್ರಮವಾಗಿ ಮದ್ಯ ತುಂಬಿದ ಬಾಟಲಿಗಳು ಸಾಗಾಣಿಕೆ ಮಾಡಲಾಗಿರುತ್ತದೆ ಎಂಬುದು ಸಂದೇಹಾತೀತವಾಗಿ ರುಜುವಾತುವಾಗುತ್ತದೆ. ಇದನ್ನು ಅಲ್ಲಗಳೆಯಲು ಅರ್ಜಿದಾರನು ತನ್ನ ಪರ ಯಾವುದೇ ಸಾಕ್ಷಾಧಾರಗಳನ್ನು ನೀಡಿರುವುದಿಲ್ಲಾ.

ನಿಯಮ 43 (ಬಿ) (2) ರನ್ವಯ ಸ್ವತ: ವಾಹನದ ಮಾಲೀಕ ಅವರ ಪ್ರತಿನಿಧಿ ಮತ್ತು ವಾಹನ ಯಾರ ವಶದಲ್ಲಿತ್ತೋ ಆತನು ವಿವರಗಳು ವಾಹನದಲ್ಲಿ ಮದ್ಯ ಅಥವಾ ಅಮಲಿನ ಪದಾರ್ಥ ಸಾಗಾಣಿಕೆಯಾಗಿರುವುದರ ಬಗ್ಗೆ ತಮ್ಮಗಳ ಗಮನಕ್ಕೆ ಬಾರದೇ ಅಥವಾ ಶಾಮೀಲಾಗದೇ ಈ ಕೃತ್ಯವು ಸಂಭವಿಸಿದೆ. ಮತ್ತು ಇಂತಹ ಉಪಯೋಗದ ವಿರುದ್ಧ ತಾವು ಪ್ರತಿಯೊಬ್ಬರು ಎಲ್ಲ ರೀತಿಯ ಸಕಾರಣವಾದ ಮತ್ತು ಅಗತ್ಯವಾದ ಕ್ರಮಗಳನ್ನು ತೆಗದುಕೊಂಡಿರುವುದರ ಬಗ್ಗೆ ಪ್ರಾಧೀಕೃತ ಅಧಿಕಾರಿಗಳಿಗೆ ತೃಪ್ತಿಕರವಾಗಿ ಸಾಭೀತು ಪಡಿಸಬೇಕಾಗಿರುತ್ತದೆ. ಆದರೆ ಅರ್ಜಿದಾರರು ತಮ್ಮ ಹೇಳಿಕೆಯಿಂದಾಗಲೀ ಅಥವಾ ಸಾಕ್ಷಾಧಾರಗಳಿಂದಾಗಲೀ ನೀಡದೆ ಇರುವುದ್ದರಿಂದ ತಮ್ಮ ಹೊಣೆಗಾರಿಕೆಯನ್ನು ಈ ಪ್ರಾಧೀಕಾರಕ್ಕೆ ತೃಪ್ತಿಕರವಾಗಿ ಸಾಭೀತು ಪಡಿಸಿರುವುದಿಲ್ಲಾ.

–:ಮೂರನೇ ವಿವಾದಾಂಶಕ್ಕೆ :–

ಒಂದನೇ ಮತ್ತು ಎರಡನೇಯ ವಿವಾದಾಂಶದಿಂದ ಪಡೆದ ಉತ್ತರದಿಂದ ಪ್ರಕರಣದಲ್ಲಿ ಜಪ್ತು ಮಾಡಲ್ಪಟ್ಟ ವಾಹನವು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಯೋಗ್ಯವಾಗಿ ಕಂಡು ಬಂದಿರುವುದರಿಂದಾ ಈ ಕೆಳಕಂಡಂತೆ ಆದೇಶ.

ಆ ದೇ ಶ

ಶ್ರೀ.ಎಸ್.ಎಂ.ಯಮಕನಮರಡಿ ಪ್ರಾಧೀಕೃತ ಅಧಿಕಾರಿಗಳು ಹಾಗೂ ಅಬಕಾರಿ ಉಪ ಆಯುಕ್ತರು ಬಿಜಾಪೂರ ಜಿಲ್ಲೆ ಬಿಜಾಪೂರ ಆದ ನಾನು, ಕರ್ನಾಟಕ ಅಬಕಾರಿ ಅಧಿನಿಯಮ 1965 ರ ನಿಯಮ 43 (ಬಿ) ಅಡಿಯಲ್ಲಿ ಅನುಸರಿಸಬೇಕಾದ ವಿಧಾನಗಳನ್ನು ಅನುಸರಿಸಿ, 43 (ಎ) ನಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ನಿಯಮ 43 (ಎ) ರನ್ವಯ ಅಬಕಾರಿ ಉಪ ನಿರೀಕ್ಷಕರು ಸಿಂದಗಿ ವಲಯ ಸಿಂದಗಿ ಇವರು ದಿನಾಂಕ: 25–09–2009 ರಂದು ಗುನ್ನಾ ನಂಬರ : 04/2009–10 ರಲ್ಲಿ ಜಪ್ತು ಮಾಡಲ್ಪಟ್ಟ ಹಿರೊ ಹೊಂಡಾ ಡಾನ ದ್ವಿಚಕ್ರ ವಾಹನ ನಂ::KA-32-S-5283 ನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ಆದೇಶ ನೀಡಿದ್ದೇನೆ.

ಈ ಆದೇಶವನ್ನು ಇಂದು ಅಂದರೆ ದಿನಾಂಕ:02–04–2011 ರಂದು ಶೀಘ್ರಲಿಪಿಗಾರರಿಗೆ ಉಕ್ತ ಲೇಖನ ಕೊಟ್ಟು ಗಣಕ ಯಂತ್ರದಲ್ಲಿ ಬೆರಳಚ್ಚು ಮಾಡಿದೆ. ಪ್ರತಿಯನ್ನು ತಿದ್ದಿ ಮುಕ್ತ ನ್ಯಾಯಾಲಯದಲ್ಲಿ ಘೋಷಿಸಲಾಯಿತು.

ಈ ಆದೇಶವು ಇಂದಿನಿಂದ 30 ದಿವಸಗಳ ನಂತರ ಅಮಲಿನಲ್ಲಿ ಬರುವದು.

ಎಸ್.ಎಂ.ಯಮಕನಮರಡಿ
ಅಧೀಕೃತ ಅಧಿಕಾರಿಗಳು ಹಾಗೂ ಅಬಕಾರಿ ಉಪ ಆಯುಕ್ತರು
ಬಿಜಾಪೂರ ಜಿಲ್ಲೆ, ಬಿಜಾಪೂರ.

ಅನುಬಂಧ (1)

ಫಿರ್ಯಾಧಿದಾರರ ಪರ ಮಂಡಿಸಲಾದ ಸಾಕ್ಷಿಗಳ ವಿವರ

ಪ್ರಾ ಸಾ–1	ಶ್ರೀ.ಸುಭಾಷಸಿಂಗ ಅಬಕಾರಿ ಉಪ ನಿರೀಕ್ಷಕರು ಸಿಂದಗಿ ವಲಯ ಸಿಂದಗಿ	ತನಿಖಾಧಿಕಾರಿ
ಪ್ರಾ ಸಾ–2	ಶ್ರೀ.ಎಸ್.ಆರ್.ಮಾನೆ ಅಬಕಾರಿ ರಕ್ಷಕ ಸಿಂದಗಿ ವಲಯ ಸಿಂದಗಿ	ಪಂಚರು

ಅನುಬಂಧ(2)

ಫಿರ್ಯಾಧಿದಾರರ ಪರಮಂಡಿಸಲಾದ ದಾಖಲೆಗಳು

ನಿಶಾನೆ–ಪಿ–1	ಪಂಚನಾಮೆ ಪ್ರತಿ
ನಿಶಾನೆ–ಪಿ–1(ಎ)	ಪಂಚನಾಮೆಯಲ್ಲಿನ ಪ್ರಾ ಸಾ–1 ರವರ ಸಹಿ
ನಿಶಾನೆ–ಪಿ–2	ಪಿರ್ಯಾಧಿ ಪ್ರತಿ
ನಿಶಾನೆ–ಪಿ–2(ಎ)	ಪಿರ್ಯಾಧಿಯಲ್ಲಿನ ಪ್ರಾ.ಸಾ–1 ರವರ ಸಹಿ
ನಿಶಾನೆ–ಪಿ–2(ಬಿ)	ಪಂಚನಾಮೆಯಲ್ಲಿನ ಪ್ರಾ.ಸಾ–2 ರವರ ಸಹಿ
ನಿಶಾನೆ–ಪಿ–3	ಪ್ರಥಮ ವರ್ತಮಾನ ವರದಿ
ನಿಶಾನೆ–ಪಿ–3(ಎ)	ಪ್ರ.ವ ವರದಿಯಲ್ಲಿನ ಪ್ರಾ.ಸಾ–1 ರವರ ಸಹಿ
ನಿಶಾನೆ–ಪಿ–4	ರಸಾಯನಿಕ ತಜ್ಞರ ವರದಿ ಸಂ:ಸಿಸಿಎಲ್–6090/2009 ದಿ:30–11–2009.
ನಿಶಾನೆ–ಪಿ–5	ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ನೀಡಿದ ಜಪ್ತಾದ ವಾಹನ ನೋಂದಣಿ ವಿವರ (ಬಿಎಕ್ಸ್‌ಟ್ರ್ಯಾಕ್ಟ)

ಅನುಬಂಧ–(3)

ಫೀರ್ಯಾಧಿದಾರರ ಪರ ಗುರುತಿಸಲಾದ ವಸ್ತುಗಳು

ಎಂ.ಓ.–ಹಿರೊ ಹೊಂಡಾ ದ್ವಿಚಕ್ರ ವಾಹನ ನಂ:KA-32-S-5283 & ಮದ್ಯ ತುಂಬಿದ 48 ಬಾಟಲಿಗಳು

ಅನುಬಂಧ–(4)

ವಾಹನ ಮಾಲೀಕರ ಪರವಾಗಿ ವಿಚಾರಣೆ ಮಾಡಲಾದ ಸಾಕ್ಷಿದಾರರು.

ಇಲ್ಲಾ.

ಅನುಬಂಧ– (5)

ವಾಹನದ ಮಾಲೀಕರ ಪರವಾಗಿ ಗುರುತಿಸಲಾದ ದಾಖಲೆಗಳು

ಇಲ್ಲಾ

ಎಸ್.ಎಂ.ಯಮಕನಮರಡಿ

ಪಿ.ಆರ್.668

ಅಧೀಕೃತ ಅಧಿಕಾರಿಗಳು ಹಾಗೂ
ಅಬಕಾರಿ ಉಪ ಆಯುಕ್ತರು
ಬಿಜಾಪೂರ ಜಿಲ್ಲೆ, ಬಿಜಾಪೂರ.

ಸಹಕಾರ ಇಲಾಖೆ

ಸಹಕಾರ ಸಂಘಗಳ ಉಪನಿಬಂಧಕರು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ಇವರ ಕಛೇರಿ

ನಂ.ಡಿಆರ್‌ಡಿ:ಎಲ್‌ಕ್ಯೂಡಿ:ಸಿಆರ್:54/2010–11, ದಿನಾಂಕ:31.03.2011

ವಿಷಯ: ಸ್ಥಗಿತಗೊಂಡಿರುವ ಕುವೆಂಪು ವಿವಿದೋದ್ದೇಶ ಬಳಕೆದಾರರ ಸಹಕಾರ ಸಂಘ ನಿ. ಹಿರಿಯೂರು ಇದನ್ನು 1959ನೇ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ ಕಲಂ 72 ಮತ್ತು 73 ರನ್ವಯ ಸಮಾಪನೆ ಬಗ್ಗೆ.

ಉಲ್ಲೇಖ: 1) ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಚಿತ್ರದುರ್ಗ ಇವರ ಪತ್ರದ ಸಂಖ್ಯೆ: ಸನಿ:30: ಸಮಾಪನೆ: ಸಿಆರ್:48/10–11 ದಿನಾಂಕ:22.11.2010.

2) ಈ ಕಛೇರಿಯ ಕಾರಣ ಕೇಳಿ ನೋಟೀಸು ಸಮ ಸಂಖ್ಯೆ ದಿನಾಂಕ:01.12.2010.

ಪ್ರಸ್ತಾವನೆ:

ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಚಿತ್ರದುರ್ಗ ಉಪ ವಿಭಾಗ, ಚಿತ್ರದುರ್ಗ ಇವರು ಉಲ್ಲೇಖ (1)ರಲ್ಲಿ ಕಾಣಿಸಿದ ಪ್ರಸ್ತಾವನೆ ಪ್ರಕಾರ ಕುವೆಂಪು ವಿವಿದೋದ್ದೇಶ ಬಳಕೆದಾರರ ಸಹಕಾರ ಸಂಘ ನಿ. ಹಿರಿಯೂರು ಸಂಘದ ನೋಂದಣಿ ಸಂಖ್ಯೆ: ಸನಿ:30/29/ಆರ್‌ಜಿಎನ್/26838/ 2000–01, ದಿನಾಂಕ:10.05.2000 ಈ ಸಂಘದ ಕಾರ್ಯ ಚಟುವಟಿಕೆಗಳು ಅನೇಕ ವರ್ಷಗಳಿಂದ ಸ್ಥಗಿತಗೊಂಡಿರುತ್ತದೆ. ಸಂಘದ ಆಡಳಿತ ಸಮಿತಿಯವರು ಸಂಘದ ಅಭಿವೃದ್ಧಿ ಬಗ್ಗೆ ಗಮನಹರಿಸುವಲ್ಲಿ ವಿಫಲರಾಗಿರುತ್ತಾರೆ ಮತ್ತು ಸಂಘವನ್ನು ಪುನಃಶ್ಚೇತನಗೊಳಿಸುವಲ್ಲಿ ಆಸಕ್ತಿ ಇರುವುದಿಲ್ಲವೆಂದು ಪ್ರಸ್ತಾವನೆ ಸಲ್ಲಿಸಿ ಸಂಘವನ್ನು ಸಮಾಪನೆಗೊಳಿಸಲು ಕೋರಿರುತ್ತಾರೆ. ಈ ಬಗ್ಗೆ ಉಲ್ಲೇಖ (2) ರ ನೋಟೀಸನ್ನು ಈ ಕಛೇರಿಯಿಂದ ನೀಡಿದ್ದು, ಸಂಘದ ಆಡಳಿತ ಮಂಡಳಿಯವರಿಗೆ ನೋಟೀಸು ಜಾರಿ ಮಾಡಿ ಸ್ವೀಕೃತಿ ಈ ಕಛೇರಿ ತಲುಪಿದ್ದು ಆದಾಗ್ಯೂ ಅವರು ಯಾವುದೇ ಸಮಜಾಯಿಷಿ ಅಥವಾ ಪ್ರತಿಕ್ರಿಯೆಯನ್ನು ನೀಡದೇ ನಿರುತ್ಸಾಹ ತೋರಿಸಿರುತ್ತಾರೆ. ಈ ಸಂಘದಿಂದ ಸಂಘದ ಸದಸ್ಯರಿಗೆ ಯಾವ ರೀತಿಯ ಪ್ರಯೋಜನವೂ ದೊರೆಯುತ್ತಿಲ್ಲ, ಇದರಿಂದ ಸಂಘವು ಪುನಃಶ್ಚೇತನಗೊಳಿಸುವ ಹಂತವನ್ನು ಮೀರಿರುತ್ತದೆ. ಸಂಘವನ್ನು ಇದೇ ರೀತಿ ಮುಂದುವರಿಸಲು ಬಿಟ್ಟಲ್ಲಿ ಸಂಘವು ಇನ್ನಷ್ಟು ಅಧೋಗತಿಗೆ ಹೋಗುವ ಸಂಭವವಿರುವುದರಿಂದ ಸಮಾಪನೆಗೊಳಿಸುವುದೇ ಸೂಕ್ತವೆಂದು ಅಭಿಪ್ರಾಯಪಟ್ಟು ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

ಆದೇಶ

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಹಾಗೂ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 72(2) ರನ್ವಯ ಸರ್ಕಾರದ ಅಧಿಸೂಚನೆ ಸಂಖ್ಯೆ: ನಂ.ಸಿಓ:201: ಸಿಎಲ್‌ಎಂ:2008/ಬೆಂಗಳೂರು ದಿನಾಂಕ:27.05.2010 ಪ್ರಕಾರ ದತ್ತವಾದ ಅಧಿಕಾರದನ್ವಯ ಇಲ್ಯಾಸ್ ಉಲ್ಲಾ ಷರೀಫ್ ಸಹಕಾರ ಸಂಘಗಳ ಉಪನಿಬಂಧಕರು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ಆದ ನಾನು ದತ್ತವಾದ ಅಧಿಕಾರವನ್ನು ಚಲಾಯಿಸುತ್ತಾ, ಸ್ಥಗಿತಗೊಂಡಿರುವ ಕುವೆಂಪು ವಿವಿದೋದ್ದೇಶ ಬಳಕೆದಾರರ ಸಹಕಾರ ಸಂಘ ನಿ. ಹಿರಿಯೂರು, ಇದನ್ನು ಸಮಾಪನೆಗೊಳಿಸಿ, ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 73(1) ಅನ್ವಯ ಸಹಕಾರ ಅಭಿವೃದ್ಧಿ ಅಧಿಕಾರಿ, ಹಿರಿಯೂರು ತಾಲ್ಲೂಕು, ಇವರನ್ನು ಸಂಘದ ಸಮಾಪನಾಧಿಕಾರಿಯನ್ನಾಗಿ ಅಧಿಕ ಪ್ರಭಾರದಲ್ಲಿ ನೇಮಿಸಿರುತ್ತೇನೆ. ಸಮಾಪನಾಧಿಕಾರಿಯು ಸಂಘದ ವಿಶಿಷ್ಟ ಪ್ರಭಾರವನ್ನು ಮತ್ತು ಸಂಘದ ಆಸ್ತಿಗಳನ್ನು ಸಂಘದ ಕಾರ್ಯದರ್ಶಿ ಅಥವಾ ಸಂಘದ ಪ್ರಭಾರ ಹೊಂದಿದ ಯಾವುದೇ ವ್ಯಕ್ತಿಯಿಂದ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 73 (1) ಮತ್ತು 74ರ ನಿಯಮದ ಪ್ರಕಾರ ಪಡೆದುಕೊಳ್ಳತಕ್ಕದ್ದು.

ನನ್ನ ಸ್ವ ಸಹಿ ಮತ್ತು ಕಛೇರಿಯ ಮೊಹರಿನೊಂದಿಗೆ ಈ ದಿನಾಂಕ:31.03.2011 ರಂದು ಈ ಆದೇಶವನ್ನು ಹೊರಡಿಸಿರುತ್ತೇನೆ.

ಸಹಕಾರ ಸಂಘಗಳ ಉಪ ನಿಬಂಧಕರು,
ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ.

ಸಹಕಾರ ಇಲಾಖೆ

ಸಹಕಾರ ಸಂಘಗಳ ಉಪನಿಬಂಧಕರು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ಇವರ ಕಛೇರಿ

ನಂ.ಡಿಆರ್‌ಡಿ:ಎಲ್‌ಕ್ಯೂಡಿ:ಸಿಆರ್:79/2010–11, ದಿನಾಂಕ:21.03.2011

ವಿಷಯ: ಸ್ಥಗಿತಗೊಂಡಿರುವ ಗ್ಯಾರಹಳ್ಳಿ ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘ ನಿ. ಹೊಳಲ್ಕೆರೆ ತಾಲ್ಲೂಕು, ಇದನ್ನು 1959ನೇ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ ಕಲಂ 72 ಮತ್ತು 73 ರನ್ವಯ ಸಮಾಪನೆ ಬಗ್ಗೆ.

ಉಲ್ಲೇಖ: 1) ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಚಿತ್ರದುರ್ಗ ಇವರ ಪತ್ರದ ಸಂಖ್ಯೆ: ಸನಿ:30: ಸಮಾಪನೆ: ಸಿಆರ್:75/10–11 ದಿನಾಂಕ:29.12.2010.

2) ಈ ಕಛೇರಿಯ ಕಾರಣ ಕೇಳಿ ನೋಟೀಸು ಸಮ ಸಂಖ್ಯೆ ದಿನಾಂಕ:21.01.2011.

ಪ್ರಸ್ತಾವನೆ:

ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಚಿತ್ರದುರ್ಗ ಉಪ ವಿಭಾಗ, ಚಿತ್ರದುರ್ಗ ಇವರು ಉಲ್ಲೇಖ (1)ರಲ್ಲಿ ಕಾಣಿಸಿದ ಪ್ರಸ್ತಾವನೆ ಪ್ರಕಾರ ಗ್ಯಾರಹಳ್ಳಿ ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘ ನಿ. ಹೊಳಲ್ಕೆರೆ ತಾಲ್ಲೂಕು, ಸಂಘದ ನೋಂದಣಿ ಸಂಖ್ಯೆ: ಸನಿ:30/ ಆರ್‌ಎಸ್‌ಆರ್/26143/ 1999–2000, ದಿನಾಂಕ:22.06.1999 ಈ ಸಂಘದ ಕಾರ್ಯ ಚಟುವಟಿಕೆಗಳು ಅನೇಕ ವರ್ಷಗಳಿಂದ ಸ್ಥಗಿತಗೊಂಡಿರುತ್ತದೆ. ಸಂಘದ ಆಡಳಿತ ಸಮಿತಿಯವರು ಸಂಘದ ಅಭಿವೃದ್ಧಿ ಬಗ್ಗೆ ಗಮನಹರಿಸುವಲ್ಲಿ ವಿಫಲರಾಗಿರುತ್ತಾರೆ ಮತ್ತು ಸಂಘವನ್ನು ಪುನಃಶ್ಚೇತನಗೊಳಿಸುವಲ್ಲಿ ಆಸಕ್ತಿ ಇರುವುದಿಲ್ಲವೆಂದು ಪ್ರಸ್ತಾವನೆ ಸಲ್ಲಿಸಿ ಸಂಘವನ್ನು ಸಮಾಪನೆಗೊಳಿಸಲು ಕೋರಿರುತ್ತಾರೆ. ಈ ಬಗ್ಗೆ ಉಲ್ಲೇಖ (2) ರ ನೋಟೀಸನ್ನು ಈ ಕಛೇರಿಯಿಂದ ನೀಡಿದ್ದು, ಸಂಘದ ಆಡಳಿತ ಮಂಡಳಿಯವರಿಗೆ ನೋಟೀಸು ಜಾರಿ ಮಾಡಿ ಸ್ವೀಕೃತಿ ಈ ಕಛೇರಿ ತಲುಪಿದ್ದು ಆದಾಗ್ಯೂ ಅವರು ಯಾವುದೇ ಸಮಜಾಯಿಷಿ ಅಥವಾ ಪ್ರತಿಕ್ರಿಯೆಯನ್ನು ನೀಡದೇ ನಿರುತ್ಸಾಹ ತೋರಿಸಿರುತ್ತಾರೆ. ಈ ಸಂಘದಿಂದ ಸಂಘದ ಸದಸ್ಯರಿಗೆ ಯಾವ ರೀತಿಯ ಪ್ರಯೋಜನವೂ ದೊರೆಯುತ್ತಿಲ್ಲ, ಇದರಿಂದ ಸಂಘವು ಪುನಃಶ್ಚೇತನಗೊಳಿಸುವ ಹಂತವನ್ನು ಮೀರಿರುತ್ತದೆ. ಸಂಘವನ್ನು ಇದೇ ರೀತಿ ಮುಂದುವರಿಸಲು ಬಿಟ್ಟಲ್ಲಿ ಸಂಘವು ಇನ್ನಷ್ಟು ಅಧೋಗತಿಗೆ ಹೋಗುವ ಸಂಭವವಿರುವುದರಿಂದ ಸಮಾಪನೆಗೊಳಿಸುವುದೇ ಸೂಕ್ತವೆಂದು ಅಭಿಪ್ರಾಯಪಟ್ಟು ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

ಆದೇಶ

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಹಾಗೂ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 72(2) ರನ್ವಯ ಸರ್ಕಾರದ ಅಧಿಸೂಚನೆ ಸಂಖ್ಯೆ: ನಂ.ಸಿಓ:201: ಸಿಎಲ್ಎಂ:2008/ಬೆಂಗಳೂರು ದಿನಾಂಕ:27.05.2010 ಪ್ರಕಾರ ದತ್ತವಾದ ಅಧಿಕಾರದನ್ವಯ ಇಲ್ಯಾಸ್ ಉಲ್ಲಾ ಷರೀಫ್ ಸಹಕಾರ ಸಂಘಗಳ ಉಪನಿಬಂಧಕರು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ಆದ ನಾನು ದತ್ತವಾದ ಅಧಿಕಾರವನ್ನು ಚಲಾಯಿಸುತ್ತಾ, ಸ್ಥಗಿತಗೊಂಡಿರುವ ಗ್ಯಾರಹಳ್ಳಿ ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘ ನಿ. ಹೊಳಲ್ಕೆರೆ ತಾಲ್ಲೂಕು, ಇದನ್ನು ಸಮಾಪನೆಗೊಳಿಸಿ, ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 73(1) ಅನ್ವಯ ಹಾಲು ವಿಸ್ತಾರಣಾಧಿಕಾರಿ, ಹೊಳಲ್ಕೆರೆ ತಾಲ್ಲೂಕು, ಇವರನ್ನು ಸಂಘದ ಸಮಾಪನಾಧಿಕಾರಿಯನ್ನಾಗಿ ಅಧಿಕ ಪ್ರಭಾರದಲ್ಲಿ ನೇಮಿಸಿರುತ್ತೇನೆ. ಸಮಾಪನಾಧಿಕಾರಿಯು ಸಂಘದ ವಿಶಿಷ್ಟ ಪ್ರಭಾರವನ್ನು ಮತ್ತು ಸಂಘದ ಆಸ್ತಿಗಳನ್ನು ಸಂಘದ ಕಾರ್ಯದರ್ಶಿ ಅಥವಾ ಸಂಘದ ಪ್ರಭಾರ ಹೊಂದಿದ ಯಾವುದೇ ವ್ಯಕ್ತಿಯಿಂದ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 73 (1) ಮತ್ತು 74ರ ನಿಯಮದ ಪ್ರಕಾರ ಪಡೆದುಕೊಳ್ಳತಕ್ಕದ್ದು.

ನನ್ನ ಸ್ವ ಸಹಿ ಮತ್ತು ಕಛೇರಿಯ ಮೊಹರಿನೊಂದಿಗೆ ಈ ದಿನಾಂಕ:21.03.2011 ರಂದು ಈ ಆದೇಶವನ್ನು ಹೊರಡಿಸಿರುತ್ತೇನೆ.

ಸಹಕಾರ ಸಂಘಗಳ ಉಪ ನಿಬಂಧಕರು,
ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ.

ಸಹಕಾರ ಇಲಾಖೆ

ಸಹಕಾರ ಸಂಘಗಳ ಉಪನಿಬಂಧಕರು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ಇವರ ಕಛೇರಿ

ನಂ.ಡಿಆರ್‌ಡಿ:ಎಲ್‌ಕ್ಯೂಡಿ:ಸಿಆರ್:49/2010–11, ದಿನಾಂಕ:31.03.2011

ವಿಷಯ: ಸ್ಥಗಿತಗೊಂಡಿರುವ ಆಯಿಷಾ ಅಲ್ಪ ಸಂಖ್ಯಾತರ ಮಹಿಳಾ ವಿವಿಧೋದ್ದೇಶ ಸಹಕಾರ ಸಂಘ ನಿ. ಹಿರಿಯೂರು ತಾಲ್ಲೂಕು, ಇದನ್ನು 1959ನೇ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ ಕಲಂ 72 ಮತ್ತು 73 ರನ್ವಯ ಸಮಾಪನೆ ಬಗ್ಗೆ.

ಉಲ್ಲೇಖ: 1) ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಚಿತ್ರದುರ್ಗ ಇವರ ಪತ್ರದ ಸಂಖ್ಯೆ: ಸನಿ:30: ಸಮಾಪನೆ: ಸಿಆರ್:49/10–11 ದಿನಾಂಕ:22.11.2010.

2) ಈ ಕಛೇರಿಯ ಕಾರಣ ಕೇಳಿ ನೋಟೀಸು ಸಮ ಸಂಖ್ಯೆ ದಿನಾಂಕ:01.12.2010.

ಪ್ರಸ್ತಾವನೆ:

ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಚಿತ್ರದುರ್ಗ ಉಪ ವಿಭಾಗ, ಚಿತ್ರದುರ್ಗ ಇವರು ಉಲ್ಲೇಖ (1)ರಲ್ಲಿ ಕಾಣಿಸಿದ ಪ್ರಸ್ತಾವನೆ ಪ್ರಕಾರ ಆಯಿಷಾ ಅಲ್ಪ ಸಂಖ್ಯಾತರ ಮಹಿಳಾ ವಿವಿಧೋದ್ದೇಶ ಸಹಕಾರ ಸಂಘ ನಿ. ಹಿರಿಯೂರು ತಾಲ್ಲೂಕು, ಸಂಘದ ನೋಂದಣಿ ಸಂಖ್ಯೆ: ಸನಿ:30/702/ಆರ್‌ಜಿಎನ್/19115/97–98, ದಿನಾಂಕ:09.05.1997 ಈ ಸಂಘದ ಕಾರ್ಯ ಚಟುವಟಿಕೆಗಳು ಅನೇಕ ವರ್ಷಗಳಿಂದ ಸ್ಥಗಿತಗೊಂಡಿರುತ್ತದೆ. ಸಂಘದ ಆಡಳಿತ ಸಮಿತಿಯವರು ಸಂಘದ ಅಭಿವೃದ್ಧಿ ಬಗ್ಗೆ ಗಮನಹರಿಸುವಲ್ಲಿ ವಿಫಲರಾಗಿರುತ್ತಾರೆ ಮತ್ತು ಸಂಘವನ್ನು ಪುನಃಶ್ಚೇತನಗೊಳಿಸುವಲ್ಲಿ ಆಸಕ್ತಿ ಇರುವುದಿಲ್ಲವೆಂದು ಪ್ರಸ್ತಾವನೆ ಸಲ್ಲಿಸಿ ಸಂಘವನ್ನು ಸಮಾಪನೆಗೊಳಿಸಲು ಕೋರಿರುತ್ತಾರೆ. ಈ ಬಗ್ಗೆ ಉಲ್ಲೇಖ (2) ರ ನೋಟೀಸನ್ನು ಈ ಕಛೇರಿಯಿಂದ ನೀಡಿದ್ದು, ಸಂಘದ ಆಡಳಿತ ಮಂಡಳಿಯವರಿಗೆ ನೋಟೀಸು ಜಾರಿ ಮಾಡಿ ಸ್ವೀಕೃತಿ ಈ ಕಛೇರಿ ತಲುಪಿದ್ದು ಆದಾಗ್ಯೂ ಅವರು ಯಾವುದೇ ಸಮಜಾಯಿಷಿ ಅಥವಾ ಪ್ರತಿಕ್ರಿಯೆಯನ್ನು ನೀಡದೇ ನಿರುತ್ಸಾಹ ತೋರಿಸಿರುತ್ತಾರೆ. ಈ ಸಂಘದಿಂದ ಸಂಘದ ಸದಸ್ಯರಿಗೆ ಯಾವ ರೀತಿಯ ಪ್ರಯೋಜನವೂ ದೊರೆಯುತ್ತಿಲ್ಲ, ಇದರಿಂದ ಸಂಘವು ಪುನಃಶ್ಚೇತನಗೊಳಿಸುವ ಹಂತವನ್ನು ಮೀರಿರುತ್ತದೆ. ಸಂಘವನ್ನು ಇದೇ ರೀತಿ ಮುಂದುವರಿಸಲು ಬಿಟ್ಟಲ್ಲಿ ಸಂಘವು ಇನ್ನಷ್ಟು ಅಧೋಗತಿಗೆ ಹೋಗುವ ಸಂಭವವಿರುವುದರಿಂದ ಸಮಾಪನೆಗೊಳಿಸುವುದೇ ಸೂಕ್ತವೆಂದು ಅಭಿಪ್ರಾಯಪಟ್ಟು ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

ಆದೇಶ

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಹಾಗೂ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 72(2) ರನ್ವಯ ಸರ್ಕಾರದ ಅಧಿಸೂಚನೆ ಸಂಖ್ಯೆ: ನಂ.ಸಿಓ:201: ಸಿಎಲ್ಎಂ:2008/ಬೆಂಗಳೂರು ದಿನಾಂಕ:27.05.2010 ಪ್ರಕಾರ ದತ್ತವಾದ ಅಧಿಕಾರದನ್ವಯ ಇಲ್ಯಾಸ್ ಉಲ್ಲಾ ಷರೀಫ್ ಸಹಕಾರ ಸಂಘಗಳ ಉಪನಿಬಂಧಕರು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ಆದ ನಾನು ದತ್ತವಾದ ಅಧಿಕಾರವನ್ನು ಚಲಾಯಿಸುತ್ತಾ, ಸ್ಥಗಿತಗೊಂಡಿರುವ ಆಯಿಷಾ ಅಲ್ಪ ಸಂಖ್ಯಾತರ ಮಹಿಳಾ ವಿವಿಧೋದ್ದೇಶ ಸಹಕಾರ ಸಂಘ ನಿ. ಹಿರಿಯೂರು ತಾಲ್ಲೂಕು, ಇದನ್ನು ಸಮಾಪನೆಗೊಳಿಸಿ, ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 73(1) ಅನ್ವಯ ಸಹಕಾರ ಅಭಿವೃದ್ಧಿ, ಹಿರಿಯೂರು ತಾಲ್ಲೂಕು, ಇವರನ್ನು ಸಂಘದ ಸಮಾಪನಾಧಿಕಾರಿಯನ್ನಾಗಿ ಅಧಿಕ ಪ್ರಭಾರದಲ್ಲಿ ನೇಮಿಸಿರುತ್ತೇನೆ. ಸಂಘದ ಸಮಾಪನಾಧಿಕಾರಿಯು ಸಂಘದ ವಿಶಿಷ್ಟ ಪ್ರಭಾರವನ್ನು ಮತ್ತು ಸಂಘದ ಆಸ್ತಿಗಳನ್ನು ಸಂಘದ ಕಾರ್ಯದರ್ಶಿ ಅಥವಾ ಸಂಘದ ಪ್ರಭಾರ ಹೊಂದಿದ ಯಾವುದೇ ವ್ಯಕ್ತಿಯಿಂದ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 73 (1) ಮತ್ತು 74ರ ನಿಯಮದ ಪ್ರಕಾರ ಪಡೆದುಕೊಳ್ಳತಕ್ಕದ್ದು.

ನನ್ನ ಸ್ವ ಸಹಿ ಮತ್ತು ಕಛೇರಿಯ ಮೊಹರಿನೊಂದಿಗೆ ಈ ದಿನಾಂಕ:31.03.2011 ರಂದು ಈ ಆದೇಶವನ್ನು ಹೊರಡಿಸಿರುತ್ತೇನೆ.

ಸಹಕಾರ ಸಂಘಗಳ ಉಪ ನಿಬಂಧಕರು,
ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ.

ಪಿ.ಆರ್.511

ಸಹಕಾರ ಇಲಾಖೆ

ಸಹಕಾರ ಸಂಘಗಳ ಉಪನಿಬಂಧಕರು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ಇವರ ಕಛೇರಿ

ನಂ.ಡಿಆರ್‌ಡಿ:ಎಲ್‌ಕ್ಯೂಡಿ:ಸಿಆರ್:19:2010–11, ದಿನಾಂಕ:31.01.2011

ವಿಷಯ: ಸ್ಥಗಿತಗೊಂಡಿರುವ ಶ್ರೀ ತರಳಬಾಳು ಜಗದ್ಗುರು ವಿದ್ಯಾ ಸಂಸ್ಥೆ ನೌಕರರ ಕ್ರೆಡಿಟ್ ಸಹಕಾರ ಸಂಘ ನಿ., ಸಿರಿಗೆರೆ, ಚಿತ್ರದುರ್ಗ ತಾಲ್ಲೂಕು ಇದನ್ನು 1959ನೇ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ ಕಲಂ 72 ಮತ್ತು 73 ರನ್ವಯ ಸಮಾಪನೆ ಬಗ್ಗೆ.

ಉಲ್ಲೇಖ: 1) ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಚಿತ್ರದುರ್ಗ ಇವರ ಪತ್ರದ ಸಂಖ್ಯೆ: ಸನಿ:30: ಸಮಾಪನೆ: ಸಿಆರ್/16/10–11 ದಿನಾಂಕ:09.11.2010.

2) ಈ ಕಛೇರಿಯ ಕಾರಣ ಕೇಳಿ ನೋಟೀಸು ಸಮ ಸಂಖ್ಯೆ ದಿನಾಂಕ:12.11.2010.

ಪ್ರಸ್ತಾವನೆ:

ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಚಿತ್ರದುರ್ಗ ಉಪ ವಿಭಾಗ, ಚಿತ್ರದುರ್ಗ ಇವರು ಉಲ್ಲೇಖ (1)ರಲ್ಲಿ ಕಾಣಿಸಿದ ಪ್ರಸ್ತಾವನೆ ಪ್ರಕಾರ ಶ್ರೀ ತರಳಬಾಳು ಜಗದ್ಗುರು ವಿದ್ಯಾ ಸಂಸ್ಥೆ ನೌಕರರ ಕ್ರೆಡಿಟ್ ಸಹಕಾರ ಸಂಘ ನಿ. ಸಿರಿಗೆರೆ ಚಿತ್ರದುರ್ಗ ತಾಲ್ಲೂಕು ಸಂಘದ ನೋಂದಣಿ ಸಂಖ್ಯೆ: ಎಆರ್‌ಸಿಡಿ/440/ಆರ್‌ಸಿಎಸ್/4614/1975–76 ದಿನಾಂಕ:07.05.1976 ಈ ಸಂಘದ ಕಾರ್ಯ ಚಟುವಟಿಕೆಗಳು ಅನೇಕ ವರ್ಷಗಳಿಂದ ಸ್ಥಗಿತಗೊಂಡಿರುತ್ತದೆ. ಸಂಘದ ಆಡಳಿತ ಸಮಿತಿಯವರು ಸಂಘದ ಅಭಿವೃದ್ಧಿ ಬಗ್ಗೆ ಗಮನಹರಿಸುವಲ್ಲಿ ವಿಫಲರಾಗಿರುತ್ತಾರೆ ಮತ್ತು ಸಂಘವನ್ನು ಪುನಃಶ್ಚೇತನಗೊಳಿಸುವಲ್ಲಿ ಆಸಕ್ತಿ ಇರುವುದಿಲ್ಲವೆಂದು ಪ್ರಸ್ತಾವನೆ ಸಲ್ಲಿಸಿ ಸಂಘವನ್ನು ಸಮಾಪನೆಗೊಳಿಸಲು ಕೋರಿರುತ್ತಾರೆ. ಈ ಬಗ್ಗೆ ಉಲ್ಲೇಖ (2) ರ ನೋಟೀಸನ್ನು ಈ ಕಛೇರಿಯಿಂದ ನೀಡಿದ್ದು, ಸಂಘದ ಆಡಳಿತ ಮಂಡಳಿಯವರಿಗೆ ನೋಟೀಸು ಜಾರಿ ಮಾಡಿ ಸ್ವೀಕೃತಿ ಈ ಕಛೇರಿ ತಲುಪಿದ್ದು ಆದಾಗ್ಯೂ ಅವರು ಯಾವುದೇ ಸಮಜಾಯಿಷಿ ಅಥವಾ ಪ್ರತಿಕ್ರಿಯೆಯನ್ನು ನೀಡದೇ ನಿರುತ್ಸಾಹ ತೋರಿಸಿರುತ್ತಾರೆ. ಈ ಸಂಘದಿಂದ ಸಂಘದ ಸದಸ್ಯರಿಗೆ ಯಾವ ರೀತಿಯ ಪ್ರಯೋಜನವೂ ದೊರೆಯುತ್ತಿಲ್ಲ, ಇದರಿಂದ ಸಂಘವು ಪುನಃಶ್ಚೇತನಗೊಳಿಸುವ ಹಂತವನ್ನು ಮೀರಿರುತ್ತದೆ. ಸಂಘವನ್ನು ಇದೇ ರೀತಿ ಮುಂದುವರಿಸಲು ಬಿಟ್ಟಲ್ಲಿ ಸಂಘವು ಇನ್ನಷ್ಟು ಅಧೋಗತಿಗೆ ಹೋಗುವ ಸಂಭವವಿರುವುದರಿಂದ ಸಮಾಪನೆಗೊಳಿಸುವುದೇ ಸೂಕ್ತವೆಂದು ಅಭಿಪ್ರಾಯಪಟ್ಟು ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

ಆದೇಶ

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಹಾಗೂ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 72(2) ರನ್ವಯ ಸರ್ಕಾರದ ಅಧಿಸೂಚನೆ ಸಂಖ್ಯೆ: ನಂ.ಸಿಓ:201: ಸಿಎಲ್ಎಂ:2008/ಬೆಂಗಳೂರು ದಿನಾಂಕ:27.05.2010 ಪ್ರಕಾರ ದತ್ತವಾದ ಅಧಿಕಾರದನ್ವಯ ಇಲ್ಯಾಸ್ ಉಲ್ಲಾ ಷರೀಫ್ ಸಹಕಾರ ಸಂಘಗಳ ಉಪನಿಬಂಧಕರು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ಆದ ನಾನು ದತ್ತವಾದ ಅಧಿಕಾರವನ್ನು ಚಲಾಯಿಸುತ್ತಾ, ಸ್ಥಗಿತಗೊಂಡಿರುವ ಶ್ರೀ ತರಳಬಾಳು ಜಗದ್ಗುರು ವಿದ್ಯಾ ಸಂಸ್ಥೆ ನೌಕರರ ಕ್ರೆಡಿಟ್ ಸಹಕಾರ ಸಂಘ ನಿ., ಸಿರಿಗೆರೆ, ಚಿತ್ರದುರ್ಗ ತಾಲ್ಲೂಕು ಇದನ್ನು ಸಮಾಪನೆಗೊಳಿಸಿ, ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 73(1) ಅನ್ವಯ ಸಹಕಾರ ಸಂಘಗಳ ನಿರೀಕ್ಷಕರು, ಚಿತ್ರದುರ್ಗ ತಾಲ್ಲೂಕು ಇವರನ್ನು ಸಂಘದ ಸಮಾಪನಾಧಿಕಾರಿಯನ್ನಾಗಿ ಅಧಿಕ ಪ್ರಭಾರದಲ್ಲಿ ನೇಮಿಸಿರುತ್ತೇನೆ. ಸಮಾಪನಾಧಿಕಾರಿಯು ಸಂಘದ ವಿಶಿಷ್ಟ ಪ್ರಭಾರವನ್ನು ಮತ್ತು ಸಂಘದ ಆಸ್ತಿಗಳನ್ನು ಸಂಘದ ಕಾರ್ಯದರ್ಶಿ ಅಥವಾ ಸಂಘದ ಪ್ರಭಾರ ಹೊಂದಿದ ಯಾವುದೇ ವ್ಯಕ್ತಿಯಿಂದ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 73 (1) ಮತ್ತು 74ರ ನಿಯಮದ ಪ್ರಕಾರ ಪಡೆದುಕೊಳ್ಳತಕ್ಕದ್ದು.

ನನ್ನ ಸ್ವ ಸಹಿ ಮತ್ತು ಕಛೇರಿಯ ಮೊಹರಿನೊಂದಿಗೆ ಈ ದಿನಾಂಕ:31.01.2011 ರಂದು ಈ ಆದೇಶವನ್ನು ಹೊರಡಿಸಿರುತ್ತೇನೆ.

ಸಹಕಾರ ಸಂಘಗಳ ಉಪ ನಿಬಂಧಕರು,
ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ.

ಸಹಕಾರ ಇಲಾಖೆ

ಸಹಕಾರ ಸಂಘಗಳ ಉಪನಿಬಂಧಕರು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ಇವರ ಕಛೇರಿ

ನಂ.ಡಿಆರ್‌ಡಿ:ಎಲ್‌ಕ್ಯೂಡಿ:ಸಿಆರ್:39:2010-11, ದಿನಾಂಕ:31.01.2011

ವಿಷಯ: ಸ್ಥಗಿತಗೊಂಡಿರುವ ಶ್ರೀ ರೇವಣಸಿದ್ಧೇಶ್ವರ ಕುರಿ ಮತ್ತು ಉಣ್ಣೆ ಉತ್ಪಾದಕರ ಮತ್ತು ಮಾರಾಟಗಾರರ ಸಹಕಾರ ಸಂಘ ನಿ. ಚಿತ್ರದುರ್ಗ ತಾಲ್ಲೂಕು ಇದನ್ನು 1959ನೇ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ ಕಲಂ 72 ಮತ್ತು 73 ರನ್ವಯ ಸಮಾಪನೆ ಬಗ್ಗೆ.

ಉಲ್ಲೇಖ: 1) ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಚಿತ್ರದುರ್ಗ ಇವರ ಪತ್ರದ ಸಂಖ್ಯೆ: ಸನಿ:30: ಸಮಾಪನೆ: ಸಿಆರ್/37/10-11 ದಿನಾಂಕ:16.11.2010.

2) ಈ ಕಛೇರಿಯ ಕಾರಣ ಕೇಳಿ ನೋಟೀಸು ಸಮ ಸಂಖ್ಯೆ ದಿನಾಂಕ:19.11.2010.

ಪ್ರಸ್ತಾವನೆ:

ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಚಿತ್ರದುರ್ಗ ಉಪ ವಿಭಾಗ, ಚಿತ್ರದುರ್ಗ ಇವರು ಉಲ್ಲೇಖ (1)ರಲ್ಲಿ ಕಾಣಿಸಿದ ಪ್ರಸ್ತಾವನೆ ಪ್ರಕಾರ ಶ್ರೀ ರೇವಣಸಿದ್ಧೇಶ್ವರ ಕುರಿ ಮತ್ತು ಉಣ್ಣೆ ಉತ್ಪಾದಕರ ಮತ್ತು ಮಾರಾಟಗಾರರ ಸಹಕಾರ ಸಂಘ ನಿ. ಚಿತ್ರದುರ್ಗ ತಾಲ್ಲೂಕು ಸಂಘದ ನೋಂದಣಿ ಸಂಖ್ಯೆ: ಸನಿ:30:729/ಆರ್‌ಜಿಎನ್/26122/1998-99, ದಿನಾಂಕ:30.11.1998 ಈ ಸಂಘದ ಕಾರ್ಯ ಚಟುವಟಿಕೆಗಳು ಅನೇಕ ವರ್ಷಗಳಿಂದ ಸ್ಥಗಿತಗೊಂಡಿರುತ್ತದೆ. ಸಂಘದ ಆಡಳಿತ ಸಮಿತಿಯವರು ಸಂಘದ ಅಭಿವೃದ್ಧಿ ಬಗ್ಗೆ ಗಮನಹರಿಸುವಲ್ಲಿ ವಿಫಲರಾಗಿರುತ್ತಾರೆ ಮತ್ತು ಸಂಘವನ್ನು ಪುನಃಶ್ಚೇತನಗೊಳಿಸುವಲ್ಲಿ ಆಸಕ್ತಿ ಇರುವುದಿಲ್ಲವೆಂದು ಪ್ರಸ್ತಾವನೆ ಸಲ್ಲಿಸಿ ಸಂಘವನ್ನು ಸಮಾಪನೆಗೊಳಿಸಲು ಕೋರಿರುತ್ತಾರೆ. ಈ ಬಗ್ಗೆ ಉಲ್ಲೇಖ (2) ರ ನೋಟೀಸನ್ನು ಈ ಕಛೇರಿಯಿಂದ ನೀಡಿದ್ದು, ಸಂಘದ ಆಡಳಿತ ಮಂಡಳಿಯವರಿಗೆ ನೋಟೀಸು ಜಾರಿ ಮಾಡಿ ಸ್ವೀಕೃತಿ ಈ ಕಛೇರಿ ತಲುಪಿದ್ದು ಆದಾಗ್ಯೂ ಅವರು ಯಾವುದೇ ಸಮಜಾಯಿಷಿ ಅಥವಾ ಪ್ರತಿಕ್ರಿಯೆಯನ್ನು ನೀಡದೇ ನಿರುತ್ಸಾಹ ತೋರಿಸಿರುತ್ತಾರೆ. ಈ ಸಂಘದಿಂದ ಸಂಘದ ಸದಸ್ಯರಿಗೆ ಯಾವ ರೀತಿಯ ಪ್ರಯೋಜನವೂ ದೊರೆಯುತ್ತಿಲ್ಲ, ಇದರಿಂದ ಸಂಘವು ಪುನಃಶ್ಚೇತನಗೊಳಿಸುವ ಹಂತವನ್ನು ಮೀರಿರುತ್ತದೆ. ಸಂಘವನ್ನು ಇದೇ ರೀತಿ ಮುಂದುವರಿಸಲು ಬಿಟ್ಟಲ್ಲಿ ಸಂಘವು ಇನ್ನಷ್ಟು ಅಧೋಗತಿಗೆ ಹೋಗುವ ಸಂಭವವಿರುವುದರಿಂದ ಸಮಾಪನೆಗೊಳಿಸುವುದೇ ಸೂಕ್ತವೆಂದು ಅಭಿಪ್ರಾಯಪಟ್ಟು ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

ಆದೇಶ

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಹಾಗೂ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 72(2) ರನ್ವಯ ಸರ್ಕಾರದ ಅಧಿಸೂಚನೆ ಸಂಖ್ಯೆ: ನಂ.ಸಿಓ:201: ಸಿಎಲ್‌ಎಂ:2008/ಬೆಂಗಳೂರು ದಿನಾಂಕ:27.05.2010 ಪ್ರಕಾರ ದತ್ತವಾದ ಅಧಿಕಾರದನ್ವಯ ಇಲ್ಯಾಸ್ ಉಲ್ಲಾ ಷರೀಫ್ ಸಹಕಾರ ಸಂಘಗಳ ಉಪನಿಬಂಧಕರು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ಆದ ನಾನು ದತ್ತವಾದ ಅಧಿಕಾರವನ್ನು ಚಲಾಯಿಸುತ್ತಾ, ಸ್ಥಗಿತಗೊಂಡಿರುವ ಶ್ರೀ ರೇವಣಸಿದ್ಧೇಶ್ವರ ಕುರಿ ಮತ್ತು ಉಣ್ಣೆ ಉತ್ಪಾದಕರ ಮತ್ತು ಮಾರಾಟಗಾರರ ಸಹಕಾರ ಸಂಘ ನಿ. ಚಿತ್ರದುರ್ಗ ತಾಲ್ಲೂಕು ಇದನ್ನು ಸಮಾಪನೆಗೊಳಿಸಿ, ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 73(1) ಅನ್ವಯ ಸಹಕಾರ ಸಂಘಗಳ ನಿರೀಕ್ಷಕರು, ಚಿತ್ರದುರ್ಗ ತಾಲ್ಲೂಕು ಇವರನ್ನು ಸಂಘದ ಸಮಾಪನಾಧಿಕಾರಿಯನ್ನಾಗಿ ಅಧಿಕ ಪ್ರಭಾರದಲ್ಲಿ ನೇಮಿಸಿರುತ್ತೇನೆ. ಸಮಾಪನಾಧಿಕಾರಿಯು ಸಂಘದ ವಿಶಿಷ್ಟ ಪ್ರಭಾರವನ್ನು ಮತ್ತು ಸಂಘದ ಆಸ್ತಿಗಳನ್ನು ಸಂಘದ ಕಾರ್ಯದರ್ಶಿ ಅಥವಾ ಸಂಘದ ಪ್ರಭಾರ ಹೊಂದಿದ ಯಾವುದೇ ವ್ಯಕ್ತಿಯಿಂದ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 73 (1) ಮತ್ತು 74ರ ನಿಯಮದ ಪ್ರಕಾರ ಪಡೆದುಕೊಳ್ಳತಕ್ಕದ್ದು.

ನನ್ನ ಸ್ವ ಸಹಿ ಮತ್ತು ಕಛೇರಿಯ ಮೊಹರಿನೊಂದಿಗೆ ಈ ದಿನಾಂಕ:31.01.2011 ರಂದು ಈ ಆದೇಶವನ್ನು ಹೊರಡಿಸಿರುತ್ತೇನೆ.

ಸಹಕಾರ ಸಂಘಗಳ ಉಪ ನಿಬಂಧಕರು,
ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ.

ಸಹಕಾರ ಇಲಾಖೆ

ಸಹಕಾರ ಸಂಘಗಳ ಉಪನಿಬಂಧಕರು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ಇವರ ಕಛೇರಿ

ನಂ.ಡಿಆರ್‌ಡಿ:ಎಲ್‌ಕ್ಯೂಡಿ:ಸಿಆರ್:51:2010-11, ದಿನಾಂಕ:31.01.2011

ವಿಷಯ: ಸ್ಥಗಿತಗೊಂಡಿರುವ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ ತೆಂಗಿನ ನಾರನ್ನು ಮತ್ತು ನಾರಿನ ಸರಕುಗಳನ್ನು ಉತ್ಪಾದಿಸುವ ಮತ್ತು ಮಾರಾಟ ಮಾಡುವ ಸಹಕಾರ ಸಂಘ ನಿ. ಬೊಮ್ಮೇನಹಳ್ಳಿ, ಚಿತ್ರದುರ್ಗ ತಾಲ್ಲೂಕು ಇದನ್ನು 1959ನೇ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ ಕಲಂ 72 ಮತ್ತು 73 ರನ್ವಯ ಸಮಾಪನೆ ಬಗ್ಗೆ.

ಉಲ್ಲೇಖ: 1) ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಚಿತ್ರದುರ್ಗ ಇವರ ಪತ್ರದ ಸಂಖ್ಯೆ: ಸನಿ:30: ಸಮಾಪನೆ: ಸಿಆರ್/46/10-11 ದಿನಾಂಕ:20.11.2010.

2) ಈ ಕಛೇರಿಯ ಕಾರಣ ಕೇಳಿ ನೋಟೀಸು ಸಮ ಸಂಖ್ಯೆ ದಿನಾಂಕ:01.12.2010.

ಪ್ರಸ್ತಾವನೆ:

ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಚಿತ್ರದುರ್ಗ ಉಪ ವಿಭಾಗ, ಚಿತ್ರದುರ್ಗ ಇವರು ಉಲ್ಲೇಖ (1)ರಲ್ಲಿ ಕಾಣಿಸಿದ ಪ್ರಸ್ತಾವನೆ ಪ್ರಕಾರ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ ತೆಂಗಿನ ನಾರನ್ನು ಮತ್ತು ನಾರಿನ ಸರಕುಗಳನ್ನು ಉತ್ಪಾದಿಸುವ ಮತ್ತು ಮಾರಾಟ ಮಾಡುವ ಸಹಕಾರ ಸಂಘ

ನಿ. ಬೊಮ್ಮೇನಹಳ್ಳಿ, ಚಿತ್ರದುರ್ಗ ತಾಲ್ಲೂಕು ಸಂಘದ ನೋಂದಣಿ ಸಂಖ್ಯೆ: ಸನಿ:30:713/ಆರ್‌ಜಿಎನ್/24526/1997-98, ದಿನಾಂಕ:26.11.1997 ಈ ಸಂಘದ ಕಾರ್ಯ ಚಟುವಟಿಕೆಗಳು ಅನೇಕ ವರ್ಷಗಳಿಂದ ಸ್ಥಗಿತಗೊಂಡಿರುತ್ತದೆ. ಸಂಘದ ಆಡಳಿತ ಸಮಿತಿಯವರು ಸಂಘದ ಅಭಿವೃದ್ಧಿ ಬಗ್ಗೆ ಗಮನಹರಿಸುವಲ್ಲಿ ವಿಫಲರಾಗಿರುತ್ತಾರೆ ಮತ್ತು ಸಂಘವನ್ನು ಪುನಃಶ್ಚೇತನಗೊಳಿಸುವಲ್ಲಿ ಆಸಕ್ತಿ ಇರುವುದಿಲ್ಲವೆಂದು ಪ್ರಸ್ತಾವನೆ ಸಲ್ಲಿಸಿ ಸಂಘವನ್ನು ಸಮಾಪನೆಗೊಳಿಸಲು ಕೋರಿರುತ್ತಾರೆ. ಈ ಬಗ್ಗೆ ಉಲ್ಲೇಖ (2) ರ ನೋಟೀಸನ್ನು ಈ ಕಛೇರಿಯಿಂದ ನೀಡಿದ್ದು, ಸಂಘದ ಆಡಳಿತ ಮಂಡಳಿಯವರಿಗೆ ನೋಟೀಸು ಜಾರಿ ಮಾಡಿ ಸ್ವೀಕೃತಿ ಈ ಕಛೇರಿ ತಲುಪಿದ್ದು ಆದಾಗ್ಯೂ ಅವರು ಯಾವುದೇ ಸಮಜಾಯಿಷಿ ಅಥವಾ ಪ್ರತಿಕ್ರಿಯೆಯನ್ನು ನೀಡದೇ ನಿರುತ್ಸಾಹ ತೋರಿಸಿರುತ್ತಾರೆ. ಈ ಸಂಘದಿಂದ ಸಂಘದ ಸದಸ್ಯರಿಗೆ ಯಾವ ರೀತಿಯ ಪ್ರಯೋಜನವೂ ದೊರೆಯುತ್ತಿಲ್ಲ, ಇದರಿಂದ ಸಂಘವು ಪುನಃಶ್ಚೇತನಗೊಳಿಸುವ ಹಂತವನ್ನು ಮೀರಿರುತ್ತದೆ. ಸಂಘವನ್ನು ಇದೇ ರೀತಿ ಮುಂದುವರಿಸಲು ಬಿಟ್ಟಲ್ಲಿ ಸಂಘವು ಇನ್ನಷ್ಟು ಅಧೋಗತಿಗೆ ಹೋಗುವ ಸಂಭವವಿರುವುದರಿಂದ ಸಮಾಪನೆಗೊಳಿಸುವುದೇ ಸೂಕ್ತವೆಂದು ಅಭಿಪ್ರಾಯಪಟ್ಟು ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

ಆದೇಶ

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಹಾಗೂ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 72(2) ರನ್ವಯ ಸರ್ಕಾರದ ಅಧಿಸೂಚನೆ ಸಂಖ್ಯೆ: ನಂ.ಸಿಓ:201: ಸಿಎಲ್‌ಎಂ:2008/ಬೆಂಗಳೂರು ದಿನಾಂಕ:27.05.2010 ಪ್ರಕಾರ ದತ್ತವಾದ ಅಧಿಕಾರದನ್ವಯ ಇಲ್ಯಾಸ್ ಉಲ್ಲಾ ಷರೀಫ್ ಸಹಕಾರ ಸಂಘಗಳ ಉಪನಿಬಂಧಕರು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ಆದ ನಾನು ದತ್ತವಾದ ಅಧಿಕಾರವನ್ನು ಚಲಾಯಿಸುತ್ತಾ, ಸ್ಥಗಿತಗೊಂಡಿರುವ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ ತೆಂಗಿನ ನಾರನ್ನು ಮತ್ತು ನಾರಿನ ಸರಕುಗಳನ್ನು ಉತ್ಪಾದಿಸುವ ಮತ್ತು ಮಾರಾಟ ಮಾಡುವ ಸಹಕಾರ ಸಂಘ ನಿ. ಬೊಮ್ಮೇನಹಳ್ಳಿ, ಚಿತ್ರದುರ್ಗ ತಾಲ್ಲೂಕು ಇದನ್ನು ಸಮಾಪನೆಗೊಳಿಸಿ, ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 73(1) ಅನ್ವಯ ಸಹಕಾರ ಸಂಘಗಳ ನಿರೀಕ್ಷಕರು, ಚಿತ್ರದುರ್ಗ ತಾಲ್ಲೂಕು ಇವರನ್ನು ಸಂಘದ ಸಮಾಪನಾಧಿಕಾರಿಯನ್ನಾಗಿ ಅಧಿಕ ಪ್ರಭಾರದಲ್ಲಿ ನೇಮಿಸಿರುತ್ತೇನೆ. ಸಮಾಪನಾಧಿಕಾರಿಯು ಸಂಘದ ವಿಶಿಷ್ಟ ಪ್ರಭಾರವನ್ನು ಮತ್ತು ಸಂಘದ ಆಸ್ತಿಗಳನ್ನು ಸಂಘದ ಕಾರ್ಯದರ್ಶಿ ಅಥವಾ ಸಂಘದ ಪ್ರಭಾರ ಹೊಂದಿದ ಯಾವುದೇ ವ್ಯಕ್ತಿಯಿಂದ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 73 (1) ಮತ್ತು 74ರ ನಿಯಮದ ಪ್ರಕಾರ ಪಡೆದುಕೊಳ್ಳತಕ್ಕದ್ದು.

ನನ್ನ ಸ್ವ ಸಹಿ ಮತ್ತು ಕಛೇರಿಯ ಮೊಹರಿನೊಂದಿಗೆ ಈ ದಿನಾಂಕ:31.01.2011 ರಂದು ಈ ಆದೇಶವನ್ನು ಹೊರಡಿಸಿರುತ್ತೇನೆ.

ಸಹಕಾರ ಸಂಘಗಳ ಉಪ ನಿಬಂಧಕರು,
ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ.

ಪಿ.ಆರ್.500

ಸಹಕಾರ ಇಲಾಖೆ

ಸಹಕಾರ ಸಂಘಗಳ ಉಪನಿಬಂಧಕರು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ಇವರ ಕಛೇರಿ

ನಂ.ಡಿಆರ್‌ಡಿ:ಎಲ್‌ಕ್ಯೂಡಿ:ಸಿಆರ್:41:2010-11, ದಿನಾಂಕ:31.03.2011

ವಿಷಯ: ಸ್ಥಗಿತಗೊಂಡಿರುವ ಬುರುಜನಹಟ್ಟಿ ಗೃಹ ಕೈಗಾರಿಕಾ ಸಹಕಾರ ಸಂಘ ನಿ. ಚಿತ್ರದುರ್ಗ ಇದನ್ನು 1959ನೇ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ ಕಲಂ 72 ಮತ್ತು 73 ರನ್ವಯ ಸಮಾಪನೆ ಬಗ್ಗೆ.

ಉಲ್ಲೇಖ: 1) ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಚಿತ್ರದುರ್ಗ ಇವರ ಪತ್ರದ ಸಂಖ್ಯೆ: ಸನಿ:30: ಸಮಾಪನೆ: ಸಿಆರ್:39/10-11 ದಿನಾಂಕ:16.11.2010.

2) ಈ ಕಛೇರಿಯ ಕಾರಣ ಕೇಳಿ ನೋಟೀಸು ಸಮ ಸಂಖ್ಯೆ ದಿನಾಂಕ:19.11.2010.

ಪ್ರಸ್ತಾವನೆ:

ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಚಿತ್ರದುರ್ಗ ಉಪ ವಿಭಾಗ, ಚಿತ್ರದುರ್ಗ ಇವರು ಉಲ್ಲೇಖ (1)ರಲ್ಲಿ ಕಾಣಿಸಿದ ಪ್ರಸ್ತಾವನೆ ಪ್ರಕಾರ ಬುರುಜನಹಟ್ಟಿ ಗೃಹ ಕೈಗಾರಿಕಾ ಸಹಕಾರ ಸಂಘ ನಿ. ಚಿತ್ರದುರ್ಗ ಸಂಘದ ನೋಂದಣಿ ಸಂಖ್ಯೆ: ಎಆರ್30/ಆರ್‌ಎಸ್‌ಆರ್/ಸಿಆರ್-31/16773/90-91, ದಿನಾಂಕ:26.02.1991 ಈ ಸಂಘದ ಕಾರ್ಯ ಚಟುವಟಿಕೆಗಳು ಅನೇಕ ವರ್ಷಗಳಿಂದ ಸ್ಥಗಿತಗೊಂಡಿರುತ್ತದೆ. ಸಂಘದ ಆಡಳಿತ ಸಮಿತಿಯವರು ಸಂಘದ ಅಭಿವೃದ್ಧಿ ಬಗ್ಗೆ ಗಮನಹರಿಸುವಲ್ಲಿ ವಿಫಲರಾಗಿರುತ್ತಾರೆ ಮತ್ತು ಸಂಘವನ್ನು ಪುನಃಶ್ಚೇತನಗೊಳಿಸುವಲ್ಲಿ ಆಸಕ್ತಿ ಇರುವುದಿಲ್ಲವೆಂದು ಪ್ರಸ್ತಾವನೆ ಸಲ್ಲಿಸಿ ಸಂಘವನ್ನು ಸಮಾಪನೆಗೊಳಿಸಲು ಕೋರಿರುತ್ತಾರೆ. ಈ ಬಗ್ಗೆ ಉಲ್ಲೇಖ (2) ರ ನೋಟೀಸನ್ನು ಈ ಕಛೇರಿಯಿಂದ ನೀಡಿದ್ದು, ಸಂಘದ ಆಡಳಿತ ಮಂಡಳಿಯವರಿಗೆ ನೋಟೀಸು ಜಾರಿ ಮಾಡಿ ಸ್ವೀಕೃತಿ ಈ ಕಛೇರಿ ತಲುಪಿದ್ದು ಆದಾಗ್ಯೂ ಅವರು ಯಾವುದೇ ಸಮಜಾಯಿಷಿ ಅಥವಾ ಪ್ರತಿಕ್ರಿಯೆಯನ್ನು ನೀಡದೇ ನಿರುತ್ಸಾಹ ತೋರಿಸಿರುತ್ತಾರೆ. ಈ ಸಂಘದಿಂದ ಸಂಘದ ಸದಸ್ಯರಿಗೆ ಯಾವ ರೀತಿಯ ಪ್ರಯೋಜನವೂ ದೊರೆಯುತ್ತಿಲ್ಲ, ಇದರಿಂದ ಸಂಘವು ಪುನಃಶ್ಚೇತನಗೊಳಿಸುವ ಹಂತವನ್ನು ಮೀರಿರುತ್ತದೆ. ಸಂಘವನ್ನು ಇದೇ ರೀತಿ ಮುಂದುವರಿಸಲು ಬಿಟ್ಟಲ್ಲಿ ಸಂಘವು ಇನ್ನಷ್ಟು ಅಧೋಗತಿಗೆ ಹೋಗುವ ಸಂಭವವಿರುವುದರಿಂದ ಸಮಾಪನೆಗೊಳಿಸುವುದೇ ಸೂಕ್ತವೆಂದು ಅಭಿಪ್ರಾಯಪಟ್ಟು ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

ಆದೇಶ

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಹಾಗೂ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 72(2) ರನ್ವಯ ಸರ್ಕಾರದ ಅಧಿಸೂಚನೆ ಸಂಖ್ಯೆ: ನಂ.ಸಿಓ:201: ಸಿಎಲ್‌ಎಂ:2008/ಬೆಂಗಳೂರು ದಿನಾಂಕ:27.05.2010 ಪ್ರಕಾರ ದತ್ತವಾದ ಅಧಿಕಾರದನ್ವಯ ಇಲ್ಯಾಸ್ ಉಲ್ಲಾ ಷರೀಫ್ ಸಹಕಾರ ಸಂಘಗಳ ಉಪನಿಬಂಧಕರು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ಆದ ನಾನು ದತ್ತವಾದ ಅಧಿಕಾರವನ್ನು ಚಲಾಯಿಸುತ್ತಾ, ಸ್ಥಗಿತಗೊಂಡಿರುವ ಬುರುಜನಹಟ್ಟಿ ಗೃಹ ಕೈಗಾರಿಕಾ ಸಹಕಾರ ಸಂಘ ನಿ. ಚಿತ್ರದುರ್ಗ ಇದನ್ನು ಸಮಾಪನೆಗೊಳಿಸಿ, ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 73(1) ಅನ್ವಯ ಕು॥ ಬಿ.ಎಂ. ಲಕ್ಷ್ಮಿದೇವಿ, ಅಧೀಕ್ಷಕರು, ಸಹಕಾರ ಸಂಘಗಳ ಉಪ ನಿಬಂಧಕರ ಕಛೇರಿ, ಚಿತ್ರದುರ್ಗ ಇವರನ್ನು

ಸಂಘದ ಸಮಾಪನಾಧಿಕಾರಿಯನ್ನಾಗಿ ಅಧಿಕ ಪ್ರಭಾರದಲ್ಲಿ ನೇಮಿಸಿರುತ್ತೇನೆ. ಸಮಾಪನಾಧಿಕಾರಿಯು ಸಂಘದ ವಿಶಿಷ್ಟ ಪ್ರಭಾರವನ್ನು ಮತ್ತು ಸಂಘದ ಆಸ್ತಿಗಳನ್ನು ಸಂಘದ ಕಾರ್ಯದರ್ಶಿ ಅಥವಾ ಸಂಘದ ಪ್ರಭಾರ ಹೊಂದಿದ ಯಾವುದೇ ವ್ಯಕ್ತಿಯಿಂದ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 73 (1) ಮತ್ತು 74ರ ನಿಯಮದ ಪ್ರಕಾರ ಪಡೆದುಕೊಳ್ಳತಕ್ಕದ್ದು.

ನನ್ನ ಸ್ವ ಸಹಿ ಮತ್ತು ಕಛೇರಿಯ ಮೊಹರಿನೊಂದಿಗೆ ಈ ದಿನಾಂಕ:31.03.2011 ರಂದು ಈ ಆದೇಶವನ್ನು ಹೊರಡಿಸಿರುತ್ತೇನೆ.

ಸಹಕಾರ ಸಂಘಗಳ ಉಪ ನಿಬಂಧಕರು,
ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ.

ಸಹಕಾರ ಇಲಾಖೆ

ಸಹಕಾರ ಸಂಘಗಳ ಉಪನಿಬಂಧಕರು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ಇವರ ಕಛೇರಿ

ನಂ.ಡಿಆರ್‌ಡಿ:ಎಲ್‌ಕ್ಯೂಡಿ:ಸಿಆರ್: :2010-11, ದಿನಾಂಕ:21.03.2011

ವಿಷಯ: ಸ್ಥಗಿತಗೊಂಡಿರುವ ಎಸ್.ಜೆ.ಎಂ. ಕಾಲೇಜ್ ನೌಕರರ ಸಹಕಾರ ಸಂಘ ನಿ. ಚಿತ್ರದುರ್ಗ ಇದನ್ನು 1959ನೇ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ ಕಲಂ 72 ಮತ್ತು 73 ರನ್ವಯ ಸಮಾಪನೆ ಬಗ್ಗೆ.

ಉಲ್ಲೇಖ: 1) ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಚಿತ್ರದುರ್ಗ ಇವರ ಪತ್ರದ ಸಂಖ್ಯೆ: ಸನಿ:30: ಸಮಾಪನೆ: ಸಿಆರ್:77/10-11 ದಿನಾಂಕ:04.02.2011.

2) ಈ ಕಛೇರಿಯ ಕಾರಣ ಕೇಳಿ ನೋಟೀಸು ಸಮ ಸಂಖ್ಯೆ ದಿನಾಂಕ:22.02.2011.

ಪ್ರಸ್ತಾವನೆ:

ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಚಿತ್ರದುರ್ಗ ಉಪ ವಿಭಾಗ, ಚಿತ್ರದುರ್ಗ ಇವರು ಉಲ್ಲೇಖ (1)ರಲ್ಲಿ ಕಾಣಿಸಿದ ಪ್ರಸ್ತಾವನೆ ಪ್ರಕಾರ ಎಸ್.ಜೆ.ಎಂ. ಕಾಲೇಜ್ ನೌಕರರ ಸಹಕಾರ ಸಂಘ ನಿ. ಚಿತ್ರದುರ್ಗ ಸಂಘದ ನೋಂದಣಿ ಸಂಖ್ಯೆ: ಎಆರ್‌ಸಿ/ಆರ್‌ಜಿಎನ್/465/79-80, ದಿನಾಂಕ:06.02.1980 ಈ ಸಂಘದ ಕಾರ್ಯ ಚಟುವಟಿಕೆಗಳು ಅನೇಕ ವರ್ಷಗಳಿಂದ ಸ್ಥಗಿತಗೊಂಡಿರುತ್ತದೆ. ಸಂಘದ ಆಡಳಿತ ಸಮಿತಿಯವರು ಸಂಘದ ಅಭಿವೃದ್ಧಿ ಬಗ್ಗೆ ಗಮನಹರಿಸುವಲ್ಲಿ ವಿಫಲರಾಗಿರುತ್ತಾರೆ ಮತ್ತು ಸಂಘವನ್ನು ಪುನಃಶ್ಚೇತನಗೊಳಿಸುವಲ್ಲಿ ಆಸಕ್ತಿ ಇರುವುದಿಲ್ಲವೆಂದು ಪ್ರಸ್ತಾವನೆ ಸಲ್ಲಿಸಿ ಸಂಘವನ್ನು ಸಮಾಪನೆಗೊಳಿಸಲು ಕೋರಿರುತ್ತಾರೆ. ಈ ಬಗ್ಗೆ ಉಲ್ಲೇಖ (2) ರ ನೋಟೀಸನ್ನು ಈ ಕಛೇರಿಯಿಂದ ನೀಡಿದ್ದು, ಸಂಘದ ಆಡಳಿತ ಮಂಡಳಿಯವರಿಗೆ ನೋಟೀಸು ಜಾರಿ ಮಾಡಿ ಸ್ವೀಕೃತಿ ಈ ಕಛೇರಿ ತಲುಪಿದ್ದು ಆದಾಗ್ಯೂ ಅವರು ಯಾವುದೇ ಸಮಜಾಯಿಷಿ ಅಥವಾ ಪ್ರತಿಕ್ರಿಯೆಯನ್ನು ನೀಡದೇ ನಿರುತ್ಸಾಹ ತೋರಿಸಿರುತ್ತಾರೆ. ಈ ಸಂಘದಿಂದ ಸಂಘದ ಸದಸ್ಯರಿಗೆ ಯಾವ ರೀತಿಯ ಪ್ರಯೋಜನವೂ ದೊರೆಯುತ್ತಿಲ್ಲ, ಇದರಿಂದ ಸಂಘವು ಪುನಃಶ್ಚೇತನಗೊಳಿಸುವ ಹಂತವನ್ನು ಮೀರಿರುತ್ತದೆ. ಸಂಘವನ್ನು ಇದೇ ರೀತಿ ಮುಂದುವರಿಸಲು ಬಿಟ್ಟಲ್ಲಿ ಸಂಘವು ಇನ್ನಷ್ಟು ಅಧೋಗತಿಗೆ ಹೋಗುವ ಸಂಭವವಿರುವುದರಿಂದ ಸಮಾಪನೆಗೊಳಿಸುವುದೇ ಸೂಕ್ತವೆಂದು ಅಭಿಪ್ರಾಯಪಟ್ಟು ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

ಆದೇಶ

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಹಾಗೂ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 72(2) ರನ್ವಯ ಸರ್ಕಾರದ ಅಧಿಸೂಚನೆ ಸಂಖ್ಯೆ: ನಂ.ಸಿಓ:201: ಸಿಎಲ್‌ಎಂ:2008/ಬೆಂಗಳೂರು ದಿನಾಂಕ:27.05.2010 ಪ್ರಕಾರ ದತ್ತವಾದ ಅಧಿಕಾರದನ್ವಯ ಇಲ್ಯಾಸ್ ಉಲ್ಲಾ ಷರೀಫ್ ಸಹಕಾರ ಸಂಘಗಳ ಉಪನಿಬಂಧಕರು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ಆದ ನಾನು ದತ್ತವಾದ ಅಧಿಕಾರವನ್ನು ಚಲಾಯಿಸುತ್ತಾ, ಸ್ಥಗಿತಗೊಂಡಿರುವ ಎಸ್.ಜೆ.ಎಂ. ಕಾಲೇಜ್ ನೌಕರರ ಸಹಕಾರ ಸಂಘ ನಿ. ಚಿತ್ರದುರ್ಗ ಇದನ್ನು ಸಮಾಪನೆಗೊಳಿಸಿ, ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 73(1) ಅನ್ವಯ ಶ್ರೀ ಎಸ್.ಇ. ಮಂಜುನಾಥ್, ಸಹಕಾರ ಸಂಘಗಳ ಹಿರಿಯ ನಿರೀಕ್ಷಕರು, ಸಹಕಾರ ಸಂಘಗಳ ಉಪ ನಿಬಂಧಕರ ಕಛೇರಿ, ಚಿತ್ರದುರ್ಗ ಇವರನ್ನು ಸಂಘದ ಸಮಾಪನಾಧಿಕಾರಿಯನ್ನಾಗಿ ಅಧಿಕ ಪ್ರಭಾರದಲ್ಲಿ ನೇಮಿಸಿರುತ್ತೇನೆ. ಸಮಾಪನಾಧಿಕಾರಿಯು ಸಂಘದ ವಿಶಿಷ್ಟ ಪ್ರಭಾರವನ್ನು ಮತ್ತು ಸಂಘದ ಆಸ್ತಿಗಳನ್ನು ಸಂಘದ ಕಾರ್ಯದರ್ಶಿ ಅಥವಾ ಸಂಘದ ಪ್ರಭಾರ ಹೊಂದಿದ ಯಾವುದೇ ವ್ಯಕ್ತಿಯಿಂದ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 73 (1) ಮತ್ತು 74ರ ನಿಯಮದ ಪ್ರಕಾರ ಪಡೆದುಕೊಳ್ಳತಕ್ಕದ್ದು.

ನನ್ನ ಸ್ವ ಸಹಿ ಮತ್ತು ಕಛೇರಿಯ ಮೊಹರಿನೊಂದಿಗೆ ಈ ದಿನಾಂಕ:21.03.2011 ರಂದು ಈ ಆದೇಶವನ್ನು ಹೊರಡಿಸಿರುತ್ತೇನೆ.

ಸಹಕಾರ ಸಂಘಗಳ ಉಪ ನಿಬಂಧಕರು,
ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ.

ಸಹಕಾರ ಇಲಾಖೆ

ಸಹಕಾರ ಸಂಘಗಳ ಉಪನಿಬಂಧಕರು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ಇವರ ಕಛೇರಿ

ನಂ.ಡಿಆರ್‌ಡಿ:ಎಲ್‌ಕ್ಯೂಡಿ:ಸಿಆರ್:26 :2010-11, ದಿನಾಂಕ:21.03.2011

ವಿಷಯ: ಸ್ಥಗಿತಗೊಂಡಿರುವ ಹರಳಯ್ಯ ಆರ್ಥಿಕಾಭಿವೃದ್ಧಿ ಸಹಕಾರ ಸಂಘ ನಿ. ಮಠದಕುರುಬರಹಟ್ಟಿ, ಚಿತ್ರದುರ್ಗ ತಾಲ್ಲೂಕು ಇದನ್ನು 1959ನೇ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ ಕಲಂ 72 ಮತ್ತು 73 ರನ್ವಯ ಸಮಾಪನೆ ಬಗ್ಗೆ.

ಉಲ್ಲೇಖ: 1) ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಚಿತ್ರದುರ್ಗ ಇವರ ಪತ್ರದ ಸಂಖ್ಯೆ: ಸನಿ:30: ಸಮಾಪನೆ: ಸಿಆರ್:19/10-11 ದಿನಾಂಕ:10.11.2010.

2) ಈ ಕಛೇರಿಯ ಕಾರಣ ಕೇಳಿ ನೋಟೀಸು ಸಮ ಸಂಖ್ಯೆ ದಿನಾಂಕ:12.11.2010.

ಪ್ರಸ್ತಾವನೆ:

ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಚಿತ್ರದುರ್ಗ ಉಪ ವಿಭಾಗ, ಚಿತ್ರದುರ್ಗ ಇವರು ಉಲ್ಲೇಖ (1)ರಲ್ಲಿ ಕಾಣಿಸಿದ ಪ್ರಸ್ತಾವನೆ ಪ್ರಕಾರ ಹರಳಯ್ಯ ಆರ್ಥಿಕಾಭಿವೃದ್ಧಿ ಸಹಕಾರ ಸಂಘ ನಿ. ಮಠದಕುರುಬರಹಟ್ಟಿ, ಚಿತ್ರದುರ್ಗ ತಾಲ್ಲೂಕು ಸಂಘದ ನೋಂದಣಿ ಸಂಖ್ಯೆ: ಎಆರ್/30/ಆರ್‌ಜಿಎನ್/30502/2002–03, ದಿನಾಂಕ:04.01.2003 ಈ ಸಂಘದ ಕಾರ್ಯ ಚಟುವಟಿಕೆಗಳು ಅನೇಕ ವರ್ಷಗಳಿಂದ ಸ್ಥಗಿತಗೊಂಡಿರುತ್ತದೆ. ಸಂಘದ ಆಡಳಿತ ಸಮಿತಿಯವರು ಸಂಘದ ಅಭಿವೃದ್ಧಿ ಬಗ್ಗೆ ಗಮನಹರಿಸುವಲ್ಲಿ ವಿಫಲರಾಗಿರುತ್ತಾರೆ ಮತ್ತು ಸಂಘವನ್ನು ಪುನಃಶ್ಚೇತನಗೊಳಿಸುವಲ್ಲಿ ಆಸಕ್ತಿ ಇರುವುದಿಲ್ಲವೆಂದು ಪ್ರಸ್ತಾವನೆ ಸಲ್ಲಿಸಿ ಸಂಘವನ್ನು ಸಮಾಪನೆಗೊಳಿಸಲು ಕೋರಿರುತ್ತಾರೆ. ಈ ಬಗ್ಗೆ ಉಲ್ಲೇಖ (2) ರ ನೋಟೀಸನ್ನು ಈ ಕಛೇರಿಯಿಂದ ನೀಡಿದ್ದು, ಸಂಘದ ಆಡಳಿತ ಮಂಡಳಿಯವರಿಗೆ ನೋಟೀಸು ಜಾರಿ ಮಾಡಿ ಸ್ವೀಕೃತಿ ಈ ಕಛೇರಿ ತಲುಪಿದ್ದು ಆದಾಗ್ಯೂ ಅವರು ಯಾವುದೇ ಸಮಜಾಯಿಷಿ ಅಥವಾ ಪ್ರತಿಕ್ರಿಯೆಯನ್ನು ನೀಡದೇ ನಿರುತ್ಸಾಹ ತೋರಿಸಿರುತ್ತಾರೆ. ಈ ಸಂಘದಿಂದ ಸಂಘದ ಸದಸ್ಯರಿಗೆ ಯಾವ ರೀತಿಯ ಪ್ರಯೋಜನವೂ ದೊರೆಯುತ್ತಿಲ್ಲ, ಇದರಿಂದ ಸಂಘವು ಪುನಃಶ್ಚೇತನಗೊಳಿಸುವ ಹಂತವನ್ನು ಮೀರಿರುತ್ತದೆ. ಸಂಘವನ್ನು ಇದೇ ರೀತಿ ಮುಂದುವರಿಸಲು ಬಿಟ್ಟಲ್ಲಿ ಸಂಘವು ಇನ್ನಷ್ಟು ಅಧೋಗತಿಗೆ ಹೋಗುವ ಸಂಭವವಿರುವುದರಿಂದ ಸಮಾಪನೆಗೊಳಿಸುವುದೇ ಸೂಕ್ತವೆಂದು ಅಭಿಪ್ರಾಯಪಟ್ಟು ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

ಆದೇಶ

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಹಾಗೂ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 72(2) ರನ್ವಯ ಸರ್ಕಾರದ ಅಧಿಸೂಚನೆ ಸಂಖ್ಯೆ: ನಂ.ಸಿಓ:201: ಸಿಎಲ್‌ಎಂ:2008/ಬೆಂಗಳೂರು ದಿನಾಂಕ:27.05.2010 ಪ್ರಕಾರ ದತ್ತವಾದ ಅಧಿಕಾರದನ್ವಯ ಇಲ್ಯಾಸ್ ಉಲ್ಲಾ ಷರೀಫ್ ಸಹಕಾರ ಸಂಘಗಳ ಉಪನಿಬಂಧಕರು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ಆದ ನಾನು ದತ್ತವಾದ ಅಧಿಕಾರವನ್ನು ಚಲಾಯಿಸುತ್ತಾ, ಸ್ಥಗಿತಗೊಂಡಿರುವ ಹರಳಯ್ಯ ಆರ್ಥಿಕಾಭಿವೃದ್ಧಿ ಸಹಕಾರ ಸಂಘ ನಿ. ಮಠದಕುರುಬರಹಟ್ಟಿ, ಚಿತ್ರದುರ್ಗ ತಾಲ್ಲೂಕು ಇದನ್ನು ಸಮಾಪನೆಗೊಳಿಸಿ, ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 73(1) ಅನ್ವಯ ಶ್ರೀ ಕೆ.ಎನ್. ನಾಗರಾಜ, ಸಹಕಾರ ಸಂಘಗಳ ನಿರೀಕ್ಷಕರು, ಸಹಕಾರ ಸಂಘಗಳ ಸಹಾಯಕ ನಿಬಂಧಕರ ಕಛೇರಿ, ಚಿತ್ರದುರ್ಗ ಉಪವಿಭಾಗ, ಚಿತ್ರದುರ್ಗ ಇವರನ್ನು ಸಂಘದ ಸಮಾಪನಾಧಿಕಾರಿಯನ್ನಾಗಿ ಅಧಿಕ ಪ್ರಭಾರದಲ್ಲಿ ನೇಮಿಸಿರುತ್ತೇನೆ. ಸಮಾಪನಾಧಿಕಾರಿಯು ಸಂಘದ ವಿಶಿಷ್ಟ ಪ್ರಭಾರವನ್ನು ಮತ್ತು ಸಂಘದ ಆಸ್ತಿಗಳನ್ನು ಸಂಘದ ಕಾರ್ಯದರ್ಶಿ ಅಥವಾ ಸಂಘದ ಪ್ರಭಾರ ಹೊಂದಿದ ಯಾವುದೇ ವ್ಯಕ್ತಿಯಿಂದ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 73 (1) ಮತ್ತು 74ರ ನಿಯಮದ ಪ್ರಕಾರ ಪಡೆದುಕೊಳ್ಳತಕ್ಕದ್ದು.

ನನ್ನ ಸ್ವ ಸಹಿ ಮತ್ತು ಕಛೇರಿಯ ಮೊಹರಿನೊಂದಿಗೆ ಈ ದಿನಾಂಕ:21.03.2011 ರಂದು ಈ ಆದೇಶವನ್ನು ಹೊರಡಿಸಿರುತ್ತೇನೆ.

ಸಹಕಾರ ಸಂಘಗಳ ಉಪ ನಿಬಂಧಕರು,
ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ.

ಪಿ.ಆರ್.512

ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ ಇವರ ನ್ಯಾಯಾಲಯದಲ್ಲಿ

ಬಿ3:ಅಮೊ:ವಾಹನ:ವಿವ:12/10–11, ದಿನಾಂಕ:25–06–2011

ಉಪಸ್ಥಿತರು : ಶ್ರೀ ಮನೋಜ್ ಕುಮಾರ್ ತ್ರಿಪಾಠಿ, ಭಾ.ಅ.ಸೇ.,
ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ,ಸಾಗರ ವಿಭಾಗ, ಸಾಗರ.

ಪಿರ್ಯಾಧಿದಾರರು : ವಲಯ ಅರಣ್ಯಾಧಿಕಾರಿ,
ಆನಂದಪುರಂ ವಲಯ, ಚೋರಡಿ
(ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು, ಸಾಗರ)

ಆರೋಪಿಗಳು : (1) ನಾಗರಾಜ (2) ಚೆನ್ನ

ಭಾಧ್ಯತೆದಾರರು : ಯಾರೂ ಹಕ್ಕುಬಾಧ್ಯತೆಯ ಅರ್ಜಿ ಸಲ್ಲಿಸಿಲ್ಲ.

ಪ್ರಸ್ತಾವನೆ:

ದಿ:28–07–2010 ರಂದು ಆನಂದಪುರಂ ವಲಯ, ಚೋರಡಿ ಶಾಖೆಯ ವನಪಾಲಕ ಮತ್ತು ಸಿಬ್ಬಂದಿಯವರು ರಾಷ್ಟ್ರೀಯ ಹೆದ್ದಾರಿ–206ರಲ್ಲಿ ಸಂಪಿಗೆಸರದ ಬಳಿ ರಸ್ತೆಯಲ್ಲಿ ಬರುವ ಎಲ್ಲಾ ವಾಹನಗಳನ್ನು ತಪಾಸಣೆ ಮಾಡುತ್ತಿರುವಾಗ ಒಂದು ಮಾರುತಿ ಓಮ್ನಿ ನಿಲ್ಲಿಸದೇ ಶಿವಮೊಗ್ಗದ ಕಡೆ ವೇಗವಾಗಿ ಹೋದಾಗ ಇಲಾಖಾ ವಾಹನ ಜೀಪ್ ಕೆಎ–15–ಜಿ–86ರಲ್ಲಿ ಬೆನ್ನಟ್ಟಿದಾಗ ವಾಹನವನ್ನು ಶಿವಮೊಗ್ಗ ತಾ॥ ಚೋರಡಿ ಗ್ರಾಮದ ಹೆಗ್ಗರೆ ಬಳಿ ಎನ್.ಹೆಚ್–206ರಲ್ಲಿ ನಿಲ್ಲಿಸಿ, ವಾಹನದಲ್ಲಿದ್ದ 2 ಜನ ಆಸಾಮಿಗಳು ಕಾರಿನಿಂದಳಿದು ಪಕ್ಕದ ಕಾಡಿನಲ್ಲಿ ಓಡಿ ಪರಾರಿಯಾದರು. ಓಡಿ ಹೋದವರು (1) ಒಂದನೇಯವನು ನಾಗರಾಜ್ ಬಿನ್ ಸಣ್ಣಹಾಲಪ್ಪ, ಬಸವನಹೊಂಡ ವಾಸಿ, ಯಡೇಹಳ್ಳಿ ಗ್ರಾಮ (2) ಎರಡನೇಯವನು ಚೆನ್ನ ಬಿನ್ ಸಣ್ಣ, ಸುರುಗುಂದ ವಾಸಿ, ಎಂದು ಗುರುತಿಸಿದರು. ನಂತರ ವಾಹನ ಪರಿಶೀಲಿಲಾಗಿ ಮಾರುತಿ ಓಮ್ನಿ ಕೆಎ–15–ಎಂ–3260, ಛಾಸ್ಸಿಸ್ ನಂ: ST-91-IN-2339, ಇಂಜಿನ್ ನಂಬರ್ ಕಂಡುಬಂದಿರುವುದಿಲ್ಲ. ವಾಹನಗದೊಳಗಡೆ ಆಗತಾನೇ ಗರಗಸದಿಂದ ಕೊಯ್ತು ಮಾಡಿದ ಹಸಿ 5 ಬೀಟೆ ನಾಟಾವಿದ್ದು, ಅದರ ಅಳತೆ 0.480 ಎಂ3 ಪ್ರಮಾಣವಿದ್ದು, ಈ ತುಂಡುಗಳ ತುದಿ ಮತ್ತು ಬುಡದ ಜಾಗದಲ್ಲಿ ಯಾವುದೇ ಇಲಾಖಾ ಛಾಪಾದ ಗುರುತಿರಲಿಲ್ಲ. ಇದು ಅಕ್ರಮ ಸಾಗಾಣಿಕೆ ಎಂದು ಪರಿಗಣಿಸಿ, ವಾಹನ ಮತ್ತು ಅರಣ್ಯ ಉತ್ಪನ್ನಗಳಿಗೆ ಪ್ರಥಮ ವರ್ತಮಾನ ವರದಿ, ಮಹಜರ್ ವರದಿ, ಜಪ್ತು ವರದಿಯೊಂದಿಗೆ ವಾಹನ ಮತ್ತು ವಾಹನದಲ್ಲಿದ್ದ ಅರಣ್ಯ ಉತ್ಪನ್ನವನ್ನು ಇಲಾಖಾ ಪರ ಜಪ್ತುಮಾಡಿ ಕರ್ನಾಟಕ ಅರಣ್ಯ ಕಾಯ್ದೆ 1963 ಸೆಕ್ಷನ್ 62, 71(ಎ), 104 (ಎ) ಮತ್ತು

ಕರ್ನಾಟಕ ಅರಣ್ಯ ಕಾನೂನು 1969ರ ಉಪನಿಯಮ 144, 165ರ ಪ್ರಕಾರ ಚೋರಡಿ ವಲಯದ ಅರಣ್ಯ ಮೊಕದ್ದಮೆ ಸಂಖ್ಯೆ:49/10–11ನ್ನು ದಾಖಲಿಸಿ, ವಾಹನವನ್ನು ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ ಇವರ ಸಮಕ್ಷಮ ಹಾಜರ್ಪಡಿಸಿರುತ್ತಾರೆ. ನಂತರ ಈ ವಾಹನವನ್ನು ಸರ್ಕಾರಿ ನಾಟಾ ಸಂಗ್ರಹಾಲಯದಲ್ಲಿರುವ ವಾಹನ ಶೆಡ್ಡಿನಲ್ಲಿ ಸುರಕ್ಷತೆಗಾಗಿ ಇಡಲು ವಲಯ ಅರಣ್ಯಾಧಿಕಾರಿ, ಸರ್ಕಾರಿ ನಾಟಾ ಸಂಗ್ರಹಾಲಯ, ಸಾಗರ ಇವರ ಸುಪರ್ಧಿಗೆ ಕೊಡಲು ಆದೇಶವಾಗಿದೆ.

ಈ ಪ್ರಕರಣದಲ್ಲಿ ವಲಯ ಅರಣ್ಯಾಧಿಕಾರಿ, ಆನಂದಪುರಂ ವಲಯ, ಚೋರಡಿ ಇವರು ಈ ನ್ಯಾಯಾಲಯಕ್ಕೆ ವಿಚಾರಣಾ ವರದಿಯನ್ನು ಸಲ್ಲಿಸಿ, ವಾಹನ ಮತ್ತು ಅರಣ್ಯ ಉತ್ಪನ್ನವನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಕೋರಿರುತ್ತಾರೆ.

ಈ ವಾಹನದ ಬಿ ವರದಿಯನ್ನು ಈ ನ್ಯಾಯಾಲಯಕ್ಕೆ ಒದಗಿಸಲು ಸಾರಿಗೆ ಅಧಿಕಾರಿ, ಸಾಗರ ಇವರಿಗೆ ನ್ಯಾಯಾಲಯದ ಪತ್ರ ಸಂ:ಬಿ3.ಅಮೊ.ವಾಹನ.ಸಿಆರ್.22/10–11 ದಿ:11–08–2010 ರಂದು ಪತ್ರ ಬರೆದು ಕೋರಲಾಗಿದೆ. ಅದರಂತೆ ಸಾರಿಗೆ ಅಧಿಕಾರಿ, ಸಾಗರ ಇವರ ಪತ್ರ ಸಂ:ಸಪ್ರಾಸಅ.ಸಾಗರ.ಜಿಎನ್/10–11 ದಿ:08–03–2011 ರಂದು ಈ ವಾಹನದ ಬಿ ಎಕ್ಸ್‌ಟ್ರ್ಯಾಕ್ಟ್‌ನ್ನು ಈ ನ್ಯಾಯಾಲಯಕ್ಕೆ ಒದಗಿಸಿರುತ್ತಾರೆ. ಬಿ ಎಕ್ಸ್‌ಟ್ರ್ಯಾಕ್ಟ್‌ನಲ್ಲಿ ನಮೂದಿಸಿದ ಆರ್.ಸಿ ಮಾಲೀಕರಾದ ಶ್ರೀ ನಾಗರಾಜ ಬಿನ್ ಸಣ್ಣಪ್ಪ, ಬಸವನಹೊಂಡ, ಗೊದಹಳ್ಳಿ ಸಾಗರ ಇವರಿಗೆ ದಿ:18–03–2011 ರಂದು ಕರ್ನಾಟಕ ಅರಣ್ಯ ಕಾಯಿದೆ 1963 ಸೆಕ್ಷನ್ 71(ಬಿ)(1)ರ ಪ್ರಕಾರ ನಿಮ್ಮ ವಾಹನಕ್ಕೆ ಸಂಬಂಧಪಟ್ಟ ದಾಖಲೆಗಳನ್ನು ಈ ನ್ಯಾಯಾಲಯಕ್ಕೆ ಈ ನೋಟಿಸ್ ತಲುಪಿದ 30 ದಿನಗಳೊಳಗಾಗಿ ಸಲ್ಲಿಸುವುದು. ಇಲ್ಲವಾದಲ್ಲಿ ವಾಹನ ಮತ್ತು ವಾಹನದಲ್ಲಿದ್ದ ಅರಣ್ಯ ಉತ್ಪನ್ನವನ್ನು ಸರ್ಕಾರಕ್ಕೆ ಏಕೆ ಮುಟ್ಟುಗೋಲು ಹಾಕಿಕೊಳ್ಳಬಾರದು ಎಂದು ನೋಟಿಸ್‌ನ್ನು ಜಾರಿ ಮಾಡಲಾಗಿದೆ.

ಈ ನಡುವೆ ಈ ವಾಹನದ ಬಗ್ಗೆ ಹೆಚ್ಚಿನ ಪ್ರಚಾರಕ್ಕಾಗಿ ಈ ನ್ಯಾಯಾಲಯದಿಂದ 30 ದಿನಗಳ ಕಾಲಾವಕಾಶ ನೀಡಿ ಸಂಖ್ಯೆ:ಬಿ3:ಅಮೊ:ವಾಹನ:ಸಿಆರ್–22/10–11ದಿ:11–08–2010ರಂದು ಪ್ರಕಟಣೆಯನ್ನು ಹೊರಡಿಸಿ ಪ್ರತಿಯನ್ನು ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯ ಪತ್ರ ವಿಭಾಗ, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಹಾಗೂ ನಿರ್ದೇಶಕರು, ವಾರ್ತಾ ಮತ್ತು ಪ್ರಚಾರ ಇಲಾಖೆ, ಬೆಂಗಳೂರು ಇವರಿಗೆ ಕಳುಹಿಸಿ ರಾಜ್ಯ ಮಟ್ಟದ ಪ್ರಚಲಿತ ದೈನಿಕ ಪತ್ರಿಕೆಯಲ್ಲಿ ಪ್ರಕಟಿಸಲು ಕೋರಲಾಗಿತ್ತು. ಅದರಂತೆ ದಿ: 24–08–2010 ರಂದು ಸಾಗರ ವಾರ್ತಾ ದಿನಪತ್ರಿಕೆಯಲ್ಲಿ ಮತ್ತು ದಿ:02–09–2010ರಂದು ರಾಜ್ಯ ಗೆಜೆಟ್ ಪತ್ರಿಕೆಯಲ್ಲಿ ಪ್ರಕಟಗೊಂಡು 30 ದಿನಗಳಾದರು ವಾಹನ ಮಾಲೀಕರಾಗಲೀ ಅಥವಾ ಅವರ ಪರ ವಕೀಲರಾಗಲೀ ಈ ನ್ಯಾಯಾಲಯಕ್ಕೆ ಹಕ್ಕುಬಾಧ್ಯತೆಯ ಅರ್ಜಿ ಸಲ್ಲಿಸಿರುವುದಿಲ್ಲ.

ಸಹಾಯಕ ಸರ್ಕಾರಿ ಅಭಿಯೋಜಕರು ದಿ:28–05–2011ರಂದು ವಾದ ಮಂಡಿಸಿ ಈ ವಾಹನದಲ್ಲಿ ಅರಣ್ಯ ಉತ್ಪನ್ನವನ್ನು ಕಳ್ಳ ಸಾಗಾಣಿಕೆ ಮಾಡುತ್ತಿರುವ ಸಮಯದಲ್ಲಿ ವಾಹನವನ್ನು ಅರಣ್ಯ ಉತ್ಪನ್ನದ ಸಮೇತ ವಲಯ ಅರಣ್ಯಾಧಿಕಾರಿ, ಆನಂದಪುರಂ ವಲಯ, ಚೋರಡಿ ಇವರು ಜಪ್ತುಮಾಡಿ, ಪ್ರಥಮ ವರ್ತಮಾನ ವರದಿ, ಜಪ್ತಿ ವರದಿ, ಮಹಜರ್ ವರದಿಯನ್ನು ಈ ನ್ಯಾಯಾಲಯಕ್ಕೆ ಹಾಜರ್ಪಡಿಸಿರುತ್ತಾರೆ. ಆದ್ದರಿಂದ ಈ ವಾಹನದಲ್ಲಿ ಅರಣ್ಯ ಉತ್ಪನ್ನ ಕಳ್ಳ ಸಾಗಾಣಿಕೆ ಮಾಡಿದ ಬಗ್ಗೆ ಸಾಬೀತಾಗಿದೆ. ಆದ್ದರಿಂದ ವಾಹನ ಮತ್ತು ಅರಣ್ಯ ಉತ್ಪನ್ನವನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಕೋರಿರುತ್ತಾರೆ.

ಈ ಪ್ರಕರಣದ ಎಲ್ಲಾ ದಾಖಲೆಗಳನ್ನು ಪರಿಶೀಲಿಸಿ, ಅಭಿಯೋಜಕರ ವಾದವನ್ನು ಕೇಳಿದೆ ಮತ್ತು ಈ ವಾಹನದ ಬಗ್ಗೆ ಪತ್ರಿಕಾ ಪ್ರಕಟಣೆ ಹೊರಡಿಸಿರುತ್ತದೆ. ಈ ಪ್ರಕಟಣೆಯು ರಾಜ್ಯ ಗೆಜೆಟ್‌ನಲ್ಲಿ ಪ್ರಕಟಗೊಂಡು ಮತ್ತು ಆರ್.ಸಿ. ಮಾಲೀಕರಿಗೆ ನೋಟಿಸ್‌ನ್ನು ನೊಂದಣಿ ಅಂಚೆ ಮೂಲಕ ಜಾರಿ ಮಾಡಿ 30 ದಿನಗಳಾದರೂ ಯಾರೂ ಹಕ್ಕು ಬಾಧ್ಯತೆಯ ಅರ್ಜಿಯನ್ನು ಈ ನ್ಯಾಯಾಲಯಕ್ಕೆ ಸಲ್ಲಿಸದೇ ಇದ್ದುದ್ದರಿಂದ ಈ ಪ್ರಕರಣದ ವಿದ್ಯಾಮಾನಗಳನ್ನು ಅರಿತು ಈ ಕೆಳಗಿನಂತೆ ಆದೇಶ ಹೊರಡಿಸಿದೆ.

ಆದೇಶ

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳನ್ನು ಗಣನೆಗೆ ತೆಗೆದುಕೊಂಡು ಶ್ರೀ ಮನೋಜ್ ಕುಮಾರ ತ್ರಿಪಾಠಿ, ಭಾ.ಅ.ಸೇ., ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ ಆದ ನಾನು, ಕರ್ನಾಟಕ ಅರಣ್ಯ ಕಾಯಿದೆ 1963 ಸೆಕ್ಷನ್ 71(ಎ) ರಿಂದ (ಜಿ) ಕಾಯಿದೆ ಪ್ರಕಾರ ವಲಯ ಅರಣ್ಯಾಧಿಕಾರಿ, ಆನಂದಪುರಂ ವಲಯ, ಚೋರಡಿ ಇವರು ಜಪ್ತು ಮಾಡಿದ ವಾಹನ ಕೆಎ–15–ಎಂ–3260, (ಛಾಸ್ಸಿಸ್ ನಂ: ST-91-IN-2339, ಇಂಜಿನ್ ನಂಬರ್ ಕಂಡುಬಂದಿರುವುದಿಲ್ಲ)ನ್ನು ಮತ್ತು ಈ ವಾಹನದಲ್ಲಿದ್ದ ಬೀಟೆ ನಾಟಾ 05=0.480 ಎಂ3ನ್ನು ಕರ್ನಾಟಕ ಸರ್ಕಾರದ ಸಂಪತ್ತು ಆಗಿರುವುದರಿಂದ ಅಂತಿಮವಾಗಿ ಮುಟ್ಟುಗೋಲು ಹಾಕಿಕೊಂಡಿರುತ್ತೇನೆ. ಮುಟ್ಟುಗೋಲು ಹಾಕಿಕೊಂಡ ವಾಹನ ಮತ್ತು ಅರಣ್ಯ ಉತ್ಪನ್ನವನ್ನು ಸರ್ಕಾರಕ್ಕೆ ಅನುಕೂಲಕರವಾಗಿ ವಿಲೇ ಮಾಡಲು ಆದೇಶಿಸಿದ್ದೇನೆ. ಈ ಆದೇಶವನ್ನು ಹೇಳಿ ಬರೆಯಿಸಿ, ಗಣಕಯಂತ್ರದಲ್ಲಿ ಮುದ್ರಿಸಿ, ನಂತರ ಸರಿಪಡಿಸಿ **ದಿ:25–06–2011 ರಂದು** ನನ್ನ ಸಹಿ ಹಾಗೂ ಮೊಹರಿನೊಂದಿಗೆ ತೆರೆದ ನ್ಯಾಯಾಲಯದಲ್ಲಿ ಆದೇಶಿಸಿದ್ದೇನೆ. ಈ ಆದೇಶ ಹೊರಡಿಸಿದ 30 (ಮೂವತ್ತು) ದಿನಗಳ ಒಳಗಾಗಿ ಯಾರು ಮೇಲ್ಮನವಿ ಸಲ್ಲಿಸದೇ ಹೋದಲ್ಲಿ ಇದೇ ಅಂತಿಮ ಆದೇಶವಾಗಿರುತ್ತದೆ.

ಅಧಿಕೃತ ಅಧಿಕಾರಿ ಹಾಗೂ
ಉಪ ಅರಣ್ಯ ಸಂರಕ್ಷಣಾಧಿಕಾರಿ,
ಸಾಗರ ವಿಭಾಗ, ಸಾಗರ.

ಪಿ.ಆರ್.714

ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ ಇವರ ನ್ಯಾಯಾಲಯದಲ್ಲಿ

ಕ್ರ:ಬಿ3:ಅಮೊ:ವಾಹನ–15/07–08, ದಿನಾಂಕ:25–06–2011

ಉಪಸ್ಥಿತರು	::	ಶ್ರೀ ಮನೋಜ್‌ಕುಮಾರ್ ತ್ರಿಪಾಠಿ, ಭಾ.ಅ.ಸೇ ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ.
ಪಿರ್ಯಾಧಿದಾರರು	::	ವಲಯ ಅರಣ್ಯಾಧಿಕಾರಿ, ಆನಂದಪುರಂ ವಲಯ, ಚೋರಡಿ. (ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು, ಸಾಗರ)
ಭಾದ್ಯತೆದಾರರು	::	ಶ್ರೀ ಎಸ್. ನಾಗರಾಜ ಬಿನ್ ಸಣ್ಣಪ್ಪ 36 ವರ್ಷ, ಬಸವನಹೊಂಡ, ಯಡೇಹಳ್ಳಿ, ಆನಂದಪುರಂ ಹೋಬಳಿ, ಸಾಗರ ತಾಲ್ಲೂಕು. (ಮಾನ್ಯ ಆರಿಫ್ ಆಲಿ ಖಾನ್, ವಕೀಲರು, ಸಾಗರ)

ಪ್ರಸ್ತಾವನೆ:

ದಿ:10–09–2007 ರಂದು ಆನಂದಪುರಂ ವಲಯ, ಚೋರಡಿಯ ಹಿರೇಹರಕ ಶಾಖೆಯ ವನಪಾಲಕರಿಗೆ ಬಂದ ಖಚಿತ ವರ್ತಮಾನದ ಮೇರೆಗೆ ಬೀಟೆ ಸೈಜ್ ಅಕ್ರಮ ಸಾಗಾಣಿಕೆ ಸಂಬಂಧ ವಾಹನ ಮಾರುತಿ ವ್ಯಾನ್ ಜಿಎ–01–ಎಸ್–3956ನ್ನು ಮತ್ತು ಬೀಟೆ ಸೈಜ್ 12=0.423 ಎಂ3ನ್ನು ಇಲಾಖಾ ಪರ ಜಪ್ತು ಮಾಡಿದ ಮಹಜರ್ ವಿವರ ಈ ಕೆಳಗಿನಂತಿದೆ.

ದಿ:10–09–2007ರಂದು ಆನಂದಪುರಂ ವಲಯದ ಚೋರಡಿಯ ಹಿರೇಹರಕ ಶಾಖೆಯ ವನಪಾಲಕರಿಗೆ ಬಂದ ಖಚಿತ ವರ್ತಮಾನದ ಮೇರೆಗೆ ಸಾಗರ ತಾ॥ ಆನಂದಪುರಂ ಹೋಬಳಿ ಸಿದ್ದೇಶ್ವರ ಕಾಲೋನಿಯ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿ ನಿಲಯದ ಮುಂಭಾಗದ ರಸ್ತೆಯ ಕೆ.ಹೊಸಕೊಪ್ಪ ಕ್ರಾಸ್ ಬಳಿ ಗೌತಮಪುರ ಶಾಖೆಯ ಸಿಬ್ಬಂದಿಯವರು ರಾತ್ರಿ ಸುಮಾರು 8–30 ಗಂಟೆಗೆ ಕಾಯುತ್ತಿರುವಾಗ ಸುಮಾರು 9–00 ಗಂಟೆಯ ಸಮಯದಲ್ಲಿ ಒಂದು ವಾಹನ ಬರುತ್ತಿರುವುದನ್ನು ನಿಲ್ಲಿಸಲು ಸೂಚಿಸಿದಾಗ ಅದು ನಿಲ್ಲದೇ ಮುಂದೆ ಹೋಗಿ 5 ರಿಂದ 10 ಮೀಟರ್ ದೂರದಲ್ಲಿ ವಾಹನವನ್ನು ನಿಲ್ಲಿಸಿ ಅದರಲ್ಲಿದ್ದ ಆಸಾಮಿಗಳಾದ (1) ನಾಗರಾಜ್ ಬಿನ್ ಸಣ್ಣ ಹಾಲಪ್ಪ, ಅಂದಾಜು 35 ವರ್ಷ, ಬಸವನಗೊಂಡ ವಾಸಿ ಯಡೇಹಳ್ಳಿ ಗ್ರಾಮ, ಸಾಗರ ತಾಲ್ಲೂಕು (2) ವಿರೂಪಾಕ್ಷ ಬಿನ್ ಮಸಾಲತಿ ಗೋವಿಂದಪ್ಪ, ಅಂದಾಜು 28 ವರ್ಷ, ಅಶೋಕ ರಸ್ತೆ, ಆನಂದಪುರಂ ವಾಸಿ, ಸಾಗರ ತಾಲ್ಲೂಕು ಇವರು ಕೈಗೆ ಸಿಗದೆ ಪರಾರಿಯಾಗಿರುತ್ತಾರೆ. ನಂತರ ವಾಹನವನ್ನು ಪರಿಶೀಲಿಸಲಾಗಿ, ಕೆಂಪು ಬಣ್ಣದ ಮಾರುತಿ ವ್ಯಾನ್ ಜಿಎ–01–ಎಸ್–3956, ಇಂಜಿನ್ ನಂ:F-8-BIN-84560, ಛಾಸ್ಸಿಸ್ ನಂ:ST-91-IN-938065 ಆಗಿರುತ್ತದೆ. ವಾಹನದ ಬಾಡಿಯೊಳಗೆ ಬೀಟೆ ಸೈಜ್ 12=0.423 ಎಂ3 ಇದ್ದು, ಈ ಸೈಜುಗಳ ಮೇಲೆ ಛಾಪಾದ ಗುರುತಿರಲಿಲ್ಲ. ಮತ್ತು ಸದರಿ ಸೈಜುಗಳನ್ನು ಸಾಗಿಸಲು ರಹದಾರಿ ಇಲ್ಲದ ಕಾರಣ ಇದು ಅಕ್ರಮವೆಂದು ಪರಿಗಣಿಸಿ, ವಾಹನ, ಅರಣ್ಯ ಉತ್ಪನ್ನವನ್ನು ಪ್ರಥಮ ವರ್ತಮಾನ ವರದಿ, ಮಹಜರ್ ವರದಿ, ಜಪ್ತು ವರದಿಯೊಂದಿಗೆ ಇಲಾಖಾ ಪರ ವಶಪಡಿಸಿಕೊಂಡು ಕರ್ನಾಟಕ ಅರಣ್ಯ ಕಾಯ್ದೆ 1963 ಸೆಕ್ಷನ್ 62, 71(ಎ), 104(ಎ) ಮತ್ತು ಕರ್ನಾಟಕ ಅರಣ್ಯ ಕಾನೂನು 1969ರ ಉಪನಿಯಮ 144, 165ರ ಪ್ರಕಾರ ಆನಂದಪುರಂ ವಲಯದ ಅರಣ್ಯ ಮೊಕದ್ದಮೆ ಸಂಖ್ಯೆ: 52/07–08 ನ್ನು ದಾಖಲಿಸಿ, ವಾಹನವನ್ನು ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ ಇವರ ಸಮಕ್ಷಮ ಹಾಜರ್ಪಡಿಸಿರುತ್ತಾರೆ. ನಂತರ ಈ ವಾಹನವನ್ನು ಸರ್ಕಾರಿ ನಾಟಾ ಸಂಗ್ರಹಾಲಯದಲ್ಲಿರುವ ವಾಹನ ಶೆಡ್ಡಿನಲ್ಲಿ ಸುರಕ್ಷತೆಗಾಗಿ ಇಡಲು ವಲಯ ಅರಣ್ಯಾಧಿಕಾರಿ, ಸರ್ಕಾರಿ ನಾಟಾ ಸಂಗ್ರಹಾಲಯ, ಸಾಗರ ಇವರ ಸುಪರ್ಧಿಗೆ ಕೊಡಲು ಆದೇಶವಾಗಿದೆ.

ಈ ಪ್ರಕರಣದಲ್ಲಿ ವಲಯ ಅರಣ್ಯಾಧಿಕಾರಿ, ಆನಂದಪುರಂ ವಲಯ, ಚೋರಡಿ ಇವರು ದಿ:21–11–2007ರಂದು ಈ ನ್ಯಾಯಾಲಯಕ್ಕೆ ವಿಚಾರಣಾ ವರದಿಯನ್ನು ಸಲ್ಲಿಸಿ, ಈ ಪ್ರಕರಣದಲ್ಲಿ ಭಾಗಿಯಾಗಿರುವ ಆರೋಪಿಗಳ ವಿರುದ್ಧ ಜೆ.ಎಂ.ಎಫ್.ಸಿ.ಗೆ ದೋಷಾರೋಪಣಾ ಪಟ್ಟಿ ಸಲ್ಲಿಸಲು ಮತ್ತು ವಾಹನ, ಅರಣ್ಯ ಉತ್ಪನ್ನವನ್ನು ಮುಟ್ಟುಗೋಲು ಹಾಕಿಕೊಳ್ಳಲು ಕೋರಿರುತ್ತಾರೆ.

ಈ ವಾಹನದ ಬಿ ಪ್ರತಿಯನ್ನು ಈ ನ್ಯಾಯಾಲಯಕ್ಕೆ ಒದಗಿಸಲು ದಿ ಡೈರೆಕ್ಟರ್ ಆಫ್ ಟ್ರಾನ್ಸ್‌ಪೋರ್ಟ್, ಪಣಜಿ, ಗೋವಾ ಇವರಿಗೆ ಈ ನ್ಯಾಯಾಲಯದ ಪತ್ರ ಸಂ:B3.FOC.VEH.15/07-08 Dt:21-09-2007 ರಂದು ಪತ್ರ ಬರೆದು ಕೋರಲಾಗಿತ್ತು. ಹಾಗೂ ಅದರ ಪ್ರತಿಯನ್ನು ಸಾರಿಗೆ ಅಧಿಕಾರಿ, ಸಾಗರ ಇವರಿಗೆ ಕಳುಹಿಸಿದೆ. ಅದರಂತೆ ಸಾರಿಗೆ ಅಧಿಕಾರಿ, ಸಾಗರ ಇವರು ಈ ನ್ಯಾಯಾಲಯಕ್ಕೆ ಬಿ ಪ್ರತಿಯನ್ನು ಒದಗಿಸಿರುತ್ತಾರೆ. ಬಿ ಪ್ರತಿಯಲ್ಲಿ ನಮೂದಿಸಿದ ಆರ್.ಸಿ. ಮಾಲೀಕರ ಹೆಸರು ಶ್ರೀ ಎಸ್.ನಾಗರಾಜ್ ಬಿನ್ ಸಣ್ಣಪ್ಪ, ಬಸವನಹೊಂಡ, ಯಡೇಹಳ್ಳಿ, ಆನಂದಪುರಂ ಸಾಗರ ತಾಲ್ಲೂಕು ಇವರಿಗೆ ದಿ:30–08–2008 ರಂದು ಕರ್ನಾಟಕ ಅರಣ್ಯ ಕಾಯಿದೆ 1963 ಸೆಕ್ಷನ್ 71(ಬಿ)(1)ರ ಪ್ರಕಾರ 30 ದಿನಗಳ ಕಾಲಾವಕಾಶ ನೀಡಿ ನೋಟಿಸ್ ಜಾರಿ ಮಾಡಿದೆ. ನಂತರ ಆರ್.ಸಿ. ಮಾಲೀಕರು ವಕೀಲರ ಮುಖಾಂತರ ಈ ನ್ಯಾಯಾಲಯಕ್ಕೆ ಕ್ಲೇಮು ಅರ್ಜಿಯನ್ನು ದಿ:15–03–2008 ರಂದು ಸಲ್ಲಿಸಿರುತ್ತಾರೆ. ಇವರ ಮಧ್ಯಂತರ ವಾಹನ ಬಿಡುಗಡೆಗೆ ಕೋರಿದ ಅರ್ಜಿಯನ್ನು ತಿರಸ್ಕರಿಸಿ ದಿ:20–02–2010 ರಂದು ಆದೇಶವಾಗಿದೆ.

ಪ್ರಾಸಿಕ್ಯೂಷನ್ ಸಾಕ್ಷಿ ಶ್ರೀ ಬಿ.ಸಿ.ಲೋಕೇಶ್, ವನಪಾಲಕ, ಗೌತಮಪುರ ಶಾಖೆ, ಚೋರಡಿ ವಲಯ, ಇವರನ್ನು ದಿ:30–10–2010 ರಂದು ಕರೆಯಿಸಿ ಸತ್ಯಪ್ರತಿಜ್ಞೆ ಭೋದಿಸಿ, ಮುಖ್ಯವಿಚಾರಣೆ, ಸಹಾಯಕ ಸರ್ಕಾರಿ ಅಭಿಯೋಜಕ ರವರಿಂದ "ನಾನು 2006 ರಿಂದ 2010–ಜೂನ್‌ವರೆಗೆ ಆನಂದಪುರಂ ವಲಯ, ಚೋರಡಿಯ ಗೌತಮಪುರ ಶಾಖೆಯಲ್ಲಿ ವನಪಾಲಕನಾಗಿ ಕರ್ತವ್ಯ ನಿರ್ವಹಿಸುತ್ತಿದ್ದೆ. 2007 ಸೆಪ್ಟೆಂಬರ್–10 ರಂದು ಹಿರೇಹರಕ ಶಾಖೆಯ ವನಪಾಲಕರ ದೂರವಾಣಿಗೆ ಬಂದ ಖಚಿತ ವರ್ತಮಾನದ ಮೇರೆಗೆ ಶಿಕಾರಿಪುರ–ಆನಂದಪುರಕ್ಕೆ ಹೋಗುವ ರಸ್ತೆಯ ಕೆ.ಹೊಸಕೊಪ್ಪ ಬಳಿ ಕಾಯುತ್ತಿರುವಾಗ ರಾತ್ರಿ 9–00 ಗಂಟೆ ಸಮಯಕ್ಕೆ ಕೆ.ಹೊಸಕೊಪ್ಪ ಕಡೆಯಿಂದ ಒಂದು ಓಮ್ನಿ ವಾಹನ ಬರುತ್ತಿದ್ದು, ಅದನ್ನು ನಿಲ್ಲಿಸಲು ಸೂಚಿಸಿದೆವು. ವಾಹನವನ್ನು ನಿಲ್ಲಿಸದೇ ಹೋಗಲಾಗಿ, ಅದನ್ನು ಬೈಕಿನ ಸಹಾಯದಿಂದ ಬೆನ್ನಟ್ಟಿದಾಗ ಆನಂದಪುರಂನ ಸಿದ್ದೇಶ್ವರ ಕಾಲೋನಿಯ

ಬಳಿ ವಾಹನವನ್ನು ನಿಲ್ಲಿಸಿ, ಅದರಲ್ಲಿದ್ದ 2 ಜನ ಆರೋಪಿಗಳು ಓಡಲು ಪ್ರಯತ್ನಿಸಿದರು. ಬ್ಯಾಟರಿ ಬೆಳಕಿನ ಸಹಾಯದಿಂದ ವಾಹನ ಚಾಲಕನನ್ನು ನಾಗರಾಜ ಎಂದು ವನಪಾಲಕ ಡಿ.ಎಸ್. ಶಿವಮೂರ್ತಿಯವರು ಗುರುತಿಸಿದ್ದು, ಇನ್ನೊಬ್ಬನು ನನಗೆ ಪರಿಚಯವಿದ್ದ ವಿರುಪಾಕ್ಷನಾಗಿದ್ದು, ಅವರನ್ನು ಬೆನ್ನಟ್ಟಿದರೂ ಸಿಕ್ಕಿರುವುದಿಲ್ಲ. ನಂತರ ವಾಹನವನ್ನು ಪರಿಶೀಲಿಸಿದಾಗ ಅದರಲ್ಲಿ ಒಣಗಿದ ಒರಟು ಕೆತ್ತನೆ ಮಾಡಿದ 12 ಬೀಟೆ ಸೈಜುಗಳಿದ್ದವು. ನಂತರ ಇಬ್ಬರು ಸ್ಥಳೀಯ ಪಂಚರನ್ನು ಕರೆಸಿ, ಅವರ ಸಮಕ್ಷಮ ಸೈಜುಗಳನ್ನು ಅಳತೆ ಮಾಡಿ ಕ್ರಮ ಸಂಖ್ಯೆ ಕೊಟ್ಟು, ಇಲಾಖಾ ಛಾಪಾ ಹೊಡೆದು, ಅವುಗಳನ್ನು ಮತ್ತು ವಾಹನವನ್ನು ಮಹಜರ್ ಅಡಿಯಲ್ಲಿ ಅಮಾನತ್ತು ಪಡಿಸಿಕೊಂಡೆವು. ವಾಹನ ಸಂಖ್ಯೆ: ಜಿಎ–01–ಎಸ್–3956 ಆಗಿತ್ತು. ನಂತರ ವಾಹನ ಮತ್ತು ತುಂಡುಗಳನ್ನು ಕಛೇರಿಗೆ ಸಾಗಿಸಿ, ಪ್ರಥಮ ವರ್ತಮಾನ ವರದಿಯನ್ನು, ಜಪ್ತು ವರದಿಯನ್ನು ನಾನೇ ದಾಖಲಿಸಿರುತ್ತೇನೆ. ಮುಂದಿನ ತನಿಖೆಯನ್ನು ವಲಯ ಅರಣ್ಯಾಧಿಕಾರಿಗಳಿಗೆ ವಹಿಸಿರುತ್ತೇನೆ. ಆ ದಿನ ಸ್ಥಳದಲ್ಲಿ ಮಾಡಿದ ಮಹಜರ್ ಈಗ ನೋಡುತ್ತಿದ್ದು. ಅದನ್ನು ನಿಪಿ–1 ಎಂದು, ಅದರಲ್ಲಿನ ನನ್ನ ಸಹಿಯನ್ನು ನಿಪಿ–1ಎ ಎಂದು, ಪ್ರಥಮ ವರ್ತಮಾನ ವರದಿಯನ್ನು ನಿಪಿ–2 ಎಂದು, ಅದರಲ್ಲಿನ ನನ್ನ ಸಹಿಯನ್ನು ನಿಪಿ–2ಎ ಎಂದು, ಜಪ್ತು ವರದಿಯನ್ನು ನಿಪಿ–3 ಎಂದು, ಅದರಲ್ಲಿನ ನನ್ನ ಸಹಿಯನ್ನು ನಿಪಿ–3ಎ ಎಂದು ಗುರುತಿಸಿದೆ. ಸದರಿ ವಾಹನವನ್ನು ಅರಣ್ಯ ಉತ್ಪನ್ನವನ್ನು ಅಕ್ರಮವಾಗಿ ಸಾಗಿಸಲು ಉಪಯೋಗಿಸಿರುವುದರಿಂದ ಸರ್ಕಾರದ ಪರ ಮುಟ್ಟುಗೋಲು ಹಾಕಿಕೊಳ್ಳಲು ಕೋರುತ್ತಾರೆ. ಸಾಕ್ಷಿಯನ್ನು ಪುನ: ದಿ:05–03–2011 ರಂದು ಕರೆಯಿಸಿ ಸತ್ಯಪ್ರತಿಜ್ಞೆ ಬೋಧಿಸಲಾಯಿತು.

ಪಾಟಿಸವಾಲು ಎ.ಎ.ಕೆ. ವಕೀಲರಿಂದ "ದಿ:10–09–2007 ರಂದು ರಾತ್ರಿ 8–15ರ ಸಮಯದಲ್ಲಿ ಖಚಿತ ವರ್ತಮಾನ ಬಂದಿತ್ತು. ರಾತ್ರಿ 8–20ಕ್ಕೆ ಕಛೇರಿಯಿಂದ ಹೊರಟೆವು. ಘಟನಾ ಸ್ಥಳ ಮುಖ್ಯರಸ್ತೆಯಾಗಿದ್ದು, ಸಾಕಷ್ಟು ವಾಹನಗಳ ಸಂಚಾರ ಇರುತ್ತದೆ ಎಂದರೆ ಸರಿ. ಶಿವಮೂರ್ತಪ್ಪ, ವಲಪಾಲಕ, ಹಾಲಪ್ಪ, ಅರಣ್ಯ ರಕ್ಷಕ, ಅಬ್ದುಲ್ ಲತೀಫ್ ಅರಣ್ಯ ರಕ್ಷಕರು ನನ್ನೊಂದಿಗೆ ಇದ್ದರು. ಆನಂದಪುರಂನಿಂದ ಘಟನಾ ಸ್ಥಳಕ್ಕೆ ಸುಮಾರು 3 ಕಿ.ಮೀ. ಅಂತರವಿರುತ್ತದೆ. ಕೆ.ಹೊಸಕೊಪ್ಪ ಕ್ರಾಸ್ ಬಳಿ ಮರೆಯಲ್ಲಿ ನಿಂತು ಕಾಯುತ್ತಿದ್ದೆವು. ಸುಮಾರು ಅರ್ಧಗಂಟೆ ಸ್ಥಳದಲ್ಲಿ ಇದ್ದೆವು. ಆ ಸಮಯದಲ್ಲಿ ಆ ರಸ್ತೆಯಲ್ಲಿ ಬೇರೆ ವಾಹನಗಳ ಓಡಾಟವಿರಲಿಲ್ಲ. ಪೂರ್ವದಿಂದ ಪಶ್ಚಿಮ ದಿಕ್ಕಿಗೆ ವಾಹನ ಬಂದಿತ್ತು. ಸುಮಾರು ಅರ್ಧ ಕಿ.ಮೀ. ದೂರದಿಂದ ವಾಹನ ಬರುತ್ತಿರುವುದನ್ನು ಗಮನಿಸಿದೆವು. ಘಟನಾ ಸ್ಥಳದಿಂದ ಸಿದ್ದೇಶ್ವರ ಕಾಲೋನಿ ಬಳಿ ವಾಹನವನ್ನು ಬೆನ್ನಟ್ಟಿ ತಡೆದು ನಿಲ್ಲಿಸಿದೆವು. ಘಟನಾ ಸ್ಥಳದಿಂದ ಸಿದ್ದೇಶ್ವರ ಕಾಲೋನಿಗೆ ಸುಮಾರು 6 ಕಿ.ಮೀ. ಅಂತರವಿರುತ್ತದೆ. ಓಮ್ನಿಯಲ್ಲಿದ್ದವರನ್ನು ಹಿಡಿಯಲು ಪ್ರಯತ್ನಿಸಿದ್ದು, 50 ರಿಂದ 100 ಮೀ. ದೂರ ಬೆನ್ನಟ್ಟಿದರೂ ಅವರು ಸಿಕ್ಕಿರುವುದಿಲ್ಲ. ಅವರು ಪಶ್ಚಿಮ ದಿಕ್ಕಿಗೆ ಓಡಿರುತ್ತಾರೆ. ಆರೋಪಿಗಳ ಪರಿಚಯ ನನಗೆ ಇರುತ್ತದೆ. ಎರಡನೇ ಆರೋಪಿಯ ಅಣ್ಣ ಕಟ್ಟಿಗೆ ವ್ಯಾಪಾರ ಮಾಡುತ್ತಿದ್ದು, ಅವರ ಪರಿಚಯ ನನಗೆ ಇರುತ್ತದೆ. ಒಂದನೇ ಆರೋಪಿಯ ಮನೆ ಪ್ಲಾಂಟೇಶನ್ ಬಳಿ ಇದ್ದು, ಹಾಗಾಗಿ ಅವರು ಪರಿಚಿತರು. ಅರಣ್ಯ ರಕ್ಷಕರಾದ ಹಾಲಪ್ಪ ಮತ್ತು ಲತೀಫ್ ಇಂಜಿನ್ ನಂಬರ್ ಮತ್ತು ಛಾಸ್ಸಿಸ್ ನಂಬರ್‌ನ್ನು ನೋಡಿ ಹೇಳಿದರು. ಹಾಲಪ್ಪ ಛಾಪಾ ಹೊಡೆದಿರುತ್ತಾರೆ. ಲತೀಫ್ ಕ್ರಮ ಸಂಖ್ಯೆ, ಅ.ಮೊ. ಸಂಖ್ಯೆಯನ್ನು ಕೆಂಪು ಬಣ್ಣದಿಂದ ನಮೂದಿಸಿರುತ್ತಾರೆ. ರಾತ್ರಿ 10 ಗಂಟೆ 10 ನಿಮಿಷಕ್ಕೆ ಪ್ರಾರಂಭಿಸಿದೆವು. ಅಲ್ಲಿ ಬೆಳಕಿಗೆ ಬೀದಿ ದೀಪ, ಟಾರ್ಚ್‌ನ್ನು ಬಳಸಿಕೊಂಡೆವು. ಬೀದಿ ದೀಪದ ಕಂಬದ ಸಂಖ್ಯೆ ನೆನಪಿಲ್ಲ. ವಾಹನ ತಡೆದು ನಿಲ್ಲಿಸಿದ ಸ್ಥಳದ ಸುತ್ತಮುತ್ತ ಮನೆ ಇರುವುದಿಲ್ಲ. ಅಲ್ಲಿ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯವಿದೆ. ಮಹಜರ್ ನನ್ನ ಹಸ್ತಾಕ್ಷರದಲ್ಲಿದೆ. ವಾಹನ ಹಿಡಿದ ಪೂರ್ವಕ್ಕೆ ಸಿದ್ದೇಶ್ವರ ಕಾಲೋನಿಗೆ ಹೋಗುವ ರಸ್ತೆ, ಪಶ್ಚಿಮಕ್ಕೆ ಗೋಕುಲ ಕ್ರಿಸ್ತಾಶ್ರಮಕ್ಕೆ ಹೋಗುವ ಮಣ್ಣು ರಸ್ತೆ, ಉತ್ತರಕ್ಕೆ ಬಾಲಕಿಯರ ವಿದ್ಯಾರ್ಥಿ ನಿಲಯ, ದಕ್ಷಿಣಕ್ಕೆ ಸಿದ್ದೇಶ್ವರ ದೇವರ ಗಡಿ ಇರುತ್ತದೆ. ಈ ಚತುರ್ಗಡಿಯನ್ನು ನಾವು ಮಹಜರ್‌ನಲ್ಲಿ ನಮೂದಿಸಿರುವುದಿಲ್ಲ. ಸದರಿ ಘಟನೆ ಕುರಿತು ಪ್ರಥಮ ವರ್ತಮಾನ ವರದಿ ತಯಾರಿಸಿದ ನಂತರ ಬೇರೆ ತನಿಖೆ ಮಾಡಿರುವುದಿಲ್ಲ. ನಾಗರಾಜ ಎಂಬುವವರು ಕೂಲಿ ಮಾಡಿ ಜೀವನ ನಡೆಸುತ್ತಾರೆಂದರೆ ನಿಜ. ಹಾಗೂ ಅವರು ಅಂಗವಿಕಲರೆಂದರೆ ನಿಜ. ದಿನನಿತ್ಯದ ಓಡಾಟಕ್ಕೆ ತೊಂದರೆ ಎಂದರೆ ಸರಿಯಲ್ಲ. ಅವರು ಚಟುವಟಿಕೆಯಿಂದ ಕೂಡಿರುತ್ತಾರೆ. ಅವರು ಅತೀ ವೇಗವಾಗಿ ಓಡಲು ಆಗುವುದಿಲ್ಲ ಎಂದರೆ ಇರಬಹುದು. ನಮ್ಮ ಸಿಬ್ಬಂದಿಗಳೆಲ್ಲರೂ ಸಮರ್ಥರೆಂದರೆ ಸರಿ. ಸದರಿ ದಿನದಂದು ವಾಹನವನ್ನು ಆ ದಿನ ಬೆನ್ನಟ್ಟಿದೆವು. ಸಿದ್ದೇಶ್ವರ ಕಾಲೋನಿಯ ಬಳಿ ನಿಲ್ಲಿಸಿದೆವು. ಆರೋಪಿಗಳು ಓಡಿಹೋದರು ಎಂಬುದು ಸುಳ್ಳು ಎಂದರೆ ಸರಿಯಲ್ಲ. ಇಲಾಖೆಯಲ್ಲಿ ನನ್ನ ಅಸ್ತಿತ್ವ ತೋರಿಸಿಕೊಳ್ಳಲು ಸುಳ್ಳು ಕೇಸು ದಾಖಲಿಸಿದ್ದೇನೆಂದರೆ ಸರಿಯಲ್ಲ".

ಡಿಫೆನ್ಸ್ ಸಾಕ್ಷಿ ಹೇಳಿಕೆ ಪಡೆಯಲು ದಿ:20–11–2010, 02–04–2011, 28–05–2011 ರಂದು ಮತ್ತು ವಾದ ಮಂಡಿಸಲು ದಿ:28–01–2011ರಂದು ದಿನಾಂಕ ನೀಡಿ ತಿಳಿಸಿದರೂ ಸಹ ಡಿಫೆನ್ಸ್ ಕಡೆಯವರು ಯಾರು ವಿಚಾರಣೆಗ ಹಾಜರಾಗಿರುವುದಿಲ್ಲ. ಡಿಫೆನ್ಸ್ ಕಡೆಯವರಿಗೆ ಈ ಪ್ರಕರಣದಲ್ಲಿ ಹೇಳಿಕೆ ನೀಡಲು ಮತ್ತು ವಾದ ಮಂಡಿಸಲು ಆಸಕ್ತಿ ಇಲ್ಲವೆಂದು ತೀರ್ಮಾನಿಸಿ ಮುಂದಿನ ಕ್ರಮಕೈಗೊಳ್ಳಲಾಯಿತು.

ಸಹಾಯಕ ಸರ್ಕಾರಿ ಅಭಿಯೋಜಕರು ದಿ:28–05–2011ರಂದು ವಾದ ಮಂಡಿಸಿ ಈ ವಾಹನದಲ್ಲಿ ಅರಣ್ಯ ಉತ್ಪನ್ನವನ್ನು ಕಳ್ಳ ಸಾಗಾಣಿಕೆ ಮಾಡುತ್ತಿರುವ ಸಮಯದಲ್ಲಿ ವಾಹನವನ್ನು ಅರಣ್ಯ ಉತ್ಪನ್ನ ಸಮೇತ ವಲಯ ಅರಣ್ಯಾಧಿಕಾರಿ, ಆನಂದಪುರಂ ವಲಯ, ಚೋರಡಿ ಇವರು ಜಪ್ತುಮಾಡಿ, ಪ್ರಥಮ ವರ್ತಮಾನ ವರದಿ, ಜಪ್ತಿ ವರದಿ, ಮಹಜರ್ ವರದಿಯನ್ನು ಈ ನ್ಯಾಯಾಲಯಕ್ಕೆ ಹಾಜರ್ಪಡಿಸಿರುತ್ತಾರೆ. ಆದ್ದರಿಂದ ಈ ವಾಹನದಲ್ಲಿ ಅರಣ್ಯ ಉತ್ಪನ್ನ ಕಳ್ಳ ಸಾಗಾಣಿಕೆ ಮಾಡಿದ ಬಗ್ಗೆ ಸಾಬೀತಾಗಿದೆ. ಆದ್ದರಿಂದ ವಾಹನ ಮತ್ತು ಅರಣ್ಯ ಉತ್ಪನ್ನವನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಕೋರಿರುತ್ತಾರೆ.

ಈ ಪ್ರಕರಣದಲ್ಲಿ ವಾಸ್ತಾವಾಂಶ ಮತ್ತು ಕಾನೂನಿನ ವಸ್ತುಸ್ಥಿತಿ ಈ ಕೆಳಗಿನಂತಿದೆ.

1. ಆರ್.ಸಿ. ಮಾಲೀಕರು ಹಾಗೂ ಅರ್ಜಿದಾರರು ಮಾರುತಿ ವ್ಯಾನ್ ಜಿಎ–01–ಎಸ್–3956 ರಲ್ಲಿ ಬೀಟೆ ನಾಟಾ 12=0.423 ಎಂ3ನ್ನು ದಿ:10–09–2007 ರಂದು ಅಕ್ರಮವಾಗಿ ಅರಣ್ಯ ಉತ್ಪನ್ನವನ್ನು ಸಾಗಿಸಲು ಉಪಯೋಗಿಸಲಾಗಿತ್ತೇ? ಹಾಗೂ ಈ ರೀತಿ ಸಾಗಿಸುವ ಮುಖಾಂತರ ಅರಣ್ಯ ಅಪರಾಧವೆಸಗಿ ಕರ್ನಾಟಕ ಅರಣ್ಯ ಕಾಯಿದೆ ಮತ್ತು ನಿಯಮವನ್ನು ಉಲ್ಲಂಘಿಸಲಾಗಿದೆಯೇ?

2. ಕರ್ನಾಟಕ ಅರಣ್ಯ ವಿಧಿ 71(ಬಿ)(1)ರ ಪ್ರಕಾರ ವಾಹನದ ಮಾಲೀಕರಿಗೆ ಕಾರಣ ಕೇಳಿ ನೋಟಿಸ್ ನೀಡಲಾಗಿದೆಯೇ? ಹಾಗೂ ಮಾಲೀಕರವರಿಗೆ ಅವರ ಅಹವಾಲನ್ನು ಮಂಡಿಸಿ ಸಮರ್ಥಿಸಿಕೊಳ್ಳಲು ಸಾಕಷ್ಟು ಅವಕಾಶವನ್ನು ನೀಡಲಾಗಿದೆಯೇ?

3. ವಾಹನದ ಮಾಲೀಕರು ಅಥವಾ ಅವರ ವಾಹನ ಚಾಲಕನಾಗಲೀ ಅಥವಾ ಅವರ ಪ್ರತಿನಿಧಿಯಾಗಲೀ ಮಾರುತಿ ವ್ಯಾನ್‌ನಲ್ಲಿ ಅಕ್ರಮವಾಗಿ ಸರ್ಕಾರದ ಸ್ವತ್ತಾದ ಬೀಟೆ ನಾಟಾವನ್ನು ಸಾಗಿಸಲು ಶಾಮಿಲಾಗಿದ್ದಾರೆಯೇ? ಹಾಗೂ ಈ ವಾಹನವನ್ನು ಇಂತಹ ಅಕ್ರಮ ಕಾನೂನು ಬಾಹಿರ ಅರಣ್ಯ ಉತ್ಪನ್ನ ಸಾಗಾಣಿಕೆಗೆ ಉಪಯೋಗಿಸದಂತೆ ವಾಹನದ ಮಾಲೀಕರು, ವಾಹನದ ಚಾಲಕರು ಅಥವಾ ಅವರ ಪ್ರತಿನಿಧಿಗಳು ಸಾಕಷ್ಟು ಸೂಕ್ತ ಮುನ್ನೆಚ್ಚರಿಗೆ ತೆಗೆದುಕೊಂಡಿರುತ್ತಾರೆಯೇ?

4. ತೀರ್ಮಾನಕ್ಕೆ ಬರಬಹುದಾಗಿದೆ.

ಈ ಮೇಲಿನ ಅಂಶಗಳಿಗೆ ಈ ಕೆಳಗಿನಂತೆ ಉತ್ತರಿಸಿ ಈ ಕೆಳಗಿನಂತೆ ತೀರ್ಮಾನಕ್ಕೆ ಬರಲಾಗಿದೆ, ಅದಕ್ಕೆ ಕಾರಣಗಳು ಈ ಕೆಳಗಿನಂತೆ ನೀಡಲಾಗಿದೆ.

1. ಒಂದನೇ ಅಂಶಕ್ಕೆ ಹೌದು ಎಂತಲೂ

2. ಎರಡನೇ ಅಂಶಕ್ಕೆ ಹೌದು ಎಂತಲೂ

3. ಮೂರನೇ ಅಂಶದ ಮೊದಲ ಭಾಗದ ಪ್ರಶ್ನೆಗೆ ಹೌದು ಎಂತಲು ಎರಡನೇ ಭಾಗದ ಪ್ರಶ್ನೆಗೆ ಇಲ್ಲವೆಂಬುದಾಗಿರುತ್ತದೆ.

ಅಂಶ–1:

ದಿ:10–09–2007 ರಂದು ಆನಂದಪುರಂ ವಲಯ, ಚೋರಡಿಯ ಹಿರೇಹರಕ ಶಾಖೆಯ ವನಪಾಲಕ ಮತ್ತು ಸಿಬ್ಬಂದಿಯೊಂದಿಗೆ ಬಂದ ಖಚಿತ ವರ್ತಮಾನದ ಮೇರೆಗೆ ಸಾಗರ ತಾ॥ ಆನಂದಪುರಂ ಹೋಬಳಿ ಸಿದ್ದೇಶ್ವರ ಕಾಲೋನಿಯ ರಸ್ತೆಯಲ್ಲಿ ಕೆ.ಹೊನಕೊಪ್ಪ ಕ್ರಾಸ್ ಬಳಿ ರಾತ್ರಿ ಸುಮಾರು 8–30 ಗಂಟೆಗೆ ಕಾಯುತ್ತಿರುವಾಗ ರಾತ್ರಿ ಸುಮಾರು 9–00 ಗಂಟೆಯ ಸಮಯದಲ್ಲಿ ಒಂದು ವಾಹನ ಜಿಎ–01–ಎಸ್–3956 ಬರುತ್ತಿರುವುದನ್ನು ನಿಲ್ಲಿಸಲು ಸೂಚಿಸಿದರೂ ನಿಲ್ಲಿಸದೇ ಮುಂದೆ ಹೋದಾಗ ಬೆನ್ನಟ್ಟಿ ಹಿಡಿದು ವಾಹನ ಪರಿಶೀಲಿಸಲಾಗಿ, ಅದರಲ್ಲಿ ಬೀಟೆ ನಾಟಾ 12=0.423 ಎಂ3ನ್ನು ಅಕ್ರಮವಾಗಿ ಸಾಗಿಸಿದ ಬಗ್ಗೆ ವಾಹನ ಮತ್ತು ಬೀಟೆ ನಾಟಾವನ್ನು ಇಲಾಖಾಪರ ಜಪ್ತು ಮಾಡಿ ಪ್ರಥಮ ವರ್ತಮಾನ ವರದಿ, ಜಪ್ತು ವರದಿ, ಮಹಜರ್ ವರದಿ ಸಾಕ್ಷಿಗಳ ಸಹಿಯೊಂದಿಗೆ ಈ ನ್ಯಾಯಾಲಯಕ್ಕೆ ವಾಹನ ಮತ್ತು ಬೀಟೆ ನಾಟಾವನ್ನು ಹಾಜರ್ಪಡಿಸಿರುತ್ತಾರೆ. ಇದರಿಂದ ಈ ವಾಹನದಲ್ಲಿ ಬೀಟೆ ನಾಟಾವನ್ನು ಅಕ್ರಮವಾಗಿ ಸಾಗಿಸಲು ಉಪಯೋಗಿಸಿದ್ದರಿಂದ ಕರ್ನಾಟಕ ಅರಣ್ಯ ಕಾಯಿದೆ ಮತ್ತು ಕಾನೂನನ್ನು ಉಲ್ಲಂಘಿಸಿರುತ್ತಾರೆಂದು ನನ್ನ ಉತ್ತರವಾಗಿದೆ.

ಅಂಶ–2:

ಆರ್.ಸಿ. ಮಾಲೀಕರಾದ ಶ್ರೀ ನಾಗರಾಜ ಬಿನ್ ಸಣ್ಣಪ್ಪ, 36 ವರ್ಷ, ಬಸವನಹೊಂಡ ಯಡೇಹಳ್ಳಿ, ಆನಂದಪುರಂ ಹೋಬಳಿ, ಸಾಗರ ತಾಲ್ಲೂಕು ಇವರು ದಿ:15–03–2008 ರಂದು ನ್ಯಾಯಾಲಯಕ್ಕೆ ವಕೀಲರ ಮುಖಾಂತರ ಕ್ಲೇಮು ಅರ್ಜಿ ಸಲ್ಲಿಸಿರುತ್ತಾರೆ. 'ಬಿ' ಎಕ್ಸ್‌ಟ್ರ್ಯಾಕ್ಟ್‌ನಲ್ಲಿ ನಮೂದಿಸಿದಂತೆ ಕರ್ನಾಟಕ ಅರಣ್ಯ ಕಾಯಿದೆ 1963 ಸೆಕ್ಷನ್ 71ಬಿ (1)ರ ಪ್ರಕಾರ ಕಾರಣ ಕೇಳಿ ಪತ್ರವನ್ನು ದಿ:30–08–2008ರಂದು ಅಂಚೆ ಮೂಲಕ ಜಾರಿ ಮಾಡಿದೆ. ನಂತರ ಡಿಫೆನ್ಸ್ ಕಡೆ ಸಾಕ್ಷಿ ಹೇಳಿಕೆ ಪಡೆಯಲು ಮೂರು ಬಾರಿ ದಿನಾಂಕಗಳನ್ನು ನೀಡಲಾಗಿದ್ದು. ಮತ್ತು ಡಿಫೆನ್ಸ್ ವಾದ ಮಂಡಿಸಲು ಒಂದು ಬಾರಿ ದಿನಾಂಕಗಳನ್ನು ನೀಡಲಾಗಿತ್ತು. ಇದರಿಂದ ಆರ್.ಸಿ. ಮಾಲೀಕರಿಗೆ ತಮ್ಮ ಅಹವಾಲನ್ನು ಮಂಡಿಸಲು ಈ ನ್ಯಾಯಾಲಯ ಬಹಳಷ್ಟು ಕಾಲಾವಕಾಶ ನೀಡಿದೆ ಎಂಬುದು ನನ್ನ ಉತ್ತರವಾಗಿದೆ.

ಅಂಶ–3:

ದಿ:10–09–2007 ರಂದು ಮಾರುತಿ ವ್ಯಾನ್ ಜಿಎ–01–ಎಸ್–3956 ರಲ್ಲಿ ಬೀಟೆ ಸೈಜು 12=0.423 ಎಂ3ನ್ನು ಅಕ್ರಮವಾಗಿ ಸಾಗಿಸುತ್ತಿದ್ದಾಗ, ಆನಂದಪುರಂ ವಲಯ ಚೋರಡಿಯ ಹಿರೇಹರಕ ಶಾಖೆಯ ವನಪಾಲಕ ಮತ್ತು ಸಿಬ್ಬಂದಿಯವರು ಪತ್ತೆಹಚ್ಚಿ ಪ್ರಥಮ ವರ್ತಮಾನ ವರದಿ, ಜಪ್ತಿ ವರದಿ, ಮಹಜರ್ ವರದಿಯನ್ನು ಸಾಕ್ಷಿಗಳ ಸಹಿಯೊಂದಿಗೆ ಮತ್ತು ಈ ನ್ಯಾಯಾಲಯಕ್ಕೆ ವಲಯ ಅರಣ್ಯಾಧಿಕಾರಿ, ಆನಂದಪುರಂ ವಲಯ, ಚೋರಡಿ ಇವರು ವಿಚಾರಣಾ ವರದಿ ಸಲ್ಲಿಸಿ, ಜಪ್ತಾದ ವಾಹನ ಮತ್ತು ವಾಹನದಲ್ಲಿದ್ದ ಅರಣ್ಯ ಉತ್ಪನ್ನವನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಶಿಫಾರಸ್ಸು ಮಾಡಿರುತ್ತಾರೆ. ಪ್ರಾಸಿಕ್ಯೂಷನ್ ಸಾಕ್ಷಿ ಹೇಳಿಕೆಗೂ ಮತ್ತು ಈ ನ್ಯಾಯಾಲಯಕ್ಕೆ ಹಾಜರ್ಪಡಿಸಿದ ದಾಖಲೆಗಳಿಗೂ ಒಂದಕ್ಕೊಂದು ತಾಳೆಯಾಗಿರುತ್ತದೆ. ಆರ್.ಸಿ. ಮಾಲೀಕರು ದಿ:15–03–2008ರಂದು ಸಲ್ಲಿಸಿದ ಅರ್ಜಿಯಲ್ಲಿ ತಿಳಿಸಿದಂತೆ, ಅರ್ಜಿದಾರರು ಮುಗ್ದರೆನ್ನುವುದಕ್ಕಾಗಲೀ, ಮಹಜರ್‌ನಲ್ಲಿ ತಿಳಿಸಿದಂತೆ ಬಾಧ್ಯತೆದಾರರು ಈ ವಾಹನವನ್ನು ಅಕ್ರಮ ಸಾಗಾಣಿಕೆಗೆ ಕಳುಹಿಸಿಲ್ಲವೆನ್ನುವುದಕ್ಕಾಗಲೀ, ಅಲ್ಲದೇ ವಾಹನ ಮಾಲೀಕರ ಗಮನಕ್ಕೆ ಬಾರದೇ ಈ ಕೃತ್ಯ ನಡೆದಿದೆನ್ನುವುಕ್ಕಾಗಾಲೀ, ಅಲ್ಲದೇ ಈ ಪ್ರಕರಣದಲ್ಲಿ ಆರ್.ಸಿ. ಮಾಲೀಕರು ಭಾಗಿಯಾಗಿಲ್ಲವೆನ್ನುವುದಕ್ಕಾಗಲೀ ಈ ಬಗ್ಗೆ ಯಾವುದೇ ಸಾಕ್ಷ್ಯಾಧಾರಗಳನ್ನು ವಿಚಾರಣಾ ಸಮಯದಲ್ಲಿ ಈ ನ್ಯಾಯಾಲಯಕ್ಕೆ ಸಲ್ಲಿಸಿರುವುದಿಲ್ಲ.

ಅಲ್ಲದೇ, ವಾಹನ ಮಾಲೀಕರಾಗಲೀ, ಅವರ ಪರ ಚಾಲಕರಾಗಲೀ ಅಥವಾ ಅವರ ಪ್ರತಿನಿಧಿಗಳಾಗಲೀ ವಾಹನದಲ್ಲಿ ಕಳ್ಳ ಸಾಗಾಣಿಕೆಯಾಗದಂತೆ ಮುನ್ನೆಚ್ಚರಿಕೆ ಕ್ರಮವಹಿಸಬೇಕಾಗಿರುತ್ತದೆ. ಈ ಬಗ್ಗೆ ಗೌರವನ್ವಿತ ಮಾನ್ಯ ಉಚ್ಚ ನ್ಯಾಯಾಲಯ ಕರ್ನಾಟಕವು ಈ ಕೆಳಗಿನಂತೆ ಆದೇಶ ನೀಡಿರುವುದನ್ನು ಉಲ್ಲೇಖಿಸುತ್ತಾ,

The Hon'ble high Court of Karnataka Bangalore in the case of - Ramesh N Dixit V/S State of Karnataka, 1987 (2) Kar.L.j.Sh.N.278:ILR 1985 Kar.2571 held that the owners required to show under sub-section (2) of section 71-B is that he, his agent, if any and the person in charge of the vehicle (In this case the driver) each, had taken all reasonable and necessary

precautions against the misusing of the vehicle and that this offence had been committed without the knowledge or connivance any of them. ………………………………………………………………………………It is not merely enough if the truck owner says that his truck had been misused without his knowledge or connivance, but in addition he is bound to show that he had taken all reasonable and necessary precautions against such misuse. ಅಲ್ಲದೇ ಯಾರೂ ಈ ವಾಹನದಲ್ಲಿ ಅರಣ್ಯ ಉತ್ಪನ್ನವನ್ನು ಕಳ್ಳಸಾಗಾಣಿಕೆ ಮಾಡದಂತೆ ಆರ್.ಸಿ. ಮಾಲೀಕರಾಗಲೀ, ಅವರ ಪರ ವಾಹನ ಚಾಲಕರಾಗಲೀ ಮುನ್ನೆಚ್ಚರಿಕೆ ಕ್ರಮ ಕೈಗೊಂಡಿರುವುದಿಲ್ಲ ಎಂಬುದು ನನ್ನ ಉತ್ತರವಾಗಿರುತ್ತದೆ.

ಅಂಶ–4:

ಈ ಮೇಲಿನ ಅಂಶಗಳನ್ನು ಸೂಕ್ಷ್ಮವಾಗಿ ಗಮನಿಸಿ ಮತ್ತು ಈ ಪ್ರಕರಣದ ವಿದ್ಯಾಮಾನಗಳನ್ನು ಅರಿತು, ವಾದವನ್ನು ಕೇಳಿ ಈ ಕೆಳಕಂಡಂತೆ ಆದೇಶಿಸಲಾಗಿದೆ.

ಆದೇಶ

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳನ್ನು ಗಣನೆಗೆ ತೆಗೆದುಕೊಂಡು ಶ್ರೀ ಮನೋಜ್ ಕುಮಾರ್ ತ್ರಿಪಾಠಿ, ಭಾ.ಅ.ಸೇ., ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ ಆದ ನಾನು ಕರ್ನಾಟಕ ಅರಣ್ಯ ಕಾಯಿದೆ 1963 ಸೆಕ್ಷನ್ 71(ಎ) ರಿಂದ (ಜಿ) ಕಾಯಿದೆ ಪ್ರಕಾರ ವಲಯ ಅರಣ್ಯಾಧಿಕಾರಿ, ಆನಂದಪುರಂ ವಲಯ, ಚೋರಡಿ ಇವರು ಜಪ್ತು ಮಾಡಿದ ಮಾರುತಿ ವ್ಯಾನ್ ಜಿಎ–01–ಎಸ್–3956 (ಇಂಜಿನ್ ನಂ:F-8-BIN-84560, ಛಾಸ್ಸಿಸ್ ನಂಬರ್:ST-91-IN-938065) ಮತ್ತು ಈ ವಾಹನದಲ್ಲಿ ಕರ್ನಾಟಕ ಸರ್ಕಾರದ ಸಂಪತ್ತು ಆದ ಬೀಟೆ ನಾಟಾ 12=0.423ಎಂ3ನ್ನು ಸರ್ಕಾರಕ್ಕೆ ಅಂತಿಮವಾಗಿ ಮುಟ್ಟುಗೋಲು ಹಾಕಿಕೊಂಡಿರುತ್ತೇನೆ. ಮುಟ್ಟುಗೋಲು ಹಾಕಿಕೊಂಡ ವಾಹನ ಮತ್ತು ಅರಣ್ಯ ಉತ್ಪನ್ನವನ್ನು ಸರ್ಕಾರಕ್ಕೆ ಅನುಕೂಲಕರವಾಗಿ ವಿಲೇ ಮಾಡಲು ಆದೇಶಿಸಿದೆ. ಈ ಆದೇಶವನ್ನು ಹೇಳಿ ಬರೆಯಿಸಿ, ಗಣಕಯಂತ್ರದಲ್ಲಿ ಮುದ್ರಿಸಿ, ನಂತರ ಸರಿಪಡಿಸಿ ದಿ:25–06–2011 ರಂದು ನನ್ನ ಸಹಿ ಹಾಗೂ ಮೊಹರಿನೊಂದಿಗೆ ತೆರೆದ ನ್ಯಾಯಾಲಯದಲ್ಲಿ ಆದೇಶಿಸಿದ್ದೇನೆ. ಈ ಆದೇಶ ಹೊರಡಿಸಿದ 30(ಮೂವತ್ತು) ದಿನಗಳ ಒಳಗಾಗಿ ಯಾರು ಮೇಲ್ಮನವಿ ಸಲ್ಲಿಸದೇ ಹೋದಲ್ಲಿ ಇದೇ ಅಂತಿಮ ಆದೇಶವಾಗಿರುತ್ತದೆ.

ಅಧಿಕೃತ ಅಧಿಕಾರಿ ಹಾಗೂ
ಪಿ.ಆರ್.715 ಉಪ ಅರಣ್ಯ ಸಂರಕ್ಷಣಾಧಿಕಾರಿ,
ಸಾಗರ ವಿಭಾಗ, ಸಾಗರ.

ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ ಇವರ ನ್ಯಾಯಾಲಯದಲ್ಲಿ

ಕ್ರ: ಬಿ3:ಅಮೊ:ವಾಹನ:ವಿವ:–19/09–10, ದಿನಾಂಕ:25–06–2011

ಉಪಸ್ಥಿತರು : ಶ್ರೀ ಮನೋಜ್‌ಕುಮಾರ್ ತ್ರಿಪಾಠಿ, ಭಾ.ಅ.ಸೇ.,
ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ.

ಫಿರ್ಯಾಧಿದಾರರು : ವಲಯ ಅರಣ್ಯಾಧಿಕಾರಿ,
ಸೊರಬ ವಲಯ, ಸೊರಬ.
(ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು, ಸಾಗರ)

ಭಾದ್ಯತೆದಾರರು : ಶ್ರೀ ಶಿಫಾತುಲ್ಲಾ ಬಿನ್ ಅಬ್ದುಲ್ ಸತ್ತಾರ್ ಸಾಬ್,
ಆಜಾದ್ ಸ್ಟ್ರೀಟ್, ಆನವಟ್ಟಿ, ಸೊರಬ ತಾ॥
ಇವರ ಜಿ.ಪಿ.ಎ.ದಾರರಾದ
ಶ್ರೀ ರವಿ ಟಿ. ನಾಯ್ಕ ಬಿನ್ ತಿಮ್ಮಪ್ಪ, 31 ವರ್ಷ, ಚನ್ನಪಟ್ಟಣ, ಚಂದ್ರಗುತ್ತಿ ಹೋಬಳಿ, ಸೊರಬ ತಾ॥
(ಮಾನ್ಯ ಬಿ. ತ್ಯಾಗಮೂರ್ತಿ, ವಕೀಲರು)

ಪ್ರಸ್ತಾವನೆ:–

ದಿ:26–08–2009 ರಂದು ಅರಣ್ಯ ಉತ್ಪನ್ನವನ್ನು ಲಗ್ಗೇಜ್ ಆಟೋ ಕೆಎ–15–3141ರಲ್ಲಿ ಅಕ್ರಮವಾಗಿ ಸಾಗಿಸಿದ ಬಗ್ಗೆ ಸೊರಬ ವಲಯ ಚಂದ್ರಗುತ್ತಿ ಶಾಖೆಯ ವನಪಾಲಕರು ಪತ್ತೆಹಚ್ಚಿ ಬರೆದ ಮಹಜರ್‌ನ ವಿವರ ಈ ಕೆಳಗಿನಂತಿದೆ.

ದಿನಾಂಕ:26–08–2009ರಂದು ಸೊರಬ ವಲಯದ ಚಂದ್ರಗುತ್ತಿ ಶಾಖೆಯ ವನಪಾಲಕ ಮತ್ತು ಸಿಬ್ಬಂದಿಯವರಿಗೆ ಬಂದ ಖಚಿತ ವರ್ತಮಾನದ ಮೇರೆಗೆ ಪೋಲಿಸ್ ಸಿಬ್ಬಂದಿಯೊಂದಿಗೆ ಸೊರಬ ತಾ॥ ಚಂದ್ರಗುತ್ತಿ ಗ್ರಾಮದ ಪೋಲಿಸ್ ಠಾಣೆ ಎದುರು ಕಾಯುತ್ತಿರುವಾಗ, ದೇವಸ್ಥಾನದ ಕಡೆಯಿಂದ ಒಂದು ಆಟೋರಿಕ್ಷಾ ನಂ: ಕೆಎ–15–3141 ಬರುತ್ತಿರುವುದನ್ನು ನಿಲ್ಲಿಸಿ ಬ್ಯಾಟರಿ ಬೆಳಕಿನ ಸಹಾಯದಿಂದ ಆಟೋದ ಬಾಡಿಯೊಳಗೆ ನೋಡಿದಾಗ ಬೀಟೆ ನಾಟಾ 1=0.056ಎಂ3 ಅಳತೆಯಿದ್ದು, ವಾಹನದಲ್ಲಿದ್ದ ಅಸಾಮಿ ದೇವೇಂದ್ರ ಬಿನ್ ಚಿತ್ರೋಜಿ, 20 ವರ್ಷ, ಸಾಂಬಾಪುರ ವಾಸಿ, ಸೊರಬ ತಾ॥ ಇವನನ್ನು ಕೇಳಿದಾಗ ಈ ನಾಟಾವನ್ನು ಸಾಗಿಸಲು ರಹದಾರಿ ಇಲ್ಲವೆಂದು ಹೇಳಿರುತ್ತಾನೆ. ಆದ್ದರಿಂದ ಇದು ಅಕ್ರಮವೆಂದು ಪರಿಗಣಿಸಿ, ವಾಹನ, ಬೀಟೆ ನಾಟಾ, ಅಸಾಮಿಯನ್ನು ಪ್ರಥಮ ವರ್ತಮಾನ ವರದಿ, ಮಹಜರ್ ವರದಿ, ಜಪ್ತು ವರದಿಯೊಂದಿಗೆ ಇಲಾಖಾ ಪರ ವಶಪಡಿಸಿಕೊಂಡು ಕರ್ನಾಟಕ ಅರಣ್ಯ ಕಾಯ್ದೆ 1963 ಸೆಕ್ಷನ್ 62, 71(ಎ), 104(ಎ) ಮತ್ತು ಕರ್ನಾಟಕ ಅರಣ್ಯ ಕಾನೂನು 1969ರ ಉಪನಿಯಮ 144, 165ರ ಪ್ರಕಾರ ಸೊರಬ ವಲಯದ ಅರಣ್ಯ ಮೊಕದ್ದಮೆ ಸಂಖ್ಯೆ: 33/09–10ನ್ನು ದಾಖಲಿಸಿ, ಆಸಾಮಿಯನ್ನು ನ್ಯಾಯಾಲಯಕ್ಕೆ ಒಪ್ಪಿಸಿ, ನಂತರ ವಾಹನವನ್ನು ಅಧಿಕೃತ

ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ ಇವರ ಸಮಕ್ಷಮ ಹಾಜರ್ಪಡಿಸಿರುತ್ತಾರೆ. ನಂತರ ಈ ವಾಹನವನ್ನು ಸರ್ಕಾರಿ ನಾಟಾ ಸಂಗ್ರಹಾಲಯದಲ್ಲಿರುವ ವಾಹನ ಶೆಡ್ಡಿನಲ್ಲಿ ಸುರಕ್ಷತೆಗಾಗಿ ಇಡಲು ವಲಯ ಅರಣ್ಯಾಧಿಕಾರಿ, ಸರ್ಕಾರಿ ನಾಟಾ ಸಂಗ್ರಹಾಲಯ, ಸಾಗರ ಇವರ ಸುಪರ್ಧಿಗೆ ಕೊಡಲು ಆದೇಶವಾಗಿದೆ.

ಈ ಪ್ರಕರಣದ ವಲಯ ಅರಣ್ಯಾಧಿಕಾರಿ, ಸೊರಬ ಇವರು ದಿ:22–10–2009ರಂದು ಈ ನ್ಯಾಯಾಲಯಕ್ಕೆ ವಿಚಾರಣಾ ವರದಿಯನ್ನು ಮುಂದಿನ ಕ್ರಮಕ್ಕಾಗಿ ಸಲ್ಲಿಸಿರುತ್ತಾರೆ.

ಈ ವಾಹನದ 'ಬಿ' ಎಕ್ಸ್‌ಟ್ರ್ಯಾಕ್ಟ್‌ನ್ನು ಈ ನ್ಯಾಯಾಲಯಕ್ಕೆ ಒದಗಿಸಲು ಈ ನ್ಯಾಯಾಲಯದ ಪತ್ರ ಸಂಖ್ಯೆ: ಬಿ3:ಅಮೊ:ವಾಹನ–19/09–10 ದಿ:31–08–2009 ರಂದು ಪ್ರಾದೇಶಿಕ ಸಾರಿಗೆ ಅಧಿಕಾರಿ, ಸಾಗರ ಇವರಿಗೆ ಪತ್ರ ಬರೆದು ಕೋರಲಾಗಿತ್ತು. ಅದರಂತೆ ದಿ:06–10–2009ರಂದು ಈ ವಾಹನದ 'ಬಿ' ಎಕ್ಸ್‌ಟ್ರ್ಯಾಕ್ಟ್‌ನ್ನು ಈ ನ್ಯಾಯಾಲಯಕ್ಕೆ ಸಾರಿಗೆ ಅಧಿಕಾರಿ ಸಾಗರ ಇವರು ಒದಗಿಸಿರುತ್ತಾರೆ. ಸದರಿ 'ಬಿ' ಎಕ್ಸ್‌ಟ್ರ್ಯಾಕ್ಟ್‌ನಲ್ಲಿ ನಮೂದಿಸಿದ ಆರ್.ಸಿ. ಮಾಲಿಕರಾದ ಶ್ರೀ ಶಿಫಾತುಲ್ಲಾ ಬಿನ್ ಅಬ್ದುಲ್ ಸತ್ತಾರ್ ಸಾಬ್, ಆಜಾದ್ ಸ್ಟ್ರೀಟ್, ಆನವಟ್ಟಿ, ಸೊರಬ ತಾಲ್ಲೂಕು ಇವರಿಗೆ ಕರ್ನಾಟಕ ಅರಣ್ಯ ಕಾಯ್ದೆ 1963 ಸೆಕ್ಷನ್ 71(ಬಿ) (1)ರ ಪ್ರಕಾರ ನೋಟಿಸನ್ನು ದಿ:30–10–2009ರಂದು ಜಾರಿಮಾಡಿದೆ. ಈ ವಾಹನದ ಆರ್.ಸಿ. ಮಾಲೀಕರ ವಿಶೇಷ ಅಧಿಕಾರ ಪತ್ರ ಹೊಂದಿದ ಶ್ರೀ ರವಿ ಟಿ. ನಾಯ್ಕ ಬಿನ್ ತಿಮ್ಮಪ್ಪ, 31 ವರ್ಷ, ಚನ್ನಪಟ್ಟಣ, ಚಂದ್ರಗುತ್ತಿ ಹೋಬಳಿ, ಸೊರಬ ತಾಲ್ಲೂಕು ಇವರು ದಿ:03–09–2009ರಂದು ಮನವಿಯನ್ನು ವಕೀಲರ ಮುಖಾಂತರ ಈ ನ್ಯಾಯಾಲಯಕ್ಕೆ ಸಲ್ಲಿಸಿ, ಈ ವಾಹನವನ್ನು ಮಧ್ಯಂತರ ಅವಧಿಗೆ ಬಿಡುಗಡೆ ಮಾಡಲು ಕೋರಿರುತ್ತಾರೆ. ಇವರ ಕೋರಿಕೆಯ ಅರ್ಜಿಯನ್ನು ದಿ:06–02–2010 ರಂದು ತಿರಸ್ಕರಿಸಿ ಈ ನ್ಯಾಯಾಲಯದಿಂದ ಆದೇಶವಾಗಿದೆ.

ಪ್ರಾಸಿಕ್ಯೂಷನ್ ಸಾಕ್ಷಿ ಶ್ರೀ ಎ.ಕೃಷ್ಣಪ್ಪ, ವನಪಾಲಕ, ಚಂದ್ರಗುತ್ತಿ ಶಾಖೆ, ಸೊರಬ ವಲಯ, ಇವರನ್ನು ದಿ:27–11–2010 ರಂದು ಕರೆಯಿಸಿ ಸತ್ಯಪ್ರತಿಜ್ಞೆ ಭೋದಿಸಿ, ಮುಖ್ಯವಿಚಾರಣೆ, ಸಹಾಯಕ ಸರ್ಕಾರಿ ಅಭಿಯೋಜಕ ರವರಿಂದ "ನಾನು 2002 ರಿಂದ ಸೊರಬ ವಲಯದ ಚಂದ್ರಗುತ್ತಿ ಶಾಖೆಯಲ್ಲಿ ವನಪಾಲಕರಾಗಿ ಕರ್ತವ್ಯ ನಿರ್ವಹಿಸುತ್ತಿದ್ದೇನೆ. ದಿ:26–08–2009 ರಂದು ನಮಗೆ ಬಂದ ಖಚಿತ ವರ್ತಮಾನದ ಮೇರೆಗೆ ನಾನು ಸಿಬ್ಬಂದಿಗಳೊಂದಿಗೆ ಚಂದ್ರಗುತ್ತಿ ಪೊಲೀಸ್ ಠಾಣೆಯ ಎದುರು ಕಾಯುತ್ತಿರುವಾಗ ದೇವಸ್ಥಾನದ ಕಡೆಯಿಂದ ಒಂದು ಲಗ್ಗೇಜ್ ಆಟೋ ಬರುತ್ತಿದ್ದು, ಅದನ್ನು ನಿಲ್ಲಿಸಲು ಸೂಚನೆ ಕೊಟ್ಟಾಗ ಅದನ್ನು ನಿಲ್ಲಿಸಿದ. ಅದರಲ್ಲಿದ್ದ ಒಬ್ಬನನ್ನು ಹಿಡಿದೆವು. ಹಿಡಿದವನು ವಿಚಾರಿಸಲಾಗಿ ಅವನ ಹೆಸರು ದೇವೆಂದ್ರ ಎಂದು ತಿಳಿಸಿದ. ವಾಹನವನ್ನು ಪರಿಶೀಲಿಸಿದಾಗ ಅದು ಲಗ್ಗೇಜ್ ಆಟೋ ಆಗಿದ್ದು, ನಂಬರ್ ಕೆಎ–15–3141 ಆಗಿತ್ತು. ವಾಹನವನ್ನು ಪರಿಶೀಲಿಸಿದಾಗ ಅದರಲ್ಲಿ 1 ಬೀಟೆ ತುಂಡು ಇತ್ತು. ಅವುಗಳ ಮೇಲೆ ಇಲಾಖಾ ಛಾಪಾ ಇರಲಿಲ್ಲ. ಮತ್ತು ಅದನ್ನು ಸಾಗಿಸಲು ಯಾವುದೇ ಪರವಾನಿಗೆ ಇರಲಿಲ್ಲ. ಇದನ್ನು ಅಕ್ರಮ ಸಾಗಾಣಿಕೆ ಎಂದು ತೀರ್ಮಾನಿಸಿ ಅವುಗಳನ್ನು ಅಳತೆ ಮಾಡಿ ಇಲಾಖಾ ಛಾಪಾ ಹೊಡೆದು ಅವುಗಳನ್ನು ಮತ್ತು ವಾಹನವನ್ನು ಮಹಜರ್ ಮಾಡಿ ಸರ್ಕಾರಕ್ಕೆ ಅಮಾನತ್ತುಪಡಿಸಿಕೊಳ್ಳಲಾಯಿತು. ಆರೋಪಿ ಹಾಗೂ ಮಾಲಿನೊಂದಿಗೆ ಕಛೇರಿಗೆ ವಾಪಸ್ಸಾದೆವು. ಆಗ ಮಾಡಿದ ಮಹಜರ್‌ನ್ನು ಈಗ ನೋಡುತ್ತಿದ್ದು, ಅದನ್ನು ನಿಪಿ 1 ಎಂದು ನನ್ನ ಸಹಿಯನ್ನು ನಿಪಿ–1ಎ ಎಂದು ಗುರುತಿಸಿದೆ. ಆ ಬಗ್ಗೆ ಪ್ರಥಮ ವರ್ತಮಾನ ವರದಿಯನ್ನು ನಾನು ದಾಖಲಿಸಿದ್ದು, ಅದನ್ನು ನಿಪಿ–2 ಎಂದು, ಅದರಲ್ಲಿನ ನನ್ನ ಸಹಿಯನ್ನು 2ಎ ಎಂದು ಗುರುತಿಸಿದೆ. ಜಪ್ತು ಪಡಿಸಿದ ಮಾಲಿನ ಬಗ್ಗೆ ಜಪ್ತು ವರದಿ ತಯಾರಿಸಿದ್ದು, ಅದನ್ನು ನಿಪಿ–3 ಎಂದು, ಅದರಲ್ಲಿನ ನನ್ನ ಸಹಿಯನ್ನು 3ಎ ಎಂದು ಗುರುತಿಸಿದೆ. ನಂತರ ಆರೋಪಿಯನ್ನು ನ್ಯಾಯಾಲಯಕ್ಕೆ ಹಾಜರ್ಪಡಿಸಲಾಯಿತು. ಅಧಿಕೃತ ಅಧಿಕಾರಿಗಳು ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿಗಳ ಆದೇಶದ ಮೇರೆಗೆ ವಾಹನವನ್ನು ಸರ್ಕಾರಿ ನಾಟಾ ಸಂಗ್ರಹಾಲಯ, ಸಾಗರಕ್ಕೆ ಸಾಗಿಸಲಾಯಿತು. ಮುಂದಿನ ತನಿಖೆಯನ್ನು ವಲಯ ಅರಣ್ಯಾಧಿಕಾರಿಗಳಿಗೆ ವಹಿಸಿರುತ್ತೇನೆ. ಸದರಿ ವಾಹನವನ್ನು ಅರಣ್ಯ ಉತ್ಪನ್ನಗಳ ಅಕ್ರಮ ಸಾಗಾಣಿಕೆಗೆ ಬಳಸಿದ್ದರಿಂದ ಸರ್ಕಾರದ ಪರ ಮುಟ್ಟುಗೋಲು ಹಾಕಿಕೊಳ್ಳಲು ಕೋರುತ್ತೇನೆ.

ಪಾಟಿಸವಾಲಿಗೆ ಡಿಫೆನ್ಸ್ ಕಡೆಯ ವಕೀಲರ ಕೋರಿಕೆ ಮೇರೆಗೆ ದಿ:29–01–2011 ರಂದು ದಿನಾಂಕ ನೀಡಿರುತ್ತದೆ. ಆದರೆ, ಸದರಿ ದಿನಾಂಕದಂದು ಡಿಫೆನ್ಸ್ ಕಡೆಯ ವಕೀಲರು ಹಾಜರಾಗಿರುವುದಿಲ್ಲ. ಇದರಿಂದ ಪಾಟಿಸವಾಲು ಮಾಡಲು ಡಿಫೆನ್ಸ್ ಕಡೆಯವರಿಗೆ ಆಸಕ್ತಿ ಇಲ್ಲವೆಂದು ತೀರ್ಮಾನಿಸಿ ಮುಂದಿನ ಹಂತಕ್ಕೆ ದಿನಾಂಕ ನಿಗದಿಪಡಿಸಲಾಯಿತು.

ಡಿಫೆನ್ಸ್ ಸಾಕ್ಷಿ ಹೇಳಿಕೆ ಪಡೆಯಲು ದಿ:05–02–2011, 19–02–2011, 26–02–2011 ರಂದು ಮತ್ತು ವಾದ ಮಂಡಿಸಲು ದಿ:05–03–2011, 02–04–2011 ಮತ್ತು 28–05–2011 ರಂದು ದಿನಾಂಕ ನೀಡಿ ತಿಳಿಸಿದರೂ ಸಹ ಡಿಫೆನ್ಸ್ ಕಡೆಯವರು ಯಾರು ವಿಚಾರಣೆಗ ಹಾಜರಾಗಿರುವುದಿಲ್ಲ. ಡಿಫೆನ್ಸ್ ಕಡೆಯವರಿಗೆ ಈ ಪ್ರಕರಣದಲ್ಲಿ ಹೇಳಿಕೆ ನೀಡಲು ಮತ್ತು ವಾದ ಮಂಡಿಸಲು ಆಸಕ್ತಿ ಇಲ್ಲವೆಂದು ತೀರ್ಮಾನಿಸಿ ಮುಂದಿನ ಕ್ರಮಕೈಗೊಳ್ಳಲಾಯಿತು.

ಸಹಾಯಕ ಸರ್ಕಾರಿ ಅಭಿಯೋಜಕರು ದಿ:28–05–2011ರಂದು ವಾದ ಮಂಡಿಸಿ ಈ ವಾಹನದಲ್ಲಿ ಅರಣ್ಯ ಉತ್ಪನ್ನವನ್ನು ಕಳ್ಳ ಸಾಗಾಣಿಕೆ ಮಾಡುತ್ತಿರುವ ಸಮಯದಲ್ಲಿ ವಾಹನವನ್ನು ಅರಣ್ಯ ಉತ್ಪನ್ನ ಸಮೇತ ವಲಯ ಅರಣ್ಯಾಧಿಕಾರಿ, ಸೊರಬ ವಲಯ, ಇವರು ಜಪ್ತುಮಾಡಿ, ಪ್ರಥಮ ವರ್ತಮಾನ ವರದಿ, ಜಪ್ತಿ ವರದಿ, ಮಹಜರ್ ವರದಿಯನ್ನು ಈ ನ್ಯಾಯಾಲಯಕ್ಕೆ ಹಾಜರ್ಪಡಿಸಿರುತ್ತಾರೆ. ಆದ್ದರಿಂದ ಈ ವಾಹನದಲ್ಲಿ ಅರಣ್ಯ ಉತ್ಪನ್ನ ಕಳ್ಳ ಸಾಗಾಣಿಕೆ ಮಾಡಿದ ಬಗ್ಗೆ ಸಾಬೀತಾಗಿದೆ. ಆದ್ದರಿಂದ ವಾಹನ ಮತ್ತು ಅರಣ್ಯ ಉತ್ಪನ್ನವನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಕೋರಿರುತ್ತಾರೆ.

ಈ ಪ್ರಕರಣದಲ್ಲಿ ವಾಸ್ತಾವಾಂಶ ಮತ್ತು ಕಾನೂನಿನ ವಸ್ತುಸ್ಥಿತಿ ಈ ಕೆಳಗಿನಂತಿದೆ.

1. ಆರ್.ಸಿ. ಮಾಲೀಕರು ಹಾಗೂ ಅರ್ಜಿದಾರರು ಲಗ್ಗೇಜ್ ಆಟೋ ಕೆಎ–15–3141 ರಲ್ಲಿ ಬೀಟೆ ನಾಟಾ 01=0.056 ಎಂ3ನ್ನು ದಿ:26–08–2009 ರಂದು ಅಕ್ರಮವಾಗಿ ಅರಣ್ಯ ಉತ್ಪನ್ನವನ್ನು ಸಾಗಿಸಲು ಉಪಯೋಗಿಸಲಾಗಿತ್ತೇ? ಹಾಗೂ ಈ ರೀತಿ ಸಾಗಿಸುವ ಮುಖಾಂತರ ಅರಣ್ಯ ಅಪರಾಧವೆಸಗಿ ಕರ್ನಾಟಕ ಅರಣ್ಯ ಕಾಯಿದೆ ಮತ್ತು ನಿಯಮವನ್ನು ಉಲ್ಲಂಘಿಸಲಾಗಿದೆಯೇ?

2. ಕರ್ನಾಟಕ ಅರಣ್ಯ ವಿಧಿ 71(ಬಿ)(1)ರ ಪ್ರಕಾರ ವಾಹನದ ಮಾಲೀಕರಿಗೆ ಕಾರಣ ಕೇಳಿ ನೋಟಿಸ್ ನೀಡಲಾಗಿದೆಯೇ? ಹಾಗೂ ಮಾಲೀಕರವರಿಗೆ ಅವರ ಅಹವಾಲನ್ನು ಮಂಡಿಸಿ ಸಮರ್ಥಿಸಿಕೊಳ್ಳಲು ಸಾಕಷ್ಟು ಅವಕಾಶವನ್ನು ನೀಡಲಾಗಿದೆಯೇ?

3. ವಾಹನದ ಮಾಲೀಕರು ಅಥವಾ ಅವರ ವಾಹನ ಚಾಲಕನಾಗಲೀ ಅಥವಾ ಅವರ ಪ್ರತಿನಿಧಿಯಾಗಲೀ ಲಗ್ಗೇಜ್ ಆಟೋನಲ್ಲಿ ಅಕ್ರಮವಾಗಿ ಸರ್ಕಾರದ ಸ್ವತ್ತಾದ ಬೀಟೆ ನಾಟಾವನ್ನು ಸಾಗಿಸಲು ಶಾಮಿಲಾಗಿದ್ದಾರೆಯೇ? ಹಾಗೂ ಈ ವಾಹನವನ್ನು ಇಂತಹ ಅಕ್ರಮ ಕಾನೂನು ಬಾಹಿರ ಅರಣ್ಯ ಉತ್ಪನ್ನ ಸಾಗಾಣಿಕೆಗೆ ಉಪಯೋಗಿಸದಂತೆ ವಾಹನದ ಮಾಲೀಕರು, ವಾಹನದ ಚಾಲಕರು ಅಥವಾ ಅವರ ಪ್ರತಿನಿಧಿಗಳು ಸಾಕಷ್ಟು ಸೂಕ್ತ ಮುನ್ನೆಚ್ಚರಿಗೆ ತೆಗೆದುಕೊಂಡಿರುತ್ತಾರೆಯೇ?

4. ತೀರ್ಮಾನಕ್ಕೆ ಬರಬಹುದಾಗಿದೆ.

ಈ ಮೇಲಿನ ಅಂಶಗಳಿಗೆ ಈ ಕೆಳಗಿನಂತೆ ಉತ್ತರಿಸಿ ಈ ಕೆಳಗಿನಂತೆ ತೀರ್ಮಾನಕ್ಕೆ ಬರಲಾಗಿದೆ, ಅದಕ್ಕೆ ಕಾರಣಗಳು ಈ ಕೆಳಗಿನಂತೆ ನೀಡಲಾಗಿದೆ.

1. ಒಂದನೇ ಅಂಶಕ್ಕೆ ಹೌದು ಎಂತಲೂ
2. ಎರಡನೇ ಅಂಶಕ್ಕೆ ಹೌದು ಎಂತಲೂ
3. ಮೂರನೇ ಅಂಶದ ಮೊದಲ ಭಾಗದ ಪ್ರಶ್ನೆಗೆ ಹೌದು ಎಂತಲು ಎರಡನೇ ಭಾಗದ ಪ್ರಶ್ನೆಗೆ ಇಲ್ಲವೆಂಬುದಾಗಿರುತ್ತದೆ.

ಅಂಶ–1:

ದಿ:26–08–2009 ರಂದು ಸೊರಬ ವಲಯದ ಚಂದ್ರಗುತ್ತಿ ಶಾಖೆಯ ವಲಪಾಲಕ ಮತ್ತು ಪೊಲೀಸ್ ಸಿಬ್ಬಂದಿಯವರಿಗೆ ಬಂದ ಖಚಿತ ವರ್ತಮಾನದ ಮೇರೆಗೆ ಸೊರಬ ತಾ॥ ಚಂದ್ರಗುತ್ತಿ ಗ್ರಾಮದ ಪೊಲೀಸ್ ಠಾಣೆಯ ಎದುರು ಕಾಯುತ್ತಿರುವಾಗ ದೇವಸ್ಥಾನದ ಕಡೆಯಿಂದ ಲಗ್ಗೇಜ್ ಆಟೋ ಕೆಎ–15–3141 ಬರುತ್ತಿರುವುದನ್ನು ತಡೆದ ನಿಲ್ಲಿಸಿ ಪರಿಶೀಲಿಸಿದಾಗ, ಅದರಲ್ಲಿ ಬೀಟೆ ನಾಟಾ 01=0.056 ಎಂ3ನ್ನು ಅಕ್ರಮವಾಗಿ ಸಾಗಿಸಿದ ಬಗ್ಗೆ ವಾಹನ ಮತ್ತು ಬೀಟೆ ನಾಟಾವನ್ನು ಇಲಾಖಾಪರ ಜಪ್ತು ಮಾಡಿ ಪ್ರಥಮ ವರ್ತಮಾನ ವರದಿ, ಜಪ್ತು ವರದಿ, ಮಹಜರ್ ವರದಿ ಸಾಕ್ಷಿಗಳ ಸಹಿಯೊಂದಿಗೆ ಈ ನ್ಯಾಯಾಲಯಕ್ಕೆ ವಾಹನ ಮತ್ತು ಬೀಟೆ ನಾಟಾವನ್ನು ಹಾಜರ್ಪಡಿಸಿರುತ್ತಾರೆ. ಇದರಿಂದ ಈ ವಾಹನದಲ್ಲಿ ಬೀಟೆ ನಾಟಾವನ್ನು ಅಕ್ರಮವಾಗಿ ಸಾಗಿಸಲು ಉಪಯೋಗಿಸಿದ್ದರಿಂದ ಕರ್ನಾಟಕ ಅರಣ್ಯ ಕಾಯಿದೆ ಮತ್ತು ಕಾನೂನನ್ನು ಉಲ್ಲಂಘಿಸಿರುತ್ತಾರೆಂದು ನನ್ನ ಉತ್ತರವಾಗಿದೆ.

ಅಂಶ–2:

ಆರ್.ಸಿ. ಮಾಲೀಕರಾದ ಶ್ರೀ ಶಿಫಾತುಲ್ಲಾ ಬಿನ್ ಅಬ್ದುಲ್ ಸತ್ತಾರ್ ಸಾಬ್, ಆಜಾದ್ ಸ್ಟ್ರೀಟ್, ಆನವಟ್ಟಿ, ಸೊರಬ ತಾ॥ ಇವರ ಜಿ.ಪಿ.ಎ.ದಾರರಾದ ಶ್ರೀ ರವಿ ಟಿ. ನಾಯ್ಕ ಬಿನ್ ತಿಮ್ಮಪ್ಪ, 31 ವರ್ಷ, ಚನ್ನಪಟ್ಟಣ, ಚಂದ್ರಗುತ್ತಿ ಹೋಬಳಿ, ಸೊರಬ ತಾ॥ ಇವರು ದಿ:03–09–2009 ರಂದು ಈ ನ್ಯಾಯಾಲಯಕ್ಕೆ ವಕೀಲರ ಮುಖಾಂತರ ಅರ್ಜಿ ಸಲ್ಲಿಸಿರುತ್ತಾರೆ. 'ಬಿ' ಎಕ್ಸ್‌ಟ್ರ್ಯಾಕ್ಟ್‌ನಲ್ಲಿ ನಮೂದಿಸಿದಂತೆ ಕರ್ನಾಟಕ ಅರಣ್ಯ ಕಾಯಿದೆ 1963 ಸೆಕ್ಷನ್ 71ಬಿ (1)ರ ಪ್ರಕಾರ ಕಾರಣ ಕೇಳಿ ಪತ್ರವನ್ನು ದಿ:30–10–2009ರಂದು ಅಂಚೆ ಮೂಲಕ ಜಾರಿ ಮಾಡಿದೆ. ನಂತರ ಡಿಫೆನ್ಸ್ ಕಡೆ ಸಾಕ್ಷಿ ಹೇಳಿಕೆ ಪಡೆಯಲು ಮೂರು ಬಾರಿ ದಿನಾಂಕಗಳನ್ನು ನೀಡಲಾಗಿದ್ದು. ಮತ್ತು ಡಿಫೆನ್ಸ್ ವಾದ ಮಂಡಿಸಲು ಒಂದು ಬಾರಿ ದಿನಾಂಕವನ್ನು ನೀಡಲಾಗಿತ್ತು. ಇದರಿಂದ ಆರ್.ಸಿ. ಮಾಲೀಕರಿಗೆ ತಮ್ಮ ಅಹವಾಲನ್ನು ಮಂಡಿಸಲು ಈ ನ್ಯಾಯಾಲಯ ಬಹಳಷ್ಟು ಕಾಲಾವಕಾಶ ನೀಡಿದೆ ಎಂಬುದು ನನ್ನ ಉತ್ತರವಾಗಿದೆ.

ಅಂಶ–3:

ದಿ:26–08–2009 ರಂದು ಲಗ್ಗೇಜ್ ಆಟೋ ಕೆಎ–15–3141 ರಲ್ಲಿ 1 ಬೀಟೆ ನಾಟಾ 0.056 ಎಂ3ನ್ನು ಅಕ್ರಮವಾಗಿ ಸಾಗಿಸುತ್ತಿದ್ದಾಗ, ಸೊರಬ ವಲಯದ ವಲಯ ಅರಣ್ಯಾಧಿಕಾರಿ ಮತ್ತು ಸಿಬ್ಬಂದಿಯವರು ಪತ್ತೆಹಚ್ಚಿ ಪ್ರಥಮ ವರ್ತಮಾನ ವರದಿ, ಜಪ್ತಿ ವರದಿ, ಮಹಜರ್ ವರದಿಯನ್ನು ಸಾಕ್ಷಿಗಳ ಸಹಿಯೊಂದಿಗೆ ಮತ್ತು ಈ ನ್ಯಾಯಾಲಯಕ್ಕೆ ವಲಯ ಅರಣ್ಯಾಧಿಕಾರಿ, ಸೊರಬ ವಲಯ, ಇವರು ವಿಚಾರಣಾ ವರದಿ ಸಲ್ಲಿಸಿ, ಜಪ್ತಾದ ವಾಹನ ಮತ್ತು ವಾಹನದಲ್ಲಿದ್ದ ಅರಣ್ಯ ಉತ್ಪನ್ನವನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಶಿಫಾರಸ್ಸು ಮಾಡಿರುತ್ತಾರೆ. ಪ್ರಾಸಿಕ್ಯೂಷನ್ ಸಾಕ್ಷಿ ಹೇಳಿಕೆಗೂ ಮತ್ತು ಈ ನ್ಯಾಯಾಲಯಕ್ಕೆ ಹಾಜರ್ಪಡಿಸಿದ ದಾಖಲೆಗಳಿಗೂ ಒಂದಕ್ಕೊಂದು ತಾಳೆಯಾಗಿರುತ್ತದೆ. ಆರ್.ಸಿ. ಮಾಲೀಕರು ದಿ:03–09–2009ರಂದು ಸಲ್ಲಿಸಿದ ಅರ್ಜಿಯಲ್ಲಿ ತಿಳಿಸಿದಂತೆ, ಅರ್ಜಿದಾರರು ಮುಗ್ದರೆನ್ನುವುದಕ್ಕಾಗಲೀ, ವಾಹನ ಮಾಲೀಕರ ಗಮನಕ್ಕೆ ಬಾರದೇ ಈ ಕೃತ್ಯ ನಡೆದಿದೆನ್ನುವುದಕ್ಕಾಗಲೀ, ಅಲ್ಲದೇ ಈ ಪ್ರಕರಣದಲ್ಲಿ ಅರ್ಜಿದಾರರು ಭಾಗಿಯಾಗಿಲ್ಲವೆನ್ನುವುದಕ್ಕಾಗಲೀ, ಈ ಬಗ್ಗೆ ಯಾವುದೇ ಸಾಕ್ಷ್ಯಾಧಾರಗಳನ್ನು ವಿಚಾರಣಾ ಸಮಯದಲ್ಲಿ ಈ ನ್ಯಾಯಾಲಯಕ್ಕೆ ಸಲ್ಲಿಸಿರುವುದಿಲ್ಲ. ಆದ್ದರಿಂದ ಯಾರೂ ಈ ವಾಹನದಲ್ಲಿ ಅರಣ್ಯ ಉತ್ಪನ್ನವನ್ನು ಕಳ್ಳಸಾಗಾಣಿಕೆ ಮಾಡದಂತೆ ಆರ್.ಸಿ. ಮಾಲೀಕರಾಗಲೀ, ಅವರ ಪರ ವಾಹನ ಚಾಲಕರಾಗಲೀ, ಪ್ರತಿನಿಧಿಗಳಾಗಲೀ ಮುನ್ನೆಚ್ಚರಿಕೆ ಕ್ರಮ ಕೈಗೊಂಡಿರುವುದಿಲ್ಲ ಎಂಬುದು ನನ್ನ ಉತ್ತರವಾಗಿದೆ.

ಅಂಶ–4:

ಈ ಮೇಲಿನ ಅಂಶಗಳನ್ನು ಸೂಕ್ಷ್ಮವಾಗಿ ಗಮನಿಸಿ ಮತ್ತು ಈ ಪ್ರಕರಣದ ವಿದ್ಯಮಾನಗಳನ್ನು ಅರಿತು, ವಾದವನ್ನು ಕೇಳಿ ಈ ಕೆಳಕಂಡಂತೆ ಆದೇಶಿಸಲಾಗಿದೆ.

ಆದೇಶ

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳನ್ನು ಗಣನೆಗೆ ತೆಗೆದುಕೊಂಡು ಶ್ರೀ ಮನೋಜ್ ಕುಮಾರ್ ತ್ರಿಪಾಠಿ, ಭಾ.ಅ.ಸೇ., ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ ಆದ ನಾನು ಕರ್ನಾಟಕ ಅರಣ್ಯ ಕಾಯಿದೆ 1963 ಸೆಕ್ಷನ್ 71(ಎ) ರಿಂದ (ಜಿ) ಕಾಯಿದೆ ಪ್ರಕಾರ ವಲಯ ಅರಣ್ಯಾಧಿಕಾರಿ, ಸೊರಬ ವಲಯ, ಇವರು ಜಪ್ತು ಮಾಡಿದ ಲಗ್ಗೇಜ್ ಆಟೋ ಕೆಎ–15–3141 (ಇಂಜಿನ್ ನಂ:R4G93462, ಛಾಸ್ಸಿಸ್ ನಂಬರ್:BFG174077) ಮತ್ತು ಈ ವಾಹನದಲ್ಲಿ ಕರ್ನಾಟಕ ಸರ್ಕಾರದ ಸಂಪತ್ತು ಆದ ಬೀಟೆ ನಾಟಾ 01=0.056ಎಂ3ನ್ನು ಸರ್ಕಾರಕ್ಕೆ ಅಂತಿಮವಾಗಿ ಮುಟ್ಟುಗೋಲು ಹಾಕಿಕೊಂಡಿರುತ್ತೇನೆ. ಮುಟ್ಟುಗೋಲು ಹಾಕಿಕೊಂಡ ವಾಹನ ಮತ್ತು ಅರಣ್ಯ ಉತ್ಪನ್ನವನ್ನು ಸರ್ಕಾರಕ್ಕೆ ಅನುಕೂಲಕರವಾಗಿ ವಿಲೇ ಮಾಡಲು ಆದೇಶಿಸಿದೆ. ಈ ಆದೇಶವನ್ನು ಹೇಳಿ ಬರೆಯಿಸಿ, ಗಣಕಯಂತ್ರದಲ್ಲಿ ಮುದ್ರಿಸಿ, ನಂತರ ಸರಿಪಡಿಸಿ ದಿ:25–06–2011 ರಂದು ನನ್ನ ಸಹಿ ಹಾಗೂ ಮೊಹರಿನೊಂದಿಗೆ ತೆರೆದ ನ್ಯಾಯಾಲಯದಲ್ಲಿ ಆದೇಶಿಸಿದ್ದೇನೆ. ಈ ಆದೇಶ ಹೊರಡಿಸಿದ 30(ಮೂವತ್ತು) ದಿನಗಳ ಒಳಗಾಗಿ ಯಾರು ಮೇಲ್ಮನವಿ ಸಲ್ಲಿಸದೇ ಹೋದಲ್ಲಿ ಇದೇ ಅಂತಿಮ ಆದೇಶವಾಗಿರುತ್ತದೆ.

ಅಧಿಕೃತ ಅಧಿಕಾರಿ ಹಾಗೂ
ಉಪ ಅರಣ್ಯ ಸಂರಕ್ಷಣಾಧಿಕಾರಿ,
ಸಾಗರ ವಿಭಾಗ, ಸಾಗರ.

ಪಿ.ಆರ್.716

ಸಹಕಾರ ಇಲಾಖೆ

ಸಹಕಾರ ಸಂಘಗಳ ಉಪನಿಬಂಧಕರು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ಇವರ ಕಛೇರಿ

ನಂ.ಡಿಆರ್‌ಡಿ:ಎಲ್‌ಕ್ಯೂಡಿ:ಸಿಆರ್:66 :2010–11, ದಿನಾಂಕ:21.03.2011

ವಿಷಯ: ಸ್ಥಗಿತಗೊಂಡಿರುವ ಟಿಪ್ಪು ಗ್ರಾಹಕರ ಬಳಕೆದಾರರ ಸಹಕಾರ ಸಂಘ ನಿ. ಆಲಿ ಮೊಹಲ್ಲ, ಚಿತ್ರದುರ್ಗ ಇದನ್ನು 1959ನೇ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ ಕಲಂ 72 ಮತ್ತು 73 ರನ್ವಯ ಸಮಾಪನೆ ಬಗ್ಗೆ.

ಉಲ್ಲೇಖ: 1) ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಚಿತ್ರದುರ್ಗ ಇವರ ಪತ್ರದ ಸಂಖ್ಯೆ: ಸನಿ:30: ಸಮಾಪನೆ: ಸಿಆರ್:62/10–11 ದಿನಾಂಕ:10.12.2010.

2) ಈ ಕಛೇರಿಯ ಕಾರಣ ಕೇಳಿ ನೋಟೀಸು ಸಮ ಸಂಖ್ಯೆ ದಿನಾಂಕ:14.12.2010.

ಪ್ರಸ್ತಾವನೆ:

ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಚಿತ್ರದುರ್ಗ ಉಪ ವಿಭಾಗ, ಚಿತ್ರದುರ್ಗ ಇವರು ಉಲ್ಲೇಖ (1)ರಲ್ಲಿ ಕಾಣಿಸಿದ ಪ್ರಸ್ತಾವನೆ ಪ್ರಕಾರ ಟಿಪ್ಪು ಗ್ರಾಹಕರ ಬಳಕೆದಾರರ ಸಹಕಾರ ಸಂಘ ನಿ. ಆಲಿ ಮೊಹಲ್ಲ, ಚಿತ್ರದುರ್ಗ ಸಂಘದ ನೋಂದಣಿ ಸಂಖ್ಯೆ: ಎಆರ್/30/19090/1994–95, ದಿನಾಂಕ:16.08.1994 ಈ ಸಂಘದ ಕಾರ್ಯ ಚಟುವಟಿಕೆಗಳು ಅನೇಕ ವರ್ಷಗಳಿಂದ ಸ್ಥಗಿತಗೊಂಡಿರುತ್ತದೆ. ಸಂಘದ ಆಡಳಿತ ಸಮಿತಿಯವರು ಸಂಘದ ಅಭಿವೃದ್ಧಿ ಬಗ್ಗೆ ಗಮನಹರಿಸುವಲ್ಲಿ ವಿಫಲರಾಗಿರುತ್ತಾರೆ ಮತ್ತು ಸಂಘವನ್ನು ಪುನಃಶ್ಚೇತನಗೊಳಿಸುವಲ್ಲಿ ಆಸಕ್ತಿ ಇರುವುದಿಲ್ಲವೆಂದು ಪ್ರಸ್ತಾವನೆ ಸಲ್ಲಿಸಿ ಸಂಘವನ್ನು ಸಮಾಪನೆಗೊಳಿಸಲು ಕೋರಿರುತ್ತಾರೆ. ಈ ಬಗ್ಗೆ ಉಲ್ಲೇಖ (2) ರ ನೋಟೀಸನ್ನು ಈ ಕಛೇರಿಯಿಂದ ನೀಡಿದ್ದು, ಸಂಘದ ಆಡಳಿತ ಮಂಡಳಿಯವರಿಗೆ ನೋಟೀಸು ಜಾರಿ ಮಾಡಿ ಸ್ವೀಕೃತಿ ಈ ಕಛೇರಿ ತಲುಪಿದ್ದು ಆದಾಗ್ಯೂ ಅವರು ಯಾವುದೇ ಸಮಜಾಯಿಷಿ ಅಥವಾ ಪ್ರತಿಕ್ರಿಯೆಯನ್ನು ನೀಡದೇ ನಿರುತ್ಸಾಹ ತೋರಿಸಿರುತ್ತಾರೆ. ಈ ಸಂಘದಿಂದ ಸಂಘದ ಸದಸ್ಯರಿಗೆ ಯಾವ ರೀತಿಯ ಪ್ರಯೋಜನವೂ ದೊರೆಯುತ್ತಿಲ್ಲ, ಇದರಿಂದ ಸಂಘವು ಪುನಃಶ್ಚೇತನಗೊಳಿಸುವ ಹಂತವನ್ನು ಮೀರಿರುತ್ತದೆ. ಸಂಘವನ್ನು ಇದೇ ರೀತಿ ಮುಂದುವರಿಸಲು ಬಿಟ್ಟಲ್ಲಿ ಸಂಘವು ಇನ್ನಷ್ಟು ಅಧೋಗತಿಗೆ ಹೋಗುವ ಸಂಭವವಿರುವುದರಿಂದ ಸಮಾಪನೆಗೊಳಿಸುವುದೇ ಸೂಕ್ತವೆಂದು ಅಭಿಪ್ರಾಯಪಟ್ಟು ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

ಆದೇಶ

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಹಾಗೂ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 72(2) ರನ್ವಯ ಸರ್ಕಾರದ ಅಧಿಸೂಚನೆ ಸಂಖ್ಯೆ: ನಂ.ಸಿಓ:201: ಸಿಎಲ್ಎಂ:2008/ಬೆಂಗಳೂರು ದಿನಾಂಕ:27.05.2010 ಪ್ರಕಾರ ದತ್ತವಾದ ಅಧಿಕಾರದನ್ವಯ ಇಲ್ಯಾಸ್ ಉಲ್ಲಾ ಷರೀಫ್ ಸಹಕಾರ ಸಂಘಗಳ ಉಪನಿಬಂಧಕರು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ಆದ ನಾನು ದತ್ತವಾದ ಅಧಿಕಾರವನ್ನು ಚಲಾಯಿಸುತ್ತಾ, ಸ್ಥಗಿತಗೊಂಡಿರುವ ಟಿಪ್ಪು ಗ್ರಾಹಕರ ಬಳಕೆದಾರರ ಸಹಕಾರ ಸಂಘ ನಿ. ಆಲಿ ಮೊಹಲ್ಲ, ಚಿತ್ರದುರ್ಗ ಇದನ್ನು ಸಮಾಪನೆಗೊಳಿಸಿ, ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 73(1) ಅನ್ವಯ ಶ್ರೀ ಕೆ.ಎಂ. ಮನೋಹರ್, ಸಹಕಾರ ಸಂಘಗಳ ನಿರೀಕ್ಷಕರು, ಸಹಕಾರ ಸಂಘಗಳ ಸಹಾಯಕ ನಿಬಂಧಕರ ಕಛೇರಿ, ಚಿತ್ರದುರ್ಗ ಉಪವಿಭಾಗ, ಚಿತ್ರದುರ್ಗ ಇವರನ್ನು ಸಂಘದ ಸಮಾಪನಾಧಿಕಾರಿಯನ್ನಾಗಿ ಅಧಿಕ ಪ್ರಭಾರದಲ್ಲಿ ನೇಮಿಸಿರುತ್ತೇನೆ. ಸಮಾಪನಾಧಿಕಾರಿಯು ಸಂಘದ ವಿಶಿಷ್ಟ ಪ್ರಭಾರವನ್ನು ಮತ್ತು ಸಂಘದ ಆಸ್ತಿಗಳನ್ನು ಸಂಘದ ಕಾರ್ಯದರ್ಶಿ ಅಥವಾ ಸಂಘದ ಪ್ರಭಾರ ಹೊಂದಿದ ಯಾವುದೇ ವ್ಯಕ್ತಿಯಿಂದ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 73 (1) ಮತ್ತು 74ರ ನಿಯಮದ ಪ್ರಕಾರ ಪಡೆದುಕೊಳ್ಳತಕ್ಕದ್ದು.

ನನ್ನ ಸ್ವ ಸಹಿ ಮತ್ತು ಕಛೇರಿಯ ಮೊಹರಿನೊಂದಿಗೆ ಈ ದಿನಾಂಕ:21.03.2011 ರಂದು ಈ ಆದೇಶವನ್ನು ಹೊರಡಿಸಿರುತ್ತೇನೆ.

ಸಹಕಾರ ಸಂಘಗಳ ಉಪ ನಿಬಂಧಕರು,
ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ.

ಸಹಕಾರ ಇಲಾಖೆ

ಸಹಕಾರ ಸಂಘಗಳ ಉಪನಿಬಂಧಕರು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ಇವರ ಕಛೇರಿ

ನಂ.ಡಿಆರ್‌ಡಿ:ಎಲ್‌ಕ್ಯೂಡಿ:ಸಿಆರ್:74 :2010–11, ದಿನಾಂಕ:21.03.2011

ವಿಷಯ: ಸ್ಥಗಿತಗೊಂಡಿರುವ ಮಾಳೇನಹಳ್ಳಿ ವ್ಯವಸಾಯ ಸೇವಾ ಸಹಕಾರ ಬ್ಯಾಂಕ್ ನಿ., ಮಾಳೇನಹಳ್ಳಿ, ಹೊಳಲ್ಕೆರೆ ತಾಲ್ಲೂಕು, ಇದನ್ನು 1959ನೇ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ ಕಲಂ 72 ಮತ್ತು 73 ರನ್ವಯ ಸಮಾಪನೆ ಬಗ್ಗೆ.

ಉಲ್ಲೇಖ: 1) ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಚಿತ್ರದುರ್ಗ ಇವರ ಪತ್ರದ ಸಂಖ್ಯೆ: ಸನಿ:30: ಸಮಾಪನೆ: ಸಿಆರ್:71/10–11 ದಿನಾಂಕ:16.12.2010.

2) ಈ ಕಛೇರಿಯ ಕಾರಣ ಕೇಳಿ ನೋಟೀಸು ಸಮ ಸಂಖ್ಯೆ ದಿನಾಂಕ:22.12.2010.

ಪ್ರಸ್ತಾವನೆ:

ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಚಿತ್ರದುರ್ಗ ಉಪ ವಿಭಾಗ, ಚಿತ್ರದುರ್ಗ ಇವರು ಉಲ್ಲೇಖ (1)ರಲ್ಲಿ ಕಾಣಿಸಿದ ಪ್ರಸ್ತಾವನೆ ಪ್ರಕಾರ ಮಾಳೇನಹಳ್ಳಿ ವ್ಯವಸಾಯ ಸೇವಾ ಸಹಕಾರ ಬ್ಯಾಂಕ್ ನಿ., ಮಾಳೇನಹಳ್ಳಿ, ಹೊಳಲ್ಕೆರೆ ತಾಲ್ಲೂಕು, ಸಂಘದ ನೋಂದಣಿ ಸಂಖ್ಯೆ: ಡಿಆರ್‌ಸಿಎಸ್/1082/76–77, ದಿನಾಂಕ:15.09.1976 ಈ ಸಂಘದ ಕಾರ್ಯ ಚಟುವಟಿಕೆಗಳು ಅನೇಕ ವರ್ಷಗಳಿಂದ ಸ್ಥಗಿತಗೊಂಡಿರುತ್ತದೆ. ಸಂಘದ ಆಡಳಿತ ಸಮಿತಿಯವರು ಸಂಘದ ಅಭಿವೃದ್ಧಿ ಬಗ್ಗೆ ಗಮನಹರಿಸುವಲ್ಲಿ ವಿಫಲರಾಗಿರುತ್ತಾರೆ ಮತ್ತು ಸಂಘವನ್ನು ಪುನಃಶ್ಚೇತನಗೊಳಿಸುವಲ್ಲಿ ಆಸಕ್ತಿ ಇರುವುದಿಲ್ಲವೆಂದು ಪ್ರಸ್ತಾವನೆ ಸಲ್ಲಿಸಿ ಸಂಘವನ್ನು ಸಮಾಪನೆಗೊಳಿಸಲು ಕೋರಿರುತ್ತಾರೆ. ಈ ಬಗ್ಗೆ ಉಲ್ಲೇಖ (2) ರ ನೋಟೀಸನ್ನು ಈ ಕಛೇರಿಯಿಂದ ನೀಡಿದ್ದು, ಸಂಘದ ಆಡಳಿತ ಮಂಡಳಿಯವರಿಗೆ ನೋಟೀಸು ಜಾರಿ ಮಾಡಿ ಸ್ವೀಕೃತಿ ಈ ಕಛೇರಿ ತಲುಪಿದ್ದು ಆದಾಗ್ಯೂ ಅವರು ಯಾವುದೇ ಸಮಜಾಯಿಷಿ ಅಥವಾ ಪ್ರತಿಕ್ರಿಯೆಯನ್ನು ನೀಡದೇ ನಿರುತ್ಸಾಹ ತೋರಿಸಿರುತ್ತಾರೆ. ಈ ಸಂಘದಿಂದ ಸಂಘದ ಸದಸ್ಯರಿಗೆ ಯಾವ ರೀತಿಯ ಪ್ರಯೋಜನವೂ ದೊರೆಯುತ್ತಿಲ್ಲ, ಇದರಿಂದ ಸಂಘವು ಪುನಃಶ್ಚೇತನಗೊಳಿಸುವ ಹಂತವನ್ನು ಮೀರಿರುತ್ತದೆ. ಸಂಘವನ್ನು ಇದೇ ರೀತಿ ಮುಂದುವರಿಸಲು ಬಿಟ್ಟಲ್ಲಿ ಸಂಘವು ಇನ್ನಷ್ಟು ಅಧೋಗತಿಗೆ ಹೋಗುವ ಸಂಭವವಿರುವುದರಿಂದ ಸಮಾಪನೆಗೊಳಿಸುವುದೇ ಸೂಕ್ತವೆಂದು ಅಭಿಪ್ರಾಯಪಟ್ಟು ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

ಆದೇಶ

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಹಾಗೂ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 72(2) ರನ್ವಯ ಸರ್ಕಾರದ ಅಧಿಸೂಚನೆ ಸಂಖ್ಯೆ: ನಂ.ಸಿಓ:201: ಸಿಎಲ್‌ಎಂ:2008/ಬೆಂಗಳೂರು ದಿನಾಂಕ:27.05.2010 ಪ್ರಕಾರ ದತ್ತವಾದ ಅಧಿಕಾರದನ್ವಯ ಇಲ್ಯಾಸ್ ಉಲ್ಲಾ ಷರೀಫ್ ಸಹಕಾರ ಸಂಘಗಳ ಉಪನಿಬಂಧಕರು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ಆದ ನಾನು ದತ್ತವಾದ ಅಧಿಕಾರವನ್ನು ಚಲಾಯಿಸುತ್ತಾ, ಸ್ಥಗಿತಗೊಂಡಿರುವ ಮಾಳೇನಹಳ್ಳಿ ವ್ಯವಸಾಯ ಸೇವಾ ಸಹಕಾರ ಬ್ಯಾಂಕ್ ನಿ., ಮಾಳೇನಹಳ್ಳಿ, ಹೊಳಲ್ಕೆರೆ ತಾಲ್ಲೂಕು, ಇದನ್ನು ಸಮಾಪನೆಗೊಳಿಸಿ, ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 73(1) ಅನ್ವಯ ಸಹಕಾರ ಅಭಿವೃದ್ಧಿ ಅಧಿಕಾರಿ, (ಪ್ರಭಾರ) ಹೊಳಲ್ಕೆರೆ ತಾಲ್ಲೂಕು ಇವರನ್ನು ಸಂಘದ ಸಮಾಪನಾಧಿಕಾರಿಯನ್ನಾಗಿ ಅಧಿಕ ಪ್ರಭಾರದಲ್ಲಿ ನೇಮಿಸಿರುತ್ತೇನೆ. ಸಮಾಪನಾಧಿಕಾರಿಯು ಸಂಘದ ವಿಶಿಷ್ಟ ಪ್ರಭಾರವನ್ನು ಮತ್ತು ಸಂಘದ ಆಸ್ತಿಗಳನ್ನು ಸಂಘದ ಕಾರ್ಯದರ್ಶಿ ಅಥವಾ ಸಂಘದ ಪ್ರಭಾರ ಹೊಂದಿದ ಯಾವುದೇ ವ್ಯಕ್ತಿಯಿಂದ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 73 (1) ಮತ್ತು 74ರ ನಿಯಮದ ಪ್ರಕಾರ ಪಡೆದುಕೊಳ್ಳತಕ್ಕದ್ದು.

ನನ್ನ ಸ್ವ ಸಹಿ ಮತ್ತು ಕಛೇರಿಯ ಮೊಹರಿನೊಂದಿಗೆ ಈ ದಿನಾಂಕ:21.03.2011 ರಂದು ಈ ಆದೇಶವನ್ನು ಹೊರಡಿಸಿರುತ್ತೇನೆ.

ಸಹಕಾರ ಸಂಘಗಳ ಉಪ ನಿಬಂಧಕರು,
ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ.

ಸಹಕಾರ ಇಲಾಖೆ

ಸಹಕಾರ ಸಂಘಗಳ ಉಪನಿಬಂಧಕರು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ಇವರ ಕಛೇರಿ

ನಂ.ಡಿಆರ್‌ಡಿ:ಎಲ್‌ಕ್ಯೂಡಿ:ಸಿಆರ್:59 :2010–11, ದಿನಾಂಕ:31.03.2011

ವಿಷಯ: ಸ್ಥಗಿತಗೊಂಡಿರುವ ಮೈಲಾರೇಶ್ವರ ಕಂಬಳಿ ಉತ್ಪಾದನಾ ಮತ್ತು ಮಾರಾಟಗಾರರ ಸಹಕಾರ ಸಂಘ ನಿ. ಬುರುಜನಹಟ್ಟಿ ಚಿತ್ರದುರ್ಗ ಇದನ್ನು 1959ನೇ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ ಕಲಂ 72 ಮತ್ತು 73 ರನ್ವಯ ಸಮಾಪನೆ ಬಗ್ಗೆ.

ಉಲ್ಲೇಖ: 1) ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಚಿತ್ರದುರ್ಗ ಇವರ ಪತ್ರದ ಸಂಖ್ಯೆ: ಸನಿ:30: ಸಮಾಪನೆ: ಸಿಆರ್:64/10–11 ದಿನಾಂಕ:10.12.2010.

2) ಈ ಕಛೇರಿಯ ಕಾರಣ ಕೇಳಿ ನೋಟೀಸು ಸಮ ಸಂಖ್ಯೆ ದಿನಾಂಕ:14.12.2010.

ಪ್ರಸ್ತಾವನೆ:

ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಚಿತ್ರದುರ್ಗ ಉಪ ವಿಭಾಗ, ಚಿತ್ರದುರ್ಗ ಇವರು ಉಲ್ಲೇಖ (1)ರಲ್ಲಿ ಕಾಣಿಸಿದ ಪ್ರಸ್ತಾವನೆ ಪ್ರಕಾರ ಮೈಲಾರೇಶ್ವರ ಕಂಬಳಿ ಉತ್ಪಾದನಾ ಮತ್ತು ಮಾರಾಟಗಾರರ ಸಹಕಾರ ಸಂಘ ನಿ. ಬುರುಜನಹಟ್ಟಿ ಚಿತ್ರದುರ್ಗ ಸಂಘದ ನೋಂದಣಿ ಸಂಖ್ಯೆ: ಸನಿ30/739/ಆರ್‌ಜಿಎನ್/26132/1998–99, ದಿನಾಂಕ:10.02.1999 ಈ ಸಂಘದ ಕಾರ್ಯ ಚಟುವಟಿಕೆಗಳು ಅನೇಕ ವರ್ಷಗಳಿಂದ ಸ್ಥಗಿತಗೊಂಡಿರುತ್ತದೆ. ಸಂಘದ ಆಡಳಿತ ಸಮಿತಿಯವರು ಸಂಘದ ಅಭಿವೃದ್ಧಿ ಬಗ್ಗೆ ಗಮನಹರಿಸುವಲ್ಲಿ ವಿಫಲರಾಗಿರುತ್ತಾರೆ ಮತ್ತು ಸಂಘವನ್ನು ಪುನಃಶ್ಚೇತನಗೊಳಿಸುವಲ್ಲಿ ಆಸಕ್ತಿ ಇರುವುದಿಲ್ಲವೆಂದು ಪ್ರಸ್ತಾವನೆ ಸಲ್ಲಿಸಿ ಸಂಘವನ್ನು ಸಮಾಪನೆಗೊಳಿಸಲು ಕೋರಿರುತ್ತಾರೆ. ಈ ಬಗ್ಗೆ ಉಲ್ಲೇಖ (2) ರ ನೋಟೀಸನ್ನು ಈ ಕಛೇರಿಯಿಂದ ನೀಡಿದ್ದು, ಸಂಘದ ಆಡಳಿತ ಮಂಡಳಿಯವರಿಗೆ ನೋಟೀಸು ಜಾರಿ ಮಾಡಿ ಸ್ವೀಕೃತಿ ಈ ಕಛೇರಿ ತಲುಪಿದ್ದು ಆದಾಗ್ಯೂ ಅವರು ಯಾವುದೇ ಸಮಜಾಯಿಷಿ ಅಥವಾ ಪ್ರತಿಕ್ರಿಯೆಯನ್ನು ನೀಡದೇ ನಿರುತ್ಸಾಹ ತೋರಿಸಿರುತ್ತಾರೆ. ಈ ಸಂಘದಿಂದ ಸಂಘದ ಸದಸ್ಯರಿಗೆ ಯಾವ ರೀತಿಯ ಪ್ರಯೋಜನವೂ ದೊರೆಯುತ್ತಿಲ್ಲ, ಇದರಿಂದ ಸಂಘವು ಪುನಃಶ್ಚೇತನಗೊಳಿಸುವ ಹಂತವನ್ನು ಮೀರಿರುತ್ತದೆ. ಸಂಘವನ್ನು ಇದೇ ರೀತಿ ಮುಂದುವರಿಸಲು ಬಿಟ್ಟಲ್ಲಿ ಸಂಘವು ಇನ್ನಷ್ಟು ಅಧೋಗತಿಗೆ ಹೋಗುವ ಸಂಭವವಿರುವುದರಿಂದ ಸಮಾಪನೆಗೊಳಿಸುವುದೇ ಸೂಕ್ತವೆಂದು ಅಭಿಪ್ರಾಯಪಟ್ಟು ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

ಆದೇಶ

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಹಾಗೂ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 72(2) ರನ್ವಯ ಸರ್ಕಾರದ ಅಧಿಸೂಚನೆ ಸಂಖ್ಯೆ: ನಂ.ಸಿಓ:201: ಸಿಎಲ್ಎಂ:2008/ಬೆಂಗಳೂರು ದಿನಾಂಕ:27.05.2010 ಪ್ರಕಾರ ದತ್ತವಾದ ಅಧಿಕಾರದನ್ವಯ ಇಲ್ಯಾಸ್ ಉಲ್ಲಾ ಷರೀಫ್ ಸಹಕಾರ ಸಂಘಗಳ ಉಪನಿಬಂಧಕರು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ಆದ ನಾನು ದತ್ತವಾದ ಅಧಿಕಾರವನ್ನು ಚಲಾಯಿಸುತ್ತಾ, ಸ್ಥಗಿತಗೊಂಡಿರುವ ಮೈಲಾರೇಶ್ವರ ಕಂಬಳಿ ಉತ್ಪಾದನಾ ಮತ್ತು ಮಾರಾಟಗಾರರ ಸಹಕಾರ ಸಂಘ ನಿ. ಬುರುಜನಹಟ್ಟಿ ಚಿತ್ರದುರ್ಗ ಇದನ್ನು ಸಮಾಪನೆಗೊಳಿಸಿ, ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 73(1) ಅನ್ವಯ ಶ್ರೀ ಎಸ್.ಟಿ. ರಾಜಪ್ಪ, ಸಹಕಾರ ಸಂಘಗಳ ಹಿರಿಯ ನಿರೀಕ್ಷಕರು, ಸಹಕಾರ ಸಂಘಗಳ ಉಪ ನಿಬಂಧಕರ ಕಛೇರಿ, ಚಿತ್ರದುರ್ಗ ಇವರನ್ನು ಸಂಘದ ಸಮಾಪನಾಧಿಕಾರಿಯನ್ನಾಗಿ ಅಧಿಕ ಪ್ರಭಾರದಲ್ಲಿ ನೇಮಿಸಿರುತ್ತೇನೆ. ಸಮಾಪನಾಧಿಕಾರಿಯು ಸಂಘದ ವಿಶಿಷ್ಟ ಪ್ರಭಾರವನ್ನು ಮತ್ತು ಸಂಘದ ಆಸ್ತಿಗಳನ್ನು ಸಂಘದ ಕಾರ್ಯದರ್ಶಿ ಅಥವಾ ಸಂಘದ ಪ್ರಭಾರ ಹೊಂದಿದ ಯಾವುದೇ ವ್ಯಕ್ತಿಯಿಂದ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 73 (1) ಮತ್ತು 74ರ ನಿಯಮದ ಪ್ರಕಾರ ಪಡೆದುಕೊಳ್ಳತಕ್ಕದ್ದು.

ನನ್ನ ಸ್ವ ಸಹಿ ಮತ್ತು ಕಛೇರಿಯ ಮೊಹರಿನೊಂದಿಗೆ ಈ ದಿನಾಂಕ:31.03.2011 ರಂದು ಈ ಆದೇಶವನ್ನು ಹೊರಡಿಸಿರುತ್ತೇನೆ.

ಸಹಕಾರ ಸಂಘಗಳ ಉಪ ನಿಬಂಧಕರು,
ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ.

ಪಿ.ಆರ್.520

ಸಹಕಾರ ಇಲಾಖೆ

ಸಹಕಾರ ಸಂಘಗಳ ಉಪನಿಬಂಧಕರು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ಇವರ ಕಛೇರಿ

ನಂ.ಡಿಆರ್‌ಡಿ:ಎಲ್‌ಕ್ಯೂಡಿ:ಸಿಆರ್:53 :2010–11, ದಿನಾಂಕ:21.03.2011

ವಿಷಯ: ಸ್ಥಗಿತಗೊಂಡಿರುವ ಪಿಳ್ಳೆಕೆರೆನಹಳ್ಳಿ ಹರಿಜನ/ಗಿರಿಜನ ಮಹಿಳಾ ವಿವಿದೋದ್ದೇಶ ಸಹಕಾರ ಸಂಘ ನಿ. ಚಿತ್ರದುರ್ಗ ತಾಲ್ಲೂಕು ಇದನ್ನು 1959ನೇ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ ಕಲಂ 72 ಮತ್ತು 73 ರನ್ವಯ ಸಮಾಪನೆ ಬಗ್ಗೆ.

ಉಲ್ಲೇಖ: 1) ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಚಿತ್ರದುರ್ಗ ಇವರ ಪತ್ರದ ಸಂಖ್ಯೆ: ಸನಿ:30: ಸಮಾಪನೆ: ಸಿಆರ್:51/10–11 ದಿನಾಂಕ:22.11.2010.

2) ಈ ಕಛೇರಿಯ ಕಾರಣ ಕೇಳಿ ನೋಟೀಸು ಸಮ ಸಂಖ್ಯೆ ದಿನಾಂಕ:01.12.2010.

ಪ್ರಸ್ತಾವನೆ:

